ಸಂಪುಟ: 05 ಸಂಚಿಕೆ: 327 ಪುಟಗಳು: 08 ಸೋಮವಾರ 09 ಫೆಬ್ರವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಈ ಪ್ರಪಂಚ ಒಂದು ದೊಡ್ಡ ಗರಡಿ ಮನೆ, ನಾವಿಲ್ಲಿ ಬಲಿಷ್ಠರಾಗುವುದಕ್ಕೆ ಬಂದಿದ್ದೇವೆ...


## ವಿನ್ಯಾಸಗಾರರು ಬೇಕಾಗಿದ್ದಾರೆ

ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ




ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಛಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ. ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
**9448225696**

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com


# ಭಾರತದ ಜೈಕಾರ

## ಹೊಸ ರಾಯಭಾರ

**ಭಯೋತ್ಪಾದನೆ ನಿಗ್ರಹ, ಗುಪ್ತಚರ ಹಂಚಿಕೆ , ಕಡಲ ಭದ್ರತೆಯಲ್ಲಿ ಭಾರತ ಮತ್ತು ಮಲೇಷ್ಯಾ ಪರಸ್ಪರ ಸಹಕಾರವನ್ನು ಬಲಪಡಿಸಲಿವೆ ಎಂದು ಪ್ರಧಾನಿ ಮೋದಿ ತಿಳಿಸಿದರು. ಭಾನುವಾರ ಪ್ರಧಾನಿ ಮೋದಿ ಮತ್ತು ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ನಡುವೆ ನಿಯೋಗ ಮಟ್ಟದ ಮಾತುಕತೆ ನಡೆದಿದ್ದು , ಎರಡೂ ದೇಶಗಳು ಹಲವಾರು ಒಪ್ಪಂದಗಳಿಗೆ ಸಹಿ ಹಾಕಿವೆ. ಒಪ್ಪಂದಗಳ ಪ್ರಕಾರ, ಉಭಯ ರಾಷ್ಟ್ರಗಳು ಸೆಮಿಕಂಡಕ್ಟರ್ ಸೇರಿದಂತೆ ಹಲವಾರು ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರ ಒದಗಿಸಲಿವೆ.**

## ಭಯೋತ್ಪಾದನೆ ವಿಚಾರದಲ್ಲಿ ಎಂದಿಗೂ ದ್ವಿಮುಖ ನೀತಿ ಇಲ್ಲ

**ಕಡಲ ಭದ್ರತೆಗೆ ಭಾರತ-ಮಲೇಷ್ಯಾ ಹೆಚ್ಚಿನ ಸಹಕಾರ**

**ಕೌಲಾಲಂಪುರದಲ್ಲಿ ಪ್ರಧಾನಿ ಮೋದಿ**

• **ಉದಯವಾಹಿನಿ, ಬೆಂಗಳೂರು**

ಎರಡು ದಿನಗಳ ಮಲೇಷ್ಯಾ ಭೇಟಿಯಲ್ಲಿರುವ ಪ್ರಧಾನಿ ಮೋದಿ ಜಂಟಿ ಪತ್ರಿಕಾ ಹೇಳಿಕೆಯಲ್ಲಿ, ಭಾರತ ಮತ್ತು ಮಲೇಷ್ಯಾ ರಕ್ಷಣಾ ಸಹಕಾರವನ್ನು ಮತ್ತಷ್ಟು ಸಮಗ್ರಗೊಳಿಸುತ್ತವೆ. ಎರಡೂ ದೇಶಗಳು 'ವಿಶೇಷ ಸಂಬಂಧವನ್ನು ಹಂಚಿಕೊಳ್ಳಲಿವೆ ಎಂದು ಪ್ರತಿಪಾದಿಸಿದರು. ಎಐ ಮತ್ತು ಡಿಜಿಟಲ್ ತಂತ್ರಜ್ಞಾನಗಳ ಜೊತೆಗೆ, ನಾವು ಅರೆವಾಹಕಗಳು, ಆರೋಗ್ಯ ಮತ್ತು ಆಹಾರ ಭದ್ರತೆಯಲ್ಲಿ ಪಾಲುದಾರಿಕೆಯನ್ನು ಮುಂದುವರೆಸುತ್ತೇವೆ ಎಂದು ಇಬ್ರಾಹಿಂ ಅವರೊಂದಿಗಿನ ಮಾತುಕತೆಯ ಬಳಿಕ ಮೋದಿ ಹೇಳಿದರು.

ಇಂಡೋ-ಪೆಸಿಫಿಕ್ ಪ್ರದೇಶವು ವಿಶ್ವದ 'ಬೆಳವಣಿಗೆಯ ಇಂಜಿನ್' ಆಗಿ ಹೊರಹೊಮ್ಮುತ್ತಿದೆ. ಎರಡೂ ರಾಷ್ಟ್ರಗಳು ASEAN ಜೊತೆಗೆ ಇಡೀ ಪ್ರದೇಶದಾದ್ಯಂತ ಅಭಿವೃದ್ಧಿ,



**ಭಯೋತ್ಪಾದನೆ ನಿಗ್ರಹ, ಗುಪ್ತಚರ ಹಂಚಿಕೆ ಮತ್ತು ಕಡಲ ಭದ್ರತೆಯಲ್ಲಿ ಸಹಕಾರವನ್ನು ಬಲಪಡಿಸಲು ಎರಡೂ ರಾಷ್ಟ್ರಗಳು ಒಪ್ಪಿಕೊಂಡಿವೆ. ಇದಲ್ಲದೆ, ಪ್ರಧಾನಿ ಮೋದಿ ಅವರು ಮಲೇಷ್ಯಾದಲ್ಲಿ ಹೊಸ ಭಾರತೀಯ ದೂತಾವಾಸವನ್ನು ತೆರೆಯುವುದಾಗಿ ಘೋಷಿಸಿದ್ದಾರೆ. ಯುಪಿಐ ಅನುಷ್ಠಾನ ಮತ್ತು ಸಾಂಸ್ಕೃತಿಕ ವಿನಿಮಯವನ್ನು ಉತ್ತೇಜಿಸಲು ಹೊಸ ಆಡಿಯೋ-ವಿಶುವಲ್ ಒಪ್ಪಂದ ಸೇರಿದಂತೆ ಡಿಜಿಟಲ್ ತಂತ್ರಜ್ಞಾನದಲ್ಲಿನ ಪ್ರಗತಿಯನ್ನು ಎತ್ತಿ ತೋರಿಸಿದರು. ಈ ಕಾರ್ಯಕ್ರಮವು ಇಂಡೋ-ಪೆಸಿಫಿಕ್ ಪ್ರದೇಶದೊಳಗಿನ ಸೆಮಿಕಂಡಕ್ಟರ್‌ಗಳು, ಫಿನ್‌ಟೆಕ್ ಮತ್ತು ಡಿಜಿಟಲ್ ಆರ್ಥಿಕತೆಯಲ್ಲಿ ವರ್ಧಿತ ಸಹಯೋಗಕ್ಕಾಗಿ ಮಾರ್ಗಸೂಚಿಯನ್ನು ವಿವರಿಸುತ್ತದೆ.**

**ಎರಡೂ ರಾಷ್ಟ್ರಗಳು ಒಪ್ಪಿಕೊಂಡಿವೆ**

## ಭಯೋತ್ಪಾದನೆ ನಿಗ್ರಹ

ಶಾಂತಿ ಮತ್ತು ಸ್ಥಿರತೆಗೆ ಬದ್ಧವಾಗಿವೆ ಎಂದು ಮೋದಿ ತಿಳಿಸಿದರು. ಭಾರತವು ASEAN ಕೇಂದ್ರೀಕರಣಕ್ಕೆ ಆದ್ಯತೆ ನೀಡುತ್ತದೆ ಎಂದ ಪ್ರಧಾನಿ ಮೋದಿ, ಇಂದಿನ ಸವಾಲುಗಳನ್ನು ಎದುರಿಸಲು ಜಾಗತಿಕ ಸಂಸ್ಥೆಗಳನ್ನು ಸುಧಾರಿಸುವುದು ಅಗತ್ಯವಾಗಿದೆ ಎಂಬುದು ಎರಡೂ ದೇಶಗಳ ಸಾಮೂಹಿಕ ದೃಷ್ಟಿಕೋನವಾಗಿದೆ. ಭಯೋತ್ಪಾದನೆಯ ಬಗ್ಗೆ ನಮ್ಮ ಸಂದೇಶ ಸ್ಪಷ್ಟವಾಗಿದೆ. ಅದರ ಬಗ್ಗೆ ದ್ವಿಮುಖ ಮಾನದಂಡ ಹಾಗೂ ಯಾವುದೇ ರಾಜಿ ಇಲ್ಲ ಎಂದು ಪ್ರಧಾನಿ ಪ್ರತಿಪಾದಿಸಿದರು. ಭಾರತ ಮತ್ತು ಮಲೇಷ್ಯಾ ವ್ಯಾಪಾರ, ಹೂಡಿಕೆ, ಸಂಪರ್ಕ ಮತ್ತು ರಕ್ಷಣೆಯಲ್ಲಿನ ಸಹಯೋಗದ ವಿಸ್ತರಣೆಯನ್ನು ಮುಂದುವರೆಸಿವೆ ಎಂದು ಪ್ರಧಾನಿ ಇಬ್ರಾಹಿಂ ಹೇಳಿದರು. ಜಾಗತಿಕ ವ್ಯಾಪಾರ ಮತ್ತು ಆರ್ಥಿಕ ರಂಗದಲ್ಲಿ ಅದ್ಭುತ ಬೆಳವಣಿಗೆ ದಾಖಲಿಸಿರುವ ಬಗ್ಗೆ ಭಾರತವನ್ನು ಅವರು ಶ್ಲಾಘಿಸಿದರು.

ಕೌಲಾಲಂಪುರಕ್ಕೆ ಆಗಮಿಸಿದ ಮೋದಿ ಅವರಿಗೆ ಭವ್ಯ ರೆಡ್ ಕಾರ್ಪೆಟ್ ಸ್ವಾಗತ ಕೋರಲಾಯಿತು. ವಿಮಾನ ನಿಲ್ದಾಣದಲ್ಲಿ ಮೋದಿ ಅವರನ್ನು ಇಬ್ರಾಹಿಂ ಬರಮಾಡಿಕೊಂಡರು. ಪರಸ್ಪರ ಮಾತುಕತೆಗೂ ಮುನ್ನ, ಪ್ರಧಾನಿ ಮೋದಿ ಅವರಿಗೆ 'ಪರ್ದಾನ ಪುತ್ರ' ಗೌರವ ಪ್ರದಾನ ಮಾಡಲಾಯಿತು.ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್ ಪೋಸ್ಟ್‌ನಲ್ಲಿ ಈ ಕ್ಷಣವನ್ನು ಹಂಚಿಕೊಂಡ ಪ್ರಧಾನಿ ಮೋದಿ, ಪುತ್ರಜಯದಲ್ಲಿನ ಪರ್ದಾನ ಪುತ್ರ ಔಪಚಾರಿಕ ಸ್ವಾಗತದ ಕ್ಷಣಗಳು. ಭಾರತ ಮತ್ತು ಮಲೇಷ್ಯಾ ನಂಬಿಕೆ, ಸ್ನೇಹ ಮತ್ತು ಹಂಚಿಕೆಯ ಆಕಾಂಕ್ಷೆಗಳಲ್ಲಿ ಬೇರೂರಿರುವ ಪಾಲುದಾರಿಕೆಯನ್ನು ಮತ್ತಷ್ಟು ಗಾಢವಾಗಿಸುತ್ತಿವೆ ಎಂದು ತಿಳಿಸಿದ್ದಾರೆ.

ಭಾರತವು ನಾಗರಿಕ, ಐತಿಹಾಸಿಕ ಮತ್ತು ಜನರಿಂದ ಜನರಿಗೆ ಸಂಬಂಧಗಳಲ್ಲಿ ನೆಲೆಗೊಂಡಿರುವ ಮಲೇಷ್ಯಾದೊಂದಿಗೆ ನಿಕಟ ಬಾಂಧವ್ಯವನ್ನು ಹಂಚಿಕೊಳ್ಳುತ್ತದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಮಲೇಷ್ಯಾ ಭೇಟಿಗೂ ಮುನ್ನ ಹೇಳಿಕೆಯಲ್ಲಿ, ಪ್ರಧಾನಿಯವರು ತಮ್ಮ ಭೇಟಿಯು ಆಳವಾದ ರಕ್ಷಣಾ ಸಹಕಾರ ಮತ್ತು ಬಲವಾದ ಆರ್ಥಿಕ ಒಪ್ಪಂದಕ್ಕೆ ಪ್ರಮುಖ ಒತ್ತು ನೀಡುವತ್ತ ಗಮನಹರಿಸಲಿದೆ. ಭಾರತ ಮತ್ತು ಮಲೇಷ್ಯಾ ನಡುವಿನ ಐತಿಹಾಸಿಕ ಸಂಬಂಧಗಳು ಇತ್ತೀಚಿನ ವರ್ಷಗಳಲ್ಲಿ ಸ್ಥಿರ ಪ್ರಗತಿಯನ್ನು ಕಂಡಿವೆ. ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗಿನ ನನ್ನ ಚರ್ಚೆಗಳನ್ನು ಮತ್ತು ನಮ್ಮ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸುವ ಗುರಿಯನ್ನು ನಾವು ಹೊಂದಿದ್ದೇವೆ ಎಂದು ಹೇಳಿದ್ದರು. ನಮ್ಮ ರಕ್ಷಣೆ ಮತ್ತು ಭದ್ರತಾ ಸಂಬಂಧಗಳನ್ನು ಗಾಢವಾಗಿಸಲು, ನಮ್ಮ ಆರ್ಥಿಕ ಮತ್ತು ನಾವೀನ್ಯತೆ ಪಾಲುದಾರಿಕೆಯನ್ನು ಹೆಚ್ಚಿಸಲು ಮತ್ತು ನಮ್ಮ ಸಹಯೋಗವನ್ನು ಹೊಸ ಕ್ಷೇತ್ರಗಳಿಗೆ ವಿಸ್ತರಿಸುವ ಗುರಿಯನ್ನು ಹೊಂದಿದ್ದೇವೆ ಎಂದು ಮೋದಿ ತಿಳಿಸಿದ್ದರು. ಭಾರತ ಮತ್ತು ಮಲೇಷ್ಯಾ ಆಗಸ್ಟ್ 2024ರಲ್ಲಿ ತಮ್ಮ ದ್ವಿಪಕ್ಷೀಯ ಸಂಬಂಧಗಳನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯತ್ತ ಕೊಂಡೊಯ್ದಿವೆ.

1. **ಭಾರತ - ಮಲೇಷ್ಯಾ ನಡುವಿನ ಕಾರ್ಯತಂತ್ರದ ವಿಶ್ವಾಸವು ಆರ್ಥಿಕ ಪರಿವರ್ತನೆಗೆ ದಾರಿ.**
2. **ಭಯೋತ್ಪಾದನೆಯ ಬಗ್ಗೆ ಭಾರತದ ನಿಲುವು ದೃಢ.**
3. **ಕಡಲ ಭದ್ರತೆಯಲ್ಲಿ ಸಹಕಾರವನ್ನು ಬಲಪಡಿಸಲು ಎರಡೂ ರಾಷ್ಟ್ರಗಳು ಒಪ್ಪಿಗೆ.**

## ಮೋದಿ ಖಡಕ್ ಸಂದೇಶ

**ಪಾಕಿಸ್ತಾನಕ್ಕೆ ಚುಚ್ಚಿದೆ ಪ್ರತಿಯೊಂದು ಪದ...!**




### ಪಾಕಿಸ್ತಾನಕ್ಕೆ ಈ ಹೇಳಿಕೆ ನೋವುಂಟು ಮಾಡುತ್ತಿದೆ

ಈ ಹೇಳಿಕೆಯ ಪ್ರಮುಖ ಲಕ್ಷಣವೆಂದರೆ ಆ ಹೇಳಿಕೆ ಕೊಟ್ಟ ಸ್ಥಳ. ಪ್ರಧಾನಿ ಮೋದಿ ಈ ಹೇಳಿಕೆಯನ್ನು ಮಲೇಷ್ಯಾ ನೆಲದಿಂದ ನೀಡಿದ್ದಾರೆ, ಇದು ಪಾಕಿಸ್ತಾನವನ್ನು ಅತೀ ಹೆಚ್ಚು ಕೆರಳಿಸುವ ಸಾಧ್ಯತೆಯಿದೆ. ಪಾಕಿಸ್ತಾನವು ಮಲೇಷ್ಯಾವನ್ನು ಇಸ್ಲಾಮಿಕ್ ದೇಶವಾಗಿರುವುದರಿಂದ ಅದನ್ನು ಸ್ನೇಹಿತ ಎಂದು ಪರಿಗಣಿಸುತ್ತದೆಯಾದರೂ, ಅದು ಭಾರತದೊಂದಿಗೆ ದೀರ್ಘಕಾಲದ ಸಂಬಂಧವನ್ನು ಹೊಂದಿದೆ.

### ಮಲೇಷ್ಯಾ ಅತಿದೊಡ್ಡ ಭಾರತೀಯ ಮೂಲದ ಸಮುದಾಯ

ಮಲೇಷ್ಯಾ ವಿಶ್ವದ ಎರಡನೇ ಅತಿದೊಡ್ಡ ಭಾರತೀಯ ಮೂಲದ ಸಮುದಾಯವನ್ನು ಹೊಂದಿದ್ದು, ಉಭಯ ದೇಶಗಳ ಹೃದಯಗಳನ್ನು ಸಂಪರ್ಕಿಸುವ ಅನೇಕ ವಿಷಯಗಳಿವೆ. ನೀವು ನಮ್ಮನ್ನು ಸಂಪರ್ಕಿಸುವ ಜೀವಂತ ಸೇತುವೆ. ನೀವು ರೋಟಿ ಕನೈ ಅನ್ನು ಮಲಬಾರ್ ಪರೋಟಾದೊಂದಿಗೆ ಸಂಪರ್ಕಿಸಿದ್ದೀರಿ ಎಂದರು. ಭಾರತೀಯ ಸಂಗೀತ ಮತ್ತು ಚಲನಚಿತ್ರಗಳು ಮಲೇಷ್ಯಾದಲ್ಲಿ ಜನಪ್ರಿಯವಾಗಿವೆ ಎನ್ನುವ ಮಾತನ್ನು ನಾನು ಕೇಳಿದ್ದೇನೆ, ಪ್ರಧಾನಿ ಅನ್ವರ್ ಇಬ್ರಾಹಿಂ ತುಂಬಾ ಚೆನ್ನಾಗಿ ಹಾಡುತ್ತಾರೆ ಎಂದು ನಿಮಗೆಲ್ಲರಿಗೂ ತಿಳಿದಿದೆ. ಆದರೆ ದೇಶದಲ್ಲಿರುವ ಅನೇಕ ಭಾರತೀಯರಿಗೆ ಅದು ತಿಳಿದಿರಲಿಲ್ಲ ಎಂದು ಹೇಳಿದರು.

## ಸಿಎಂ ಬದಲಾವಣೆ: ಯಾರೋ ಏನೋ ಹೇಳಿಕೆ ಕೊಟ್ಟರೆ ಬದಲಾಗಲ್ಲ

• **ಉದಯವಾಹಿನಿ, ಬೆಂಗಳೂರು**

'ಮುಖ್ಯಮಂತ್ರಿ ಯಾರೆಂಬುದು ಪಕ್ಷದ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳುತ್ತದೆ. ಸ್ವತಃ ಮುಖ್ಯಮಂತ್ರಿಯವರೇ ಈ ವಿಷಯ ಹೇಳಿದ್ದಾರೆ. ಅವರ ಕೆಲವು ಬೆಂಬಲಿಗರು ಹೇಳಿರಬಹುದು.

ಆದರೆ, ಯಾರೋ ಏನೋ ಹೇಳಿಕೆ ಕೊಟ್ಟರೆ ಬದಲಾಗಲ್ಲ' ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಸಿಎಂ ಯಾರಾಗುತ್ತಾರೆ ಎನ್ನುವುದರ ಬಗ್ಗೆ ಚರ್ಚೆ ನಡೆಸುವ ಅಗತ್ಯವಿಲ್ಲ. ಕೆಲವರ ಹೇಳಿಕೆಗಳಿಂದ ಈ ರೀತಿಯ ಚರ್ಚೆಗಳು ಆಗುತ್ತಿರುತ್ತವೆ. ಆದರೆ, ಇದೆಲ್ಲ ಅನಗತ್ಯ. ಇದರ ಬಗ್ಗೆ ಹೈಕಮಾಂಡ್ ತೀರ್ಮಾನ ತೆಗೆದುಕೊಳ್ಳುತ್ತದೆ. ಇದರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಕೂಡ ಈಗಾಗಲೇ ಹೇಳಿದ್ದಾರೆ ಎಂದು ನಗರದ ವಿಮಾನ ನಿಲ್ದಾಣದಲ್ಲಿ ಭಾನುವಾರ ಪತ್ರಕರ್ತರೊಂದಿಗೆ ಮಾತನಾಡಿದರು. ಮುಖ್ಯಮಂತ್ರಿ ಮಗ ಯಾವುದೋ ಮಾಧ್ಯಮದಲ್ಲಿ ಹೇಳಿದ್ದಾರೆ. ಆದರೆ, ಯಾರೋ ಒಬ್ಬರ ತೀರ್ಮಾನವಲ್ಲ. ಪಕ್ಷದ ವರಿಷ್ಠರು ತೀರ್ಮಾನ ತೆಗೆದುಕೊಳ್ಳುತ್ತಾರೆ.

ಎಲ್ಲರೂ ಹೈಕಮಾಂಡ್ ಒಪ್ಪುತ್ತಾರೆ. ಪಕ್ಷದಲ್ಲಿ ಗುಂಪುಗಾರಿಕೆ, ಭಿನ್ನಮತ ಇಲ್ಲ. ಅಧಿವೇಶನದಲ್ಲಿ ಒಗ್ಗಟ್ಟಾಗಿ ಎದುರಿಸಿದ್ದೇವೆ. ಪಕ್ಷದ ಹಿತದೃಷ್ಟಿಯಿಂದ ಹೈಕಮಾಂಡ್ ಏನು ಮಾಡಬೇಕೋ ಅದನ್ನು ಮಾಡುತ್ತದೆ. ಕೆಲವು ಊಹಾಪೋಹಗಳು ಇರುತ್ತವೆ. ಆಯವ್ಯಯದ ನಂತರ ಸಚಿವ ಸಂಪುಟದ ಪುನರ್ ರಚನೆ ಖಂಡಿತವಾಗಿ ಆಗುತ್ತದೆ. ಅಗಲ್ಲ ಎಂದು ನಾನು ಹೇಳಲ್ಲ. ಆದರೆ, ಯಾವಾಗ ಆಗುತ್ತದೆ ಎಂದು ಹೇಳಕ್ಕಾಗಲ್ಲ ಎಂದು ಪ್ರತಿಕ್ರಿಯಿಸಿದರು.

## ಕರ್ನಾಟಕದ 54 ನಿಗಮ, ಮಂಡಳಿ ಅಧ್ಯಕ್ಷರಿಗೆ ಸಚಿವರ ಸ್ಥಾನಮಾನ

• **ಉದಯವಾಹಿನಿ, ಬೆಂಗಳೂರು**

ನಿಗಮ, ಮಂಡಳಿ ಮತ್ತು ಪ್ರಾಧಿಕಾರಗಳ ಅಧ್ಯಕ್ಷರಾಗಿರುವ ಒಟ್ಟು 54 ಮಂದಿಗೆ ದಿಢೀರನೆ ಬಂಪರ್ ಉಡುಗೊರೆ ನೀಡಿದ್ದು, ರಾಜ್ಯ ಸಚಿವರ ಸ್ಥಾನಮಾನ ನೀಡಿ ಸರ್ಕಾರ ಆದೇಶ ಹೊರಡಿಸಿದೆ.


ಪ್ರಮುಖ ನಿಗಮಗಳ ಅಧ್ಯಕ್ಷರಾಗಿರುವ ಶಾಸಕರಿಗಷ್ಟೇ ಇದ್ದ ಈ ಸ್ಥಾನಮಾನವನ್ನು ಇದೀಗ, ಪಕ್ಷದ ಮುಖಂಡರು ಸಾರಥ್ಯ ವಹಿಸಿರುವ ಎಲ್ಲಾ ಸಂಸ್ಥೆಗಳ ಅಧ್ಯಕ್ಷರಿಗೂ ವಿಸ್ತರಿಸಿ ರಾಜ್ಯ ಸಚಿವ ಸ್ಥಾನಮಾನ ನೀಡಿರುವುದು ಗಮನ ಸೆಳೆದಿದೆ. ತಕ್ಷಣದಿಂದ ಜಾರಿಗೆ ಬರುವಂತೆ ಎಲ್ಲಾ 54 ನಿಗಮಗಳ ಅಧ್ಯಕ್ಷರಿಗೆ ರಾಜ್ಯ ಸಚಿವರ ಸ್ಥಾನಮಾನ ನೀಡಲಾಗಿದ್ದು, ಅದಕ್ಕೆ ತಕ್ಕಂತೆ ಸೌಲಭ್ಯಗಳನ್ನು ಆಯಾ ಇಲಾಖೆಗಳು ಒದಗಿಸಬೇಕು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಶಿಷ್ಟಾಚಾರ ವಿಭಾಗ ಹೊರಡಿಸಿರುವ ಆದೇಶದಲ್ಲಿ ಸ್ಪಷ್ಟಪಡಿಸಿದೆ.ಭಿನ್ನಮತ ಇಲ್ಲ, ಅಧಿವೇಶನದಲ್ಲಿ ಒಗ್ಗಟ್ಟಾಗಿ ಎದುರಿಸಿದ್ದೇವೆ. ಪಕ್ಷದ ಹಿತದೃಷ್ಟಿಯಿಂದ ಹೈಕಮಾಂಡ್ ಏನು ಮಾಡಬೇಕೋ ಅದನ್ನು ಮಾಡುತ್ತದೆ. ಕೆಲವು ಊಹಾಪೋಹಗಳು ಇರುತ್ತವೆ. ಆಯವ್ಯಯದ ನಂತರ ಸಚಿವ ಸಂಪುಟದ ಪುನರ್ ರಚನೆ ಖಂಡಿತವಾಗಿ ಆಗುತ್ತದೆ ಎಂದರು.

## ಬಿಜೆಪಿ ಸಂಸದ ತೇಜಸ್ವಿ ಸೂರ್ಯ ವಿರುದ್ಧ ರಾಜ್ಯ ಕಾಂಗ್ರೆಸ್ ಸರ್ಕಾರ ಕಿಡಿ

• **ಉದಯವಾಹಿನಿ, ಬೆಂಗಳೂರು**

ಮೆಟ್ರೋ ಪ್ರಯಾಣ ದರ ಏರಿಕೆಗೆ ಕೇಂದ್ರ ಸರ್ಕಾರ ತಾತ್ಕಾಲಿಕವಾಗಿ ತಡೆ ನೀಡಿದೆ ಎಂದು ಹೇಳಿಕೆ ನೀಡಿರುವ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ವಿರುದ್ಧ ರಾಜ್ಯ ಕಾಂಗ್ರೆಸ್ ಸರ್ಕಾರ ಕಿಡಿಕಾರಿದೆ.

ಮೊದಲನೆಯದಾಗಿ, ನಮ್ಮ ಮೆಟ್ರೋ ದರ ಏರಿಕೆಯಲ್ಲಿ ಕೇಂದ್ರದ ಪಾತ್ರವಿಲ್ಲ ಎಂದು ಅವರೇ (ತೇಜಸ್ವಿ ಸೂರ್ಯ) ಹೇಳಿದ್ದರು. ಆದರೆ ಈಗ, ದೆಹಲಿಗೆ ಓಡಿಹೋಗಿ ದರ ಏರಿಕೆಗೆ ತಾತ್ಕಾಲಿಕವಾಗಿ ತಡೆ ನೀಡಿ ಎಂದು ಕೇಳುತ್ತಿದ್ದಾರೆ. ನಿಮಗೆ ದರ ನಿಗದಿ ಮಾಡುವ, ಪರಿಷ್ಕರಿಸುವ ಅಧಿಕಾರ ಇಲ್ಲವೆಂದ ಮೇಲೆ, ಅದಕ್ಕೆ(ದರ ಏರಿಕೆ) ತಡೆ ನೀಡಲು ನಿಮಗೆ ಹೇಗೆ ಅಧಿಕಾರವಿದೆ ಎಂದು ರಾಜ್ಯ ಕಾಂಗ್ರೆಸ್ ಘಟಕ ಎಕ್ಸ್‌ನಲ್ಲಿ ಪ್ರಶ್ನಿಸಿದೆ.



ಸಾರ್ವಜನಿಕರ ಆಕ್ರೋಶ ಹೆಚ್ಚಾದಾಗ ನೀವು ಜವಾಬ್ದಾರಿಯಿಂದ ಕೈ ತೊಳೆದುಕೊಂಡು ಪ್ರಭಾವ ಬೀರಲು ಸಾಧ್ಯವಿಲ್ಲ ಎಂದೂ ಕುಟುಕಿದೆ.

> ಮೆಟ್ರೋ ಪ್ರಯಾಣ ದರ ಏರಿಕೆಗೆ ಕೇಂದ್ರ ಸರ್ಕಾರ ತಾತ್ಕಾಲಿಕವಾಗಿ ತಡೆ ನೀಡಿದೆ. ಸೋಮವಾರದಿಂದ ದರ ಏರಿಕೆ ಇರುವುದಿಲ್ಲ. ಕೇಂದ್ರ ನಗರ ವ್ಯವಹಾರಗಳ ಸಚಿವ ಮನೋಹರ ಲಾಲ್ ಖಟ್ಟರ್ ಅವರು ಈ ಸೂಚನೆ ನೀಡಿದ್ದಾರೆ.
>
> -ತೇಜಸ್ವಿ ಸೂರ್ಯ, ಬಿಜೆಪಿ ಸಂಸದ

'ಪ್ರಯಾಣ ದರ ಏರಿಸುವ ನಿರ್ಧಾರದ ವಿರುದ್ಧ ತಕ್ಷಣ ಮಧ್ಯ ಪ್ರವೇಶಿಸುವಂತೆ ಸಚಿವರನ್ನು ಕೇಳಿಕೊಂಡಿದ್ದೆ. ಒಂದು ವಾರದಿಂದ ಈ ಬಗ್ಗೆ ಸಚಿವರೊಂದಿಗೆ ಚರ್ಚಿಸಿದ್ದೆ. ಇದಕ್ಕೆ ಸ್ಪಂದಿಸಿರುವ ಸಚಿವರು. ದರ ಏರಿಕೆ ಜಾರಿ ಮಾಡದೇ ಇರುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಅಲ್ಲದೇ ಸೋಮವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು ಎಂದಿದ್ದಾರೆ' ಎಂದೂ ತಿಳಿಸಿದ್ದರು.

'ಅರ್ಧ ಯುದ್ಧವಷ್ಟೇ ಮುಗಿದಿದೆ. ಮೆಟ್ರೋಗೆ ಸಂಬಂಧಿಸಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಿನ ಒಪ್ಪಂದದ ಪ್ರಕಾರ ದರ ನಿಗದಿ ಮಾಡುವ, ಕಾಲಕಾಲಕ್ಕೆ ಪರಿಷ್ಕರಿಸುವ ಅಧಿಕಾರ ಇರುವುದು ರಾಜ್ಯ ಸರ್ಕಾರಕ್ಕೆ. ಹಾಗಾಗಿ ದರ ಏರಿಕೆ ಮಾಡುವುದು ಕೇಂದ್ರ ಸರ್ಕಾರ ಎಂದು ಸುಳ್ಳು ಹೇಳುವುದನ್ನು ರಾಜ್ಯ ಸರ್ಕಾರವು ನಿಲ್ಲಿಸಬೇಕು' ಎಂದೂ ಅವರು ಆಗ್ರಹಿಸಿದ್ದರು.

# ನಿಯತ್ತು, ನಿಷ್ಠೆ ಯಾವುದು ಇಲ್ಲದ ಜಿಟಿ ದೇವೇಗೌಡರು ನಮ್ಮ ಜೊತೆಯಲ್ಲಿ ಇಲ್ಲ

## ಮತ್ತೊಂದು ಹಂತಕ್ಕೆ ತಲುಪಿದ ಜಿಟಿ ದೇವೇಗೌಡ ಹಾಗೂ ಗೌಡರ ಕುಟುಂಬದ ನಡುವಿನ ಮನಸ್ತಾಪ

• **ಉದಯವಾಹಿನಿ, ಬೆಂಗಳೂರು**

ಜಿಟಿ ದೇವೇಗೌಡರು ನಮ್ಮ ಜೊತೆಯಲ್ಲಿ ಇಲ್ಲ. ಅವರ ಬಗ್ಗೆ ಮಾತನಾಡುವುದು ಬೇಡ ಎಂದು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ. ಈ ಮೂಲಕ ಜೆಡಿಎಸ್ ಶಾಸಕ – ಗೌಡರ ಕುಟುಂಬದಿಂದ ಮತ್ತುಷ್ಟು ದೂರವಾಗಿರುವುದು ಖಚಿತವಾಗಿದೆ. ಪಕ್ಷದ ಬಗ್ಗೆ ನಿಯತ್ತು, ನಿಷ್ಠೆ ಯಾವುದು ಇಲ್ಲದವರನ್ನು ನಾವು ಜತೆಯಲ್ಲಿಟ್ಟುಕೊಳ್ಳಬೇಕಾ ನನ್ನ ಮುಂದೆ ಇನ್ನು ಮುಂದೆ ಪದೇಪದೆ ಅವರ ಹೆಸರು ಪ್ರಸ್ತಾಪ ಮಾಡಬೇಡಿ. ನಮ್ಮನ್ನು ರಾಜೀನಾಮೆ ಕೊಡುತ್ತಾರ ಎಂದು ಕೇಳಿ ಮುಖ್ಯಮಂತ್ರಿಗೆ ಸರ್ಟಿಫಿಕೇಟ್ ಕೊಡುತ್ತಾರೆ! ನಮಗೆ ಒಂದು ದಿನವೂ ಸರ್ಟಿಫಿಕೇಟ್ ಕೊಡಲಿಲ್ಲ. ಅಂಥವರನ್ನು ಜೊತೆಯಲ್ಲಿಟ್ಟುಕೊಂಡು ಓಡಾಡಬೇಕಾ ಎಂದು ಪ್ರಶ್ನೆ ಮಾಡಿದರು.

**ಹೆಚ್‌ಎಂಟಿ ಜಾಗಕ್ಕೆ ತಕರಾರು ತೆಗೆದು ಕೂತಿದ್ದಾರೆ ನಾನು ಏನು ಮಾಡಲಿ:** ಭದ್ರಾವತಿಯಲ್ಲಿರುವ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ ಪುನಶ್ಚೇತನಕ್ಕೆ ಕೇಂದ್ರ ಸರಕಾರ ಬದ್ಧವಾಗಿದೆ. ಅದಕ್ಕಾವಗಿ 4,000 ರಿಂದ 5,000 ಕೋಟಿ ಹೂಡಿಕೆ ಮಾಡುತ್ತಿದ್ದೇವೆ. ಸೇನೆ ಮತ್ತು ವೈಮಾನಿಕ ಕ್ಷೇತ್ರಕ್ಕೆ ಅತ್ಯಗತ್ಯವಾಗಿ ಬೇಕಿರುವ ಸ್ಪೆಶಾಲಿಟಿ ಸ್ಟೀಲ್ ಉತ್ಪಾದನೆಗೆ ಈ ಕಾರ್ಖಾನೆಯಲ್ಲಿ ಹೂಡಿಕೆ ಮಾಡುತ್ತಿದ್ದೇವೆ. ಹಾಗೆಯೇ ಹೆಚ್.ಎಂ.ಟಿ. ಕಾರ್ಖಾನೆ ಪುನಶ್ಚೇತನಕ್ಕೂ ನಾನು ಕೆಲಸ ಮಾಡುತ್ತಿದ್ದೇನೆ. ಆದರೆ, ರಾಜ್ಯ ಸರಕಾರ ಅದಕ್ಕೂ ಕೊಕ್ಕೆ ಹಾಕಲು ಹೊರಟಿದೆ. ಅರಣ್ಯ ಇಲಾಖೆ ಹೆಚ್.ಎಂ.ಟಿ. ಜಾಗ ನಮ್ಮದು ಎಂದು ತಕರಾರು ತೆಗೆದು ಕೂತಿದ್ದಾರೆ. ನಾನು ಏನು ಮಾಡಲಿ ಎಂದು ಕೇಂದ್ರ ಸಚಿವರು ಬೇಸರ ವ್ಯಕ್ತಪಡಿಸಿದರು.



ಕುದುರೆಮುಖ ಕಬ್ಬಿಣ ಮತ್ತು ಅದಿರು ಸಂಸ್ಥೆಗೆ ಬಳ್ಳಾರಿಯ ಸಂಡೂರಿನಲ್ಲಿ ರಾಜ್ಯ ಸರಕಾರವೇ ಗಣಿ ಹಂಚಿಕೆ ಮಾಡಿದೆ. ಇನ್ನೊಂದೆಡೆ ಅಲ್ಲಿ ಆ ಸಂಸ್ಥೆ ಗಣಿಗಾರಿಕೆ ನಡೆಸುವುದಕ್ಕೆ ರಾಜ್ಯ ಸರಕಾರವೇ ಅಡ್ಡಿ ಮಾಡುತ್ತಿದೆ. ನಾನು ಕೇಂದ್ರ ಸಚಿವನಾಗಿ ಒಂದೂವರೆ ವರ್ಷ ಕಳೆದರೂ ಈವರೆಗೆ ರಾಜ್ಯದ ಒಬ್ಬ ಸಚಿವ ನನ್ನನ್ನು ಭೇಟಿ ಮಾಡಿ ಚರ್ಚಿಸಿಲ್ಲ. ಮೊದಲು ಕೇಂದ್ರದ ಜೊತೆ ಒಳ್ಳೆಯ ಸಂಬಂಧ ಬೆಳೆಸಿ ಯೋಜನೆ ಪಡೆಯಲು ಪ್ರಯತ್ನಿಸಿ. ನಿಮ್ಮ ನಡವಳಿಕೆ ಬದಲಿಸಿಕೊಳ್ಳಿ. ಎಲ್ಲಕ್ಕೂ ಕೇಂದ್ರಕ್ಕೆ ಬೆರಳು ಮಾಡುವುದಾದರೆ ರಾಜ್ಯ ಸರಕಾರ ಎನ್ನುವುದು ಏಕೆ ಇರಬೇಕು ಎಂದು ಅವರು ಖಾರವಾಗಿ ಪ್ರಶ್ನಿಸಿದರು.

### ಸಿಎಂಗೆ ದೇವೇಗೌಡರು ಕುಮಾರಸ್ವಾಮಿನೇ ಟಾರ್ಗೆಟ್

**ಮುಖ್ಯಮಂತ್ರಿಗಳು ನಿರಂತರವಾಗಿ ಜೆಡಿಎಸ್ ಪಕ್ಷವನ್ನೇ ಟಾರ್ಗೆಟ್ ಮಾಡುತ್ತಿದ್ದಾರೆ. ಕುಮಾರಸ್ವಾಮಿ ಮತ್ತು ದೇವೇಗೌಡರನ್ನು ಮುಗಿಸುವ ಕೆಲಸ ಮಾಡುತ್ತಿದ್ದಾರೆ. ಅಧಿಕಾರಿಗಳನ್ನು ಯಾವ ರೀತಿ ದುರುಪಯೋಗ ಮಾಡಿಕೊಂಡರು ಎಂಬುದು ಗೊತ್ತಿದೆ. ಸಿನಿಮಾ ರಂಗದಲ್ಲಿ ದುಡಿದ ದುಡ್ಡಲ್ಲಿ 43 ಎಕರೆ ಖರೀದಿ ಮಾಡಿದ್ದೆ. ನನ್ನ 4 ಎಕರೆ ವಶಪಡಿಸಿಕೊಳ್ಳಲಿಕ್ಕೆ ಎಸ್ ಐಟಿ ಬೇರೆ ರಚನೆ ಮಾಡಿದ್ದಾರೆ! ಎಷ್ಟೊಂದು ಕಿರುಕುಳ ನೀಡುತ್ತಿದ್ದಾರೆ ಎಂಬುದು ನನಗಷ್ಟೇ ಗೊತ್ತು. ಇನ್ನು ಎರಡು ಕೇಸ್‌ಗಳನ್ನು ಕೋರ್ಟ್‌ನಲ್ಲಿ ಎದುರಿಸುತ್ತಿದ್ದೇನೆ. ದೇವೇಗೌಡರ ಜೊತೆ ಬೆಳೆದುಬಂದ ಸಿದ್ದರಾಮಯ್ಯ ಹೀಗೆ ಮಾಡುತ್ತಿದ್ದಾರೆ. ಜೆಡಿಎಸ್ ಮುಗಿಸಲು ಯಾರಿಂದಲೂ ಸಾಧ್ಯವಿಲ್ಲ. ಮುಗಿಸುತ್ತೇವೆ ಎಂದರೆ ಅದು ಅವರ ಭ್ರಮೆ ಅಷ್ಟೇ. ಲಕ್ಷಾಂತರ ಕಾರ್ಯಕರ್ತರು ಜೆಡಿಎಸ್ ಪಕ್ಷ ಕಟ್ಟಿದ್ದಾರೆ. ಮುಂದಿನ ಚುನಾವಣೆಯಲ್ಲಿ ಜೆಡಿಎಸ್ -ಬಿಜೆಪಿ ಮೈತ್ರಿಯಿಂದ ಮೈಸೂರು ಜಿಲ್ಲೆಯ 11 ಕ್ಷೇತ್ರಗಳಲ್ಲಿ 11 ಕ್ಷೇತ್ರಗಳನ್ನು ಗೆಲ್ಲುತ್ತೇವೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.**

ರಾಜ್ಯದ ಪರಿಸ್ಥಿತಿ ನೋಡಿದರೆ ಬಹಳ ನೋವಾಗುತ್ತದೆ. ರಾಜ್ಯದ ಸದ್ಯದ ರಾಜಕೀಯ ವಾತಾವರಣ ನೋಡಿದರೆ ನಾನು ಇಲ್ಲಿಯೇ ಇಲ್ಲಿರಬೇಕಿತ್ತು ಎನಿಸುತ್ತಿದೆ. ಸಮಯ ಬಂದಾಗ ವಾಪಸ್ಸು ಬರುತ್ತೇನೆ ಎಂದು ಕುಮಾರಸ್ವಾಮಿ ಅವರು ಮಾರ್ಮಿಕವಾಗಿ ಹೇಳಿದರು.

ರಾಜ್ಯಕ್ಕೆ ಏನೂ ತರಬೇಕು ಎಂಬುದನ್ನು ರಾಜ್ಯ ಸರಕಾರದಿಂದ ಸಂಸದರು ಹೇಳಿಸಿಕೊಳ್ಳುವವರಲ್ಲ, ಎಲ್ಲರಿಗೂ ರಾಜ್ಯದ ಬಗ್ಗೆ ಕಾಳಜಿ, ಕಳಕಳಿ ಇದೆ. ರಾಜ್ಯದ ಯಾರಾದರೂ ಒಬ್ಬರು ಮಂತ್ರಿ ಬಂದು ನನ್ನ ಬಳಿ ರಾಜ್ಯಕ್ಕೆ ಇಂತಹ ಪ್ರಾಜೆಕ್ಟ್ ತರಿಸಿಕೊಡಿ ಎಂದು ಕೇಳಿಲ್ಲ. ನಮ್ಮ ಸರಕಾರ ಬಂದು ಹತ್ತಿರತ್ತರ ಎರಡು ವರ್ಷ ಆಗುತ್ತಾ ಬರುತ್ತಿದೆ. ಒಮ್ಮೆಯಾದರೂ ನಮ್ಮನ್ನು ಕರೆಸಿ ಚರ್ಚಿಸಿಲ್ಲ, ಅವರೂ ಬಂದಿಲ್ಲ. ಕಾಳಜಿ ಯಾರಿಗಿಲ್ಲ ಎನ್ನುವುದಕ್ಕೆ ಇಷ್ಟು ಸಾಕ್ಷ್ಯ ಸಾಕಲ್ಲವೇ ಎಂದು ಅವರು ಹೇಳಿದರು.

**ಮೆಟ್ರೋ ರೈಲು ದರ ಏರಿಕೆ:** ಬೆಂಗಳೂರು ಮೆಟ್ರೋ ರೈಲು ಪ್ರಯಾಣ ದರ ಬೆಲೆ ಏರಿಕೆಗೆ ಕೇಂದ್ರ ಸರಕಾರ ಹೊಣೆ ಎಂದು ರಾಜ್ಯ ಸರಕಾರ ಸುಳ್ಳು ಹೇಳುತ್ತಿದೆ. ಕೇಂದ್ರದ ಜತೆ ಸಂಘರ್ಷ ಯಾಕೆ ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಮತ್ತು ರಾಜ್ಯದ ನಡುವೆ ಉತ್ತಮ ಬಾಂಧವ್ಯ ಇರಬೇಕು. ಎಲ್ಲದಕ್ಕೂ ಕೇಂದ್ರದ ಕಡೆ ಬೆರಳು ತೋರಿಸುವ ಕೆಲಸವನ್ನು ರಾಜ್ಯ ಸರಕಾರ ಬಿಡಬೇಕು. ಪ್ರಧಾನಮಂತ್ರಿಗಳನ್ನು ಬೀದಿಯಲ್ಲಿ ನಿಂತು ಬಾಯಿಗೆ ಬಂದಂತೆ ಬೈಯ್ಯೋದು, ಅಮೇಲೆ ಪತ್ರ ಕಳಿಸುವ ವರ್ತನೆಯನ್ನು ರಾಜ್ಯ ಸರಕಾರ ಬದಲಿಸಿಕೊಳ್ಳಬೇಕು ಎಂದು ಕೇಂದ್ರ ಸಚಿವರು ಕಿವಿಮಾತು ಹೇಳಿದರು.

> ಕೇಂದ್ರದ 53ಕ್ಕೂ ಹೆಚ್ಚಿನ ಯೋಜನೆಗಳ ಪ್ರಯೋಜನವನ್ನು ರಾಜ್ಯ ಸರಕಾರ ಬಳಕೆ ಮಾಡಿಕೊಳ್ಳುತ್ತಿಲ್ಲ. ಇವರ ವೈಫಲ್ಯ ಮುಚ್ಚಿಕೊಳ್ಳಲು ಕೇಂದ್ರದ ಬಜೆಟ್ ವಿರುದ್ಧ ಟೀಕೆ ಮಾಡುತ್ತಿದ್ದಾರೆ. ಖಾಲಿ ಚೆಂಬು ರಾಜ್ಯ ಸರಕಾರದ್ದು. ಕೇಂದ್ರ ಸರಕಾರ ಕೊಟ್ಟ ದುಡ್ಡನ್ನು ರಾಜ್ಯ ಸರಕಾರ ಸರಿಯಾಗಿ ಬಳಸಿಕೊಂಡಿಲ್ಲ. 16ನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಬರಬೇಕಿದ್ದದ್ದು 50,000 ಕೋಟಿ. ಈಗ ಅದನ್ನು 63,000 ಕೋಟಿಗೆ ಏರಿಸಲಾಗಿದೆ. ಇದು ಖಾಲಿ ಚೊಂಬೆ
>
> -ಕುಮಾರಸ್ವಾಮಿ, ಕೇಂದ್ರ ಸಚಿವರು

**ಈ ದಿನದ ದರ** ಪೆಟ್ರೋಲ್: 102.92 ₹/L ಡೀಸೆಲ್ : 90.99 ₹/L ಬಂಗಾರ: ₹15,660/Gram24ct ₹14,355/Gram22ct ಬೆಳ್ಳಿ: ₹285.00/Gram

# ಬೆಂಗಳೂರು ಕೊಚ್ಚೆ ನೀರು ಬೇಡ ಅಂದ್ರೆ, ಇದೊಂದೇ ದಾರಿ

## ನನ್ನ ತಲೆಯಲ್ಲಿ ಕೂದಲು ಹೋಯಿತೇ ಹೊರತು ಈ ಜಿಲ್ಲೆಗಳಿಗೆ ನೀರು ಹರಿಯಲಿಲ್ಲ ಎಂದು ಲೇವಡಿ

• ಉದಯವಾಹಿನಿ, ಕೋಲಾರ

ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಶೀಘ್ರ ಭೇಟಿ ಮಾಡಿ ಚರ್ಚಿಸಿ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕೃಷ್ಣಾ ನದಿ ನೀರು ತರುವ ಪ್ರಯತ್ನಿಸುತ್ತೇನೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಜಿಲ್ಲೆಗಳಿಗೆ ನದಿಯ ನೀರು ಕೊಡುತ್ತೇವೆಂದು ಹೇಳಿ ಎತ್ತಿನಹೊಳೆ ಯೋಜನೆ ಮಾಡಿದರು. ಆದರೆ, ಬೆಂಗಳೂರಿನ ಕೊಚ್ಚೆ ನೀರು ಕೊಟ್ಟರು. 3ನೇ ಹಂತದ ಶುದ್ಧೀಕರಣ ಮಾಡಿ ಎಂದರೂ ಮಾಡುತ್ತಿಲ್ಲ. ಇಂತಹ ಸಂದರ್ಭದಲ್ಲಿ ಕೃಷ್ಣಾ ನದಿಯ ನೀರು ಬಿಟ್ಟರೆ ನಮಗೆ ಬೇರೆ ದಾರಿ ಇಲ್ಲ ಎಂದರು. ಈ ಜಿಲ್ಲೆಗೆ ಕೃಷ್ಣಾ ನೀರು ತರುವ ಬಗ್ಗೆ ಸಂಸದ ಮಲ್ಲೇಶ್ ಬಾಬು ಪ್ರಯತ್ನಿಸುತ್ತಿದ್ದಾರೆ. ಅದಕ್ಕೆ ನನ್ನ ಬೆಂಬಲವೂ ಇದೆ. ಆಂಧ್ರದ ಮುಖ್ಯಮಂತ್ರಿಯನ್ನು ವಿಶ್ವಾಸಕ್ಕೆ ತೆಗೆದುಕೊಂಡು ಈ ಕೆಲಸ ಸಾಧಿಸಬೇಕಿದೆ. ಅದಕ್ಕಾಗಿ ಅವರನ್ನು ಭೇಟಿ ಮಾಡುತ್ತೇನೆ. ಅವರ ರಾಜ್ಯದ ಜನರ ಭಾವನೆಗಳಿಗೆ ಧಕ್ಕೆ ಆಗದ ರೀತಿಯಲ್ಲಿ ಅವರ ಸಹಕಾರ ತೆಗೆದುಕೊಳ್ಳುವ ಕೆಲಸ ಮಾಡುತ್ತೇವೆ. ನಾವು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇವೆ. ಮಲ್ಲೇಶ್ ಬಾಬು ಅವರನ್ನು ಗೆಲ್ಲಿಸಿದ ಕೋಲಾರ ಜನರ ಋಣ ನಮ್ಮ ಮೇಲಿದೆ. ಅದನ್ನು ತೀರಿಸುವ ಕೆಲಸ ಮಾಡುವ ಪ್ರಯತ್ನ ಮಾಡುತ್ತೇವ ಎಂದರು. 2014ರಲ್ಲಿ ಚಿಕ್ಕಬಳ್ಳಾಪುರದಲ್ಲಿ ಎತ್ತಿನಹೊಳೆ ಯೋಜನೆಗೆ ಶಂಕುಸ್ಥಾಪನೆ ಮಾಡಿದ ದಿನವೇ ನಾನು ಕೋಲಾರದಲ್ಲಿದ್ದೆ. ಒಂದೆರಡು ವರ್ಷಗಳಲ್ಲಿ ನೀರು ಬರಲ್ಲ, ಬಂದರೆ ತಲೆ ಕೂದಲು ಬೋಳಿಸಿಕೊಳ್ಳುವೆ ಎಂದಿದ್ದೆ. ನನ್ನ ತಲೆಯಲ್ಲಿ ಕೂದಲು ಹೋಯಿತೇ ಹೊರತು ಈ ಜಿಲ್ಲೆಗಳಿಗೆ ನೀರು ಹರಿಯಲಿಲ್ಲ ಎಂದು ಲೇವಡಿ ಮಾಡಿದರು.

**ಕಳಪೆ ಕಾಮಗಾರಿ-ಹಣ ದುರುಪಯೋಗ:** ಅವತ್ತಿನ ಕಾಂಗ್ರೆಸ್ ಸರಕಾರ ನೀರು ಕೊಡುವುದಾಗಿ ಹೇಳಿ ಹತ್ತು ವರ್ಷ ಆಗಿದೆ. ಆ ಯೋಜನೆಯ ಹೆಸರಿನಲ್ಲಿ ಎಷ್ಟೆಲ್ಲಾ ಲೂಟಿ ಆಗಿದೆ ಎನ್ನುವುದು ಗೊತ್ತಿದೆ. ಸಿಎಜಿ ವರದಿಯಲ್ಲಿ ಇದೆಲ್ಲವೂ ಇದೆ. ಅನರ್ಹ ಗುತ್ತಿಗೆದಾರರಿಗೆ ಕಾಮಗಾರಿ ಕೊಟ್ಟಿದ್ದಾರೆ, ಕಳಪೆ ಕಾಮಗಾರಿ ಆಗಿ ಹಣ ದುರುಪಯೋಗ ಆಗಿದೆ ಎಂದು ವರದಿಯಲ್ಲಿ ಉಲ್ಲೇಖವಿದೆ. ಈಗ 30 ಸಾವಿರ ಕೋಟಿಗೆ ಎತ್ತಿನಹೊಳೆ ಯೋಜನಾ ವೆಚ್ಚ ತಲುಪಿದೆ ಎಂದರು.

**ಯರಗೋಳ್‌ಗೂ ಕೊಚ್ಚೆ ನೀರು-ದುರಂತ:** ಬೆಂಗಳೂರಿನ ಕೊಚ್ಚೆ ನೀರಿನಿಂದಾಗಿ ಸಣ್ಣ ಮಕ್ಕಳು ಕೂಡ ಕಾಯಿಲೆಗೆ ತುತ್ತಾಗುತ್ತಿವೆ. ನದಿಯ ನೀರು ಕೊಡುತ್ತೇವೆ ಎಂದ ಅವರು ಕೊಚ್ಚೆ ನೀರು ಕೊಟ್ಟು ಮೋಸ ಮಾಡಿದರು. ಈ ಜಿಲ್ಲೆಗಳ ಜನ ಕಾಂಗ್ರೆಸ್ಸಿಗರಿಗೆ ಏನು ದ್ರೋಹ ಮಾಡಿದ್ದರು ಭಾರತೀಯ ವಿಜ್ಞಾನ ಸಂಸ್ಥೆ ಸೇರಿದಂತೆ ಅನೇಕ ಸಂಘ ಸಂಸ್ಥೆಗಳು ವರದಿ ನೀಡಿವೆ. ಅವುಗಳನ್ನು ನೋಡಿದರೆ ಈ ಜಿಲ್ಲೆಗಳಿಗೆ ಆಗಿರುವ ಹಾನಿ ಏನೆಂಬುದು ಗೊತ್ತಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮೊದಲು ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಲ್ಲಿ ಬೆಳೆಯುತ್ತಿದ್ದ ತರಕಾರಿಗಳನ್ನು ದೇಶ ವಿದೇಶಗಳಲ್ಲಿ ಪೈಪೋಟಿಗೆ ಬಿದ್ದು ಖರೀದಿ ಮಾಡುತ್ತಿದ್ದರು. ಈವತ್ತು ಈ ಭಾಗದ ತರಕಾರಿಯನ್ನು ಕೇಳುವವರೇ ಇಲ್ಲ. ಈಗ ನೋಡಿದರೆ 2027ಕ್ಕೆ ಎತ್ತಿನಹೊಳೆ ನೀರು ಕೊಡುತ್ತೇವೆ ಎಂದು ಸಬೂಬು ಹೇಳುತ್ತಿದ್ದಾರೆ. ಎತ್ತಿನಹೊಳೆಯ ಯಂತ್ರೋಪಕರಣಗಳು ಈಗಾಗಲೇ ತುಕ್ಕು ಹಿಡಿಯುತ್ತಿವೆ. ಕೋಲಾರ, ಚಿಕ್ಕಬಳ್ಳಾಪುರ ಜನರೊಂದಿಗೆ ಚೆಲ್ಲಾಟ ಆಡುತ್ತಿದ್ದಾರೆ. ದುರಂತವೆಂದರೆ ಯರಗೋಳ್ ಜಲಾಶಯಕ್ಕೆ ಕೂಡ ಕೆ.ಸಿ ವ್ಯಾಲಿಯ ಕೊಚ್ಚೆ ನೀರು ಹರಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಇವರು ಮಾತ್ರ ಕುರ್ಚಿ ಕಿತ್ತಾಟ ನಡೆಸುತ್ತಿದ್ದಾರೆ. ಮಾತೆತ್ತಿದರೆ ಕೇಂದ್ರ ಸರಕಾರದ ಬೆರಳು ಮಾಡುತ್ತಾರೆ. ರಾಜ್ಯದ ಕೆಲಸಗಳಿಗೆ ಸಂಬಂಧಿಸಿ ಈವರೆಗೂ ಸಿಎಂ, ಡಿಸಿಎಂ ಸೇರಿ ಯಾವೊಬ್ಬ ಸಚಿವರು ನಮ್ಮನ್ನು ಭೇಟಿ ಮಾಡಿಲ್ಲ. ಆದರೂ ನಮ್ಮ ಕೆಲಸ ನಾವು ಮಾಡುತ್ತಿದ್ದೇವೆ. ನಮ್ಮ ಪ್ರಯತ್ನದಿಂದ ಇತಿಹಾಸದಲ್ಲಿ ಮೊದಲ ಬಾರಿಗೆ ಕೇಂದ್ರ ಸರಕಾರ ಮಾವಿಗೆ ಬೆಂಬಲ ಬೆಲೆ ನೀಡಿದೆ. ತಂಬಾಕು ಬೆಳೆಗಾರರ ಹಿತರಕ್ಷಣೆ ಮಾಡಿದ್ದೇವೆ. ತೆಂಗು ಬೆಳೆಗಾರರ ನೆರವಿಗೆ ಧಾವಿಸಿದ್ದೇವೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ಕೋಲಾರ ಜನರ ಬದುಕಿಗೆ ಕೊಳ್ಳಿ**



> ಬೆಂಗಳೂರಿನ ಕೊಚ್ಚೆ ನೀರನ್ನು 3ನೇ ಹಂತದ ಶುದ್ಧೀಕರಣ ಮಾಡದೆ ಅನ್ಯಾಯವೆಸಗಲಾಗಿದೆ. ಜನರ ಬದುಕಿಗೆ ಕೊಳ್ಳಿ ಇಡುತ್ತಿದ್ದಾರೆ. ಹಲವಾರು ಸಂಶೋಧನೆಗಳ ವರದಿ ತೆರೆದರೆ ಈ ಕೊಚ್ಚೆ ನೀರು ಬಿಟ್ಟ ಮೇಲೆ ಈ ಜಿಲ್ಲೆಯಲ್ಲಿ ಎಷ್ಟು ಮಂದಿ ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ ಎಂಬುದು ಗೊತ್ತಾಗುತ್ತದೆ.
> – ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

**ಸೀಟು ಹಂಚಿಕೆ ಮಾತುಕತೆ ನಡೆದಿಲ್ಲ**

ಮಂಡ್ಯ ಅಥವ ರಾಜ್ಯದ ಯಾವುದೇ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳ ಸೀಟು ಕುರಿತು ಮಾತುಕತೆ ಆಗಿಲ್ಲ. ಅದಕ್ಕೆ ಇನ್ನೂ ಸಮಯ ಇದೆ. ಬಿಜೆಪಿಯೊಂದಿಗೆ ಪರಸ್ಪರ ಮಾತಿನ ಮೂಲಕ ಎಲ್ಲವನ್ನು ತೀರ್ಮಾನ ಕೈಗೊಳ್ಳುತ್ತೇವೆ. ನಮ್ಮ ಮೊದಲ ಆದ್ಯತೆ ಜಿಲ್ಲಾ ಪಂಚಾಯಿತಿ ಮತ್ತು ಸ್ಥಳೀಯ ಸಂಸ್ಥೆ ಚುನಾವಣೆ ಗಮನ ನೀಡಿದ್ದೇವೆ , ಏನೇ ಆರೋಪ ಮಾಡಿದರೂ ದಾಖಲೆ ಕೊಡಿ ಎಂದು ರಾಜ್ಯ ಕಾಂಗ್ರೆಸ್ ಸರಕಾರದವರು ಕೇಳುತ್ತಿದ್ದಾರೆ. ಅಬಕಾರಿ ಇಲಾಖೆಯಲ್ಲಿ ದುಡ್ಡು ತೆಗೆದುಕೊಂಡಿರುವುದಕ್ಕೆ ದಾಖಲೆ ಇದೆ. ಅದಕ್ಕಿಂತ ದಾಖಲೇ ಬೇಕೇ ಎಂದು ಪ್ರಶ್ನಿಸಿದರು. ಇದು ದುಡ್ಡು ಹೊಡೆಯುವ ಕಾರ್ಯಕ್ರಮ ಎಂಬುದಾಗಿ ಹೊಸದಾಗಿ ಸುಮಾರು 700 ಮದ್ಯದಂಗಡಿಗೆ (ಸಿಎಲ್-7) ಪರವಾನಗಿ ಕೊಡುವುದಾಗಿ ಈ ಸರಕಾರ ಘೋಷಣೆ ಮಾಡಿದ ದಿನವೇ ನಾನು ಹೇಳಿದ್ದೆ ಎಂದರು.

**3ನೇ ಹಂತದ ಶುದ್ಧೀಕರಣ ಮಾಡಿಲ್ಲ**

# ಭಾರತದ ಅಭಿವೃದ್ಧಿಗೆ ಕೇಂದ್ರದಿಂದ ಪ್ರಗತಿಪರ ಬಜೆಟ್ ಮಂಡನೆ

• ಉದಯವಾಹಿನಿ, ರಾಮನಗರ

ಬಲಿಷ್ಠ ರಾಷ್ಟ್ರಗಳಲ್ಲಿ ಆರ್ಥಿಕ ಸ್ಥಿತಿ ಡೋಲಾಯಮಾನ ಆಗಿರುವ ಸಂದರ್ಭದಲ್ಲಿ ಭಾರತ ದೇಶ ಸುಭದ್ರವಾದ ಹಣಕಾಸು ಸ್ಥಿತಿಯನ್ನು ಹೊಂದಿದೆ. ಈ ನಿಟ್ಟಿನಲ್ಲಿ ಅರ್ಥ ಸಚಿವೆ ನಿರ್ಮಲ ಸೀತಾರಾಮನ್ ಅವರು ಮುಂದಿನ ಹಲವು ವರ್ಷಗಳ ಆರ್ಥಿಕ ದೂರ ದೃಷ್ಟಿಯನ್ನು ಇಟ್ಟುಕೊಂಡು ಉತ್ತಮ ಬಜೆಟ್ ಮಂಡನೆ ಮಾಡಿದ್ದಾರೆ ಎಂದು ಸಂಸದ ಡಾ. ಸಿ.ಎನ್.ಮಂಜುನಾಥ್ ಹೇಳಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವದ ಐಎಂಎಫ್ ಸಹ ಭಾರತದ ಆರ್ಥಿಕ ಪರಿಸ್ಥಿತಿಯ ಜಿಡಿಪಿ ಕುರಿತು ಉತ್ತಮ ಅಭಿಪ್ರಾಯವನ್ನು ವ್ಯಕ್ತಪಡಿಸಿದೆ.

2027ಕ್ಕೆ ಭಾರತ ವಿಶ್ವದ ಮೂರನೇ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಈ ನಿಟ್ಟಿನಲ್ಲಿ ಈ ವರ್ಷದ ಬಜೆಟ್ ಉತ್ತಮವಾಗಿದೆ ಎಂದು ಅವರ ಅಭಿಪ್ರಾಯ ಪಟ್ಟರು. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ವಿಕಸಿತ ಭಾರತದ ಪರಿಕಲ್ಪನೆ ಸಾಕಾರಗೊಳ್ಳುವ ನಿಟ್ಟಿನಲ್ಲಿ ದೇಶದ ಆರ್ಥಿಕತೆ ಅಭಿವೃದ್ಧಿಯಾಗುತ್ತಿದೆ. ಈ ಬಾರಿಯ ಆರ್ಥಿಕ ವರ್ಷದಲ್ಲಿ ಕರ್ನಾಟಕ ರಾಜ್ಯಕ್ಕೆ 7380 ಕೋಟಿ ಹೆಚ್ಚುವರಿ ಅನುದಾನ ಬಂದಿದೆ. ಕಳೆದ 11 ವರ್ಷಗಳಲ್ಲಿ ರಾಜ್ಯಕ್ಕೆ ಕೇಂದ್ರದ ಎಲ್ಲಾ ಮೂಲ ಗಳಿಂದ ಸುಮಾರು ಆರು ಲಕ್ಷ ಕೋಟಿ ಅನುದಾನ ಬಂದಿದೆ.

ಆದರೆ 2004 ರಿಂದ 2014ರ ವರೆಗೆ ಯುಪಿಎ ಸರ್ಕಾರದಲ್ಲಿ ಕೇವಲ 85,000 ಕೋಟಿ ರಾಜ್ಯಕ್ಕೆ ಅನುದಾನ ಬಂದಿದೆ ಎಂದು ಅಂಕಿ ಅಂಶಗಳನ್ನು ನೀಡಿದರು. ಈ ಬಾರಿಯ ಕೇಂದ್ರ ಬಜೆಟ್ ನಲ್ಲಿ ಮೂಲಸೌಕರ್ಯ, ಆರೋಗ್ಯ, ಶಿಕ್ಷಣ, ಉತ್ಪಾದನೆ, ಕೃಷಿ ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಲಾಗಿದೆ. ಎಂಎಸ್ ಎಂಇ ಕಾರ್ಯಕ್ರಮಕ್ಕೆ 10 ಸಾವಿರ ಕೋಟಿ ರೂ.ಗಳ ಹಣವನ್ನು ಮೀಸಲಿಡಲಾಗಿದೆ. 17 ಕ್ಯಾನ್ಸರ್ ಔಷಧಿಗಳಿಗೆ ಸಂಪೂರ್ಣ ತೆರಿಗೆ ವಿನಾಯಿತಿ ನೀಡಲಾಗಿದ್ದು ಇದು ಉತ್ತಮ ಬೆಳವಣಿಗೆಯಾಗಿದೆ.

ಬೆಂಗಳೂರಿನ ನಿಮಾನ್ಸ್ ಆಸ್ಪತ್ರೆಗೆ ನಾರ್ತ್ ಕಾಂಪ್ಲೆಕ್ಸ್ ನಿರ್ಮಾಣಕ್ಕೆ 500 ಕೋಟಿ ರೂಗಳನ್ನು ತೆಗೆದಿರಿಸಲಾಗಿದ್ದು ಇದರಿಂದ 300 ಹಾಸಿಗೆಯ ಪಾಲಿಟ್ರಾಮ ಸೆಂಟರ್ ಪ್ರಾರಂಭಿಸಲಾಗುವುದು ಅಲ್ಲದೆ ಹೊಸ ಒಪಿಟಿ ಬ್ಲಾಕ್ ಪ್ರಾರಂಭಕ್ಕೆ 430 ಕೋಟಿ ಸೇರಿದಂತೆ ಒಟ್ಟು 90 ಕೋಟಿ ರೂಗಳನ್ನು ನೀಡಲಾಗಿದ್ದು ಆರೋಗ್ಯ ಕ್ಷೇತ್ರಕ್ಕೆ ಇದು ಉತ್ತಮಪಡಿಕೆಯಾಗಿದೆ ಎಂದು ತಿಳಿಸಿದರು. ಬಿಜೆಪಿ ರಾಜ್ಯ ವಕ್ತಾರ ಮೋಹನ್ ವಿಶ್ವ, ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಸಪ್ಪಗೆರೆ ಶಿವಲಿಂಗಯ್ಯ, ಮುಖಂಡರಾದ ಎಸ್.ಆರ್. ನಾಗರಾಜ್, ಟಿ.ಕೆ. ಶಾಂತಪ್ಪ, ಸುಗ್ಗನಹಳ್ಳಿ ರಾಮಕೃಷ್ಣಯ್ಯ, ರುದ್ರದೇವರು ಸರಿದಂತೆ ಮುಖಂಡರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ


# ಕಾಂಗ್ರೆಸ್‌ನಲ್ಲಿ ಭುಗಿಲೆದ್ದ ಆಕ್ರೋಶ

• ಉದಯವಾಹಿನಿ, ತುಮಕೂರು

ಅಧಿಕಾರ ಸಿಗದೆ ಹತಾಶರಾಗಿರುವ ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು ಮತ್ತೊಮ್ಮೆ ಆಕ್ರೋಶ ಹೊರ ಹಾಕಿದ್ದಾರೆ. 'ಮುಖಂಡರು, ಶಾಸಕರಿಂದಲೇ ಚುನಾವಣೆ ಗೆಲ್ಲಿ. ನಾವು ಕೆಲಸ ಮಾಡುವುದಿಲ್ಲ. ನಮ್ಮ ಅಗತ್ಯ ನಿಮಗೆ ಬೇಡವಾಗಿದೆ' ಎಂದು ಹೇಳುವ ಮೂಲಕ ಸವಾಲೊಡ್ಡಿದ್ದಾರೆ. ಈವರೆಗೆ ತೆರೆಮರೆಯಲ್ಲಿದ್ದ ಅಸಮಾಧಾನದ ಹೊಗೆ ಈಗ ಜ್ವಾಲೆಯ ಸ್ವರೂಪ ಪಡೆದುಕೊಂಡಿದೆ. ಪಕ್ಷದ ವರಿಷ್ಠರ ಎದುರೇ ತಮ್ಮ ಕೋಪ ತಾಪವನ್ನು ತೋರ್ಪಡಿಸಿದ್ದಾರೆ. ನಿಗಮ, ಮಂಡಳಿ ಹಾಗೂ ವಿವಿಧ ಸಂಸ್ಥೆಗಳಿಗೆ ನಾಮ ನಿರ್ದೇಶನ ಮಾಡದಿರುವುದು ಏಕೆ ಎಂದು ನೇರವಾಗಿ ಪ್ರಶ್ನಿಸಿದರು. ನಗರದ ಕಾಂಗ್ರೆಸ್ ಕಚೇರಿಯಲ್ಲಿ ಕರೆದಿದ್ದ ಜಿಲ್ಲಾ, ತಾಲ್ಲೂಕು ಪಂಚಾಯಿತಿ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಸಿದ್ಧತೆ ಸಭೆಯಲ್ಲಿ ಕಾರ್ಯಕರ್ತರ ಟೀಕೆಗೆ ನಾಯಕರು ಗುರಿಯಾಗಬೇಕಾಯಿತು.

ಕೆಪಿಸಿಸಿ ವೀಕ್ಷಕರಾದ ವೆಂಕಟರಮಣಯ್ಯ, ಹುಸೇನ್ ಸಾಬ್, ಇಬ್ರಾಹಿಂ ಖಲೀಂವುಲ್ಲಾ, ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಇತರರ ಎದುರು ಗದ್ದಲ ನಡೆಸಿದರು. 'ಪಕ್ಷ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಕಳೆದರೂ ಏಕೆ ಅಧಿಕಾರ ಕೊಟ್ಟಿಲ್ಲ' ಎಂದು ಪ್ರಶ್ನಿಸಿದರು. ವಿವಿಧ ನಿಗಮ, ಮಂಡಳಿಗಳಿಗೆ ನೇಮಕಗೊಂಡಿದ್ದ ಶಾಸಕರ ಅಧಿಕಾರ ಅವಧಿಯನ್ನು ಮುಂದುವರಿಸಿ, ಸಚಿವ ಸ್ಥಾನಮಾನ ನೀಡಿರುವುದು ಬ್ಲಾಕ್, ಮುಂಚೂಣಿ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು, ಪಕ್ಷಕ್ಕಾಗಿ ದುಡಿದ ಪ್ರಮುಖರ ಸಿಟ್ಟು ಹೆಚ್ಚಾಗುವಂತೆ ಮಾಡಿತ್ತು. ಎಲ್ಲರೂ ಒಮ್ಮೆಲೆ ನಾಯಕರ ಮೇಲೆ ಮುಗಿ ಬಿದ್ದರು.

ಕಾರ್ಯಕರ್ತರಿಂದ ತೀವ್ರ ವಿರೋಧ ಎದುರಿಸಿದ ಟಿ.ಬಿ.ಜಯಚಂದ್ರ, ಸಮಾಧಾನದ ಮಾತುಗಳನ್ನಾಡಿದರು. 'ಪಕ್ಷವನ್ನು ಅಧಿಕಾರಕ್ಕೆ ತರಲು ದುಡಿದ ಕಾರ್ಯಕರ್ತರಿಗೆ ಈವರೆಗೂ ಅಧಿಕಾರ ಸಿಕ್ಕಿಲ್ಲ. ಇದು ಸಹಜವಾಗಿಯೇ ಅಸಮಾಧಾನ ತರಿಸಿದ್ದು, ಪಕ್ಷ ಸಂಘಟನೆಗೂ ತೊಡಕಾಗಿದೆ' ಎಂದು ಹೇಳಿದರು.


ಉದಯವಾಹಿನಿ ಚಿತ್ರ

# ರಾಮನ ಹೆಸರಿದ್ದರೆ ಕಾಂಗ್ರೆಸ್‌ಗೆ ಅಲರ್ಜಿ

• ಉದಯವಾಹಿನಿ, ಮಧುಗಿರಿ

ಕಾಂಗ್ರೆಸ್‌ನವರಿಗೆ ರಾಮನ ಹೆಸರಿದ್ದರೆ ಅಲರ್ಜಿ. ಹಾಗಾಗಿ ವಿಬಿ ಜಿ ರಾಮ್ ಜಿ ಹೆಸರಿಗೆ ಆಕ್ಷೇಪ ವ್ಯಕ್ತಪಡಿಸುತ್ತಾ ಹುಚ್ಚರಂತೆ ಹೋರಾಟ ಮಾಡುತ್ತಿದ್ದಾರೆ ಎಂದು ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ.ಸುರೇಶ್ ಗೌಡ ಹೇಳಿದರು. ಪಟ್ಟಣದಲ್ಲಿ ನಡೆದ ವಿಬಿ ಜಿ ರಾಮ್ ಜಿ ಯೋಜನೆ ಕುರಿತ ಜಾಗೃತಿ ಸಭೆಯಲ್ಲಿ ಮಾತನಾಡಿದರು.

ರಾಮನ ಹೆಸರಿದ್ದಕ್ಕೆ ಕಾಂಗ್ರೆಸ್‌ನವರಿಗೆ ಆಗುತ್ತಿಲ್ಲ. ರಾಮ ಎಂದರೆ ಪರಿಶ್ರಮ, ರಾಮ ಎಂದರೆ ಶ್ರಮ, ರಾಮ ಎಂದರೆ ಪ್ರಾಮಾಣಿಕ, ರಾಮ ಎಂದರೆ ನಾವು ನಂಬಿರುವ ದೇವರು. ಇಂತಹ ಆದರ್ಶ ಪುರುಷನ ಹೆಸರಿದ್ದರೆ ಇವರಿಗೇಕೆ ಹೊಟ್ಟೆ ಉರಿ. ಇವರು ಹಿಂದೆಲ್ಲ ಇಂದಿರಾಗಾಂಧಿ, ರಾಜೀವ್ ಗಾಂಧಿ ಹೆಸರನ್ನು ಹಲವಾರು ಯೋಜನೆಗೆ ಇಟ್ಟಿಲ್ಲವೆ ಎಂದರು. ರಾಜ್ಯದಲ್ಲಿ ದಿನೇ ದಿನೆ ಕಾಂಗ್ರೆಸ್ ಬಲಹೀನವಾಗುತ್ತಿದ್ದು ಮುಂದೆ ಜಿಲ್ಲೆಯಲ್ಲಿ ಜೆಡಿಎಸ್ ಜತೆಗೂಡಿ ಮೈತ್ರಿ ಅಭ್ಯರ್ಥಿಗಳನ್ನೇ ತುಮಕೂರು ಜಿಲ್ಲೆಯಲ್ಲಿ ಗೆಲ್ಲಿಸಿಕೊಳ್ಳುತ್ತೇವೆ. ಅದಕ್ಕಾಗಿ ಸ್ಥಳೀಯ ಸಂಸ್ಥೆಗಳಲ್ಲಿ ಹೆಚ್ಚಿನ ಸ್ಥಾನ ಪಡೆಯಲು ನಾವು ಶ್ರಮಿಸಬೇಕು. ಮಾಜಿ ಪ್ರಧಾನಿ ದೇವೇಗೌಡ, ಕುಮಾರಸ್ವಾಮಿ ಜತೆಗೂಡಿ ರಾಜ್ಯದಲ್ಲಿ 150 ಸ್ಥಾನ ಪಡೆದು ಜನಪರ ಆಡಳಿತ ನೀಡುತ್ತೇವೆ ಎಂದರು.



# ಕಿಡಿಗೇಡಿಗಳಿಂದ ಬೆಂಕಿ

• ಉದಯವಾಹಿನಿ, ಹಲಗೂರು

ಪ್ರತ್ಯೇಕ ಎರಡು ಕಡೆಗಳಲ್ಲಿ ಆಕಸ್ಮಿಕವಾಗಿ ಬೆಂಕಿ ಬಿದ್ದು ಐದಾರು ಎಕರೆ ಭೂ ಪ್ರದೇಶದಲ್ಲಿ ಸಣ್ಣಪುಟ್ಟ ಗಿಡಗಳು ಸುಟ್ಟು ಕರಕಲಾದ ಘಟನೆ ಹಲಗೂರಿನಲ್ಲಿ ಮಧ್ಯಾಹ್ನ ನಡೆದಿದೆ. ಹಲಗೂರು ಕೆರೆ ಕೋಡಿ ಅಂಚಿನಲ್ಲಿರುವ ಪಟ್ಟಲದಮ್ಮ ದೇವಸ್ಥಾನದ ಹಿಂಭಾಗದ ಸುಮಾರು ನಾಲ್ಕೈದು ಎಕರೆ ಭೂ ಪ್ರದೇಶಕ್ಕೆ ಬೆಂಕಿ ತಗುಲಿದ್ದು, ಅಪಾರ ಪ್ರಮಾಣದ ಮರ ಗಿಡಗಳು ಮತ್ತು ಸಮೀಪದ ಜಮೀನಿನಲ್ಲಿ ಬೆಳೆದಿದ್ದ ಸೌತೆಕಾಯಿ ಬೆಳೆಗಳು ಬೆಂಕಿಗೆ ಆಹುತಿ ಆಗಿವೆ. ಕಸದ ರಾಶಿಗೆ ಬೆಂಕಿ ಹಚ್ಚಿದ ಪರಿಣಾಮ ಬೆಂಕಿ ನಿಯಂತ್ರಣ ತಪ್ಪಿ ವ್ಯಾಪಕವಾಗಿ ಹರಡಿದೆ. ನಂತರ ವಾಸು ಬಾರ್ ಹಿಂಭಾಗದ ಭೀಮಾ ನದಿ ಬಫರ್ ವಲಯ ಹಾಗೂ ಚೌಕಿ ಮಠದವರೆಗೆ ಹರಡಿದ್ದ ಬೆಂಕಿಯನ್ನು ಅಗ್ನಿಶಾಮಕ ಸಿಬ್ಬಂದಿ ನಂದಿಸಿದರು.


ಉದಯವಾಹಿನಿ ಚಿತ್ರ

ಹಲಗೂರು ಬೃಹದಾಕಾರವಾಗಿ ಬೆಳೆಯುತ್ತಿದ್ದು, ಅಗ್ನಿ ಅವಘಡಗಳು ಸಂಭವಿಸಿದರೇ ಮಳವಳ್ಳಿ ಪಟ್ಟಣದಿಂದ ಅಗ್ನಿ ಶಾಮಕ ವಾಹನಗಳು ಅವಘಡ ಸ್ಥಳಕ್ಕೆ ಬರುವಷ್ಟರಲ್ಲಿ ಅಪಾರ ಪ್ರಮಾಣದ ಮೌಲ್ಯಯುತ ವಸ್ತುಗಳು ಬೆಂಕಿಗೆ ಅಹುತಿಯಾಗುತ್ತಿವೆ.

ಬಸವನಬೆಟ್ಟ, ಮುತ್ತತ್ತಿ ಅರಣ್ಯ ಪ್ರದೇಶಗಳಿದ್ದು ಹಲಗೂರಿನಲ್ಲಿ ಅಗ್ನಿ ಶಾಮಕ ಠಾಣೆ ತೆರೆಯಲು ಸರ್ಕಾರ ಕ್ರಮವಹಿಸಬೇಕು ಎಂದು ಗ್ರಾಮದ ಕೆ.ಜಿ.ಸಿದ್ದಲಿಂಗಮೂರ್ತಿ ಆಗ್ರಹಿಸಿದರು.

ಬೇಸಿಗೆ ಆರಂಭ ಹಂತದಲ್ಲಿದ್ದು, ಒಣಗಿದ ಗಿಡಗಂಟಿಗಳು ಮತ್ತು ತರಗೆಲೆಗಳಿಗೆ ಬೆಂಕಿ ತಗುಲಿದರೆ ವೇಗವಾಗಿ ಹರಡುವ ಸಾಧ್ಯತೆ ಇದೆ. ಮಾಹಿತಿ ನೀಡದೇ ಬೆಂಕಿ ಹಚ್ಚುವುದು ಭಾರಿ ನಷ್ಟಕ್ಕೆ ಕಾರಣವಾಗುತ್ತದೆ. ಸಾರ್ವಜನಿಕರು ಎಚ್ಚರ ವಹಿಸಬೇಕು ಎಂದು ಅಗ್ನಿಶಾಮಕ ಠಾಣಾಧಿಕಾರಿ ಹೇಮಂತ್ ಕುಮಾರ್ ತಿಳಿಸಿದರು.

ಕಾರ್ಯಾಚರಣೆಯಲ್ಲಿ ಅಗ್ನಿ ಶಾಮಕ ದಳದ ಸಿಬ್ಬಂದಿ ಸಿದ್ದರಾಮಯ್ಯ, ಮೋಹನ್ ಕುಮಾರ್, ಗಗನ್ ಪಾಲ್ಗೊಂಡಿದ್ದರು.

# ವರ್ಲ್ಡ್ ಬಿಗ್ ಕ್ಯಾಟ್ ಅಲೆಯನ್ಸ್ ಶೃಂಗಸಭೆ : ಸಂರಕ್ಷಣೆ ಕುರಿತಂತೆ ವಿಚಾರ ವಿನಿಮಯ

• ಉದಯವಾಹಿನಿ, ಗುಂಡ್ಲುಪೇಟೆ

ಭಾರತದ ಮೊದಲ ವರ್ಲ್ಡ್ ಬಿಗ್ ಕ್ಯಾಟ್ಸ್ ಅಲೆಯನ್ಸ್ ಶೃಂಗಸಭೆಗೆ ಚಾಮರಾಜ ನಗರ ಜಿಲ್ಲೆಯ ಬಂಡೀಪುರ ಹುಲಿ ಸಂರಕ್ಷಿತಾರಣ್ಯ ಪ್ರದೇಶದಲ್ಲಿ ಸಿದ್ಧತೆ ಕೈಗೊಳ್ಳಲಾಗಿದ್ದು, ಫೆಬ್ರವರಿ 9 ರಿಂದ 11ವರಗೆ ಮೂರು ದಿನ ನಡೆಯುವ ಸಭೆಯಲ್ಲಿ 23 ದೇಶಗಳು ಪಾಲ್ಗೊಳ್ಳಲಿವೆ. ಬಂಡೀಪುರದ ಮೇಲುಕಾಮನಹಳ್ಳಿಯಲ್ಲಿರುವ ಅರಣ್ಯ ಇಲಾಖೆ ಕಚೇರಿಯಲ್ಲಿ ಶೃಂಗಸಭೆಗೆ ಅಧಿಕಾರಿಗಳು ಸಿದ್ಧತೆ ಕೈಗೊಂಡಿದ್ದಾರೆ.

ಶೃಂಗಸಭೆಗೆ ಭಾನುವಾರ ಬೆಂಗಳೂರಿನ ರೆಯಾಡಿಸನ್ ಬ್ಲೂಪ್ ಹೋಟೇಲ್‌ನಲ್ಲಿ ಚಾಲನೆ ದೊರೆಯಲಿದೆ. ಫೆಬ್ರವರಿ 9 ರಂದು ಮಧ್ಯಾಹ್ನ 3 ಗಂಟೆಗೆ ಬಂಡೀಪುರದ ಮೇಲುಕಾಮನಹಳ್ಳಿಯ ಮೀಟಿಂಗ್ ಹಾಲ್‌ನಲ್ಲಿ ಶೃಂಗಸಭೆ ಶುರುವಾಗಲಿದೆ. ಫೆಬ್ರವರಿ 11ವರೆಗೆ ನಡೆಯಲಿರುವ ಶೃಂಗಸಭೆಯಲ್ಲಿ ಬಂಡೀಪುರದಲ್ಲಿ ಹುಲಿ ಘೋಷಣೆ ಮಾಡಿ 50 ವರ್ಷಗಳಾಗಿರುವ ಹಿನ್ನೆಲೆಯಲ್ಲಿ ಯೋಜನೆ ಸಾಗಿ ಬಂದಿರುವುದು, ಹುಲಿ ಮತ್ತು ಚಿರತೆ, ವನ್ಯಜೀವಿಗಳ ಸಂರಕ್ಷಣೆ ಮಾಡಿರುವುದು, ಕಾಡಿಗೆ ಕಂಟಕವಾಗಿರುವ ಲಂಟಾನ ತೆರವು ಮಾಡಲು ಕೈಗೊಂಡಿರುವ ಕ್ರಮಗಳು, ಹುಲಿ, ಆನೆ ಮತ್ತು ಇನ್ನಿತರೆ ಪ್ರಾಣಿಗಳು ಮತ್ತು ಮಾನವ ಸಂಘರ್ಷ ನಿಯಂತ್ರಣಕ್ಕೆ ಅನುಷ್ಠಾನಗೊಳಿಸಿರುವ ಕಾರ್ಯಗಳನ್ನು ವಿವರಿಸಲಾಗುತ್ತದೆ. ಇದೇ ವೇಳೆ ಬೇರೆ ದೇಶಗಳಲ್ಲಿ ಕೈಗೊಂಡಿರುವ ಕಾರ್ಯಗಳ ಬಗ್ಗೆಯೂ ಮಾಹಿತಿ ಪಡೆದುಕೊಳ್ಳಲಾಗುತ್ತದೆ. ತರಗತಿ ಸೆಷನ್ನಗಳು, ಕಾಡಿನೊಳಗೆ ಭೇಟಿ, ಚರ್ಚಾ ಕಾರ್ಯಕ್ರಮಗಳು ನಡೆಯಲಿವೆ ಎಂದು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯಾಧಿಕಾರಿ ಪ್ರಭಾಕರನ್ ತಿಳಿಸಿದರು.

ಚಾಮರಾಜನಗರ ಜಿಲ್ಲೆಯ ಬಂಡೀಪುರದಲ್ಲಿ ನಡೆಯಲಿರುವ ಶೃಂಗಸಭೆಯಲ್ಲಿ ಆರೇಮಿಯಾ, ಭೂತಾನ್, ಕಾಂಬೋಡಿಯಾ, ಕಾಂಗೋ, ಶ್ರೀಲಂಕಾ, ರಷ್ಯಾ, ಕಜಕಿಸ್ತಾನ್, ಮೆಕ್ಸಿಕೋ, ರಷ್ಯಾ, ಮಂಗೋಲಿಯಾ ಸೇರಿ ಒಟ್ಟು 23 ದೇಶಗಳಿಂದ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು, ವನ್ಯಜೀವಿ ತಜ್ಞರು, ಸಂಶೋಧಕರು ಭಾಗವಹಿಸುತ್ತಿದ್ದಾರೆ.

ಕೇಂದ್ರ ಮತ್ತು ರಾಜ್ಯದ ಅರಣ್ಯ ಇಲಾಖೆಯ ಹಿರಿಯ ಮತ್ತು ಕಿರಿಯ ಅಧಿಕಾರಿಗಳು, ಸಿಬ್ಬಂದಿ ಭಾಗವಹಿಸಲಿದ್ದಾರೆ. ದೇಶದಲ್ಲಿ 1973ರಲ್ಲಿ ಹುಲಿ ಯೋಜನೆಯನ್ನು ಅಂದಿನ ಪ್ರಧಾನ ಮಂತ್ರಿ ಇಂದಿರಾ ಗಾಂಧಿ ಘೋಷಣೆ ಮಾಡಿದರು. ಅದರಂತೆ ಬಂಡೀಪುರದಲ್ಲೂ ಯೋಜನೆ ಘೋಷಣೆಯಾಯಿತು.

ಸುದೀರ್ಘ 50 ವರ್ಷ ಪೂರೈಸಿರುವ ಯೋಜನೆ ಬಂಡೀಪುರದಲ್ಲಿ ಹುಲಿ ಸಂತತಿಯನ್ನು ಹೆಚ್ಚಿಸಿದೆ. ಅದೇ ರೀತಿ ವರ್ಲ್ಡ್ ಬಿಗ್ ಕ್ಯಾಟ್ಸ್ ಅಲೆಯನ್ಸ್ ಅನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಘೋಷಣೆ ಮಾಡಿದರು. ಬಂಡೀಪುರ-50 ರ ಸಂಭ್ರಮಕ್ಕೆ ಆಗಮಿಸಿ ಮೈಸೂರಿಗೆ ತೆರಳಿದ್ದಾಗ ವಿದ್ಯಾಲಯದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ವರ್ಲ್ಡ್ ಬಿಗ್ ಕ್ಯಾಟ್ಸ್ ಅಲೆಯನ್ಸ್ ಉದ್ಘಾಟಿಸಿದ್ದರು. ದೊಡ್ಡ ಬೆಕ್ಕು ಜಾತಿಯ ಪ್ರಾಣಿಗಳ ರಕ್ಷಣೆಗೆ ಈ ಅಲೆಯನ್ಸ ಕೆಲಸ ಮಾಡಲಿದೆ ಎಂದಿದ್ದರು. ಅಲ್ಲದೇ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ 2026-27ನೇ ಸಾಲಿನ ಬಜೆಟ್‌ನಲ್ಲಿ ಈ ವರ್ಷ ಮೊದಲ ಬಾರಿಗೆ ಶೃಂಗಸಭೆ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದ್ದರು ಹಾಗೆಯೇ ಕಾರ್ಯಕ್ರಮಕ್ಕೆ ಸಿದ್ಧತೆ ನಡೆಸಲಾಗಿದೆ.


ಉದಯವಾಹಿನಿ ಚಿತ್ರ

**23 ದೇಶಗಳು ಪಾಲ್ಗೊಳ್ಳಲಿವೆ**

## ರಾಜ್ಯ ಸರಕಾರ ಖಾಲಿ ಚೆಂಬನ್ನು 2 ವರ್ಷದಿಂದ ಜನರಿಗೆ ಕೊಡುತ್ತಿದೆ: ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಎಚ್‌ಡಿಕೆ ಕಿಡಿ

# ಖಾಲಿ ಚೆಂಬಿನ ಕ್ರೆಡಿಟ್ ರಾಜ್ಯ ಸರಕಾರಕ್ಕೆ ಹೋಗಬೇಕು

• ಉದಯವಾಹಿನಿ, ಮೈಸೂರು

ಮೈಸೂರಿನಲ್ಲಿ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಸುದ್ದಿಗೋಷ್ಠಿ ನಡೆಸಿ, ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು. 16 ಬಜೆಟ್ ಮಂಡಿಸಿರುವ ಸಿಎಂ ಸಿದ್ದರಾಮಯ್ಯಗೆ ಕೇಂದ್ರ ಬಜೆಟ್ ಬಗ್ಗೆ ಸಂಕುಚಿತ ಭಾವನೆ ತೋರಿದರು. ಕೇಂದ್ರದ ದೂರದೃಷ್ಟಿಯ ಬಜೆಟ್ ಸಿಎಂಗೆ ಅರ್ಥ ಆಗಿಲ್ಲ. ಕೇಂದ್ರದ ಬಜೆಟ್ ಬಗ್ಗೆ ಸಿಎಂ ಬಹಳ ಲಘುವಾಗಿ ಮಾತಾಡಿದ್ದಾರೆ. ಖಾಲಿ ಚೆಂಬಿನ ಕ್ರೆಡಿಟ್ ರಾಜ್ಯ ಸರಕಾರಕ್ಕೆ ಹೋಗಬೇಕು. ರಾಜ್ಯ ಸರಕಾರ ಖಾಲಿ ಚೆಂಬನ್ನು ಎರಡು ವರ್ಷದಿಂದ ಜನರಿಗೆ ಕೊಡುತ್ತಿದೆ. ರಾಜ್ಯ ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳಲು ಕೇಂದ್ರ ಬಜೆಟ್ ಬಗ್ಗೆ ಟೀಕೆ ಮಾಡುತ್ತಿದ್ದರು ಎಂದು ಎಚ್‌ಡಿಕೆ ವಾಗ್ದಾಳಿ ನಡೆಸಿದರು. ಕುಮಾರಸ್ವಾಮಿ ಮಂಡ್ಯಗೆ ಏನ್ ತಂದರು? ರಾಜ್ಯಕ್ಕೆ ಏನು ತಂದ್ರು ಅಂತ ಪ್ರತಿ ನಿತ್ಯ ಮಂಡ್ಯ ಶಾಸಕರು ಸಣ್ಣತನದಲ್ಲಿ ಪ್ರಶ್ನೆ ಮಾಡ್ತಿದ್ದಾರೆ. ಮಂಡ್ಯ ಕಾಂಗ್ರೆಸ್ ಶಾಸಕರ ಪ್ರಶ್ನೆಗಳಿಗೆ ಕೇಂದ್ರ ಬಜೆಟ್ ನಲ್ಲಿ ಉತ್ತರವಿದೆ. ಆಟೋಮೇಟಿವ್ ರಿಸರ್ಚ್ ಇಂಡಿಯಾ ಸಂಸ್ಥೆಯ ಘಟಕ ತೆರೆಯಲು 100 ಎಕರೆ ಜಾಗವನ್ನು ಮಂಡ್ಯದಲ್ಲೇ ಕೊಡಲು ರಾಜ್ಯ ಸರಕಾರಕ್ಕೆ ಪತ್ರ ಬರೆದಿದ್ದೇನೆ. ಆಟೋಮೊಬೈಲ್ ಇಂಡಸ್ಟ್ರಿ ಸ್ಥಾಪನೆಗೆ ಕೇಂದ್ರ ಸರಕಾರ ಬದ್ಧವಾಗಿದೆ. ಇದಕ್ಕಾಗಿ ಭೂಮಿ ಕೊಡಲು ಸಿಎಂಗೆ ನಾನೇ ಪತ್ರ ಬರೆದಿದ್ದೇನೆ. ನಾನು ನಾಟಕವಾಡಲು ಪತ್ರ ಬರೆದಿಲ್ಲ. ನಾಟಕವಾಡಲು ಪ್ರಧಾನಿಗಳು ನಂಗೆ ಈ ಸ್ಥಾನ ಕೊಟ್ಟಿಲ್ಲ. ರಾಜ್ಯದ ಕೈಗಾರಿಕಾ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ದುಡಿಯುತ್ತಿದ್ದೇನೆ. ಕೇಂದ್ರ ಬಜೆಟ್ ನಲ್ಲಿ ರಾಜ್ಯಕ್ಕೆ ಯಾವ ಅನ್ಯಾಯವೂ ಆಗಿಲ್ಲ. ಖಾಲಿ ಚೆಂಬು ರಾಜ್ಯ ಸರಕಾರದ್ದು. ಕೇಂದ್ರ ಸರಕಾರ ಕೊಟ್ಟ ದುಡ್ಡನ್ನು ರಾಜ್ಯ ಸರಕಾರ ಸರಿಯಾಗಿ ಬಳಸಿಕೊಂಡಿಲ್ಲ ಎಂದು ವಾಗ್ದಾಳಿ ನಡೆಸಿದರು. 16ನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಬರಬೇಕಿದ್ದದ್ದು 50 ಸಾವಿರ ಕೋಟಿ ರೂ. ಈಗ ಅದನ್ನು 63 ಸಾವಿರ ಕೋಟಿ ರೂ ಗೆ ಏರಿಸಲಾಗಿದೆ. ವಿಶ್ವೇಶ್ವರಯ್ಯ ಸ್ಟಿಲ್ ಫ್ಯಾಕ್ಟರಿ ಪುನಶ್ಚೇತನಕ್ಕೆ 4 ರಿಂದ 5 ಸಾವಿರ ಕೋಟಿ ರೂ. ಕೊಡುತ್ತಿದ್ದೇವೆ. ಎಚ್.ಎಂ.ಟಿ. ಕಂಪನಿ ಪುನರ್ ಆರಂಭಕ್ಕೆ ನಾನು ಬದ್ಧವಾಗಿದ್ದೇನೆ. ಅರಣ್ಯ ಇಲಾಖೆಯವರು ಎಚ್.ಎಂ.ಟಿ. ಕಂಪನಿ ಜಾಗ ನಮ್ಮದು ಎಂದು ತಕರಾರು ತೆಗೆದು ಕೊಂಡು ಕೂತಿದ್ದಾರೆ. ನಾನು ಏನೂ ಮಾಡಲಿ. ರಾಜ್ಯದ ಯಾರಾದರೂ ಒಬ್ಬರು ಮಂತ್ರಿ ಬಂದು ನನ್ನ ಬಳಿ ರಾಜ್ಯಕ್ಕೆ ಇಂತಹ ಪ್ರಾಜೆಕ್ಟ್ ತರಿಸಿ ಕೊಡಿ ಎಂದು ಕೇಳಿದ್ದಿರಾ? ಎಂದು ಪ್ರಶ್ನಿಸಿದರು.

ಜೆಡಿಎಸ್ ಅನ್ನು ಸಿಎಂ ಟಾರ್ಗೆಟ್ ಮಾಡಿದ್ದಾರೆ. ಕುಮಾರಸ್ವಾಮಿ, ಎಚ್.ಡಿ. ದೇವೇಗೌಡರನ್ನು ಯಾವ ರೀತಿ ಮುಗಿಸಬೇಕು.

ಯಾವ ರೀತಿ ಇವರ ಚಾರಿತ್ರ್ಯ ಹರಣ ಮಾಡಬೇಕು ಎಂದು ಸಿಎಂ ಬಹಳ ಪ್ರಯತ್ನ ಮಾಡುತ್ತಿದ್ದಾರೆ. ಕುಟುಂಬದ ಒಳಗೆ ನಡೆದ ಒಂದು ಪ್ರಕರಣ ವಿಚಾರದಲ್ಲಿ ಎಚ್.ಡಿ. ದೇವೇಗೌಡರನ್ನು ಮಾನಸಿಕವಾಗಿ ಕುಗ್ಗಿಸುವ ಬಹಳ ಪ್ರಯತ್ನ ಆಗಿದೆ. ದೇವೇಗೌಡರ ಗರಡಿಯಲ್ಲೆ ಬೆಳೆದ ಸಿದ್ದರಾಮಯ್ಯ ಈಗ ದೇವೇಗೌಡ ಕುಟುಂಬಕ್ಕೆ ಕೊಡುತ್ತಿರುವ ಕೊಡುಗೆ ಒಂದಾ ಎರಡಾ? ವೀರಪ್ಪನ್ ಪ್ರಕರಣದಲ್ಲಿ ಪೊಲೀಸರಿಗೆ ಬಹುಮಾನ ರೂಪದಲ್ಲಿ ಹಣ ನೀಡಲಾಗಿತ್ತು. ಅದು ಬಿಟ್ಟರೆ ಹಾಸನದ ಕೇಸ್ ವಿಚಾರದಲ್ಲೇ ಸರಕಾರ ಪೊಲೀಸರಿಗೆ 30 ಲಕ್ಷ ರೂ. ಬಹುಮಾನವಾಗಿ ಕೊಟ್ಟಿದೆ.

ಜಿಟಿಡಿ ನಮ್ಮ ಜೊತೆಯಲ್ಲಿ ಇಲ್ಲ. ಅವರು ಬೇರೆ ಬೇರೆ ಮಹಾನ್ ನಾಯಕರ ಜೊತೆಯಲ್ಲಿದ್ದಾರೆ. ಪಕ್ಷದ ಬಗ್ಗೆ ನಿಯತ್ತು, ನಿಷ್ಠೆ ಯಾವುದು ಇರದವರನ್ನು ನಾವು ಜೊತೆಯಲ್ಲಿಟ್ಟುಕೊಳ್ಳಬೇಕಾ? ನನ್ನ ಮುಂದೆ ಇನ್ನು ಮುಂದೆ ಪದೇ ಪದೇ ಜಿ.ಟಿ.ಡಿ ಹೆಸರು ಪ್ರಸ್ತಾಪ ಮಾಡಬೇಡಿ. ನನ್ನ ಮನಸ್ಸಿಗೆ ಬಹಳ ನೋವಾಗುವ ಘಟನೆಗಳು ನಡೆದಿದೆ. ಮೂಡಾ ಪ್ರಕರಣದಲ್ಲಿ ನಮ್ಮನ್ನು ರಾಜೀನಾಮೆ ಕೊಡುತ್ತಾರ ಎಂದು ಕೇಳಿ ಸಿಎಂಗೆ ಸರ್ಟಿಫಿಕೇಟ್ ಕೊಡುತ್ತಾರೆ. ನಮಗೆ ಒಂದು ದಿನವು ಸರ್ಟಿಫಿಕೇಟ್ ಕೊಡಲಿಲ್ಲ. ಅವರನ್ನು ಜೊತೆಯಲ್ಲಿಟ್ಟುಕೊಂಡು ಓಡಾಡಬೇಕಾ. ನಾನು ರಾಜೀನಾಮೆ ಕೊಡುವ ತಪ್ಪನ್ನ ಅವತ್ತು ಏನು ಮಾಡಿದ್ದೆ. ಚಾಮುಂಡೇಶ್ವರಿ ಕ್ಷೇತ್ರಕ್ಕೆ ಬಹಳಷ್ಟು ಜನ ಅಭ್ಯರ್ಥಿಗಳು ಇದ್ದಾರೆ. ಇವರು ಬಹಳಷ್ಟು ಬಾರಿ ಬಹಳಷ್ಟು ಜನರನ್ನು ಬೆಳಸಿದ್ದೇವೆ ಮೆರೆಸಿದ್ದೇವೆ ಎಂದು ಹೇಳಿಕೊಳ್ಳುತ್ತಾರೆ. ಯಾವಾಗ ಯಾರನ್ನು ಮೆರಸುತ್ತಾರೋ ಯಾರಿಗೆ ಗೊತ್ತು. ಈಗ ಯಾರೋ ಒಬ್ಬರನ್ನು ಮೆರಸಲು ಹೊರಟಿದ್ದಾರೆ. ಅವರಿಗೆ ನಿಯತ್ತು ಏನಾದ್ರು ಇದ್ಯಾ. ನನ್ನ ಪಕ್ಷದ ಕಾರ್ಯಕರ್ತರಿಗೆ ಗೊಂದಲ ಆಗ ಬಾರದು ಎಂದು ಇದನ್ನ ಹೇಳುತ್ತಿದ್ದೇನೆ.

**ಕೇಂದ್ರದ ಬಜೆಟ್ ಸಿಎಂಗೆ ಅರ್ಥ ಆಗಿಲ್ಲ**




> ಚಾಮುಂಡೇಶ್ವರಿ ಕ್ಷೇತ್ರಕ್ಕೂ ನನಗೂ ಭಾವನಾತ್ಮಕ ಸಂಬಂಧ ಇದೆ. ಅಲ್ಲಿ ಯಾರನ್ನಾದರೂ ಅಭ್ಯರ್ಥಿ ಮಾಡಿದರೆ ಗೆಲ್ಲುತ್ತಾರೆ. ಸಾಕಷ್ಟು ಜನ ಅಭ್ಯರ್ಥಿಗಳು ಚುನಾವಣೆಗೆ ಸ್ಪರ್ಧೆ ಮಾಡಲು ಸಿದ್ದರಿದ್ದಾರೆ. ಮುಂದಿನ ಚುನಾವಣೆಯಲ್ಲಿ ನಾವು 11 ಕ್ಷೇತ್ರಗಳಲ್ಲೂ ಜೆಡಿಎಸ್ ಬಿಜೆಪಿ ಅಭ್ಯರ್ಥಿಗಳು ಗೆಲ್ಲುತ್ತಾರೆ.
> – ಎಚ್‌ಡಿ ಕುಮಾರಸ್ವಾಮಿ, ಕೇಂದ್ರ ಸಚಿವ

**ನನ್ನ ಜೊತೆ ರಾಜ್ಯ ಸರಕಾರಕ್ಕೆ ಮಾತಾಡಲು ಇಗೋ ಸಮಸ್ಯೆ**

ನನ್ನ ಜೊತೆ ರಾಜ್ಯ ಸರಕಾರಕ್ಕೆ ಮಾತಾಡಲು ಇಗೋ ಸಮಸ್ಯೆ ಇರಬಹುದು. ಅಥವಾ ಅಸೂಯೆ ಭಾವನೆ ಇರಬಹುದು. ಜೆಡಿಎಸ್ ಮುಳುಗಿ ಹೋಯ್ತು ಎಂದ ಕೊಂಡವರಿಗೆ ಜೆಡಿಎಸ್‌ಗೆ ಇಷ್ಟು ದೊಡ್ಡ ಸ್ಥಾನ ಸಿಕ್ಕಿದೆ. ಈ ಕಾರಣಕ್ಕೆ ಅಸೂಯೆ ಇರಬಹುದು ನಮ್ಮ ಬಗ್ಗೆ. ಈ ಸಿಎಂಗೆ ಜಾಣ ಕಿವುಡು ಇದೆ. ಕಾಂಗ್ರೆಸ್ ರಾಜ್ಯವನ್ನು ದಿವಾಳಿ ಎಬ್ಬಿಸಲು ಅಧಿಕಾರಕ್ಕೆ ಬಂದಿದೆ. ದಾಖಲೆ ಬಜೆಟ್ ಮಂಡಿಸಿ ರಾಜ್ಯವನ್ನು ಸಿಎಂ ದಿವಾಳಿ ಮಾಡುತ್ತಾರೆ. ಇವತ್ತಿನ ರಾಜ್ಯದ ಪರಿಸ್ಥಿತಿ ಗಮನಿಸಿದರೆ ನಾನು ಇಲ್ಲೇ ಇರಬೇಕಿತ್ತು ಅನ್ನಿಸುತ್ತಿದೆ. ನಾನು ವಾಪಾಸ್ ಇಲ್ಲಿಗೆ ಬರುವ ಟೈಂ ಬಂದಾಗ ಬರ್ತಿನಿ. ಕುಟುಂಬ ರಾಜಕಾರಣದ ವಿಚಾರದಲ್ಲಿ ನನ್ನ ಕುಟುಂಬಕ್ಕೆ ಸಿಕ್ಕಷ್ಟು ಪ್ರಚಾರ ಯಾರಿಗೂ ಸಿಗಲಿಲ್ಲ. ಜೆಡಿಎಸ್ ನಮ್ಮ ಕುಟುಂಬದವರನ್ನು ಬಿಟ್ಟು ಬೇರೆ ಯಾರು ಬೇಕಾದರೂ ಅಧ್ಯಕ್ಷರಾಗಲಿ ಎಂದು ಹೇಳಿದ್ದೇನೆ. ಆದರೆ ಯಾರು ಸಿದ್ಧರಿಲ್ಲ. ನಾನು ಏನೂ ಮಾಡಲಿ.

## ಮಿನಿ ನ್ಯೂಸ್

### ಅದ್ದೂರಿ ಸಾಮೂಹಿಕ ಶ್ರೀ ಗಜಗೌರಿ ವ್ರತ : ಸಂಸದ ಭಾಗಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ರಾಮನಗರ ವ್ಯಾಸರಾಯ ರಸ್ತೆ, ಆಂಜನೇಯಸ್ವಾಮಿ ದೇವಸ್ಥಾನದ ಹಿಂಭಾಗದಲ್ಲಿ ಶ್ರೀ ಸೀತಾರಾಮ ಸೇವಾ ಟ್ರಸ್ಟ್, ಶ್ರೀ ಬಲಮುರಿ ಗಣಪತಿ ದೇವಸ್ಥಾನ ಟ್ರಸ್ಟ್, ಶ್ರೀ ಅಯ್ಯಪ್ಪ ಸ್ವಾಮಿ ಸೇವಾ ಮಂಡಳಿ, ವ್ಯಾಸರಾಯ ರಸ್ತೆ, ರಾಮನಗರ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಅದ್ದೂರಿ ಸಾಮೂಹಿಕ ಶ್ರೀ ಗಜಗೌರಿ ವ್ರತ ಕಾರ್ಯಕ್ರಮದಲ್ಲಿ ಸಂಸದ ಡಾ. ಸಿ. ಎನ್. ಮಂಜುನಾಥ್ ಅವರು ಭಾಗವಹಿಸಿ ಲೋಕಕಲ್ಯಾಣಕ್ಕಾಗಿ ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ವಕ್ತರರಾದ ಮೋಹನ್ ವಿಶ್ವ, ರಾಜ್ಯ ಮಾಧ್ಯಮ ಸಮಿತಿ ಸದಸ್ಯರಾದ ಶ್ರೀನಾಥ್, ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಆನಂದ ಸ್ವಾಮಿ, ರಾಮನಗರ ಜೆಡಿಎಸ್ ಅಧ್ಯಕ್ಷರಾದ ಶಿವಲಿಂಗಯ್ಯ, ಎನ್‌ಡಿಎ ಪಕ್ಷದ ಹಲವು ಪ್ರಮುಖ ಮುಖಂಡರು ಹಾಗೂ ವಿವಿಧ ಸಂಘ ಸಂಸ್ಥೆಗಳು ಮತ್ತು ಟ್ರಸ್ಟ್‌ಗಳ ಪ್ರಮುಖರು ಉಪಸ್ಥಿತರಿದ್ದರು.

### 30 ಗ್ರಾಂ ಚಿನ್ನ, ಅರ್ಧ ಕೆ.ಜಿ ಬೆಳ್ಳಿ ದೋಚಿದ ಕಳ್ಳರು

• ಉದಯವಾಹಿನಿ, ಗೌರಿಬಿದನೂರು

ನಗರದ ಡಿಆರ್‌ಎಂ ಲೇಔಟ್‌ನಲ್ಲಿ ಮನೆಯೊಂದರಲ್ಲಿ ಯಾರೂ ಇಲ್ಲದ ಸಮಯದಲ್ಲಿ ರಾತ್ರಿ ಮನೆ ಬಾಗಿಲು ಮುರಿದು ಒಳ ನುಗ್ಗಿದ ದುಷ್ಕರ್ಮಿಗಳು 30 ಗ್ರಾಂ ಚಿನ್ನ, ಅರ್ಧ ಕೆ.ಜಿಯಷ್ಟು ಬೆಳ್ಳಿ ಮತ್ತು 46 ನಗರದು ದೋಚಿ ಪರಾರಿಯಾಗಿದ್ದಾರೆ. ತಾವು ಮನೆ ಬೀಗ ಹಾಕಿಕೊಂಡು ಕುಟುಂಬ ಸಮೇತರಾಗಿ ತಿರುಪತಿಗೆ ತೆರಳಿದ್ದಾಗ ಈ ಘಟನೆ ನಡೆದಿದೆ. ತಿರುಪತಿಯಿಂದ ವಾಪಸ್ ಮನೆಗೆ ಬಂದಾಗ ಮನೆಯಲ್ಲಿ ಕಳ್ಳತನವಾಗಿರುವುದು ಗೊತ್ತಾಗಿದೆ. ಈ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸುವುದು ವಿಳಂಬವಾಗಿದೆ ಎಂದು ಮನೆಯ ಮಾಲೀಕ ಹರೀಶ್ ಕುಮಾರ್ ತಿಳಿಸಿದ್ದಾರೆ. ಈ ಸಂಬಂಧ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಮತ್ತು ಶ್ವಾನದಳ ಸಿಬ್ಬಂದಿ ಪರಿಶೀಲನೆ ನಡೆಸಿದರು.

### ಬೋನಿಗೆ ಬಿದ್ದ ಚಿರತೆ

• ಉದಯವಾಹಿನಿ, ಕಿಕ್ಕೇರಿ

ಸಮೀಪದ ಹಿರಿಕಳಲೆ ಗ್ರಾಮದ ತೋಟದಲ್ಲಿ ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ ಚಿರತೆ ಬಿದ್ದಿದೆ. ಇದರಿಂದ ಗ್ರಾಮಸ್ಥರು, ರೈತರು ತುಸು ನಿರಾಳ ಆಗಿದ್ದಾರೆ. ಸುತ್ತಮುತ್ತಲ ಪ್ರದೇಶದಲ್ಲಿ ಚಿರತೆ ಉಪಟಳದಿಂದ ರೈತರು ಭೀತಿಗೊಂಡಿದ್ದರು. ಚಿರತೆ ಸೆರೆ ಹಿಡಿಯುವಂತೆ ಅರಣ್ಯ ಇಲಾಖೆಗೆ ಮನವಿ ಮಾಡಲಾಗಿತ್ತು. ಅರಣ್ಯ ಇಲಾಖೆಯವರು ಗ್ರಾಮದ ಕೃಷ್ಣಯ್ಯ ಅವರ ತೋಟದಲ್ಲಿ ಚಿರತೆ ಸೆರೆ ಹಿಡಿಯಲು ಬೋನನ್ನು ವಾರದ ಹಿಂದೆ ಇಟ್ಟಿದ್ದರು. ಮುಂಜಾನೆ ಚಿರತೆ ಬೋನಿನಲ್ಲಿದ್ದ ನಾಯಿ ತಿನ್ನಲು ಹೋಗಿ ಬಂಧಿಯಾಗಿದೆ. ಬೋನಿನಲ್ಲಿದ್ದ ಚಿರತೆ ವೀಕ್ಷಿಸಲು ಗ್ರಾಮಸ್ಥರು ತಂಡೋಪತಂಡವಾಗಿ ಬಂದಿದ್ದರು. ಜನರನ್ನು ನಿಯಂತ್ರಿಸಿ, ಬೋನನ್ನು ತಾಲ್ಲೂಕು ವಲಯ ಅರಣ್ಯ ಇಲಾಖೆಗೆ ತೆಗೆದುಕೊಂಡು ಹೋಗಲಾಯಿತು. ಚಿರತೆಯನ್ನು ಬಂಡಿಪುರ ಅರಣ್ಯ ಪ್ರದೇಶಕ್ಕೆ ಬಿಡಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

### ವಿದ್ಯುತ್ ವ್ಯತ್ಯಯ ನಾಳೆ

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಬೆಳಗೊಳ ವಿದ್ಯುತ್ ವಿತರಣಾ ಉಪಕೇಂದ್ರದಲ್ಲಿ ಫೆ. 9ರಂದು ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿದ್ದು, ಅಂದು ಬೆಳಿಗ್ಗೆ 9.30ರಿಂದ ಸಂಜೆ 6 ಗಂಟೆಯವರೆಗೆ ಬೆಳಗೊಳ, ಕೆಆರ್ ಎಸ್, ಹೊಸ ಆನಂದೂರು, ಮೊಗರಹಳ್ಳಿ, ಕಾರೇಕುರ, ಕುಪ್ಪೆದಡ, ಬಸ್ತೀಪುರ, ಕೆಐಎಡಿಬಿ ಕೈಗಾರಿಕಾ ಪ್ರದೇಶ, ಹೊಂಗಹಳ್ಳಿ ನೀರು ಸರಬರಾಜು ಕೇಂದ್ರ, ಅನಗಹಳ್ಳಿ, ಹೊಸ ಉಂಡವಾಡಿ, ಮಜ್ಜಿಗೆಪುರ, ಎಂಎಂಜಿ ಲೇಔಟ್, ಹುಲಿಕೆರೆ, ಹೊಸಹಳ್ಳಿ, ಪಾಲಹಳ್ಳಿ ಮತ್ತು ಆಸುಪಾಸಿನ ಗ್ರಾಮಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಸೆಸ್ಕ್ ಎಇಇ ಎಂ. ಮಂಜುನಾಥಪ್ರಸಾದ್ ತಿಳಿಸಿದ್ದಾರೆ.

ಅಂತರಾಳದಿಂದ..
EDITORIAL

# ಅಂಗನವಾಡಿ ಸಹಾಯಕಿಯ ಬಲಿದಾನ ಸರಕಾರ ಗುರುತಿಸುವಂತಾಗಲಿ

ಮಧ್ಯ ಪ್ರದೇಶದ ನೀಮಚ್ ಜಿಲ್ಲೆಯಲ್ಲಿ ಅಂಗನವಾಡಿ ಸಹಾಯಕಿಯೊಬ್ಬರು ತನ್ನ ಅಂಗನವಾಡಿಯಲ್ಲಿದ್ದ 20 ಪುಟಾಣಿ ಮಕ್ಕಳ ಜೀವವನ್ನು ಕಾಪಾಡುವುದಕ್ಕಾಗಿ ಪ್ರಾಣವನ್ನು ಬಲಿಕೊಟ್ಟ ಘಟನೆ ಮಾಧ್ಯಮಗಳಲ್ಲಿ ವರದಿಯಾಗಿದೆ. ತನ್ನ ಕರ್ತವ್ಯವನ್ನು ನಿರ್ವಹಿಸುತ್ತಾ ಪ್ರಾಣಾರ್ಪಣೆ ಮಾಡಿರುವುದು ಯಕಶ್ಚಿತ್ ಅಂಗನವಾಡಿ ಸಹಾಯಕಿಯಾಗಿರುವುದರಿಂದ ಘಟನೆಯನ್ನು ಯಾರೂ ಗಂಭೀರವಾಗಿ ತೆಗೆದುಕೊಂಡಿಲ್ಲ. ಇದನ್ನೇ ಒಬ್ಬ ಪೊಲೀಸ್ ಅಧಿಕಾರಿ, ಸೇನಾನಿ ಮಾಡಿದ್ದರೆ ಮಾಧ್ಯಮಗಳಲ್ಲಿ ಮುಖಪುಟದ ಸುದ್ದಿಯಾಗಿ ಬಿಡುತ್ತಿತ್ತೇನೋ. ಮಾದವಾಡ ಪಂಚಾಯತ್ ವ್ಯಾಪ್ತಿಯ ರಾಣಪುರ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಅಂಗನವಾಡಿ ಮಕ್ಕಳು ಆಟವಾಡುತ್ತಿದ್ದ ಆವರಣಕ್ಕೆ ದೊಡ್ಡ ಸಂಖ್ಯೆಯ ಜೇನು ನೊಣಗಳ ಹಿಂಡು ದಾಳಿ ಇಟ್ಟಿತ್ತು. ಆಗ, ಅಂಗನವಾಡಿ ಕೇಂದ್ರದಲ್ಲಿ ಅಡುಗೆ ಮಾಡುತ್ತಿದ್ದ ಕಾಂಚನಾಬಾಯಿ ಮೇಘಾಲ್ ತನ್ನ ಸುರಕ್ಷೆಯ ಬಗ್ಗೆ ಚಿಂತಿಸದೆ ಜೀವವನ್ನೇ ಪಣಕ್ಕಿಟ್ಟು ಟರ್ಪಲ್ ಮತ್ತು ಪರದೆಯನ್ನು ಬಳಸಿ ಎಲ್ಲಾ ಮಕ್ಕಳನ್ನು ಅದರಲ್ಲಿ ಸುತ್ತಿ ಜೇನು ನೊಣಗಳ ದಾಳಿಯಿಂದ ರಕ್ಷಿಸಿದರು. ಆದರೆ ಈ ಸಂದರ್ಭದಲ್ಲಿ ಜೇನು ನೊಣಗಳ ಹಿಂಡಿನ ನಡುವೆ ಸಿಲುಕಿದ ಕಾಂಚನಾಬಾಯಿ ತೀವ್ರ ದಾಳಿಗೆ ಈಡಾದರು.

ಬಹುಶಃ ಆಕೆಯೇನಾದರೂ ಹೆದರಿ ಹಿಂದೆ ಸರಿದಿದ್ದರೆ ಕೆಲವು ಮಕ್ಕಳಾದರೂ ಜೇನುನೊಣಗಳ ದಾಳಿಗೆ ಬಲಿಯಾಗಬೇಕಾಗಿತ್ತು. ಅಂಗನವಾಡಿ ಕಾರ್ಯಕರ್ತೆಯಾಗಿ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟವನ್ನು ಸಿದ್ಧಪಡಿಸುತ್ತಿದ್ದ ಕಾಂಚನಾಬಾಯಿ ಜೈಮಾತಾದಿ ಸ್ವ ಸಹಾಯ ಗುಂಪಿನ ಅಧ್ಯಕ್ಷೆಯಾಗಿಯೂ ಕೆಲಸ ಮಾಡುತ್ತಿದ್ದರು. ಮೃತ ಕಾಂಚನಾ ಅವರ ಪತಿ ಪಾರ್ಶ್ವಪೀಡಿತರಾಗಿದ್ದರು. ಪುತ್ರ, ಪುತ್ರಿ ಸಹಿತ ಇಡೀ ಕುಟುಂಬದ ಭಾರ ಕಾಂಚನಾ ಅವರ ಮೇಲಿತ್ತು. ಇದೀಗ ಅವರಿಲ್ಲದೆ ಕುಟುಂಬ ಅನಾಥವಾಗಿದೆ. ಇದು ಎಲ್ಲೋ ದೂರದ ಮಧ್ಯಪ್ರದೇಶದಲ್ಲಿ ನಡೆದ ಘಟನೆಯಾಗಿದ್ದರೂ, ಕಾಂಚನಾ ತನ್ನ ಕರ್ತವ್ಯವನ್ನು ನಿರ್ವಹಿಸುವ ಸಂದರ್ಭದಲ್ಲಿ ಪ್ರದರ್ಶಿಸಿದ ಧೈರ್ಯ, ಆಕೆಯ ಬಲಿದಾನ ಎಲ್ಲರಿಗೂ ಮಾದರಿಯಾಗಬೇಕಾದುದು.

> **ಇಷ್ಟಾದರೂ ಮಕ್ಕಳ ರಕ್ಷಣೆಯಿಂದ ಹಿಂದೆ ಸರಿಯಲಿಲ್ಲ. ಕಟ್ಟ ಕಡೆಯ ಮಗುವನ್ನು ರಕ್ಷಿಸುವವರೆಗೂ ತನ್ನ ಪ್ರಯತ್ನವನ್ನು ಬಿಡಲಿಲ್ಲ. ಗ್ರಾಮಸ್ಥರು ನೆರವಿಗೆ ಧಾವಿಸುವ ವೇಳೆ ಕಾಂಚನಾಬಾಯಿ ಕುಸಿದುಬಿದ್ದಿದ್ದರು. ಕೂಡಲೇ ಅವರನ್ನು ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಲಾಯಿತಾದರೂ ಅಷ್ಟರಲ್ಲಿ ಆಕೆ ಮೃತಪಟ್ಟಿದ್ದರು.**

ಸಾಧಾರಣವಾಗಿ ಅಂಗನವಾಡಿಯ ಸಹಾಯಕಿಯರ ಬಗ್ಗೆ ಸರಕಾರ, ಸಮಾಜ ತಾತ್ಸಾರವನ್ನೇ ಪ್ರಕಟಿಸುತ್ತಾ ಬಂದಿವೆ. ಸಣ್ಣ ಮಟ್ಟದ ವೇತನ ಹೆಚ್ಚಳಕ್ಕೂ ಅವರು ಪ್ರತಿ ಬಾರಿ ಬೀದಿಗಿಳಿದು ಪ್ರತಿಭಟನೆ ಮಾಡಬೇಕಾಗುತ್ತದೆ. ಈ ಸಣ್ಣ ವೇತನಕ್ಕಾಗಿ ಅವರು ನಿರ್ವಹಿಸುತ್ತಿರುವುದು ಕೇವಲ ಮಕ್ಕಳ ಪಾಲನೆ, ಪೋಷಣೆ ಮಾತ್ರವಲ್ಲ, ಸರಕಾರ ಅವರನ್ನು ಬೇರೆ ಬೇರೆ ಬಗೆಯ ತನ್ನ ಕೆಲಸಕ್ಕೆ ಬಳಸಿಕೊಳ್ಳುತ್ತಾ ಬಂದಿದೆ. ಸಣ್ಣ ತಪ್ಪುಗಳು ನಡೆದರೂ ಅದನ್ನು ಮುಂದಿಟ್ಟುಕೊಂಡು ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕರನ್ನು ಸಮಾಜ ಟೀಕಿಸುತ್ತದೆ. ಅವರ ಜಾತಿ, ಧರ್ಮವನ್ನು ಮುಂದಿಟ್ಟುಕೊಂಡು ದೌರ್ಜನ್ಯಗಳನ್ನು ಎಸಗುತ್ತದೆ. ಆದರೆ ಇವೆಲ್ಲವನ್ನೂ ಸಹಿಸುತ್ತಾ ಈ ಕಾರ್ಯಕರ್ತೆಯರು ತಮ್ಮ ಕೆಲಸವನ್ನು ನಿರ್ವಹಿಸುತ್ತಾರೆ. ಮಕ್ಕಳನ್ನು ಜೋಪಾನ ಮಾಡುವುದು ಎನ್ನುವುದು ಸುಲಭದ ಕೆಲಸವಲ್ಲ. ಇದು ತುಂಬಾ ಸೂಕ್ಷ್ಮ ಕೆಲಸ. ಇನ್ನೂ ಜಗತ್ತಿಗೆ ತೆರೆದುಕೊಳ್ಳದ ಈ ಮಕ್ಕಳ ಭಾವನೆಗಳನ್ನು ಅರ್ಥ ಮಾಡಿಕೊಳ್ಳುತ್ತಾ ಸಹನೆಯಿಂದ ಕಾರ್ಯನಿರ್ವಹಿಸಬೇಕಾಗುತ್ತದೆ. ಅನೇಕ ಸಂದರ್ಭದಲ್ಲಿ ಈ ಕಾರ್ಯಕರ್ತೆಯರು ತಮ್ಮ ಸಹನೆಯನ್ನು ಕಳೆದುಕೊಂಡು ಏನಾದರೂ ಎಡವಟ್ಟು ಮಾಡಿದರೆ ಅದಕ್ಕಾಗಿ ಭಾರೀ ಬೆಲೆಯನ್ನು ತೆರಬೇಕಾಗುತ್ತದೆ. ಕೆಲಸ ಕಳೆದುಕೊಳ್ಳುವ ಭಯದ ಜೊತೆಗೇ ಅವರು ಪ್ರತೀ ದಿನ ಕಾರ್ಯನಿರ್ವಹಿಸುತ್ತಿರುತ್ತಾರೆ. ನೀತಿ ಆಯೋಗದ 2024ರ ವರದಿ ಪ್ರಕಾರ ಭಾರತದಲ್ಲಿ 13,99,661 ಅಂಗನವಾಡಿ ಕೇಂದ್ರಗಳು ಕೆಲಸ ಮಾಡುತ್ತಿವೆ. 12,93,448 ಅಂಗನವಾಡಿ ಕಾರ್ಯಕರ್ತೆಯರು, 11, 64,178 ಸಹಾಯಕಿಯರೂ ದುಡಿಯುತ್ತಿದ್ದಾರೆ. 2026ರಲ್ಲಿ ಇವರ ಸಂಖ್ಯೆ ಇನ್ನಷ್ಟು ಹೆಚ್ಚಿದೆ.

ಒಂದು ಮೂಲದ ಪ್ರಕಾರ ಕೇಂದ್ರ ಸರಕಾರದ ಐಸಿಡಿಎಸ್ ಯೋಜನೆಯ ವ್ಯಾಪ್ತಿಯಲ್ಲಿ ಹತ್ತು ಕೋಟಿ ಫಲಾನುಭವಿಗಳು ಸೇವೆ ಪಡೆಯುತ್ತಿದ್ದಾರೆ. ಆದರೆ ಭಾರತದ ಬಹುತೇಕ ಅಂಗನವಾಡಿಗಳು ಅವ್ಯವಸ್ಥೆಯ ಗೂಡಾಗಿವೆ. ಮೂಲಭೂತ ಸೌಕರ್ಯದ ಕೊರತೆಗಳ ನಡುವೆ ಅವುಗಳು ಈ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಾಮರ್ಥ್ಯದ ಕಾರಣಕ್ಕಾಗಿಯೇ ಮುಂದುವರಿಯುತ್ತಿವೆ. ಸರಕಾರದ ವರದಿಯ ಪ್ರಕಾರ ಈ ದೇಶದ ಶೇ. 30ರಷ್ಟು ಅಂಗನವಾಡಿಗಳು ಕುಡಿಯುವ ನೀರಿನ ಸೌಲಭ್ಯವನ್ನು ಹೊಂದಿಲ್ಲ. ಶೇ. 40ರಷ್ಟು ಅಂಗನವಾಡಿಗಳು ಶೌಚಾಲಯದ ಸೌಲಭ್ಯವನ್ನು ಹೊಂದಿಲ್ಲ. ಆದರೆ ಇವು ಸರಕಾರದ ಅಂಕಿಅಂಶಗಳಷ್ಟೇ. ವಾಸ್ತವ ಇದಕ್ಕಿಂತ ಭಯಾನಕವಾಗಿದೆ. ಬಹುತೇಕ ಅಂಗನವಾಡಿಯ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಅಂಗನವಾಡಿ ಮುಚ್ಚದಿರಲಿ ಎನ್ನುವ ಕಾರಣಕ್ಕೆ ಮೂಲಭೂತ ಸೌಕರ್ಯಕ್ಕಾಗಿ ಸಾರ್ವಜನಿಕರನ್ನು ಕಾಡಿ ಬೇಡುತ್ತಿರುತ್ತಾರೆ. ಕರ್ನಾಟಕದಲ್ಲೇ ಒಂದು ಅಂಕಿಅಂಶದ ಪ್ರಕಾರ, ಸುಮಾರು 23,000 ಸಾವಿರ ಅಂಗನವಾಡಿಗಳಿಗೆ ಸ್ವಂತ ಕಟ್ಟಡವೇ ಇಲ್ಲ. ಈ ಅಂಗನವಾಡಿಗಳಿಗೆ ಒದಗಿಸುವ ಮೊಟ್ಟೆ ಹಾಲು ಮೊದಲಾದವುಗಳ ಹೆಸರಿನಲ್ಲಿ ಗುತ್ತಿಗೆದಾರರು ಕೋಟ್ಯಂತರ ರೂಪಾಯಿ ವಂಚನೆ ಮಾಡುತ್ತಾರೆ. ಇವೆಲ್ಲದರ ಹೊರೆಯೂ ಅಂತಿಮವಾಗಿ ಬೀಳುವುದು ಈ ಸಹಾಯಕಿಯರ ಮೇಲೆ ಅವರು ದಿನ ನಿತ್ಯ ನಡೆಸುವ ಹೋರಾಟ ಯಾರ ಕಣ್ಣಿಗೂ ಬೀಳುವುದಿಲ್ಲ. ಆದರೆ ಇವರಿಂದ ಸಂಭವಿಸುವ ಸಣ್ಣ ತಪ್ಪು ದೊಡ್ಡದಾಗಿ ಸದ್ದು ಮಾಡುತ್ತದೆ.

# ರಾಮಾಯಣ



ಶ್ರೀರಾಮನು ತಾರೆಗೆ ಹೇಳಿದ ಸಮಾಧಾನ

• ಹಿಂದಿನ ಸಂಚಿಕೆಯಿಂದ **120ನೆಯ ಅಧ್ಯಾಯ**

ವಾಲಿಯ ಅರ್ಧಶರೀರವೆಂದು ಭಾವಿಸಿ ನನ್ನನ್ನೂ ಕೊಂದೆಯಾದರೆ ಅದರಿಂದ ಸ್ತ್ರೀವಧೆ ಮಾಡಿದ ದೋಷವುಂಟಿದು. ಸ್ತ್ರೀಯರು ಪುರುಷರ ಅರ್ಧಶರೀರವಾದ್ದರಿಂದ ಅವರನ್ನು ಕೊಂದರೆ ಅರ್ಧಶರೀರವನ್ನು ಕೊಂದಹಾಗಲ್ಲದೆ ಸ್ತ್ರೀವಧೆಯಾಗದು. ಶ್ರೀರಾಮ್ಮ ಲೋಕದಲ್ಲಿ ಸಮಸ್ತ ದಾನಗಳಿಗೂ ಪ್ರಧಾನವಾದದ್ದು ಕನ್ಯಾದಾನ. ನೀನು ನನ್ನ ಪ್ರಾಣಕಾಂತನಾದ ವಾಲಿಗೆ ಸ್ವರ್ಗಲೋಕವನ್ನು ಕೊಟ್ಟದ್ದರಿಂದ ಧರ್ಮಶಾಸ್ತ್ರವನ್ನು ವಿಚಾರಿಸಿಕೊಂಡು ನನ್ನನ್ನು ನಿನ್ನ ಬಾಣಕ್ಕೆ ಗುರಿಮಾಡಿ ಸ್ವರ್ಗಲೋಕದಲ್ಲಿರುವ ವಾಲಿಗೆ ನನ್ನನ್ನು ದಾನಮಾಡಿದರೆ ನಿನಗೆ ಧರ್ಮವುಂಟಾಗುವುದಲ್ಲದೆ ಸ್ರೀವಧೆಯ ದೋಷವುಂಟಾಗದು. ಪತಿವಿಯೋಗದಿಂದ ಕಂಗೆಟ್ಟು ಅನಾಥೆಯಾದ ನನ್ನನ್ನು ಕೊಲ್ಲದಿರುವುದು ಯೋಗ್ಯವಲ್ಲ. ಶ್ರೀರಾಮ ಕಪಿಶ್ರೇಷ್ಠನಾದ ವಾಲಿಯೊಡನೆ ವಿಹರಿಸಿಕೊಂಡಿದ್ದೆನು. ಆತನನ್ನು ಬಿಟ್ಟು ನಾನು ಒಂದು ಕ್ಷಣಮಾತ್ರವಾದರೂ ಜೀವಿಸಲಾರೆನು ಎಂದು ನುಡಿದಳು. ಮಹಾತ್ಮನಾದ ಶ್ರೀರಾಮನು ತಾರಾದೇವಿಯನ್ನು ಸಮಾಧಾನಪಡಿಸುತ್ತ ಎಲೌ ವೀರಪತ್ನಿಯಾದ ತಾರಾದೇವಿಯೆ, ನೀನು ಅತಿಯಾಗಿ ದುಃಖ ಪಡಬೇಡ. ಲೋಕದಲ್ಲಿ ಬ್ರಹ್ಮ ಲಿಖಿತವನ್ನು ಯಾರಿಗೂ ಮೀರಲಳವಲ್ಲ. ಬ್ರಹ್ಮದೇವನು ಸಮಸ್ತ ಪ್ರಾಣಿಗಳಿಗೂ ಸುಖದುಃಖಗಳನ್ನು ಕೊಡುತ್ತಿರು ವನು. ಆಯಾ ಕಾಲಗಳಲ್ಲಿ ಸ್ವರ್ಗ ಮರ್ತ್ಯ ಪಾತಾಳಗಳೆಂಬ ಮೂರು ಲೋಕಗಳೂ ಬ್ರಹ್ಮದೇವನ ಕಟ್ಟಳೆಯಲ್ಲಿರುವುವಲ್ಲದೆ ಆತನನ್ನು ಮೀರಲಾರವು. ನೀನು ನಿನ್ನ ಮಗನಿಗೆ ಯುವರಾಜಪದವಿಯನ್ನು ಕೊಟ್ಟು ಸುಖವಾಗಿರು. ಲೋಕದಲ್ಲಿ ಪರಾಕ್ರಮಿಗಳು ಸಂಗ್ರಾಮದಲ್ಲಿ ಮಡಿಯುವುದು ಸಹಜವಾದದ್ದು. ಆದಕಾರಣ ವೀರಪತ್ನಿಯರು ದುಃಖಪಡಕೂಡದು ಎಂದು ಸಂತವಿಟ್ಟನು. ಮಹಾತ್ಮನಾದ ಶ್ರೀರಾಮನ ವಾಕ್ಯವನ್ನು ಕೇಳಿ ವೀರಪತ್ನಿಯಾದ ತಾರಾದೇವಿಯು ಗಟ್ಟಿಯಾಗಿ ಆಳುವುದನ್ನು ನಿಲ್ಲಿಸಿದಳು.

## ಅಂಗದನು ವಾಲಿಗೆ ಅಗ್ನಿಸಂಸ್ಥಾರಮಾಡಿದ್ದು

ಆಮೇಲೆ ಲಕ್ಷ್ಮಣ ಸಮೇತನಾದ ಶ್ರೀರಾಮನು ಸುಗ್ರೀವನನ್ನೂ ತಾರಾದೇವಿಯನ್ನೂ ಅಂಗದ ನನ್ನೂ ಸಂತವಿಡುತ್ತ ಅವರನ್ನು ಕುರಿತು ಈ ರೀತಿಯಲ್ಲಿ ಸಂತೈಸಿದನು : ಸುಗ್ರೀವ, ತಾರಾದೇವಿ, ಅಂಗದ, ನೀವು ಇನ್ನು ಶೋಕಪಡುವುದರಿಂದ ಆಗುವ ಕಾರ್ಯವೇನು? ಲೋಕದಲ್ಲಿ ಅತಿ ಶೋಕವನ್ನು ಮಾಡಿದರೆ ಮೃತನಿಗೆ ಮಂಗಳವುಂಟಾಗಲಾರದು. ಕಾಲಗತಿಯನ್ನಾರೂ ಮೀರಲಾರರು. ಕಾಲವು ಸ್ವತಂತ್ರವಾಗಿ ಮನುಷ್ಯರು ಮಾಡಿದ ಪುಣ್ಯಪಾಪಗಳಿಗೆ ತಕ್ಕಹಾಗೆ ಸುಖದುಃಖಗಳನ್ನು ಕೊಡದೆ ಬಿಡದು. ಕಾಲವು ಒಬ್ಬರ ಆಜ್ಞೆಗೊಳಗಾಗದು. ಕಾಲಕ್ಕೆ ಬಂಧುತ್ವವಲ್ಲ. ಕಾಲದ ಮುಂದೆ ಪರಾಕ್ರಮವು ನಡೆಯದು. ಕಾಲಕ್ಕೆ ಮಿತ್ರರೂ ಇಲ್ಲ. ಜ್ಞಾತಿ ಬಂಧುಗಳೂ ಇಲ್ಲಅದನ್ನು ವಶಪಡಿಸಿಕೊಳ್ಳಲು ಯಾವ ಉಪಾಯವೂ ಇಲ್ಲ. ಅದು ಒಬ್ಬರಿಗೂ ವಶವಾಗುವುದಿಲ್ಲ. ಲೋಕದಲ್ಲಿ ಬುದ್ಧಿವಂತನು ಕಾಲದ ಪರಿಣಾಮವನ್ನು ಕಂಡುಕೊಳ್ಳಬೇಕು. ಕಾಲವು ಮನುಷ್ಯರಿಗೆ ಧರ್ಮಬುದ್ಧಿಯನ್ನು ಹುಟ್ಟಿಸಬೇಕಾದ ಸಮಯದಲ್ಲಿ ಧರ್ಮಬುದ್ಧಿಯನ್ನೂ ಅರ್ಥಪ್ರಾಪ್ತಿಯನ್ನುಂಟುಮಾಡಬೇಕಾದ ಸಮಯದಲ್ಲಿ ಅರ್ಥಲಾಭವನ್ನೂ ಕಾಮವನ್ನುಂಟುಮಾಡಬೇಕಾದ ಸಮಯದಲ್ಲಿ ಕಾಮವನ್ನೂ ಉಂಟುಮಾಡುವುದು. ವಾಲಿಯು ತನ್ನ ಜನ್ಮಾಂತರದಲ್ಲಿ ಪ್ರಕೃತಿ ಗುಣದಿಂದಲೂ ನಸಾಮದಾನಾದಿ ನಾಲ್ಕು ಉಪಾಯಗಳಿಂದಲೂ ನಡೆಸಿದ ಕರ್ಮಗಳಿಗೆ ತಕ್ಕ ಫಲವನ್ನು ಪಡೆದನು.

ಮುಂದುವರಿಯುವುದು...

# ಕಿತ್ತಳೆ–ಶುಂಠಿ–ಕ್ಯಾರೆಟ್ ಶಾಟ್‌ನ ಪ್ರಯೋಜನಗಳೇನು?



ಕಿತ್ತಳೆ, ಶುಂಠಿಯಿಂದ ತಯಾರಿಸಿದ ಶಾಟ್ ಬಗ್ಗೆ ಕೇಳಿದ್ದೀರಾ? ನೀವು ಮನೆಯಲ್ಲಿ ಫ್ರೆಶ್ ಆಗಿ ತಯಾರಿಸುವ ಈ ರಸವು ಆರೋಗ್ಯ ವರ್ಧಕವಾಗಿ ಕಾರ್ಯನಿರ್ವಹಿಸುತ್ತದೆ ಎಂದು AIIMS, ಹಾರ್ವರ್ಡ್, ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾಲಯಗಳಲ್ಲಿ ತರಬೇತಿ ಪಡೆದ ಕ್ಯಾಲಿಫೋರ್ನಿಯಾ ಮೂಲದ ಗ್ಯಾಸ್ಟ್ರೋಎಂಟರಾಲಜಿಸ್ಟ್ ಡಾ. ಸೌರಭ್ ಸೇಥಿ ಇನ್‌ಸ್ಟಾಗ್ರಾಮ್‌ನಲ್ಲಿ ವಿವರಿಸಿದ್ದಾರೆ. ಇದನ್ನು ಕುಡಿಯೋದ್ರಿಂದಾಗುವ ಪ್ರಯೋಜನಗಳ ಬಗ್ಗೆ ತಿಳಿಯೋಣ.

**ಕಿತ್ತಳೆ ಶುಂಠಿಯ ಶಾಟ್‌ನ ಆರೋಗ್ಯ ಪ್ರಯೋಜನಗಳು:** ಕಿತ್ತಳೆ ಶುಂಠಿಯ ಶಾಟ್ ಅನ್ನು ಕ್ಯಾರೆಟ್, ಕಿತ್ತಳೆ, ತಾಜಾ ಶುಂಠಿ ಈ ಮೂರು ಪ್ರಮುಖ ಪದಾರ್ಥಗಳೊಂದಿಗೆ ತಯಾರಿಸಲಾಗುತ್ತದೆ. ಕ್ಯಾರೆಟ್ ಬೀಟಾ–ಕ್ಯಾರೋಟಿನ್, ಪ್ರಬಲವಾದ ಉತ್ಕರ್ಷಣ ನಿರೋಧಕವನ್ನು ಒದಗಿಸುತ್ತದೆ ಮತ್ತು ಪ್ರತಿರಕ್ಷಣಾ ವ್ಯವಸ್ಥೆಯ ಕಾರ್ಯನಿರ್ವಹಣೆಯನ್ನು ಬೆಂಬಲಿಸುತ್ತದೆ.

**ಹೃದಯಾಘಾತ ಅಥವಾ ಪಾರ್ಶ್ವವಾಯು ಅಪಾಯ ಕಡಿಮೆ ಮಾಡುತ್ತದೆ:** ಕಿತ್ತಳೆ ಹಣ್ಣುಗಳು ವಿಟಮಿನ್ ಸಿ, ಫ್ಲೇವನಾಯ್ಡ್‌ಗಳ ಸಮೃದ್ಧ ಮೂಲವಾಗಿದೆ ಎಂದು ಡಾ. ಸೇಥಿ ಹೇಳುತ್ತಾರೆ. ಎರಡನೆಯದು ಸಸ್ಯ ಉತ್ಪನ್ನಗಳಲ್ಲಿ ಕಂಡುಬರುವ ಸಂಯುಕ್ತಗಳ ಗುಂಪಾಗಿದ್ದು, ಇದು ಉತ್ಕರ್ಷಣ ನಿರೋಧಕ ಗುಣಲಕ್ಷಣಗಳನ್ನು ಹೊಂದಿದೆ ಮತ್ತು ಹೃದಯಾಘಾತ ಅಥವಾ ಪಾರ್ಶ್ವವಾಯು ಅಪಾಯವನ್ನು ಕಡಿಮೆ ಮಾಡುತ್ತದೆ ಎಂದು ಹೆಲ್ತ್‌ಲೈನ್ ವರದಿ ಮಾಡಿದೆ.



**ಜೀರ್ಣಕ್ರಿಯೆಗೆ ಉತ್ತಮ:** ತಾಜಾ ಶುಂಠಿಯು ಜಿಂಜರಾಲ್ ಅನ್ನು ಒದಗಿಸುತ್ತದೆ, ಇದು ಜೀರ್ಣಕ್ರಿಯೆಯನ್ನು ಬೆಂಬಲಿಸುತ್ತದೆ ಮತ್ತು ಅಡ್ವಾನ್ಸ್ ಇನ್ ಎಕ್ಸ್‌ಪರಿಮೆಂಟಲ್ ಮೆಡಿಸಿನ್ ಅಂಡ್ ಬಯಾಲಜಿ ಜರ್ನಲ್‌ನಲ್ಲಿ ಪ್ರಕಟವಾದ ಅಧ್ಯಯನದ ಪ್ರಕಾರ, ಉತ್ಕರ್ಷಣ ನಿರೋಧಕ, ಗೆಡ್ಡೆ ವಿರೋಧಿ, ಉರಿಯೂತದ ಗುಣಲಕ್ಷಣಗಳನ್ನು ಪ್ರದರ್ಶಿಸುತ್ತದೆ. ಗಟ್ ಶಾಟ್ ತಯಾರಿಸುವುದು ಆಹಾರಗಳ ಹೆಚ್ಚಿನ ಫೈಬರ್ ಅಂಶವನ್ನು ತೆಗೆದುಹಾಕುತ್ತದೆ ಎಂದು ಡಾ. ಸೇಥಿ ಎಚ್ಚರಿಸಿದ್ದಾರೆ. ಆದ್ದರಿಂದ ಇದನ್ನು ಕ್ರಿಯಾತ್ಮಕ ಶಾಟ್ ಆಗಿ ಸಣ್ಣ ಭಾಗಗಳಲ್ಲಿ ಸೇವಿಸಬೇಕು ಮತ್ತು ಅದನ್ನು ಊಟಕ್ಕೆ ಬದಲಿಯಾಗಿ ಎಂದಿಗೂ ಪರಿಗಣಿಸಬಾರದು.

**ಬೇಕಾಗುವ ಸಾಮಾಗ್ರಿಗಳು:** ಎರಡು ಮಧ್ಯಮ ಕ್ಯಾರೆಟ್‌ಗಳನ್ನು ಸಿಪ್ಪೆ ಸುಲಿದು ಸಣ್ಣ ತುಂಡುಗಳಾಗಿ ಕತ್ತರಿಸಿ ಒಂದು ಕಿತ್ತಳೆ, ಅರ್ಧಕ್ಕೆ ಕತ್ತರಿಸಿ ಅರ್ಧದಿಂದ ಒಂದು ಇಂಚಿನ ತಾಜಾ ಶುಂಠಿ ಕತ್ತರಿಸಿ

**ತಯಾರಿಸುವ ವಿಧಾನ:** ಅಗತ್ಯವಿರುವಷ್ಟು ನೀರನ್ನು ಬಳಸಿ ಮೇಲೆ ತಿಳಿಸಿದ ಪದಾರ್ಥಗಳನ್ನು ರಸ ಅಥವಾ ಮಿಶ್ರಣ ಮಾಡಿ, ಸೋಸಿ. ಪಾಕವಿಧಾನವು ಮೂರರಿಂದ ನಾಲ್ಕು ಸಣ್ಣ ಶಾಟ್‌ಗಳನ್ನು ನೀಡುತ್ತದೆ, ತಲಾ ಸುಮಾರು 30 ರಿಂದ 50 ಮಿಲಿ. ಈ ಪಾನೀಯವನ್ನು ತಾಜಾವಾಗಿ ತೆಗೆದುಕೊಳ್ಳಬಹುದು ಹಾಗೂ ಮೂರು ದಿನಗಳವರೆಗೆ ರೆಫ್ರಿಜರೇಟರ್‌ನಲ್ಲಿ ಸಂಗ್ರಹಿಸಬಹುದು ಅಥವಾ ಅಗತ್ಯವಿರುವಂತೆ ಫ್ರೀಜ್ ಮಾಡಬಹುದು.

# ಮಕ್ಕಳಲ್ಲಿ ಪ್ರೋಟೀನ್ ಕೊರತೆಯ ಲಕ್ಷಣಗಳನ್ನು ಗುರುತಿಸುವುದು ಹೇಗೆ?

ಆರಂಭಿಕ ಹಂತಗಳಲ್ಲಿ ಪ್ರೋಟೀನ್ ಕೊರತೆಯ ಲಕ್ಷಣಗಳು ಸಾಮಾನ್ಯವಾಗಿ ಸೌಮ್ಯವಾಗಿರುತ್ತವೆ ಮತ್ತು ನಿರ್ಲಕ್ಷಿಸಲು ಸುಲಭ. ಕ್ರೀಡೆಗಳಲ್ಲಿ ಭಾಗವಹಿಸಲು ಹಿಂಜರಿಯಬಹುದು, ಕೂದಲು, ಚರ್ಮದ ಗುಣಮಟ್ಟದ ಮೇಲೆ ಪರಿಣಾಮ ಬೀರಬಹುದು.

**ನಿಧಾನ ಬೆಳವಣಿಗೆ:** ಮೊದಲ ಲಕ್ಷಣವೆಂದರೆ ಮಗುವು ತನ್ನ ವಯಸ್ಸಿಗೆ ಅನುಗುಣವಾಗಿ ಎತ್ತರ ಅಥವಾ ತೂಕದಲ್ಲಿ ಹಿಂದುಳಿಯುವುದು. ಚಿಕ್ಕ ಮಕ್ಕಳಲ್ಲಿ ಈ ವಿಳಂಬವನ್ನು ಮೊದಲೇ ಗುರುತಿಸಿದರೆ ಅದನ್ನು ಹಿಮ್ಮೆಟ್ಟಿಸಬಹುದು.

**ಆಗಾಗ್ಗೆ ದೌರ್ಬಲ್ಯ ಮತ್ತು ಆಯಾಸ:** ಪ್ರೋಟೀನ್ ಕೊರತೆಯು ಮಕ್ಕಳಲ್ಲಿ ಶಕ್ತಿಯ ಕೊರತೆಯನ್ನು ಉಂಟುಮಾಡುತ್ತದೆ. ಅವರು ಬೇಗನೆ ದಣಿದಿರುತ್ತಾರೆ, ಕ್ರೀಡೆ ಅಥವಾ ಚಟುವಟಿಕೆಗಳಲ್ಲಿ ಭಾಗವಹಿಸಲು ಹಿಂಜರಿಯುತ್ತಾರೆ.

**ಸೋಂಕುಗಳು ಮತ್ತು ರೋಗಗಳ ಅಪಾಯ:** ಪ್ರತಿರಕ್ಷಣಾ ವ್ಯವಸ್ಥೆಗೆ ಪ್ರೋಟೀನ್ ಅತ್ಯಗತ್ಯ. ಪ್ರೋಟೀನ್ ಕೊರತೆಯು ಮಕ್ಕಳು ಅನಾರೋಗ್ಯಕ್ಕೆ ಒಳಗಾಗುವ ಸಾಧ್ಯತೆಯನ್ನು ಹೆಚ್ಚಿಸುತ್ತದೆ, ಇದು ಆಗಾಗ್ಗೆ ಶೀತಗಳು, ಜ್ವರ ಅಥವಾ ಇತರ ಸೋಂಕುಗಳಿಗೆ ಕಾರಣವಾಗುತ್ತದೆ.

**ಸ್ನಾಯು ಮತ್ತು ಮೂಳೆ ದೌರ್ಬಲ್ಯ:** ಪ್ರೋಟೀನ್ ಕೊರತೆಯು ಸ್ನಾಯುಗಳನ್ನು ದುರ್ಬಲಗೊಳಿಸುತ್ತದೆ. ಇದು ಮಕ್ಕಳಿಗೆ ಮೂಗೇಟುಗಳು ಬರುವ ಸಾಧ್ಯತೆಯನ್ನು ಹೆಚ್ಚಿಸುತ್ತದೆ ಮತ್ತು ಮೂಳೆಯ ಬಲದ ಮೇಲೂ ಪರಿಣಾಮ ಬೀರುತ್ತದೆ.




# ಕೆಲವೊಂದು ಪ್ರಶ್ನೆಗಳನ್ನು ದಂತ ವೈದ್ಯರಲ್ಲಿ ಕೇಳಲೇ ಬೇಕಂತೆ

ಹೈಟೆಕ್ ಕಾರ್ಯವಿಧಾನಗಳು ಮತ್ತು ಹೆಚ್ಚುತ್ತಿರುವ ಆರೋಗ್ಯ ವೆಚ್ಚಗಳ ಯುಗದಲ್ಲಿ, ಅಮೆರಿಕದ ದಂತವೈದ್ಯರೊಬ್ಬರು ರೋಗಿಗಳು ವಿಶಾಲವಾಗಿ ತೆರೆಯುವ ಮೊದಲು ಸ್ವಲ್ಪ ಪ್ರಯತ್ನ ಮಾಡಬೇಕೆಂದು ಒತ್ತಾಯಿಸುತ್ತಿದ್ದಾರೆ. ನಾಲ್ಕು ದಶಕಗಳ ಅನುಭವ ಹೊಂದಿರುವ ಸ್ಯಾನ್ ಫ್ರಾನ್ಸಿಸ್ಕೋ ಮೂಲದ ದಂತವೈದ್ಯ ಡಾ. ಮಾರ್ಕ್ ಬರ್ಹೆನ್, ದಂತ ಶಿಫಾರಸುಗಳನ್ನು ಹೇಗೆ ನ್ಯಾವಿಗೇಟ್ ಮಾಡುವುದು ಎಂಬುದರ ಕುರಿತು ತಮ್ಮ ಇನ್‌ಸ್ಟಾಗ್ರಾಮ್ ಪೋಸ್ಟ್‌ನಲ್ಲಿ ಹಂಚಿಕೊಂಡಿದ್ದಾರೆ.

**ವೈದ್ಯರಿಗೆ ಕೆಲವೊಂದು ಪ್ರಶ್ನೆಗಳನ್ನು ಕೇಳುವುದು ಉತ್ತಮ:** ಅತ್ಯಂತ ದುಬಾರಿ ಅಥವಾ ತಕ್ಷಣದ ಚಿಕಿತ್ಸೆಯು ಯಾವಾಗಲೂ ಉತ್ತಮವಲ್ಲ. ನೀವು ದಂತ ಚಿಕಿತ್ಸೆಗೆ ಒಪ್ಪುವ ಮೊದಲು ಈ ಕೆಲವು ಪ್ರಶ್ನೆಗಳನ್ನು ಕೇಳುವುದು ಒಳಿತು ಎಂದಿದ್ದಾರೆ. ಈ ಪ್ರಶ್ನೆಗಳು ನಿಮ್ಮ ದಂತವೈದ್ಯರಿಗೆ ಸವಾಲು ಹಾಕೋದಲ್ಲ, ಬದಲಾಗಿ ಓರ್ವ ಉತ್ತಮ ದಂತವೈದ್ಯನು ಯಾವಾಗಲೂ ಇವುಗಳನ್ನು ಉತ್ತಮವಾಗಿ ವಿವರಿಸಬಲ್ಲನು ಎಂದು ಅವರು ಹೇಳುತ್ತಾರೆ.

**ನೈಸರ್ಗಿಕ ಸಂರಕ್ಷಣೆಗೆ ಆದ್ಯತೆ:** ಡಾ. ಬರ್ಹೆನ್ ಅವರ ವಿಧಾನವು ಸಂಪ್ರದಾಯವಾದಿ ದಂತವೈದ್ಯಶಾಸ್ತ್ರದ ಕಡೆಗೆ ವಾಲುತ್ತದೆ. ಇದು ಸಾಧ್ಯವಾದಾಗಲೆಲ್ಲಾ ನೈಸರ್ಗಿಕ ಹಲ್ಲಿನ ರಚನೆಯನ್ನು ಸಂರಕ್ಷಿಸಲು ಆದ್ಯತೆ ನೀಡುವ ತತ್ವಶಾಸ್ತ್ರವಾಗಿದೆ. ರೋಗಿ ಮತ್ತು ದಂತವೈದ್ಯರ ನಡುವಿನ ಪಾರದರ್ಶಕ ಸಂವಾದವು ಭವಿಷ್ಯದ ಕೆಲಸದ ಅಗತ್ಯವನ್ನು ವಾಸ್ತವವಾಗಿ ತಡೆಯಬಹುದು ಎಂದು ಅವರು ಹೇಳಿದ್ದಾರೆ. ಉತ್ತಮ ದಂತವೈದ್ಯರು ಅತ್ಯುತ್ತಮ ಕೆಲಸವನ್ನು ಮಾಡಲು ಸಾಧ್ಯವಾಗುತ್ತದೆ ಮತ್ತು ಭವಿಷ್ಯದಲ್ಲಿ ನಿಮಗೆ ಹಲ್ಲಿನ ಚಿಕಿತ್ಸೆಯ ಅಗತ್ಯವನ್ನು ತಡೆಯಲು ನಿಮಗೆ ಸಹಾಯ ಮಾಡುತ್ತಾರೆ.

## ಇದಕ್ಕೆ ಚಿಕಿತ್ಸೆ ನೀಡಲು ಕನಿಷ್ಠ ಆಕ್ರಮಣಕಾರಿ ಮಾರ್ಗ ಯಾವುದು?



- ನಿಮ್ಮ ಚಿಕಿತ್ಸಾ ಯೋಜನೆಗಳಲ್ಲಿ ನೀವು ಪೌಷ್ಟಿಕಾಂಶದ ಸಮಾಲೋಚನೆಯನ್ನು ಸೇರಿಸುತ್ತೀರಾ?
- ನೀವು ಯಾವ ರೀತಿಯ ಫಿಲ್ಲಿಂಗ್‌ಗಳನ್ನು ಬಳಸುತ್ತೀರಿ ಮತ್ತು ಏಕೆ?
- ಇದಕ್ಕೆ ಚಿಕಿತ್ಸೆ ನೀಡಲು ಕನಿಷ್ಠ ಆಕ್ರಮಣಕಾರಿ ಮಾರ್ಗ ಯಾವುದು?
- ಈ ಕಾರ್ಯವಿಧಾನದ ಅಪಾಯಗಳು ಮತ್ತು ಪ್ರಯೋಜನಗಳೇನು?


### ಈ ಪ್ರಶ್ನೆಗಳನ್ನೂ ಕೇಳಿ

- ಈ ಹಲ್ಲಿನ ಕೊಳೆತವನ್ನು ಸರಿಪಡಿಸಬಹುದೇ?
- ನಾನು ಅದನ್ನು ಅರ್ಥಮಾಡಿಕೊಳ್ಳಲು ನೀವು ಏನು

ಸಾಮಾನ್ಯವಾಗಿ ಪ್ರತಿಯೊಬ್ಬರೂ ಹಲ್ಲಿನಲ್ಲಿ ಏನಾದರೂ ಸಮಸ್ಯೆ ಕಾಣಿಸಿಕೊಂಡರಷ್ಟೇ ದಂತ ವೈದ್ಯರ ಬಳಿ ಹೋಗುತ್ತಾರೆ. ಅವರು ತಿಳಿಸಿರುವ ಚಿಕಿತ್ಸೆ ಪಡೆಯುತ್ತಾರೆ. ಚಿಕಿತ್ಸೆ ಆರಂಭಿಸುವ ಮುನ್ನ ಈ ಕೆಲವು ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳುವುದು ಬಹಳ ಮುಖ್ಯ ಎನ್ನುತ್ತಾರೆ ದಂತವೈದ್ಯರು.

ನೋಡುತ್ತಿದ್ದೀರಿ ಎಂಬುದನ್ನು ನೀವು ವಿವರಿಸಲು ಸಾಧ್ಯವೇ?

- ಈ ಕುಹರವು ಆರಂಭಿಕ ಗಾಯವೇ? ಹಾಗಿದ್ದಲ್ಲಿ, ನಾನು ಅದನ್ನು ಮನೆಯಲ್ಲಿಯೇ ಹೇಗೆ ಸರಿಪಡಿಸಬಹುದು?
- ತಕ್ಷಣ ಚಿಕಿತ್ಸೆ ನೀಡುವ ಬದಲು ನಾವು ಇದನ್ನು ಮೇಲ್ವಿಚಾರಣೆ ಮಾಡಬಹುದೇ?



# ಒಂದು ಲೋಟ ನೀರು ಕುಡಿದರೂ ಸಾಕು ಕೂಡಲೇ ಟಾಯ್ಲೆಟ್‌ಗೆ ಓಡಬೇಕಾಗುತ್ತದೆ; ಯಾಕೆ ಹೀಗೆ?

ಮನುಷ್ಯನ ದೇಹದ ಎಲ್ಲಾ ಕಾರ್ಯಗಳು ಸರಿಯಾಗಿ ಕಾರ್ಯ ನಿರ್ವಹಿಸಬೇಕು ನೀರು ಅಗತ್ಯವಾಗಿ ಬೇಕೇ ಬೇಕು. ಹೀಗಾಗಿ ವೈದ್ಯರು ಕೂಡ ಸರಿಯಾಗಿ ನೀರು ಕುಡಿಯಲು ಸಲಹೆ ನೀಡುವುದರ ಜೊತೆಗೆ, ನೀರಿನಾಂಶ ಹೆಚ್ಚಿರುವ ಹಣ್ಣು ತರಕಾರಿಗಳನ್ನು ಸೇವನೆ ಮಾಡಲು ಸಲಹೆ ನೀಡುತ್ತಾರೆ. ಆರೋಗ್ಯಕರ ದೇಹಕ್ಕೆ ದಿನಕ್ಕೆ 7 ರಿಂದ 8 ಗ್ಲಾಸ್ ನೀರು ಅತ್ಯಗತ್ಯ ಎಂದು ವೈದ್ಯರು ಸಲಹೆ ನೀಡುತ್ತಾರೆ. ಸರಿಯಾಗಿ ನೀರು ಕುಡಿಯುವುದರಿಂದ ನಿರ್ಜಲೀಕರಣ ಸಮಸ್ಯೆ ದೂರವಾಗಿ, ವಿಷಕಾರಿ ಅಂಶಗಳು ಮೂತ್ರದ ಮೂಲಕ ಹೊರಹೋಗುತ್ತದೆ ಜೊತೆಗೆ ಮೂತ್ರಪಿಂಡದ ಕಾರ್ಯವನ್ನು ಉತ್ತೇಜಿಸುತ್ತದೆ.

ನಿಮಗೆ ಗೊತ್ತಿರಲಿ ಮನುಷ್ಯನ ಪ್ರತಿಯೊಂದು ಅಂಗಾಂಗಳು ಕೂಡ ಸರಿಯಾಗಿ ಕಾರ್ಯನಿರ್ವಹಿಸಲು ದೇಹಕ್ಕೆ ನೀರಿನ ಪ್ರಮಾಣ ಬೇಕೇ ಬೇಕು. ಜೀವಕೋಶದ ಹಂತದಲ್ಲಿ ನೀರು ಪೋಷಕಾಂಶಗಳ ಸಾಗಣೆಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಅದರಲ್ಲೂ ರಕ್ತದ ಮೂಲಕ ಪೋಷಕಾಂಶಗಳು ಮತ್ತು ಆಮ್ಲಜನಕವನ್ನು ಕೊಂಡೊಯ್ಯಲೂ ನೀರು ಪ್ರಮುಖ ಪಾತ್ರವಹಿಸುತ್ತದೆ.

**ಒಂದು ಲೋಟ ನೀರು ಕುಡಿದರೂ ಕೂಡ ಮೂತ್ರಕ್ಕೆ ಅರ್ಜೆಂಟಾಗುತ್ತದೆ**

ಆದರೆ ನಮ್ಮಲ್ಲಿ ಬಹುತೇಕ ಜನರ ಸಾಮಾನ್ಯ ದೂರು ಎಂದರೆ ನೀರು ಕುಡಿದ ತಕ್ಷಣ ಮೂತ್ರ ವಿಸರ್ಜಿಸಲು ಅರ್ಜೆಂಟಾಗುವುದು. ಹೌದು ಕೆಲವರಿಗೆ ಒಂದು ಲೋಟ ನೀರು ಕುಡಿದರೂ ಸಾಕು, 10–15 ನಿಮಿಷ ಗಳಲ್ಲಿಯೇ ಶೌಚಾಲಯಕ್ಕೆ ಓಡಬೇಕಾಗಿ ಬರುತ್ತದೆ, ಅಂದರೆ ನೀರು ಕುಡಿದ ಕೂಡಲೇ ಮೂತ್ರಕ್ಕೆ ಅವಸರವಾಗುತ್ತದೆ, ತಡೆದುಕೊಳ್ಳಲು ಆಗದಷ್ಟು ಅವಸರ ಶುರುವಾಗುತ್ತದೆ. ಹಾಗಾದ್ರೆ, ಇದು ಸಾಮಾನ್ಯವೇ ಅಥವಾ ಯಾವುದಾದರೂ ರೋಗದ ಸಂಕೇತವೇ ಎಂಬ ಪ್ರಶ್ನೆಯನ್ನು ಇದು ಹುಟ್ಟುಹಾಕುತ್ತದೆ. ಒಂದು ವೇಳೆ ನಿಮಗೂ ಈ ರೀತಿ ಯಲ್ಲಿ ಸಮಸ್ಯೆ ಆಗುತ್ತಿದ್ದರೆ, ಭಯಪಡುವ ಅಗತ್ಯವಿಲ್ಲ. ಮೊದಲಿಗೆ ಒಂದು ಲೋಟ ನೀರು ಕುಡಿದ ಕೂಡಲೇ ಯಾಕೆ ಈ ರೀತಿ ಸಮಸ್ಯೆ ಕಾಣಿಸಿಕೊಳ್ಳುತ್ತದೆ? ಇದರ ಹಿಂದಿನ ಕಾರಣಗಳೇನು?, ಏನೆಲ್ಲಾ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕು ಎಲ್ಲಾ ಡಿಟೇಲ್ಸ್ ನೋಡೋಣ ಬನ್ನಿ

## ನೀರು ಕುಡಿದ ನಂತರ ಪದೇ ಪದೇ ಮೂತ್ರ ವಿಸರ್ಜನೆಗೆ ಕಾರಣವೇನು?

**ಅತಿಯಾಗಿ ಸಕ್ರಿಯವಾಗಿರುವ ಮೂತ್ರಕೋಶ:** ಇದನ್ನು ಪದೇ ಪದೇ ಮೂತ್ರ ವಿಸರ್ಜನೆಗೆ ಕಾರಣವೆಂದು ಪರಿಗಣಿಸಲಾಗುತ್ತದೆ. ಈ ಸ್ಥಿತಿಯಲ್ಲಿ, ಮೂತ್ರಕೋಶದ ಸ್ನಾಯುಗಳು ಅತಿಯಾಗಿ ಸಕ್ರಿಯವಾಗುತ್ತವೆ. ಮೂತ್ರಕೋಶವು ಸಂಪೂರ್ಣವಾಗಿ ತುಂಬಿಲ್ಲದಿದ್ದರೂ ಸಹ, ಅದು ಮೆದುಳಿಗೆ ಮೂತ್ರ ವಿಸರ್ಜಿಸಲು ಪದೇ ಪದೇ ಸಂಕೇತಗಳನ್ನು ಕಳುಹಿಸುತ್ತದೆ. ಇದರಿಂದಾಗಿ ಮೂತ್ರ ವಿಸರ್ಜಿಸಲು ಹಠಾತ್ ಮತ್ತು ತೀವ್ರವಾದ ಪ್ರಚೋದನೆ ಉಂಟಾಗುತ್ತದೆ. ಅದಕ್ಕಾಗಿಯೇ ಸ್ವಲ್ಪ ಪ್ರಮಾಣದ ನೀರು ಕೂಡ ಸ್ನಾನಗೃಹಕ್ಕೆ ಹೋಗಲು ಆತುರಪಡುತ್ತದೆ.

**ಮೂತ್ರನಾಳದ ಸೋಂಕು:** ಮೂತ್ರನಾಳದ ಸೋಂಕು ಅಥವಾ ಯುಟಿಐ ಸಾಮಾನ್ಯವಾಗಿ ಮಹಿಳೆಯರಿಗೆ ಹಾಗೂ ಪುರುಷರಿಗೆ ಇಬ್ಬರಲ್ಲಿಯೂ ಕೂಡ ಕಾಣಿಸಿಕೊಳ್ಳುತ್ತದೆ. ಆದರೆ ಮಹಿಳೆಯರಲ್ಲಿ ಈ ಆರೋಗ್ಯ ಸಮಸ್ಯೆ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆ.





ಈ ಸಮಸ್ಯೆ ಇರುವ ಸಂದರ್ಭದಲ್ಲಿ,ಲೈಂಗಿಕಕ್ರಿಯೆ ಸಮಯದಲ್ಲಿ ನೋವು, ಮೂತ್ರ ವಿಸರ್ಜನೆ ಮಾಡುವಾಗ ಉರಿ ಉಂಟಾಗುವುದು ಅಥವಾ ಸುಡುವ ಸಂವೇದನೆ, ದುರ್ವಾಸನೆ ಬೀರುವ ಮೂತ್ರ ಅಥವಾ ಆಗಾಗ್ಗೆ ಮೂತ್ರ ವಿಸರ್ಜ ನೆಯು UTIಯ ಸಂಕೇತವಾಗಿರಬಹುದು. ಈ ಸ್ಥಿತಿಯು ಮೂತ್ರಕೋಶವು ಹೆಚ್ಚು ಸೂಕ್ಷ್ಮವಾಗಲು ಕಾರಣವಾಗುತ್ತದೆ.

**ಚಹಾ, ಕಾಫಿ ಅಥವಾ ಮದ್ಯದ ಅತಿಯಾದ ಸೇವನೆ:** ಚಹಾ, ಕಾಫಿ, ಮದ್ಯದಲ್ಲಿ ಕೆಫೀನ್ ಇದ್ದು, ಇದು ಮೂತ್ರದ ಉತ್ಪಾದನೆಯನ್ನು ಹೆಚ್ಚಿಸುತ್ತದೆ, ಮೂತ್ರಕೋಶದಲ್ಲಿ ಕಿರಿಕಿರಿಯನ್ನು ಉಂಟು ಮಾಡುತ್ತದೆ, ಇದರಿಂದಾಗಿ ಆಗಾಗ್ಗೆ ಮೂತ್ರ ವಿಸರ್ಜಿಸಲು ಪ್ರಚೋದನೆ ಯಾಗುತ್ತದೆ.

**ಮಧುಮೇಹದ ಲಕ್ಷಣವೂ ಇರಬಹುದು:** ರಕ್ತದಲ್ಲಿನ ಸಕ್ಕರೆ ಮಟ್ಟ ಹೆಚ್ಚಿದ್ದರೆ, ದೇಹವು ಮೂತ್ರದ ಮೂಲಕ ಹೆಚ್ಚುವರಿ ಸಕ್ಕರೆಯನ್ನು ಹೊರಹಾಕಲು ಪ್ರಯತ್ನಿಸುತ್ತದೆ, ಇದು ಮೂತ್ರ ವಿಸರ್ಜನೆ ಮತ್ತು ಬಾಯಾರಿಕೆಯನ್ನು ಹೆಚ್ಚಿಸುತ್ತದೆ.

**ಒತ್ತಡ ಮತ್ತು ಆತಂಕ:** ಮಾನಸಿಕ ಒತ್ತಡ ಅಥವಾ ಆತಂಕ ಕೂಡ ಈ ಸಮಸ್ಯೆಯನ್ನು ಉಲ್ಬಣಗೊಳಿಸ ಬಹುದು. ನರಮಂಡಲವು ಮೂತ್ರಕೋಶಕ್ಕೆ ತಪ್ಪಾದ ಸಂಕೇತಗಳನ್ನು ಕಳುಹಿಸುತ್ತದೆ, ಇದು ಆಗಾಗ್ಗೆ ಮೂತ್ರ ವಿಸರ್ಜನೆಗೆ ಕಾರಣವಾಗುತ್ತದೆ.

**ಪದೇ ಪದೇ ಮೂತ್ರ ವಿಸರ್ಜನೆ ಮಾಡುವುದನ್ನು ತಪ್ಪಿಸಲು ಏನು ಮಾಡಬೇಕು?:** ನೀರು ಕುಡಿಯುವ ಸರಿಯಾದ ವಿಧಾನವನ್ನು ಅಭ್ಯಾಸ ಮಾಡಿ – ಒಂದೇ ಬಾರಿಗೆ ಹೆಚ್ಚು ಕುಡಿಯಬೇಡಿ; ದಿನವಿಡೀ ಸಣ್ಣ ಪ್ರಮಾಣದಲ್ಲಿ ಕುಡಿಯಿರಿ. ತುಂಬಾ ವೇಗವಾಗಿ ಕುಡಿಯುವುದನ್ನು ತಪ್ಪಿಸಿ. ಕೆಫೀನ್ ಮತ್ತು ಬುರುಗು ಬರುವ ಪಾನೀಯಗಳಿಂದ ದೂರವಿರಿ – ಚಹಾ, ಕಾಫಿ, ತಂಪು ಪಾನೀಯಗಳು, ಶಕ್ತಿ ಪಾನೀಯಗಳ ಸೇವನೆಯನ್ನು ಅಂದರೆ ಎನರ್ಜಿ ಡ್ರಿಂಕ್ಸ್‌ನಿಂದ ದೂರವಿದ್ದರೆ ಮೂತ್ರಕೋಶದ ಸಮಸ್ಯೆಗೆ ಪರಿಹಾರ ಸಿಗುತ್ತದೆ. ಪದೇ ಪದೇ ಶೌಚಾಲಯಕ್ಕೆ ಹೋಗುವ ಅಭ್ಯಾಸ ಬೇಡ – ಪ್ರತಿ 10–15 ನಿಮಿಷಗಳಿಗೊಮ್ಮೆ ಶೌಚಾಲಯಕ್ಕೆ ಹೋಗುವುದರಿಂದ ನಿಮ್ಮ ಮೂತ್ರಕೋಶ ದುರ್ಬಲಗೊಳ್ಳುತ್ತದೆ ಮತ್ತು ಮೂತ್ರವನ್ನು ಹಿಡಿದಿಟ್ಟು ಕೊಳ್ಳುವ ಸಾಮರ್ಥ್ಯ ಕಡಿಮೆಯಾಗುತ್ತದೆ. ನಿಗದಿತ ಅಂತರದಲ್ಲಿ ಶೌಚಾಲಯಕ್ಕೆ ಹೋಗಲು ಪ್ರಯತ್ನಿಸಿ. ವೈದ್ಯರನ್ನು ಸಂಪರ್ಕಿಸಿ – ಸಮಸ್ಯೆ ದೀರ್ಘಕಾಲದವರೆಗೆ ಮುಂದುವರಿ ದರೆ ಹಾಗೂ ಮೂತ್ರ ವಿಸರ್ಜನೆಯ ಸಂದರ್ಭದಲ್ಲಿ ಉರಿ ಸುಡುವಿಕೆ ಅಥವಾ ನೋವು ಇದ್ದರೆ, ಅಥವಾ ನಿದ್ರೆಯ ಸಮಯದಲ್ಲಿ ಆಗಾಗ್ಗೆ ಮೂತ್ರ ವಿಸರ್ಜನೆಗೆ ಅರ್ಜೆಂಟಾಗುತ್ತಿದ್ದರೆ, ವೈದ್ಯರನ್ನು ಸಂಪರ್ಕಿಸುವುದು ಮುಖ್ಯ.

### ಈ ಬಗ್ಗೆ ವೈದ್ಯರು ಹೇಳುವುದೇನು?

**ನೀರು ಕುಡಿದ ಬಳಿಕ ಪದೇ ಪದೇ ಮೂತ್ರ ವಿಸರ್ಜನೆಗೆ ಅವಸರವಾಗುವುದು ದೊಡ್ಡ ಸಮಸ್ಯೆ ಏನಲ್ಲ! ಆದರೆ ನಿರಂತರವಾಗಿ ಈ ಸಮಸ್ಯೆ ಕಾಣಿಸಿಕೊಂಡರೆ, ಜೊತೆಗೆ ಕೆಲವೊಂದು ಕಾಯಿಲೆಗಳಿಗೆ ಸಂಬಂಧಪಟ್ಟ ಲಕ್ಷಣಗಳು ಕಾಣಿಸಿ ಕೊಂಡರೆ ನಿರ್ಲಕ್ಷಿಸಬಾರದು. ಮೂತ್ರಕೋಶವು ಸೂಕ್ಷ್ಮ ಅಂಗವಾಗಿದ್ದು, ಅದರ ನಡವಳಿಕೆಯಲ್ಲಿನ ಬದಲಾವಣೆಗಳು ಹೆಚ್ಚಾಗಿ ಆಧಾರವಾಗಿರುವ ಜೀವನಶೈಲಿ ಅಥವಾ ಆರೋಗ್ಯ ಸಮಸ್ಯೆಗಳನ್ನು ಪ್ರತಿಬಿಂಬಿಸುತ್ತವೆ. ಆರಂಭಿಕ ಮೌಲ್ಯಮಾಪನವು ಅಸ್ವಸ್ಥತೆಯನ್ನು ತಡೆಯಬಹುದು ಮತ್ತು ಸಮಸ್ಯೆ ಗಳು ಉಲ್ಬಣಗೊಳ್ಳುವ ಮೊದಲು ಅವುಗಳನ್ನು ಹಿಡಿಯಬಹುದು.**

**– ಡಾ. ಆಕಿಲ್ ಖಾನ್**
**ಕಿಮ್ಸ್ ಆಸ್ಪತ್ರೆಗಳ ಸಲಹೆಗಾರ ಮೂತ್ರಶಾಸ್ತ್ರಜ್ಞ**



● ಉಪ ನೋಂದಣಾಧಿಕಾರಿ ಕಚೇರಿಗಳ ಖಾಲಿ, 3500 ಕೋಟಿ ರೂ. ನಷ್ಟ: ಸಾಫ್ಟ್‌ವೇರ್‌ನಲ್ಲಿ ಕೆಲವು ದೋಷ

# ಇ ಸ್ವತ್ತು ಸಮಸ್ಯೆ: ಆಸ್ತಿ ನೋಂದಣಿಗೆ ಜನತೆ ಅಲೆದಾಟ

• ಉದಯವಾಹಿನಿ ದಾವಣಗೆರೆ

ಇ-ಸ್ವತ್ತು 2.0 ತಂತ್ರಾಂಶದಲ್ಲಿ ತಾಂತ್ರಿಕ ದೋಷಗಳು ಕಾಣಿಸಿಕೊಂಡಿದ್ದು, ರಾಜ್ಯಾದ್ಯಂತ ಗ್ರಾಮ, ಪಟ್ಟಣ ಮತ್ತು ನಗರಗಳಲ್ಲಿ ಒಂದೇ ಒಂದು ಇ-ಸ್ವತ್ತು ಮಾಡಿಲ್ಲ. ಇದರ ನೇರ ಪರಿಣಾಮ ಆಸ್ತಿ ನೋಂದಣಿ ಮೇಲೆ ಆಗುತ್ತಿದ್ದು, ಮುದ್ರಾಂಕ ಮತ್ತು ನೋಂದಣಿ ಇಲಾಖೆಗೆ ಕಳೆದ ಎರಡು ತಿಂಗಳಲ್ಲಿ ಸುಮಾರು 3,500 ಕೋಟಿ ರೂ.ಗೂ ಅಧಿಕ ಆದಾಯ ನಷ್ಟವಾಗಿದೆ.

ಒಂದೂವರೆ ತಿಂಗಳಿಂದ ಯಾವುದೇ ಪಂಚಾಯಿತಿ, ನಗರಸಭೆ, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇ-ಸ್ವತ್ತು ನೀಡುತ್ತಿಲ್ಲ. ಈ ಹಿಂದೆ ಇ-ಸ್ವತ್ತು ತಂತ್ರಾಂಶದಲ್ಲಿನ ಕೆಲ ದೋಷಗಳನ್ನು ಸರಿಪಡಿಸಿ ತಿಂಗಳ ಹಿಂದೆ ಸರಕಾರ ಬಿಡುಗಡೆ ಮಾಡಿದ್ದ ನೂತನ ಇ-ಸ್ವತ್ತು 2.0 ತಂತ್ರಾಂಶದಲ್ಲೂ ಸಾಕಷ್ಟು ತಾಂತ್ರಿಕ ಸಮಸ್ಯೆಗಳು ಕಾಣಿಸಿಕೊಂಡಿದ್ದು, ದಾಖಲೆಗಳ ಅಪ್‌ಲೋಡ್ ಹಂತದಲ್ಲೇ ಜಾಲತಾಣ ಹ್ಯಾಂಗ್ ಆಗುತ್ತಿದೆ.

2025 ರ ಡಿಸೆಂಬರ್ 1 ರಂದು ಇ - ಸ್ವತ್ತು 2.0 ತಂತ್ರಾಂಶವನ್ನು ರಾಜ್ಯಾದ್ಯಂತ ಪರಿಚಯಿಸಲಾಗಿತ್ತು. ಆಗಿನಿಂದ ಜನವರಿ 31 ರವರೆಗೆ 44,508 ಇ - ಸ್ವತ್ತು ಅರ್ಜಿಗಳು ಸಲ್ಲಿಕೆಯಾಗಿದ್ದು, ಕೇವಲ 7,978 ಆಸ್ತಿಗಳಿಗೆ (ಶೇ.18) ಪ್ರಮಾಣಪತ್ರ ನೀಡಲಾಗಿದೆ.

ಇ - ಸ್ವತ್ತು 2.0 ಜಾರಿ ಬಳಿಕ 97 ಲಕ್ಷಕ್ಕೂ ಅಧಿಕ ಆಸ್ತಿಗಳನ್ನು ಸಕ್ರಮಗೊಳಿಸುವ ಗುರಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹೊಂದಿತ್ತು. ಆದರೆ, ತಂತ್ರಾಂಶದಲ್ಲಿನ ಆರಂಭಿಕ ಅಡೆತಡೆಗಳಿಂದಾಗಿ ಇಲಾಖೆ ಉದ್ದೇಶ ಬುಡಮೇಲಾಗಿದೆ. ತಂತ್ರಾಂಶವನ್ನು ಅಭಿವೃದ್ಧಿ ಪಡಿಸುವ ಹೊಣೆಯನ್ನು ರಾಷ್ಟ್ರೀಯ ಮಾಹಿತಿ ಕೇಂದ್ರಕ್ಕೆ (ಎನ್‌ಐಸಿ) ವಹಿಸಲಾಗಿತ್ತು. ಕೇಂದ್ರವೇನೋ ತಂತ್ರಾಂಶ ಅಭಿವೃದ್ಧಿ ಪಡಿಸಿದೆ. ಆದರೆ, ಇ-ಸ್ವತ್ತು ವಿತರಣೆ ಇರಲಿ, ಅರ್ಜಿ ಸ್ವೀಕರಿಸುವುದು ಸಹ ಸಾಧ್ಯವಾಗುತ್ತಿಲ್ಲ. ಹೊಸ ತಂತ್ರಾಂಶವು ಇಲಾಖೆಯ ಬೇಡಿಕೆ ಹಾಗೂ ಕಾರ್ಯವೈಖರಿಗೆ ಪೂರಕವಾಗಿಲ್ಲ ಎಂಬುದು ಅಧಿಕಾರಿಗಳ ಆರೋಪ. ಇಲಾಖೆ ಮಾಹಿತಿ ಪ್ರಕಾರ ಹಾವೇರಿ, ತುಮಕೂರು, ದಾವಣಗೆರೆ ಸೇರಿ ರಾಜ್ಯದ ಕೇವಲ 11 ಜಿಲ್ಲೆಗಳಲ್ಲಿ 1000ಕ್ಕೂ ಅಧಿಕ ಇ-ಸ್ವತ್ತು ಅರ್ಜಿ ಸ್ವೀಕೃತವಾಗಿವೆ. ಉಳಿದಂತೆ 20 ಜಿಲ್ಲೆಗಳಲ್ಲಿ ಅತಿ ಕಡಿಮೆ ಅರ್ಜಿಗಳು ಸಲ್ಲಿಕೆಯಾಗಿವೆ.

**ಸಬ್‌ರಿಜಿಸ್ಟರ್ ಕಚೇರಿ ಖಾಲಿ ಖಾಲಿ:** ರಾಜ್ಯಾದ್ಯಂತ ವಾರ್ಷಿಕ ಸುಮಾರು 6.50 ಲಕ್ಷ ಹಾಗೂ ತಿಂಗಳೊಂದಕ್ಕೆ ಸರಾಸರಿ 54 ಸಾವಿರ ಇ - ಸ್ವತ್ತು ಪ್ರಮಾಣಪತ್ರಗಳನ್ನು ವಿತರಿಸಲಾಗುತ್ತದೆ. ಇ - ಸ್ವತ್ತುಗಳ ಮೂಲಕವೇ ಲಕ್ಷಾಂತರ ಆಸ್ತಿಗಳ ಮಾರಾಟ, ನೋಂದಣಿ ಕೂಡ ನಡೆಯುತ್ತದೆ. 2024 ರಲ್ಲಿ ಹೊಸ ಇ - ಖಾತಾ ನಿಯಮ ಜಾರಿಯಾದ ಬಳಿಕ ಡಿಸೆಂಬರ್ ತಿಂಗಳೊಂದರಲ್ಲೇ 1.65 ಲಕ್ಷ ಆಸ್ತಿಗಳು ನೋಂದಣಿಯಾಗಿದ್ದವು. ಆದರೆ ಕಳೆದ ಎರಡು ತಿಂಗಳಿಂದ ಒಂದೇ ಒಂದು ನಿವೇಶನ ಅಥವಾ ಮನೆಗಳ ನೋಂದಣಿ ಆಗಿಲ್ಲ. ಈಗೇನಿದ್ದರೂ ಗಿಫ್ಟ್ ಡೀಡ್, ಲೀಸ್ ಡೀಡ್ ಮತ್ತು ಮಾರ್ಟ್‌ಗೇಜ್ ಡೀಡ್‌ಗಳ ನೋಂದಣಿ ಮಾತ್ರ ಆಗುತ್ತಿದೆ.

ಎನ್‌ಐಸಿ ಅಭಿವೃದ್ಧಿ ಪಡಿಸಿದ ಸಾಫ್ಟ್‌ವೇರ್‌ನಲ್ಲಿ ಕೆಲವು ದೋಷಗಳು ಕಂಡುಬಂದಿವೆ. ಕಾರಣ ಇ-ಸ್ವತ್ತು ಸೃಜನೆ ಆಗುತ್ತಿಲ್ಲ. ಎರಡು ತಿಂಗಳಿನಿಂದ ಸಮಸ್ಯೆ ಇದ್ದು, ನೂತನ ತಂತ್ರಾಂಶವನ್ನು ಆದಷ್ಟು ಶೀಘ್ರವಾಗಿ ಸರಿಪಡಿಸುವುದಾಗಿ ಪಂಚಾಯತ್ ರಾಜ್ ಸಚಿವರು ಹಾಗೂ ಇಲಾಖೆ ಮೇಲಧಿಕಾರಿಗಳು ತಿಳಿಸಿದ್ದಾರೆ ಎಂದು ದಾವಣಗೆರೆ ತಾಪಂ ಇಒ ರಾಮಭೋವಿ ತಿಳಿಸಿದ್ದಾರೆ.

- **ತಾಂತ್ರಿಕ ದೋಷ ಹಿನ್ನೆಲೆ 2 ತಿಂಗಳಲ್ಲಿ ನೋಂದಣಿ ನಿಲ್ಲಿಸಿದ ಇ-ಸ್ವತ್ತು**
- **ರಾಜ್ಯದ್ಯಾಂತ ಉಪ ನೋಂದಣಿ ಕಚೇರಿಗಳು ಖಾಲಿ ಖಾಲಿ.**
- **ಮುದ್ರಾಂಕ ಮತ್ತು ನೋಂದಣಿ ಇಲಾಖೆಗೆ ಕಳೆದ ಎರಡು ತಿಂಗಳಲ್ಲಿ ಸುಮಾರು 3,500 ಕೋಟಿ ರೂ. ನಷ್ಟ.**




### ಇ-ಸ್ವತ್ತು 2.0 ಉದ್ದೇಶವೇನು?

**2013 ರಲ್ಲಿ ಜಾರಿಯಾಗಿದ್ದ ಇ-ಸ್ವತ್ತು ನಿಯಮಗಳ ಅಡಿ ಕೆಲವೊಂದು ಆಸ್ತಿಗಳಿಗೆ ಇ - ಸ್ವತ್ತು ವಿತರಣೆ, ಹೊಸ ಆಸ್ತಿಗಳ ಸೇರ್ಪಡೆಗೆ ಅವಕಾಶ ಇರಲಿಲ್ಲ. ಹೀಗಾಗಿ ಎನ್‌ಐಸಿ ಮೂಲಕ ಹೊಸ ಸಾಫ್ಟ್‌ವೇರ್ ಅಭಿವೃದ್ಧಿ ಪಡಿಸಿ, ಇ-ಸ್ವತ್ತು ನಿಯಮಗಳಲ್ಲಿಬದಲಾವಣೆ ತಂದು ಅಧಿಸೂಚನೆ ಹೊರಡಿಸಲಾಗಿದೆ. ನಗರಗಳಲ್ಲಿ ನೀಡುವಂತೆ ಹಳ್ಳಿಗಳಲ್ಲೂ 11ಎ (ಸಕ್ರಮ), 11ಬಿ (ಅಕ್ರಮ) ಖಾತಾ ನೀಡಲಾಗುತ್ತಿದೆ. ಈಗ ಸ್ವತ್ತು ಪಡೆಯಲು ಕಚೇರಿಗಳಿಗೆ ಬರಬೇಕೆಂದಿಲ್ಲ ಆಸ್ತಿ ಮಾಲೀಕರು ತಾವಿರುವಲ್ಲಿನಿಂದಲೇ ಮೊಬೈಲ್, ಕಂಪ್ಯೂಟರ್ ಮೂಲಕ ಅರ್ಜಿ ಸಲ್ಲಿಸಬಹುದು.**

### ವರ್ಷವಾರು ನೋಂದಣಿ ಆದಾಯ

| | |
|---|---|
| 2020-21 | ರೂ. 10,705 |
| 2021-22 | ರೂ. 14,246 |
| 2022-23 | ರೂ. 17,783 |
| 2023-24 | ರೂ. 20,287 |
| 2024-25 | ರೂ. 22,500 |
| 2025-26 | ರೂ. 24,000 (ಗುರಿ) |

## 10ನೇ ತರಗತಿ ಮಕ್ಕಳಲ್ಲಿ ಸ್ಪರ್ಧಾತ್ಮಕ ಮನೋಭಾವನೆ ಬೆಳೆಯಲಿ

• ಉದಯವಾಹಿನಿ ಚಿಂಚೋಳಿ

ತಾಲ್ಲೂಕಿನಲ್ಲಿ ಬರುವ ಎಲ್ಲಾ ಸರ್ಕಾರಿ ಪ್ರೌಢ ಶಾಲೆಗಳು ಮತ್ತು ಅನುಧಾನಿತ ಪ್ರೌಢ ಶಾಲೆಗಳಲ್ಲಿ 10ನೇ ತರಗತಿಲ್ಲಿ ತಾಲ್ಲೂಕಾ ಮಟ್ಟದಲ್ಲಿ ಅತಿಹೆಚ್ಚು ಅಂಕ ಪಡೆದು ಪ್ರಥಮ 05ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ 25000ರೂ.ನಗದು ಪ್ರತಿಭಾ ಪುರಸ್ಕಾರವನ್ನು ಶಶಿಧರ ನಾಗಶೆಟ್ಟಿ ಪುಣ್ಯಶೆಟ್ಟಿ ಚಾರಿಟೇಬಲ್ ಟ್ರಸ್ಟ್ ಐನೋಳ್ಳಿ ವತಿಯಿಂದ ನೀಡಿ ಸನ್ಮಾನಿಸಿ ಗೌರವಿಸಲಾಗುವುದು ಎಂದು ಜಿಪಂ.ಮಾಜಿ ಅಧ್ಯಕ್ಷ ದೀಪಕನಾಗ ಪುಣ್ಯಶೇಟ್ಟಿ ಹೇಳಿದರು.

ತಾಲ್ಲೂಕಿನ ಐನೋಳ್ಳಿ ಗ್ರಾಮದ ಅವರ ಕಾರ್ಯಲಯದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವರ್ಷ 10ನೇ ತರಗತಿ ಫಲಿತಾಂಶ ರಾಜ್ಯದಲ್ಲಿ ಕಲಬುರ್ಗಿ ಜಿಲ್ಲೆ ಕೊನೆಯ 30ನೇ ಸ್ಥಾನದಲ್ಲಿ ಅದರಲ್ಲಿ ಜಿಲ್ಲೆಯಲ್ಲಿ ಚಿಂಚೋಳಿ ಕೊನೆಯ ಸ್ಥಾನದಲ್ಲಿಯಿತ್ತು ಹಾಗಾಗಿ ಶಶಿಧರ ನಾಗಶೆಟ್ಟಿ ಪುಣ್ಯಶೆಟ್ಟಿ ಚಾರಿಟೇಬಲ್ ಟ್ರಸ್ಟ್ ಐನೋಳಿಯು ಸದಾ ಜನಪರ ಮತ್ತು ಸಾಮಾಜಿಕ ಸೇವೆಯಲ್ಲಿ ತೊಡಗಿದೆ ಕರೋನಾ ಸಮಯ 5000ಆಹಾರ ದವಸ ಧಾನ್ಯಕಿಟ್ ವಿತರಣೆ, ಮುಖ್ಯ ರಸ್ತೆಗಳ ದುರಸ್ತಿಗೆ ಹೋರಾಟ,ಚಂದ್ರಂಪಳಿ ಅಭಿವೃಧಿಗೆ ಹೋರಾಟ,ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಕ್ಕಾಗಿ ಹೋರಾಟ,ಐನೋಳ್ಳಿಯಲ್ಲಿ ಹೈಸ್ಕೂಲ್ ಮಂಜೂರುಯಾದರೆ ಸ್ಥಳದ ಕೊರತೆ ಮೂರು ಬಾರಿ ವಾಪಸ್ಸ್ ಹೋಗಿದೆ ಮತ್ತೆ ನಾಲ್ಕನೇ ಬಾರಿ ವಾಪಸ್ಸ್ ಹೋಗಬಾರದೆಂದು ನಮ್ಮ ತಂದೆ ಶಶಿಧರ ಪುಣ್ಯಶೇಟ್ಟಿ ಹೈಸ್ಕೂಲ್ ಶಾಲೆಗೆ ಜಮೀನು ನೀಡಿ ಶಿಕ್ಷಣಕ್ಕೆ ಮಹತ್ವ ನೀಡಿದ್ದಾರೆ ಹೀಗೆ ಹತ್ತಾರು ಜನಪರ ಕೆಲಸಗಳು ಮಾಡುತ್ತಾ ಟ್ರಸ್ಟ ಬಂದಿದೆ. ತಾಲ್ಲೂಕಿನ ಎಲ್ಲಾ ಸರ್ಕಾರಿ ಪ್ರೌಢ ಶಾಲೆಗಳು ಅನುದಾನಿತ ಪ್ರೌಢ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇಕಡಾ 100ಕ್ಕೆ 100 ರಷ್ಟು ಪ್ರತಿಶತಃ ಫಲಿತಾಂಶ ಸಾಧಿಸಿದ ಶಾಲೆಯ ಮೂಲಭೂತ ಸೌಕರ್ಯ ಅಭಿವೃಧಿಗಾಗಿ ಅಥವಾ ಶಾಲಲೆಯ ಸಾಮಾಗ್ರಿ ಖರೀದಿಗಾಗಿ 51000ರೂ.ನಗದು ಬಹುಮಾನ , ಸದರಿ ಶಾಲೆಗಳ ಮುಖ್ಯಗುರುಗಳಿಗೆ, ಶಿಕ್ಷಕರಿಗೆ ಸನ್ಮಾನಿಸಿ ಗೌರವಿಸಲಾಗುವುದು,ಈ ಮಾಹಿತಿ ಕುರಿತು ಈಗಾಗಲೆ ಕ್ಷೇತ್ರ ಶಿಕ್ಷಣಾಧಿಕಾರಿ ಮೂಲಕ ಎಲ್ಲಾ ಸರ್ಕಾರಿ ಪ್ರೌಢ ಶಾಲೆ ಅನುದಾನಿತ ಪ್ರೌಢಶಾಲೆ ಮುಖ್ಯಗುರುಗಳಿಗೆ ಲಿಖಿತ ರೂಪದಲ್ಲಿ ಮನವಿ ಸಲ್ಲಿಸಲಾಗಿದೆ.

ವಿದ್ಯಾರ್ಥಿನಿಯರು,ವಿದ್ಯಾರ್ಥಿಗಳು ಸಮಾಜಿಕ ಜಾಲತಾಣ ಬಿಟ್ಟು ಮೊಬೈಲ್ ಬಿಟ್ಟು ಹಗಲಿರುಳು ಚನ್ನಾಗಿ ವಿದ್ಯಾಭ್ಯಾಸ ಮಾಡಿ ಉತ್ತಮ ಫಲಿತಾಂಶ ತಂದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಮತ್ತು ಸನ್ಮಾನ ಕಾರ್ಯಕ್ರಮವು ಜೂನ್ 5ಕ್ಕೆ ಅಥವಾ ಆಗಷ್ಟ 15ರಂದು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು. ವಿಜಯಕುಮಾರ ರೋಟ್ಟಿ,ಅಲಾವೋದಿನ ಅನ್ಸಾರಿ, ಇಬ್ರಾಹಿಂಸಾಬ, ದಿನೇಶ ದುಗ್ಗಾಣಿ, ಖಾಜಾಪಟೇಲ, ಶರಣು ಪಪ್ಪಾ, ಶಿವು ಮೂಲಗಿ, ಆಸೀಫ್ ಹೂಡ,ರಾಜ ಕುಮಾರ ಮಂದಾ, ಬಾಬುರಾವ,ಅನೇಕರಿದ್ದರು.


ಉದಯವಾಹಿನಿ ಚಿತ್ರ

**ಈ ಬಾರಿ 2025-26ನೇ ಸಾಲಿನಲ್ಲಿಯು ಕೂಡ ನಮ್ಮ ಟ್ರಸ್ಟ್ ವತಿಯಿಂದ 10ನೇ ತರಗತಿ ಮಕ್ಕಳಿಗೆ ಸ್ಪರ್ದಾತ್ಮಕ ಮನೋಭಾವನೆ ಬೇಳೆದು ಚನ್ನಾಗಿ ವಿದ್ಯಾಭ್ಯಾಸ ಮಾಡಿ ಉತ್ತಮ ಫಲಿತಾಂಶ ತರಲಿವೆಂಬ ದೃಷ್ಠಿಕೋನ ಇಟ್ಟುಕೋಂಡು 10ನೇ ಶಾಲಾ ಮಕ್ಕಳಿಗೆ ಪ್ರಥಮ 05 ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ 5000ರೂ.ಬಹುಮಾನ ದ್ವಿತಿಯ ಸ್ಥಾನ 11000ರೂ,ತೃತೀಯ ಸ್ಥಾನ 5000ರೂ,ಚತುರ್ಥ ಸ್ಥಾನ 5000ರೂ,ಪಂಚಮ ಸ್ಥಾನ 5000ರೂ,ನಗದು ಪುರಸ್ಕಾರ ಸನ್ಮಾನ ಮಾಡಲಾಗುವುದು. -ದೀಪಕನಾಗ ಪುಣ್ಯಶೇಟ್ಟಿ, ಜಿಪಂ.ಮಾಜಿ ಅಧ್ಯಕ್ಷ**

## ಕಿಡಿಗೇಡಿಗಳ ಕೃತ್ಯ: ನೀರು ಪೂರೈಕೆಯಲ್ಲಿ ವ್ಯತ್ಯಯ

• ಉದಯವಾಹಿನಿ ಗದಗ,

ಕಿಡಿಗೇಡಿಗಳು ನೀರು ಸರಬರಾಜು ಪೈಪ್‌ಲೈನ್‌ಗಳಲ್ಲಿ ಕಲ್ಲು, ಬಾಟಲಿಗಳು ಸೇರಿದಂತೆ ವಿವಿಧ ವಸ್ತುಗಳನ್ನು ತುಂಬಿ ನೀರು ಸರಬರಾಜು ವ್ಯವಸ್ಥೆಗೆ ಅಡ್ಡಿಪಡಿಸಿರುವ ಪರಿಣಾಮ ಅವಳಿ ನಗರದಲ್ಲಿ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

**ಪ್ರಕರಣ 1 :** ನಗರದ ಭೀಷ್ಮ ಕೆರೆ ಎದುರಿನ ಬನ್ನಿಕಟ್ಟಿ ಹತ್ತಿರದಲ್ಲಿ ಕೆಲವು ದಿನಗಳ ಹಿಂದೆ ನೀರು ಪೈಪ್‌ಲೈನ್ ಮೂಲಕ ಸರಬರಾಜು ಆಗದ ಹಿನ್ನೆಲೆ ಲೈನ್ ತೆರೆಯಿಸಿ ಪರಿಶೀಲನೆ ನಡೆಸಿದಾಗ, ಕಿಡಗೇಡಿಗಳು ನೀರು ಸರಬರಾಜು ಪೈಪ್‌ಲೈನ್‌ನ್ನಲ್ಲಿ ದೊಡ್ಡ ಹಾಗೂ ಸಣ್ಣ ಗಾತ್ರದ ಕಲ್ಲುಗಳನ್ನು ತುಂಬಿರುವುದು ಪತ್ತೆಯಾಗಿದೆ. ಈ ಕೃತ್ಯ ದುರುದ್ದೇಶಪೂರ್ವಕವಾಗಿದ್ದು, ಆರೋಪಿಗಳನ್ನು ಪತ್ತೆಹಚ್ಚಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**ಪ್ರಕರಣ 2 :** ಬೆಟಗೇರಿಯ ಮಂಜುನಾಥ ನಗರ ಪ್ರದೇಶದಲ್ಲಿ ಐದು ಇಂಚು ಹಾಗೂ ಎರಡು ಇಂಚು ಲೈನ್‌ಗಳಲ್ಲಿ ಬಾಟಲಿಗಳು ಮತ್ತು ಕಲ್ಲುಗಳು ಸಿಲುಕಿಕೊಂಡ ಪರಿಣಾಮ ನೀರು ಸರಬರಾಜು ಅಸ್ತವ್ಯಸ್ತಗೊಂಡಿದೆ. ಮುಖ್ಯ ಲೈನ್ ತೆರೆಯಿಸಿ ಪರಿಶೀಲಿಸಿದಾಗ ಅನೇಕ ಕಡೆ ಲೈನ್‌ಗಳು ಉದ್ದೇಶಪೂರ್ವಕವಾಗಿ ಬ್ಲಾಕ್ ಮಾಡಿರುವುದು ಕಂಡು ಬಂದಿದೆ. ಇದರಿಂದ ಹಲವಾರು ಭಾಗಗಳಿಗೆ ನೀರು ಸರಿಯಾಗಿ ತಲುಪುತ್ತಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ತರಹದ ಘಟನೆಗಳನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದ್ದು, ಸಂಬಂಧಿಸಿದವರನ್ನು ಪತ್ತೆಹಚ್ಚಿ ಕಾನೂನು ಕ್ರಮ ಜರುಗಿಸಲಾಗುವುದು. ಕಿಡಿಗೇಡಿಗಳ ಈ ದುಷ್ಕೃತ್ಯದಿಂದ ಸಾರ್ವಜನಿಕರಿಗೆ ನೀರು ಸರಬರಾಜು ವಿಳಂಬವಾಗಿದ್ದು, ಇದು ಅತ್ಯಂತ ಗಂಭೀರ ವಿಷಯವಾಗಿದೆ. ಸಾರ್ವಜನಿಕ ಹಿತಾಸಕ್ತಿಗೆ ಧಕ್ಕೆಯುಂಟು ಮಾಡುವ ಇಂತಹ ಕೃತ್ಯಗಳನ್ನು ಜಿಲ್ಲಾಡಳಿತ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ನೀರು ಸರಬರಾಜಿಗೆ ಅಡ್ಡಿಪಡಿಸುವವರ ವಿರುದ್ಧ ಮುಲಾಜಿಲ್ಲದೇ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

## ಮಿನಿ ನ್ಯೂಸ್

### ದರೋಡೆಗೆ ಸಂಚು; ಆರೋಪಿ ರೌಡಿ ಶೀಟರ್ ಕಾಲಿಗೆ ಗುಂಡೇಟು

• ಉದಯವಾಹಿನಿ ಭದ್ರಾವತಿ

ಗ್ಯಾಂಗ್ ಕಟ್ಟಿಕೊಂಡು ತಾಲ್ಲೂಕಿನ ಗೌರಾಪುರ-ಶಿವನಿ ಕ್ರಾಸ್ ಸಮೀಪ ದರೋಡೆಗೆ ಸಂಚು ರೂಪಿಸಿದ್ದ ಆರೋಪಿಗಳ ಬಂಧನಕ್ಕೆ ತೆರಳಿದ ಪೊಲೀಸರ ಮೇಲೆ ಮಾರಕಾಸ್ತ್ರಗಳಿಂದ ದಾಳಿ ನಡೆಸಲು ಮುಂದಾದಾಗ ಒಬ್ಬನ ಮೇಲೆ ಗುಂಡು ಹಾರಿಸಿ ಬಂಧಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಗುಂಡೇಟಿನಿಂದ ಗಾಯಗೊಂಡಿರುವ ಆರೋಪಿ ರೌಡಿ ಶೀಟರ್ ಡಿಚ್ಚಿ ಮುಬಾರಕ್‌ಗೆ ಭದ್ರಾವತಿಯ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ನಂತರ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಈತನ ಸಹಚರರಾದ ಜಹೀರ್. ರೆಹಮತ್ ಪಾಷಾ, ಜುನೈದ್ ಹಾಗು ಮನು ಸಿಂಗ್ ಎಂಬುವವರನ್ನು ಬಂಧಿಸಲಾಗಿದೆ. ಮಾರಕಾಸ್ತ್ರಗಳನ್ನು ಹೊಂದಿರುವ ಗುಂಪೊಂದು ದರೋಡೆಗೆ ಹೊಂಚು ಹಾಕಿ ಕುಳಿತಿದೆ ಎಂಬ ಖಚಿತ ಮಾಹಿತಿ ಆಧಾರದಲ್ಲಿ, ಅವರನ್ನು ಬಂಧಿಸಲು ಡಿ.ವೈ.ಎಸ್.ಪಿ ಪ್ರಕಾಶ್ ರಾಥೋಡ್ ನೇತೃತ್ವದ ವಿಶೇಷ ತಂಡ ತೆರಳಿತ್ತು. ಪೊಲೀಸರನ್ನು ಕಂಡ ಕೂಡಲೇ ಆರೋಪಿಗಳು ಅವರ ಮೇಲೆ ಕಲ್ಲು ತೂರಿ ಮಾರಕಾಸ್ತ್ರಗಳಿಂದ ದಾಳಿ ನಡೆಸಲು ಮುಂದಾಗಿದ್ದಾರೆ. ಆತ್ಮ ರಕ್ಷಣೆಗಾಗಿ ಪಿಎಸ್‌ಐ ಕೃಷ್ಣಕುಮಾರ್ ಮಾನೆ ಮೊದಲು ಗಾಳಿಯಲ್ಲಿ ಗುಂಡು ಹಾರಿಸಿ ಆರೋಪಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ಆದರೂ ಮುಬಾರಕ್ ಚಾಕುವಿನಿಂದ ಪೊಲೀಸರನ್ನು ತಿವಿಯಲು ಮುಂದಾದಾಗ ಆತನ ಕಾಲಿಗೆ ಗುಂಡು ಹಾರಿಸಲಾಗಿದೆ ಎಂದು ಎಸ್ಪಿ ಬಿ.ನಿಖಿಲ್ ತಿಳಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದ ಪಿಎಸ್‌ಐಗಳಾದ ಕೃಷ್ಣಕುಮಾರ್, ಸಿದ್ದಪ್ಪ ಹಾಗು ಕಾನ್ಸ್‌ಟೇಬಲ್ ಆದರ್ಶ್ ಗಾಯಗೊಂಡಿದ್ದು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

### ವಿದ್ಯುತ್ ವ್ಯತ್ಯಯ ಇಂದಿನಿಂದ

• ಉದಯವಾಹಿನಿ ಶಿವಮೊಗ್ಗ

ತಾಲ್ಲೂಕಿನ ತಾವರೆಚಟ್ನಹಳ್ಳಿ ವಿದ್ಯುತ್ ಸ್ವೀಕರಣ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿದ್ದು, ಫೆ. 09 ರಂದು ಬೆಳಗ್ಗೆ 09.00 ರಿಂದ ಸಂಜೆ 5.00 ರವರೆಗೆ ಕುವೆಂಪುನಗರದ ಸೂಡ ಸಿ ಮತ್ತು ಡಿ ಬ್ಲಾಕ್, ಶಿವಕುಮಾರಸ್ವಾಮಿ ಲೇಔಟ್ ಮತ್ತು ಇಸ್ಮಾ ಸಿಟಿ ಹಾಗೂ ಕೊಮ್ಮನಾಳ್, ಬಿಕ್ಕೋನಹಳ್ಳಿ, ಬೂದಿಗೆರೆ, ಬೀರನಕೆರೆ, ಬನ್ನಿಕೆರೆ, ಅಬ್ಬಲಗೆರೆ, ಹುಣಸೋಡು, ಕಲ್ಲಗಂಗೂರು, ಚನ್ನಮುಂಬಾಪುರ, ಮತ್ತೋಡು, ರತ್ನಗಿರಿನಗರ, ರತ್ನಾಕರ ಲೇಔಟ್, ಇಂಜಿನಿಯರಿಂಗ್ ಕಾಲೇಜು, ಕೃಷಿ ಕಾಲೇಜು, ಗೋಂಧಿಚಟ್ನಹಳ್ಳಿ, ಹೊಳೆಹನಸವಾಡಿ, ಕುಂಚೇನಹಳ್ಳಿ, ಬೀರನಕೆರೆ, ಕಲ್ಲಾಪುರ, ಬಸವನಗಂಗೂರು, ಮೇಲಿನ ಹನಸವಾಡಿ, ಬೆಳಲಕಟ್ಟೆ, ಮೋಜಪ್ಪ ಹೊಸೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

### ಗಾಂಜಾ ಪೂರೈಕೆ: ಮೂವರ ಬಂಧನ

• ಉದಯವಾಹಿನಿ ಪುತ್ತೂರು

ತಾಲ್ಲೂಕಿನ ಸಂಪ್ಯ ಠಾಣಾ ವ್ಯಾಪ್ತಿಯ ಪಡುವನ್ನೂರು ಗ್ರಾಮದ ಸಜಂಕಾಡಿ ಎಂಬಲ್ಲಿ ಈಶ್ವರಮಂಗಲ-ಸುಳ್ಯಪದವು ರಸ್ತೆಯಲ್ಲಿ ಜ.19ರಂದು ಕಾರು ಮತ್ತು ಗೂಡ್ಸ್ ವಾಹನದಲ್ಲಿ ಸಾಗಾಟ ಮಾಡುತ್ತಿದ್ದ ರೂ. 53.03 ಲಕ್ಷ ಮೌಲ್ಯದ 106.050 ಕೆ.ಜಿ ಗಾಂಜಾ ಪತ್ತೆ ಪ್ರಕರಣಕ್ಕೆ ಸಂಬಂಧಿಸಿ ಆರೋಪಿಗಳಿಗೆ ಗಾಂಜಾ ಪೂರೈಕೆ ಮಾಡುತ್ತಿದ್ದ ಒಡಿಶಾಸ ವ್ಯಕ್ತಿ ಹಾಗೂ ಆರೋಪಿಗಳಿಗೆ ಹಣ ಮತ್ತು ವಾಹನದ ವ್ಯವಸ್ಥೆ ಮಾಡುತ್ತಿದ್ದ ಇಬ್ಬರು ಸೇರಿ ಮೂವರನ್ನು ಪೊಲೀಸರು ಬಂಧಿಸಿದ್ದಾರೆ.

ಗಾಂಜಾ ಸಾಗಾಟ ಪ್ರಕರಣ ಪತ್ತೆ ಮಾಡಿದ್ದ ಪೊಲೀಸರು ಆರೋಪಿಗಳಾದ ಬೆಳ್ತಂಗಡಿ ತಾಲ್ಲೂಕಿನ ಚಾರ್ಮಾಡಿ ಗ್ರಾಮದ ನಿವಾಸಿಗಳಾದ ಕಾರು ಚಾಲಕ ರಫೀಕ್ ಪಿ. (37), ಗೂಡ್ಸ್ ವಾಹನದ ಚಾಲಕ ಅಬ್ದುಲ್ ಸಾದಿಕ್ (37) ಎಂಬುವರನ್ನು ಬಂಧಿಸಿದ್ದರು. ಪ್ರಕರಣದ ತನಿಖೆ ಮುಂದುವರಿಸಿದ್ದ ಪುತ್ತೂರು ಡಿವೈಎಸ್ಪಿ ಪ್ರಮೋದ್ ಕುಮಾರ್ ನೇತೃತ್ವದ ತನಿಖಾ ತಂಡವು ಈ ಆರೋಪಿಗಳಿಗೆ ಗಾಂಜಾವನ್ನು ಪೂರೈಕೆ ಮಾಡುತ್ತಿದ್ದ ಒಡಿಶಾಸ ದೀಪಕ್ ಪಾತ್ರ (37), ಆರೋಪಿಗಳಿಗೆ ಹಣ ಮತ್ತು ವಾಹನದ ವ್ಯವಸ್ಥೆ ಮಾಡಿದ್ದ ಬೆಳ್ತಂಗಡಿ ತಾಲ್ಲೂಕಿನ ಚಾರ್ಮಾಡಿ ನಿವಾಸಿ ಮಹಮ್ಮದ್ ಫಯಾಜ್ ಡಿ.ಕೆ. (27) ಮತ್ತು ಕಕ್ಕಿಂಜೆ ನಿವಾಸಿ ನಝೀರ್ (42) ಎಂಬುವರನ್ನು ಬಂಧಿಸಿದ್ದಾರೆ. ದೀಪಕ್ ಪಾತ್ರನನ್ನು ಒಡಿಶಾದಲ್ಲೇ ಬಂಧಿಸಿದ್ದು, ಈ ವೇಳೆ ಆತನಿಂದ ರೂ. 80ಸಾವಿರ ಮೌಲ್ಯದ 1.788 ಕೆ.ಜಿ ಗಾಂಜಾ ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಡಿವೈಎಸ್‌ಪಿ ಪ್ರಮೋದ್ ಕುಮಾರ್ ನೇತೃತ್ವದಲ್ಲಿ ನಡೆದ ಆರೋಪಿಗಳ ಪತ್ತೆ ಕಾರ್ಯಾಚರಣೆಯಲ್ಲಿ ಸಂಪ್ಯ ಠಾಣೆಯ ಎಸ್‌ಐ ಗುಣಪಾಲ ಜೆ., ಸಿಬ್ಬಂದಿ ದೇವರಾಜ್, ಹರ್ಷಿತ್, ಪ್ರಶಾಂತ್, ಅದ್ರಾಮ, ಪ್ರಶಾಂತ್ ರೈ, ಪ್ರವೀಣ್ ರೈ, ಸುಬ್ರಮಣಿ, ಭೀಮಸೇನ್, ಸುರೇಶ್, ದಿವ್ಯಾಪ್ರಕಾಶ್ ಪಾಲ್ಗೊಂಡಿದ್ದರು.

## ಬಂಧಿ ನಿವಾಸಿಗಳಿಗೆ ಉಚಿತ ಯೋಗ ಶಿಕ್ಷಣ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ಆಯುಷ್ ಇಲಾಖೆ ಇಲಾಖೆ ಚಿತ್ರದುರ್ಗ ಹಾಗೂ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಭಾನುವಾರ ಚಿತ್ರದುರ್ಗ ಜಿಲ್ಲಾ ಕಾರಾಗೃಹ ಬಂಧಿ ನಿವಾಸಿಗಳಿಗೆ ನೈತಿಕ ಶಿಕ್ಷಣ ಹಾಗೂ ಯೋಗ ಪ್ರಾಣಾಯಾಮ ಧ್ಯಾನ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಕುರಿತು ಮಾತನಾಡಿದ ಕಾರಾಗೃಹ ಅಧೀಕ್ಷಕ ಸಿಧರಾಮ ಬಿ ಪಾಟೀಲ್ ಬಂಧಿ ನಿವಾಸಿಗಳು ತಮ್ಮ ಮಾನಸಿಕ ಒತ್ತಡ ಕಡಿಮೆ ಮಾಡಲು ಯೋಗ ಮತ್ತು ಧ್ಯಾನ ಅಭ್ಯಾಸ ಮಾಡುವುದು ಉತ್ತಮ, ಹಾಗೆಯೇ ಜೀವನದಲ್ಲಿ ಉತ್ತಮ ಮಾರ್ಗದಲ್ಲಿ ನಡೆಯಲು ನೈತಿಕ ಶಿಕ್ಷಣದ ಮೂಲಕ ಜೀವನದ ಮೌಲ್ಯಗಳನ್ನು ಅರಿತುಕೊಳ್ಳಬೇಕು ಇದರಿಂದ ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಬದುಕಲು ಸಾಧ್ಯಗೊಳಿಸುತ್ತವೆ. ಭಾರತದಲ್ಲಿ ಇತ್ತೀಚಿಗೆ ಈ ಕಾರ್ಯಕ್ರಮಗಳು ಯಶಸ್ವಿಯಾಗಿ ಜಾರಿಯಾಗುತ್ತಿವೆ ಮತ್ತು ಸಮಾಜದಲ್ಲಿ ಅಪರಾಧ ಪ್ರವೃತ್ತಿ ಕಡಿಮೆಗೊಳಿಸಲು ಸಹಕಾರಿಯಾಗಲಿದೆ ಅದಕ್ಕಾಗಿ ಯೋಗ ತರಬೇತಿ ಶಿಕ್ಷಣ ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದೆ ಇಲ್ಲಿಯ ಬಂಧಿ ನಿವಾಸಿಗಳಿಗೆ ನಿರಂತರ ಯೋಗ ಶಿಕ್ಷಣ ಸೌಲಭ್ಯ ದೊರೆಯುವಂತೆ ಮಾಡಲಾಗುವುದು ಎಂದು ಹೇಳಿದರು.

ಯೋಗ ತರಬೇತುದಾರ ಹಾಗು ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಅಧ್ಯಕ್ಷ ರವಿ ಕೆ.ಅಂಬೇಕರ್ ತರಬೇತಿ ನೀಡಿದರು, ಈ ಸಂಧರ್ಭದಲ್ಲಿ ಜೈಲರ್ ರಾಜೇಂದ್ರ ಯು ಕೋಪರ್ಡೆ, ಸಹಾಯಕ ಜೈಲರ್ ಮಡಿವಾಳಪ್ಪ ಎಸ್ ತಳವಾರ್ ಹಾಗೂ ಬಂಧಿಖಾನೆ ಶಿಕ್ಷಕ, ಆರ್ ಎ ಶ್ರೀರಾಮ ರೆಡ್ಡಿ ಉಪಸ್ಥಿತರಿದ್ದರು.

## ಕಾಮಗಾರಿಗಳ ಚಾಲನೆ ವೇಳೆ ಫುಲ್ ಗರಂ ಆದ ಸಚಿವರು

• ಉದಯವಾಹಿನಿ ಕಾರಟಗಿ

ಕಾರಟಗಿ ತಾಲ್ಲೂಕಿನ ಬೂದಗುಂಪ ಯರಡೋಣ ಮತ್ತು ಹುಲ್ಕಿಹಾಳ ಗ್ರಾಮಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ್ ಎಸ್ ತಂಗಡಗಿ ಅವರು ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಬೂದಗುಂಪ ಗ್ರಾಮದ ಬೀರಲಿಂಗೇಶ್ವರ ಸಮುದಾಯ ಭವನ 25 ಲಕ್ಷ, ಯರಡೋಣ ಗ್ರಾಮದ ಶ್ರೀ ಬೀರಲಿಂಗೇಶ್ವರ ಸಮುದಾಯ ಭವನ 50 ಲಕ್ಷ, ಹುಲ್ಕಿಹಾಳ ಶ್ರೀ ಚಾಮುಂಡೇಶ್ವರಿ ಸಮುದಾಯ ಭವನ 25 ಲಕ್ಷ, ಬೂದಗುಂಪ ಶೇಷಾಗಿರಿ ಕ್ಯಾಂಪ್ ರಸ್ತೆ ಗೆ ಸೇತುವೆ ನಿರ್ಮಾಣ 40 ಲಕ್ಷ, ಅಭಿವೃದ್ಧಿ ಕಾರ್ಯಗಳಿಗೆ ಸಚಿವರು ಫೆಬ್ರವರಿ 8 ರವಿವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಪತ್ರಿಕಾ ಮಾಧ್ಯಮ ಜೊತೆ ಸಚಿವ ಶಿವರಾಜ್ ತಂಗಡಗಿ ಅವರು ಮಾತನಾಡಿದರು ಕ್ಷೇತ್ರದ ಜನರ ಆಶೋತ್ತರಗಳಿಗೆ ನಾನು ಪ್ರಾಮಾಣಿಕವಾಗಿ ಸ್ಪಂದಿಸುತ್ತಿದ್ದು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡುತ್ತಿರುವುದು ಮತದಾರರು ನನ್ನ ಮೇಲೆ ಇಟ್ಟ ವಿಶ್ವಾಸವನ್ನು ಇಮ್ಮಡಿಗೊಳಿಸುತ್ತಿದ್ದೇನೆ. ಕಾಮಗಾರಿಗಳಲ್ಲಿ ರಾಜಿ ಇಲ್ಲದೆ ಗುಣಮಟ್ಟ ಕಾಪಾಡಿಕೊಳ್ಳುವಂತೆ ಗುತ್ತಿಗೆದಾರರಿಗೆ ಸೂಚಿಸಿದ್ದೇನೆ ಎಂದರು. ಕ್ರಸ್ಟ್ ಗೇಟ್ ಬಗ್ಗೆ ಜಿಲ್ಲಾ ಅಧ್ಯಕ್ಷರು ಮಾಜಿ ಶಾಸಕರು ರೈತರಲ್ಲಿ ಇಲ್ಲಸಲ್ಲದ ಅನುಮಾನ ಹುಟ್ಟಿಸುವಂತೆ ಮಾಡುತ್ತಿದ್ದಾರೆ. ಅವರಿಗೆ ವಾಸ್ತವದ ಅರಿವಿಲ್ಲ, ರೈತರ ಬಗ್ಗೆ ಕಾಳಜಿನೂ ಇಲ್ಲ ಅಹೋರಾತ್ರಿ ಅನಿರ್ದಿಷ್ಟಾವಧಿ ಧರಣಿ ಮಾಡುವಾಗ ಮಾಜಿ ಶಾಸಕರು ಮನೆಯಲ್ಲಿ ಮಲ್ಕೊಂಡಿದ್ದು, ಹೋರಾಟದ ಸ್ಥಳದಲ್ಲಿ ಯಾಕೆ ಮಲಗಲಿಲ್ಲ ಪಾಪ ಅಮಾಯಕರಲ್ಲಿ ಮಲ್ಕೊಂಡ್ರು, ನೀನು ಬೈ ಚಾನ್ಸ್ ಎಂಎಲ್‌ಎ ಆಗಿದ್ದೀಯಾ ವಯಸ್ಸಲ್ಲಿ ನಿನಗಿಂತ ಹಿರಿಯರಾದ ನನ್ನ ಬಗ್ಗೆ ಮಾತನಾಡುವಾಗ ಮಾತಿನ ಮೇಲೆ ಹಿಡಿತವಿರಲಿ, ಏಕವಚನದಲ್ಲಿ ಮಾತನಾಡುತ್ತೀಯ ನಿನಗೆ ಅರುವು ಇಲ್ಲ, ನಿನ್ನ ವಿರುದ್ಧ ಮಾತಾಡೋಕೆ ನನ್ನ ಹತ್ರ ನೂರು ಇವೆ ಆದರೂ ನಾನು ಮಾತಾಡೋದಿಲ್ಲ ಒಬ್ಬರ ವೈಯಕ್ತಿಕ ವಿಚಾರದಲ್ಲಿ ನಾನು ಯಾವತ್ತಿಗೂ ಮಾತಾಡೋದಿಲ್ಲ, ನನ್ನ ಮೇಲೆ ನೀನು ಇಲ್ಲಸಲ್ಲದ ಆರೋಪ ಮಾಡುತ್ತಾ ಏಕವಚನದಲ್ಲಿ ಮಾತನಾಡಿದರೆ ನಾನು ಸಹಿಸಬಹುದು ಆದರೆ ನನ್ನ ಕಾರ್ಯಕರ್ತರು ಅದನ್ನು ಸಹಿಸುವುದಿಲ್ಲ.

ರೈಸ್ ಪಾರ್ಕ್ ಗೆ 127 ಕೋಟಿ ತಂದಿದ್ದು ನಾನು ನನ್ನ ಅವಧಿಯಲ್ಲಿ ಅನುಮೋದನೆಗೊಂಡ ಅನುದಾನಕ್ಕೆ ನೀನು ಪರ್ಸಂಟೇಜ್ ತೊಗೊಂಡು ಅಭಿವೃದ್ಧಿ ಮಾಡದೇ ರೈಸ್ ಪಾರ್ಕ್ ಸಂಪೂರ್ಣವಾಗಿ ಹಾಳುಗೆಡಿವಿದ್ದಿಯಾ ಎಂದು ಆಕ್ರೋಶ ಅವರ ಹಾಕಿದರು ನಂತರ ಇತ್ತೀಚೆಗೆ ಸುದ್ದಿಗೋಷ್ಠಿಯಲ್ಲಿ ಕಾಂಗ್ರೇಸ್ ಕಾರ್ಯಕರ್ತ ಶರಣಪ್ಪ ಪರಕಿ ಅವರು ಮಾತನಾಡಿದ ಅಸಂವಿಧಾನದ ಪದ ಬಳಕೆಗೆ ಅಭಿಪ್ರಾಯ ಕೇಳಿದ ಪತ್ರಕರ್ತರಿಗೆ ಉತ್ತರಿಸಿದ ಸಚಿವರು ಮಾಜಿ ಶಾಸಕರೇ ನೀನು ಚಂಡು ಎಷ್ಟು ಜೋರಾಗಿ ಒಗೆದರೆ ಅಷ್ಟು ಜೋರಾಗಿ ಹಿಂದಕ್ಕೆ ಬರುತ್ತೆ ನೆನಪಿರಲಿ ಎಂದರು ಆ ಸಂದರ್ಭದಲ್ಲಿ ಪಕ್ಕದಲ್ಲೇ ಇರುವ ಶರಣಪ್ಪ ಪರಕಿ ಪರ ಬ್ಯಾಟ್ ಬೀಸಿದರು ಸಚಿವರು. ನಾನು ಎಂದು ಕೂಡ ಮಾಜಿ ಶಾಸಕರ ವಿರುದ್ಧ ಅವಹೇಳನವಾಗಿ ಮಾತನಾಡಿಲ್ಲ, ಏಕವಚನದಲ್ಲಿಯೂ ಮಾತನಾಡಿಲ್ಲ, ನಾನು ಯಾರನ್ನು ವೈಯಕ್ತಿಕವಾಗಿಯೂ ನಿಂದಿಸಿ ಮಾತನಾಡುವುದಿಲ್ಲ ಮಾತನಾಡೋದಿದ್ದರೆ ಅಭಿವೃದ್ಧಿ ವಿಚಾರದಲ್ಲಿ ಮಾತನಾಡಿ ಎಂದು ಮಾಜಿ ಶಾಸಕರಿಗೆ ಟಾಂಗ್ ನೀಡಿದರು.


ಉದಯವಾಹಿನಿ ಚಿತ್ರ

**ನನ್ನ ಕಾರ್ಯಕರ್ತರು ಸಹಿಸುವುದಿಲ್ಲ ಎಚ್ಚರ: ಸಚಿವ ತಂಗಡಗಿ**

## ತೆಕ್ಕಲಕೋಟೆಯ ಐಹಾಸಿಕ ಕಾಲದ ನೆಲೆಗಳಲ್ಲಿ ಉತ್ಖನನ

### 5 ಸಾವಿರ ವರ್ಷ ಹಳೆಯ ಮಾನವನ ಅಸ್ಥಿಪಂಜರ, ಮಡಕೆ ಇತರೆ ಮಹತ್ವದ ವಸ್ತುಗಳು ಪತ್ತೆ

• ಉದಯವಾಹಿನಿ ತೆಕ್ಕಲಕೋಟೆ

ಪಟ್ಟಣದ ಗೌಡ್ರ ಮೂಲೆ ಬೆಟ್ಟದಲ್ಲಿ 5 ಸಾವಿರ ವರ್ಷಗಳ ಹಿಂದಿನ ಮಾನವನ ಅಸ್ಥಿಪಂಜರ, ಮಡಕೆ ಹಾಗೂ ಇತರೆ ವಸ್ತುಗಳು ಪತ್ತೆಯಾಗಿವೆ, ಎಂದು ಅಮೆರಿಕದ ಹಾರ್ಟ್ ವಿಕ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕಿ ನಮಿತಾ ಎಸ್.ಸುಗಂಧಿ ತಿಳಿಸಿದ್ದಾರೆ.

ಕಳೆದ ಹಲವು ವರ್ಷಗಳಿಂದ ಈ ಭಾಗದಲ್ಲಿ ನಡೆಯುತ್ತಿರುವ ಉತ್ಖನನ ಹಾಗೂ ಸಂಶೋಧನೆ ಕಾರ್ಯದಲ್ಲಿ ಮೂರು ತಂಡಗಳು ಭಾಗವಹಿಸಿದ್ದು, ಪಟ್ಟಣದ ಹಿರೇ ಅರ್ಲ, ಬೂದಿ ದಿಬ್ಬ, ಬಾಳೆ ತೋಟ, ಜಕ್ಕೇರು ಗುಡ್ಡ, ಗೌಡ್ರ ಮೂಲೆ, ಹುಡೇದಗುಡ್ಡ' ಸುತ್ತಲಿನ ಹಲವು ಸ್ಥಳಗಳಲ್ಲಿ ಉತ್ಖನನ , ಸಂಶೋಧನೆ ನಡೆಯುತ್ತಿದೆ. ಈ ಭಾಗದಲ್ಲಿ ನವಶಿಲಾಯುಗದ ಜನರ ಕುರುಹುಗಳು, ಅವರ ನಿತ್ಯ ಬಳಕೆಗೆ ಬಳಸುತ್ತಿದ್ದ ಚೂಪಾದ ಕಲ್ಲಿನ ಆಯುಧಗಳು, ಕೈ ಕೊಡಲಿ, ಪ್ರಾಣಿಗಳ ಹಲ್ಲು, ದಿನ ಬಳಕೆ ವಸ್ತುಗಳು, ಒರಳು, ಗುಂಡು ಸೇರಿ ಇತರೆ ಮಹತ್ವದ ವಸ್ತುಗಳು ಪತ್ತೆಯಾಗಿವೆ, ಎಂದು ತಿಳಿಸಿದ್ದಾರೆ.

ತೆಕ್ಕಲಕೋಟೆಯ ಈ ನೆಲೆಗಳು ಬಹು ವೈಶಿಷ್ಟ್ಯ ಪೂರ್ಣವಾಗಿದ್ದು, ಇಲ್ಲಿ ಪ್ರಾಗೈತಿಹಾಸಿಕ ಕಾಲದ ಶಿಲಾಯುಗ, ನವ ಶಿಲಾಯುಗ ಹಾಗೂ ಲೋಹಯುಗದ ಕುರುಹುಗಳು ಯಥೇಚ್ಚವಾಗಿ ಕಾಣಸಿಗುತ್ತವೆ. ಇದರಿಂದಾಗಿ ಸುಮಾರು 3,500 ರಿಂದ 5,000 ವರ್ಷಗಳ ಹಿಂದಿನ ಚರಿತ್ರೆ ಬಗೆಗೆ ತಿಳಿದು ಬರುತ್ತದೆ. ಅಲ್ಲದೆ ಇಲ್ಲಿ ವಿವಿಧ ವಿನ್ಯಾಸದ ಮಡಕೆಗಳು, ಪ್ರಾಣಿಗಳ ಎಲುಬುಗಳು, ಶಿಲಾಯುಧಗಳ ಅವಶೇಷಗಳು ಲಭಿಸಿವೆ.

ನವಶಿಲಾಯುಗ ಸಂಸ್ಕೃತಿಯ ಶಿಲಾಯುಧ ಕಾರ್ಖಾನೆಯಾಗಿದ್ದ ಇಲ್ಲಿನ ನೆಲೆಗಳು ಅಧ್ಯಯನಾಸಕ್ತರಿಗೆ ಸೂಕ್ತ ಸ್ಥಳವಾಗಿದೆ ಎಂದು ನಮಿತಾ ಅಭಿಪ್ರಾಯ ಪಡುತ್ತಾರೆ. ಗ್ರೀಸ್ ವಿಶ್ವವಿದ್ಯಾಲಯದ ಜೈವಿಕ ತಂತ್ರಜ್ಞೆ ಸುಸೇನ್ ಕ್ರಿಕ್ ಪ್ಯಾಟ್ರಿಕ್ ಸ್ಮಿತ್ ಅವರು ಪಳಿಯುಳಿಕೆ ಸಂರಕ್ಷಣೆ ಹಾಗೂ ಅದರ ಕಾಲಮಾನ ಅಧ್ಯಯನ ಹಾಗೂ ಮಡಕೆಗಳು ಚೂರಾಗಿದ್ದರೂ ಅವುಗಳ ಸಂರಕ್ಷಣೆ ಕುರಿತು ಸಲಹೆ, ಮಾರ್ಗದರ್ಶನ ನೀಡುತ್ತಿದ್ದಾರೆ. 2 ರಿಂದ 2.5 ಅಡಿ ಎತ್ತರದ ಒಂದು ಅಡಿ ವ್ಯಾಸದ ಮಡಕೆಗಳು ದೊರೆತಿದ್ದು, ಇವುಗಳಲ್ಲಿ ಮೂಳೆಗಳು ಕಂಡು ಬಂದಿವೆ. ಈ ಮಡಕೆಗಳು ವಿವಿಧ ಗಾತ್ರ, ಅಲ್ಲದೆ ವಿವಿಧ ವಿನ್ಯಾಸ ಹೊಂದಿದ್ದು, ಶವಸಂಸ್ಕಾರಕ್ಕೆ ಇವುಗಳನ್ನು ಬಳಸಿರುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ. ಉತ್ಖನನ ತಂಡದಲ್ಲಿ ಐಐಟಿ ಕಾನ್ಪುರದ ಡಾ.ಯಶಸ್ವಿನಿ ಜಯದೇವಯ್ಯ, ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ಸಂಶೋಧನಾರ್ಥಿ ಜಿ.ರೋಹಿಣಿ ಹಾಗೂ ಅಶೋಕ ಅಬಕಾರಿ ಭಾಗವಹಿಸಿದ್ದಾರೆ. ತೆಕ್ಕಲಕೋಟೆ ಪಟ್ಟಣದ ಹಲವು ಸ್ಥಳಗಳಲ್ಲಿಉತ್ಖನನ ಹಾಗೂ ಸಂಶೋಧನೆ ನಡೆಯುತ್ತಿದೆ. ಈ ಭಾಗದಲ್ಲಿ ನವಶಿಲಾಯುಗದ ಜನರ ಕುರುಹುಗಳು, ಅವರ ನಿತ್ಯ ಬಳಕೆಗೆ ಬಳಸುತ್ತಿದ್ದ ಮಾನವನ ಅಸ್ಥಿಪಂಜರ, ಚೂಪಾದ ಕಲ್ಲಿನ ಆಯುಧಗಳು, ಕೈ ಕೊಡಲಿ, ಪ್ರಾಣಿಗಳ ಹಲ್ಲು, ದಿನ ಬಳಕೆ ವಸ್ತುಗಳು, ಒರಳು, ಗುಂಡು ಸೇರಿ ಇತರೆ ಮಹತ್ವದ ವಸ್ತುಗಳು ಪತ್ತೆಯಾಗಿವೆ ಎಂದಿದ್ದಾರೆ ನಮಿತಾ ಎಸ್.ಸುಗಂಧಿ ಪ್ರಾಧ್ಯಾಪಕಿ, ಹಾರ್ಟ್ ವಿಕ್ ವಿಶ್ವವಿದ್ಯಾಲಯ.

- **ಈ ಭಾಗದಲ್ಲಿ ನವಶಿಲಾಯುಗದ ಜನರ ಕುರುಹುಗಳು, ಅವರ ನಿತ್ಯ ಬಳಕೆಗೆ ಬಳಸುತ್ತಿದ್ದ ಚೂಪಾದ ಕಲ್ಲಿನ ಆಯುಧಗಳು, ಕೈ ಕೊಡಲಿ, ಪ್ರಾಣಿಗಳ ಹಲ್ಲು , ದಿನ ಬಳಕೆ ವಸ್ತುಗಳು, ಒರಳು, ಗುಂಡು ಸೇರಿ ಇತರೆ ಮಹತ್ವದ ವಸ್ತುಗಳು ಪತ್ತೆಯಾಗಿವೆ.**
- **ಪ್ರಾಗೈತಿಹಾಸಿಕ ಕಾಲದ ಶಿಲಾಯುಗ, ನವ ಶಿಲಾಯುಗ ಹಾಗೂ ಲೋಹಯುಗದ ಕುರುಹುಗಳು ಯಥೇಚ್ಚವಾಗಿ ಕಾಣಸಿಗುತ್ತವೆ.**


ಉದಯವಾಹಿನಿ ಚಿತ್ರ

**ಹಲವು ಸ್ಥಳಗಳಲ್ಲಿ ಉತ್ಖನನ**

### ಕುರುಹು ಪತ್ತೆ

**ಉತ್ಖನನದ ಸಂದರ್ಭದಲ್ಲಿ ಸುಮಾರು 3.5 ರಿಂದ 5 ಸಾವಿರ ವರ್ಷಗಳ ಹಿಂದಿನ ಮಾನವನ ಶರೀರದ ಪಳಿಯುಳಿಕೆ ಪತ್ತೆಯಾಗಿದೆ. ಇವರ ಶವ ಸಂಸ್ಕಾರವು ವಿಶಿಷ್ಟವಾಗಿದೆ. ಇಲ್ಲಿನ ಮಾನವ ದೇಹದ ಮೇಲೆ ಕಲ್ಲುಗಳನ್ನು ಇಟ್ಟು ಶವ ಸಂಸ್ಕಾರ ಮಾಡುತ್ತಿದ್ದರು ಎಂದು ತಿಳಿದು ಬರುತ್ತದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.**

## ಬಾಲ ಕಾರ್ಮಿಕ ಪ್ರಕರಣ ಗಂಭೀರವಾಗಿ ಪರಿಗಣಿಸಿ

• ಉದಯವಾಹಿನಿ ವಿಜಯಪುರ

ಬಾಲ ಕಾರ್ಮಿಕ ಪದ್ಧತಿ ನಿಷೇಧ ಕಾನೂನು ಕುರಿತಾಗಿ ವ್ಯಾಪಕ ಜಾಗೃತಿ ಮೂಡಿಸಲು ಬೇಕರಿ, ಇಟ್ಟಂಗಿ ಭಟ್ಟಿ, ಹೊಟೇಲ, ಧಾಬಾ ಸೇರಿದಂತೆ ವಿವಿಧ ಕಡೆಗಳಲ್ಲಿ ಕಾಯ್ದೆಯ ಕುರಿತ ಎಲ್ಲರಿಗೂ ಕಾಣುವ ಹಾಗೆ ಮಾಹಿತಿ ಫಲಕ ಅಳವಡಿಸಿಕೊಳ್ಳಲು ಮಾಲೀಕರಿಗೆ ಅಗತ್ಯ ತಿಳಿವಳಿಕೆ ನೀಡುವಂತೆ ಸೂಚಿಸಿದ ಅವರು, ಬಾಲ ಕಾರ್ಮಿಕ ಪ್ರಕರಣವನ್ನು ಅತ್ಯಂತ ಗಂಭಿರವಾಗಿ ಪರಿಗಣಿಸುವಂತೆಯೂ ಇನ್ನಷ್ಟು ಕ್ರಿಯಾಶೀಲವಾಗಿ ಎಲ್ಲಾ ಇಲಾಖಾ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ, ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪ್ರಕರಣಗಳು ಆಗದಂತೆ ನಿಗಾವಹಿಸಬೇಕು ಎಂದು ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಡಾ.ಆನಂದ ಕೆ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು. ಜಿಲ್ಲೆಯಲ್ಲಿ ಈಗಾಗಲೇ ಪತ್ತೆ ಆಗಿರುವ ಬಾಲ ಕಾರ್ಮಿಕ ಪ್ರಕರಣ ಮಾಹಿತಿ, ವ್ಯಾಸಂಗ ಮಾಡುತ್ತಿರುವ ಶಾಲಾ ವಿವರ ಕುರಿತ ವಿಸ್ತೃತ ವರದಿಯನ್ನು ಕ್ರೋಢಿಕರಿಸಿ ಶೀಘ್ರ ಸಲ್ಲಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳ ವರದಿ ನೀಡಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳು ಕಂಡು ಬಂದಲ್ಲಿ, ಮಕ್ಕಳ ಬಗ್ಗೆ ಪರಿಶೀಲನೆ ಮಾಡಿ, ಅವರನ್ನು ಶಾಲೆಗೆ ಕಳುಹಿಸುವಂತೆ ಪಾಲಕರಿಗೆ ತಿಳಿವಳಿಕೆ ನೀಡಬೇಕು.

ಶಾಲಾ ಮುಖ್ಯೋಪಾಧ್ಯಾಯರು ಒಂದು ವಾರಕ್ಕಿಂತ ಹೆಚ್ಚು ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ತೀವ್ರ ನಿಗಾವಹಿಸಿ, ಖುದ್ದು ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕು. ಮಕ್ಕಳ ಬಾಲ್ಯ ಸುಂದರಗೊಂಡು ಅವರ ಜೀವನ ಉಜ್ವಲವಾಗುವ ನಿಟ್ಟಿನಲ್ಲಿ ಬಾಲ್ಯ ವಿವಾಹ ಹಾಗೂ ಬಾಲಕಾರ್ಮಿಕ ಪದ್ಧತಿ ತಡೆಗೆ ಮುತುವರ್ಜಿ ವಹಿಸಿ ಕಾರ್ಯ ನಿರ್ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಪಾಲಕರ ರಕ್ಷಣೆಯಲ್ಲಿದ್ದರೆ ಆ ಮಗು ಮತ್ತೆ ಬಾಲ ಕಾರ್ಮಿಕರಾಗದೇ ಇರುವ ಬಗ್ಗೆ ಖಚಿತಪಡಿಸಿ, ನಿಖರ ಮಾಹಿತಿ ಒದಗಿಸಬೇಕು. ಉತ್ತಮ ಶಿಕ್ಷಣ ಪಡೆದುಕೊಳ್ಳುವುದನ್ನು ಖಚಿತಪಡಿಸಿಕೊಳ್ಳಬೇಕು. ಅಂಥ ಮಗು ಶಾಲೆಯಿಂದ ಹೊರಗುಳಿಯದಂತೆ ಎಲ್ಲಾ ಮುಖ್ಯೋಪಾಧ್ಯಾಯರಿಗೆ ಮನವರಿಕೆ ಮಾಡಿಕೊಡಬೇಕು.

ವಿವಿಧ ಇಲಾಖೆಯ ನೆರವು ಪಡೆದುಕೊಂಡು ಹೋಟೆಲ್, ಇಟ್ಟಂಗಿ ಭಟ್ಟಿಗಳಲ್ಲಿ ನಿರಂತರವಾಗಿ ಪರಿಶೀಲನೆ ಮಾಡಬೇಕು. ಬಾಲಕಾರ್ಮಿಕರನ್ನು ನೇಮಿಸಿಕೊಂಡಲ್ಲಿ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಲು ಕ್ರಮ ವಹಿಸುವಂತೆ ಅವರು ಸೂಚಿಸಿದರು.

ಜಿಲ್ಲೆಯಲ್ಲಿರುವ ಬಾಲಕಾರ್ಮಿಕರ ರಕ್ಷಣೆಗೆ ನಿಯಮಿತವಾಗಿ ಸಂಬಂಧಿಸಿದ ಇಲಾಖೆಗಳ ತಂಡಗಳನ್ನು ರಚಿಸಿಕೊಂಡು ಪ್ರತಿ ತಿಂಗಳು ತಾಲ್ಲೂಕಾ ಮಟ್ಟದಲ್ಲಿ ತಹಶೀಲ್ದಾರ ಅವರ ನೇತೃತ್ವದಲ್ಲಿ ನಿಯಮಾನುಸಾರ ನೇಮಕಗೊಂಡ ಎಲ್ಲಾ ಇಲಾಖೆಯ ಅಧಿಕಾರಿಗಳು ಅನಿರೀಕ್ಷಿತ ದಾಳಿ ಮಾಡಿ ರಕ್ಷಣೆ ಮಾಡಬೇಕು.

ಅದರಲ್ಲೂ ತಾಲ್ಲೂಕ ಮಟ್ಟದ ಕಾರ್ಯಪಡೆ ಸಭೆಯನ್ನು ಕಾಲ-ಕಾಲಕ್ಕೆ ನಡೆಸಬೇಕು.ರಕ್ಷಣೆ ಮಾಡಿದ ಬಾಲ ಕಾರ್ಮಿಕರ ಪುನರ್ ವಸತಿಗಾಗಿ 20,000 ರೂ. ಮಾಲೀಕರಿಂದ ಪಡೆದು, ಸ್ಥಿರ ಠೇವಣಿ ಇರಿಸಿ, 18 ವರ್ಷದ ನಂತರ ಹಣ ಹಿಂದಿರುಗಿಸಲು ಕ್ರಮ ವಹಿಸಬೇಕು.ಮಕ್ಕಳಿಗೆ ಹಾಗೂ ಪೋಷಕರಿಗೆ ಶಿಕ್ಷಣದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಬೇಕು.


ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** – ನಿಮ್ಮ ತೂಕದ ಮೇಲೆ ಒಂದು ಕಣ್ಣಿಟ್ಟಿರಿ ಮತ್ತು ಅತಿಯಾಗಿ ತಿನ್ನಬೇಡಿ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ವೃಷಭ** – ಪತ್ನಿಯ ವ್ಯವಹಾರಗಳಲ್ಲಿ ಮೂಗು ತೂರಿಸುವುದು ಅವಳಿಗೆ ಕೋಪ ತರಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ಕೆಲಸ ನೋಡಿಕೊಳ್ಳುವುದು ಉತ್ತಮ. ಕಡಿಮೆ ಹಸ್ತಕ್ಷೇಪ ಮಾಡಿ.

**ಮಿಥುನ** – ನಿಮ್ಮ ಭಯವನ್ನು ಗುಣಪಡಿಸಲು ಇದು ಒಳ್ಳೆಯ ಸಮಯ. ಇದು ಭೌತಿಕ ಚೈತನ್ಯವನ್ನು ಕಡಿಮೆ ಮಾಡುವುದಲ್ಲದೇ ಜೀವಿತಾವಧಿಯನ್ನೂ ಕಡಿಮೆ ಮಾಡುತ್ತದೆ ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ಕರ್ಕಾಟಕ** – ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ಧಾರ್ಮಿಕ ಮತ್ತು ಶುದ್ಧ ಪ್ರೀತಿಯನ್ನು ಅನುಭವಿಸಿ.

**ಸಿಂಹ** – ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ಕನ್ಯಾ** – ನಿಮ್ಮ ಉತ್ತಮ ಆರೋಗ್ಯದ ಸಲುವಾಗಿ ದೀರ್ಘ ನಡಿಗೆಗೆ ಹೋಗಿ. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು.

**ತುಲಾ** – ನಿಮ್ಮ ಭರವಸೆ ಒಂದು ಸಮೃದ್ಧ ಸೂಕ್ಷ್ಮ ಪರಿಮಳಯುಕ್ತ, ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ – ಆದರೆ ಅದೇ ಸಮಯದಲ್ಲಿ ಖರ್ಚೂ ತುಂಬಾ ಹೆಚ್ಚಾಗುತ್ತದೆ.

**ವೃಶ್ಚಿಕ** – ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ, ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು.

**ಧನಸ್ಸು** – ಮದ್ಯಪಾನ ಮಾಡಿದಲ್ಲಿ ಅದು ನಿಮ್ಮ ನಿದ್ರೆಗೆ ಭಂಗ ತಂದು ಆಳವಾದ ವಿಶ್ರಾಂತಿ ತೆಗೆದುಕೊಳ್ಳುವುದನ್ನು ತಡೆಗಟ್ಟಬಹುದಾದ್ದರಿಂದ ಹಾಗೆ ಮಾಡಬೇಡಿ. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ.

**ಮಕರ** – ಪ್ರಕೃತಿಯು ನಿಮ್ಮಲ್ಲಿ ಗಮನಾರ್ಹ ವಿಶ್ವಾಸ, ಬುದ್ಧಿವಂತಿಕೆಯನ್ನಿರಿಸಿದೆ – ಅದನ್ನು ಸಾಧ್ಯವಾದಷ್ಟೂ ಬಳಸಿಕೊಳ್ಳಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ಕುಂಭ** – ಈ ರಾಶಿಚಕ್ರದ ವಿದ್ಯಾರ್ಥಿಗಳು ಇಂದು ಅಧ್ಯಯನದಲ್ಲಿ ಮನಸ್ಸನ್ನು ಹೊಂದಲು ತೊಂದರೆಗಳು ಬರಬಹುದು. ಇಂದು ನೀವು ನಿಮ್ಮ ಅಮೂಲ್ಯ ಸಮಯವನ್ನು ಸ್ನೇಹಿತರೊಂದಿಗೆ ವ್ಯರ್ಥ ಮಾಡಬಹುದು.

**ಮೀನ** – ಮಕ್ಕಳು ಕ್ರೀಡೆ ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಹೆಚ್ಚು ಸಮಯ ಕಳೆಯುತ್ತಾರೆ. ವೈಯಕ್ತಿಕ ಸಂಬಂಧಗಳು ಸೂಕ್ಷ್ಮ ಹಾಗೂ ಸಂವೇದನಾಶೀಲವಾಗಿವೆ.

### ರಾಜ್ಯ ಸರ್ಕಾರ ನೀತಿಗಳನ್ನು ಕರ್ನಾಟಕದಲ್ಲಿ ಜಾರಿಗೊಳಿಸುವುದಿಲ್ಲ ಎಂದು ಸ್ಪಷ್ಟವಾಗಿ ಘೋಷಿಸಬೇಕೆಂದು ಒತ್ತಾಯ

# ಕಾರ್ಮಿಕರ 4 ಕಾಯ್ದೆಯನ್ನು ರದ್ದುಗೊಳಿಸಬೇಕೆಂದು ಮುಷ್ಕರ

• ಉದಯವಾಹಿನಿ ವಿಜಯಪುರ

ವ್ಯಾಪಾರದ ಸರಳೀಕರಣಗೊಳಿಸಲು, ಯೂನಿಯನ್ ಮುಕ್ತ ವಾತಾವರಣ ನಿರ್ಮಿಸಲಿಕ್ಕಾಗಿ, 29 ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿ 4 ಕಾರ್ಮಿಕ ಸಂಹಿತೆಗಳನ್ನು ಜಾರಿ ಮಾಡಿರುವುದು ಕೇವಲ ಆರ್ಥಿಕ ದಾಳಿ ಮಾತ್ರವಲ್ಲದೆ ರಾಜಕೀಯ ದಾಳಿಯೂ ಆಗಿದೆ. ಕಾರ್ಖಾನೆಗಳ ವ್ಯಾಖ್ಯಾನದಲ್ಲಿ ಕಾರ್ಮಿಕರ ಮಿತಿ ಹೆಚ್ಚಳದಿಂದ, ಗುತ್ತಿಗೆ ಕಾರ್ಮಿಕರ ಲೈಸೆನ್ಸ್ ಗಳಿಗೆ ಕಾರ್ಮಿಕರ ಮಿತಿ ಹೆಚ್ಚಳದಿಂದಾಗಿ ಶೇ. 90 ಕಾರ್ಮಿಕರಿಗೆ ವೇತನ, ಇಎಸ್ ಐ, ಪಿಎಫ್, ಗ್ರ್ಯಾಚ್ಯುಟಿ ಮತ್ತು ಬೋನಸ್ ಹಕ್ಕುಗಳಿಂದ ಹೊರಗುಳಿಯುತ್ತಾರೆ ಎಂದು ಸಿಐಟಿಯು ಜಿಲ್ಲಾ ಸಂಚಾಲಕ ಲಕ್ಷ್ಮಣ ಹಂದ್ರಾಳ ಹೇಳಿದರು.

ನಗರದ ಎಪಿಎಂಸಿಯಲ್ಲಿ ಪ್ರಾಂತ ರೈತ ಸಂಘದ ಕಚೇರಿಯಲ್ಲಿ ಹಮ್ಮಿಕೊಂಡ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೀವನೋಪಾಯ ವೇತನದ ಜಾರಿಯ ಪ್ರಸ್ತಾಪವಿಲ್ಲ. ಕನಿಷ್ಠ ವೇತನ ಅಥವಾ ರಾಷ್ಟ್ರೀಯ ಸರಾಸರಿ ವೇತನದ ಖಾತ್ರಿಯ ಬದಲಿಗೆ ತಳಹಂತದ 178 ರೂ. ಕೂಲಿಯನ್ನು ಹೊಸದಾಗಿ ಪರಿಷ್ಕರಿಸಲಾಗಿದೆ.

ಇನ್ನು ಯಾವುದೇ ವಲಯದ ವೇತನಗಳ ಹೆಚ್ಚಳಕ್ಕೆ ಆಧಾರವಿಲ್ಲದಂತೆ ಮಾಡಲಾಗಿದೆ. ಈಗಾಗಲೇ ಮಾಲೀಕರ ಹೆಚ್ಚುವರಿ ಮೌಲ್ಯ ಶೇ.23.39 ರಿಂದ 51.01 ರವರೆಗೆ ಹೆಚ್ಚಳವಾಗಿದೆ. ಕಾರ್ಮಿಕರ ವೇತನದ ಪಾಲು ಶೇ. 30.27 ರಿಂದ ಶೇ.15.97ರವರೆಗೆ ಇಳಿದಿದೆ. ಕಾರ್ಮಿಕರಿಂದ ಪ್ರಾಥಮಿಕವಾಗಿ ಸಂಘ ರಚಿಸಿಕೊಳ್ಳುವ ಹಕ್ಕುಗಳನ್ನು ನಿರ್ಬಂಧಿಸಲಾಗಿದೆ. ಸಹಜವಾಗಿ ಚುನಾಯಿಸಲ್ಪಟ್ಟ ಸಂಘದೊಂದಿಗೆ ಕುಂದುಕೊರತೆಗಳ ಸಮಿತಿಯನ್ನು ಮಾಡುವ ಮುಖಾಂತರ ಸಾಮೂಹಿಕ ಚೌಕಾಸಿಯನ್ನು ಶಕ್ತಿಯನ್ನು ಕಡಿಮೆ ಮಾಡಲಾಗಿದೆ. ಮಾತ್ರವಲ್ಲದೆ ಹಕ್ಕೊತ್ತಾಯಗಳು ಈಡೇರದೇ ಇದ್ದಾಗ ಮಾಡುತ್ತಿದ್ದ ಮುಷ್ಕರವನ್ನು ಮಾಡಿದರೆ ಅದಕ್ಕೆ ದಂಡ, ಜೈಲು, ಮತ್ತು ಅನಿರ್ದಿಷ್ಟ ವೇತನ ಕಡಿತ ಮಾಡಲಾಗುತ್ತದೆ. 300 ಕ್ಕಿಂತ ಹೆಚ್ಚು ಕಾರ್ಮಿಕರಿರುವ ಕಾರ್ಖಾನೆಗಳು ಮಾತ್ರವೇ ಸ್ಥಾಯಿ ಆದೇಶಗಳಿರುತ್ತವೆ. 300 ರೂ.ಗಳಿಗೆ ಕಾರ್ಮಿಕರಿರುವ ಕಾರ್ಖಾನೆಗಳು ಯಾವಾಗ ಬೇಕಾದರೂ ಮುಚ್ಚಿಕೊಂಡು ಹೋಗಲು ಅನುಮತಿಕೊಡಲಾಗಿದೆ.

ಈ ರೀತಿಯಾಗಿ ಬಂಡವಾಳಗಾರರ ಹಿತಕಾಯಲು ಮತ್ತು ಬಂಡವಾಳಗಾರರ ಸಂಪತ್ತನ್ನು ರಕ್ಷಿಸಲು ಪ್ರಭುತ್ವಗಳು ಟೊಂಕಕಟ್ಟಿ ಅನುವು ಮಾಡಿಕೊಟ್ಟಿದ್ದಾರೆ, ನುಡಿದಂತೆ ನಡೆಯುತ್ತಿವೆ ಎಂದು ಹೇಳುವ ರಾಜ್ಯ ಸರ್ಕಾರ ಕೇಂದ್ರ ಸರ್ಕಾರ ತರುತ್ತಿರುವ ರೈತ ವಿರೋಧಿ, ಕಾರ್ಮಿಕ ವಿರೋಧಿ ನೀತಿಗಳನ್ನು ತಾನೂ ಮುಂದುವರೆಸುತ್ತಿದೆ.

ರಾಜ್ಯ ಸರ್ಕಾರ ನೀತಿಗಳನ್ನು ಕರ್ನಾಟಕದಲ್ಲಿ ಜಾರಿಗೊಳಿಸುವುದಿಲ್ಲ ಎಂದು ಸ್ಪಷ್ಟವಾಗಿ ಘೋಷಿಸಬೇಕೆಂದು ನಾವು ಒತ್ತಾಯಿಸುತ್ತಿದ್ದೇವೆ ಎಂದರು.

ಫೆ. 12 ರಂದು ಸ್ವತಂತ್ರ ಕಾರ್ಮಿಕ ಸಂಘಗಳು ಎಲ್ಲಾ ರೈತ ಸಂಘಗಳು, ಕೂಲಿಕಾರ ಸಂಘಟನೆಗಳ, ದಲಿತ ಸಂಘಟನೆಗಳು, ಮಹಿಳಾ ಸಂಘಟನೆಗಳು ಮತ್ತು ವಿದ್ಯಾರ್ಥಿಯುವಜನ ಸಂಘಟನೆಗಳು ಸೇರಿ ಮುಷ್ಕರವನ್ನು ರಾಷ್ಟ್ರವ್ಯಾಪಿ ನಡೆಸಲಾಗುತ್ತಿದೆ ಅಂದು ಎಲ್ಲಾ ವಿಭಾಗದ ಜನತೆ ತಮ್ಮ ಪ್ರತಿಭಟನೆಯನ್ನು ವ್ಯಕ್ತಪಡಿಸಬೇಕೆಂದು ಎಂದರು.


ಉದಯವಾಹಿನಿ ಚಿತ್ರ

> ಕಾನೂನು ರಾಜ್ಯ ಸರ್ಕಾರ ಈ ಕೋಡ್‌ಗಳಿಗೆ ನಿಯಮಾವಳಿ ರಚಿಸಬಾರದೆಂದೂ ಒತ್ತಾಯಿಸಿದರೂ ಕೂಡಾ ಕಾರ್ಮಿಕರ ಸಂಘಟನೆಗಳ ಬಳಿ ಕನಿಷ್ಠ ಚರ್ಚೆ ಮಾಡುವ ಸೌಜನ್ಯವನ್ನು ತೋರಿಸದೆ 4 ಕೋಡ್‌ಗಳಿಗೆ ಗೆಜೆಟ್ ನೋಟೀಫಿಕೇಷನ್ ತಂದು ಕಾರ್ಮಿಕರು ಉಸಿರೆತ್ತದಂತಹ ಪರಿಸ್ಥಿತಿಯನ್ನು ನಿರ್ಮಿಸುತ್ತಿದೆ. 2025 ಆಗಸ್ಟ್ ತಿಂಗಳಲ್ಲಿ ಕನಿಷ್ಠ ವೇತನದ ಮಂಡಳಿಯಿಂದ ಶಿಫಾರಸ್ಸಾದ ಕನಿಷ್ಠ ವೇತನವನ್ನು ಈಗ 1948ರ ಕನಿಷ್ಠ ವೇತನ ಕಾಯ್ದೆ ರದ್ದಾದ ಹಿನ್ನಲೆಯನ್ನು ಇಲಾಖೆಯ ಅಭಿಪ್ರಾಯ ಪಡೆಯುವುದಾಗಿ ಹಿಂಬರಹ ಕೊಡುವ ಮುಖಾಂತರ ರಾಜ್ಯದ ಅಧಿಕಾರವನ್ನು ಕಾರ್ಮಿಕರ ಹಿತಾಸಕ್ತಿ ಕಾಪಾಡಲು ಬಳಸುತ್ತಿಲ್ಲ ಎಂಬುದು ಸ್ಪಷ್ಟವಾಗಿದೆ. ನರೇಗಾ ಕಾಯ್ದೆಯಡಿಯಲ್ಲಿ ಖಾತರಿ ಪಡಿಸಲಾದ ಕೆಲಸ, ಕೆಲಸದ ಹಕ್ಕನ್ನು ಕಸಿದುಕೊಳ್ಳುವುದರ ಜೊತೆಗೆ ಗ್ರಾಮೀಣ ಶ್ರಮ ಜೀವಿಗಳ ಕೊಂಡುಕೊಳ್ಳುವ ಸಾಮರ್ಥ್ಯ ಕಡಿಮೆ ಮಾಡುವುದು ಮತ್ತು ಕೃಷಿ ಕಾರ್ಮಿಕರ ಮತ್ತು ಇತರೆ ಗ್ರಾಮೀಣ ಕಾರ್ಮಿಕರ ವೇತನವನ್ನು ನಿಗ್ರಹಿಸುತ್ತಿದೆ.
>
> –ಮಲ್ಲಿಕಾರ್ಜುನ ಎಚ್.ಟಿ., ಎಐಯುಟಿಯುಸಿ ಜಿಲ್ಲಾಧ್ಯಕ್ಷ

> ಲೇಬರ್ ಕೋಡ್ ರದ್ದುಗೊಳಿಸಿ. ನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸಿ, ವಿ.ಜಿಗ್ರಾಮ್ ಜಿ ಕಾಯ್ದೆ ರದ್ದುಗೊಳಿಸಿ. ಭೂ ಸ್ವಾಧೀನಕಾಯ್ದೆಯನ್ನು ಹಿಂಪಡೆಯಲು ಒತ್ತಾಯಿಸಿ. ಕೇಂದ್ರ ಮತ್ತುರಾಜ್ಯ ಸರ್ಕಾರಗಳು ತಂದಿರುವ ಭೂಸುಧಾರಣಾ, ಜಾನುವಾರು ಸಂರಕ್ಷಣಾ ತಿದ್ದುಪಡಿ ಕಾಯ್ದೆಗಳನ್ನು ಹಿಂಪಡೆಯಬೇಕು. ವಿದ್ಯುಚ್ಛಕ್ತಿ ಖಾಸಗೀಕರಣ ಬೇಡ, ಬೀಜ ಮಸೂದೆ ಕಾಯ್ದೆಯನ್ನು ಹಿಂಪಡೆಯಬೇಕು. ವಿಮಾ ತಿದ್ದುಪಡಿ ಕಾಯ್ದೆ, ಸೇರಿದಂತೆ ಕಾಯ್ದೆಗಳನ್ನು ರದ್ದುಗೊಳಿಸಬೇಕೆಂದು ಒತ್ತಾಯಿಸಿ ಫೆ. 12 ರಂದು ಬೆಳಿಗ್ಗೆ 11-30 ಗಂಟೆಗೆ ಶ್ರೀ ಸಿದ್ಧೇಶ್ವರ ದೇವಸ್ಥಾನದಿಂದ ಮೆರವಣಿಗೆ ಆರಂಭಗೊಂಡು ಡಾ.ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ರಾಜ್ಯ ಸರ್ಕಾರ ನೌಕರರು ಹಾಗೂ ನಿವೃತ್ತಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು.
>
> –ಸುರೇಶ ಜೀಬಿ, ಸಿಐಟಿಯು ಜಿಲ್ಲಾ ಸಹ ಸಂಚಾಲಕ

**ಆರ್ಥಿಕ ದಾಳಿ ಮಾತ್ರವಲ್ಲದೆ ರಾಜಕೀಯ ದಾಳಿಯೂ ಆಗಿದೆ**

## ಸೌಲಭ್ಯ ವಂಚಿತವಾದ ಪುನರ್ವಸತಿ ಕೇಂದ್ರಗಳು ಸಂತ್ರಸ್ಥರು ಅತಂತ್ರ

• ಉದಯವಾಹಿನಿ ಜಮಖಂಡಿ

ಕೃಷ್ಣಾ ನದಿಗೆ ಅಡ್ಡಲಾಗಿ ಆಲಮಟ್ಟಿಯಲ್ಲಿ ಜಲಾಶಯ ನಿರ್ಮಾಣದಿಂದ ಅವಳಿ ಜಿಲ್ಲೆಯ ಜನತೆ ಒಂದಿಲ್ಲೊಂದು ತೊಂದರೆಯನ್ನು ಅನುಭವಿಸುತ್ತಲೇ ಬಂದಿದ್ದಾರೆ. ಅದರ ಜೊತೆಗೆ ಸಂತ್ರಸ್ಥರಿಗಾಗಿ ನಿರ್ಮಿಸಿದ ಪುನರ್ವಸತಿ ಕೇಂದ್ರಗಳು ಸೌಲಭ್ಯವಂಚಿತವಗಿವೆ ಆದ್ದರಿಂದ ಸಂತ್ರಸ್ಥರು ಅತಂತ್ರಸ್ಥಿಯಲ್ಲಿದ್ದಾರೆ.

ಈ ಜಲಾಶಯವು ಬಾಗಲಕೋಟೆ ಜಿಲ್ಲೆಗೆ ವರದಾನವಾಗುವ ಬದಲು ಶಾಪವಾಗಿ ಪರಿಣಮಿಸಿದೆ. ಈ ಯೋಜನೆಯಲ್ಲಿ ಒಟ್ಟು ಸುಮಾರು 200 ಗ್ರಾಮಗಳು ಅದರಲ್ಲಿ ಮೊದಲು ಹಂತದಲ್ಲಿಯೇ 178 ಕ್ಕೂ ಅಧೀಕ ಗ್ರಾಮಗಳು ಮುಳುಗಡೆಯಾದರೆ ಎರಡನೇ ಹಂತದಲ್ಲಿ 22 ಕ್ಕೂ ಅಧಿಕ ಗ್ರಾಮಗಳು ಮುಳುಗಡೆ ಭಾಗ್ಯವನ್ನು ಹೊಂದಿವೆ.

ಈ ಯೋಜನೆ ಪೂರ್ಣಗೊಳ್ಳಬೇಕಾದರೆ ಪುನರ್ವಸತಿ ಕೇಂದ್ರಗಳು ನಿರ್ಮಾಣವೇನೋ ಮಾಡಿದರು, ಆದರೆ ನಿರ್ವಹಣೆ ಮಾತ್ರ ಶೂನ್ಯವಾಗಿ ಸೌಲಭ್ಯ ವಂಚಿತವಾಗಿ ಮೂಲಭೂತ ಸೌಕರ್ಯಗಳಿಲ್ಲದೇ ತೆರೆದು ನಿಂತಿವೆ.

ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ನಿರ್ಮಾಣವಾದ ಪುನರ್ವಸತಿ ಕೇಂದ್ರಗಳನ್ನು, 2016 ರಲ್ಲಿ ಸರ್ಕಾರವು ಕೃಷ್ಣಾ ಮೇಲ್ದಂಡೆ ಯೋಜನೆ ನಿಗಮದಿಂದ ಇದ್ದ ಸ್ಥಿತಿಯಲ್ಲಿ ಎಲ್ಲಾ ಗ್ರಾಮ ಪಂಚಾಯತಿಗೆ ಹಸ್ತಾಂತರ ಮಾಡಲು ಆದೇಶಮಾಡಿತ್ತು. ಕಳೆದ ಆರು ವರ್ಷದಿಂದ ಯಾವುದೆ ಮೂಲಭೂತ ಸೌಕರ್ಯ ಕಲ್ಪಿಸುವಲ್ಲಿ ಗ್ರಾಮ ಪಂಚಾಯತಿಗಳು ವಿಫಲವಾದಂತೆ ಕಾಣುತ್ತಿವೆ

ಪುನರ್ವಸತಿ ಕೇಂದ್ರಗಳಲ್ಲಿ ಶಾಲೆಗಳ, ಪಂಚಾಯತಿ ಕಚೇರಿ, ಆರೋಗ್ಯ ಕೇಂದ್ರ, ಅದರ ಜೊತೆಗೆ ಅಧಿಕಾರಿಗಳ ವಸತಿ ಸಮುಚ್ಚಯಗಳೂ ಸಹ ಇವೆ ಅದರೆ ಅವುಗಳು ಯಾವುದಕ್ಕೂ ಉಪಯೋಗಕ್ಕೆ ಬಾರದಾಗಿವೆ ಅವೆಲ್ಲ ಅನೈತಿಕ ತಾಣಗಳಾಗವೆ. ಪುನರ್ವಸತಿ ಕೇಂದ್ರಗಳಲ್ಲಿ ಯಾವುದೇ ತರಹದ ಮೂಲಭೂತ ಸೌಕರ್ಯ ವಿಲ್ಲದೇ ಗ್ರಾಮಸ್ತರು ಅಲ್ಲಿಗೆ ಹೋಗುತ್ತಿಲ್ಲ ಜನತೆ ಪುನರ್ವಸತಿ ಕೇಂದ್ರಗಳಿಗೆ ಬರುತ್ತಿಲ್ಲವೆಂದು ಸರಕಾರ ಸೌಕರ್ಯ ನೀಡುತ್ತಿಲ್ಲ ಒಟ್ಟರೆಯಾಗಿ ಎಲ್ಲವೂ ಅಯೋಮಯವಾಗಿ ಸಂತ್ರಸ್ತರ ಬದುಕು ಬೀದಿಗೆ ನಿಂತಿದೆ. ಆದರೆ ಆಯಾ ಗ್ರಾಮಗಳಿಂದ ಬಹುದೂರವಾಗಿದ್ದು ರೈತರು ತಮ್ಮ ಜಮೀನುಗಳಿಗೆ ಹೋಗಿ ಬರಲು ತೊಂದರೆಯಾಗುತ್ತಿದೆಯೆಂದು ಸಂತ್ರಸ್ಥರು ಕೇಂದ್ರಗಳಿಗೆ ಹೋಗಲು ನಿರಾಕರಿಸುತ್ತಾರೆ,

2002ರಲ್ಲಿ ನಿರ್ಮಿಸಿದ ಪುಕೆಗಳು ಇಲ್ಲಿಯವರಗೆ ಯಾವುದೆ ದುರಸ್ಥಿಯನ್ನೂ ಸಹ ಕಂಡಿಲ್ಲ ಇದ್ದ ರಸ್ತೆಗಳು ಚರಂಡಿಗಳು ಸಂಪೂರ್ಣವಾಗಿ ಹಾಳಾಗಿವೆ ಅವುಗಳನ್ನು ಮತ್ತೇ ಪುನರನಿರ್ಮಾಣ ಮಾಡಬೇಕು.

ಆದರೆ ಸರಕಾರವೇನೋ 3ನೇ ಹಂತದಲ್ಲಯೂ ಸಹ ಪುಕೆಗಳನ್ನು ನಿರ್ಮಿಸಿದರೆ ಹಿಂದೆ ನಿರ್ಮಿಸಿದ ಪುಕೆಗಳ ಸ್ಥಿತಿಗಳನ್ನು ಅವಲೋಕಿಸುವವರು ಯಾರು ಅದರ ಪುನರ್ಜನ್ಮಯಾವಾಗ ಎನ್ನುವುದೆ ಸಂತ್ರಸ್ಥರ ಪ್ರಶ್ನೆಯಾಗಿದೆ ಒಂದು ಮತ್ತು ಎರಡನೇ ಹಂತದಲ್ಲಿ 180 ಗ್ರಾಗಳು ಮುಳುಗಡೆಯಗಿದ್ದು ಒಟ್ಟು 74.742.15 ಹಕ್ಟೇರ ಜಮೀನು ನೀರಿನಲ್ಲಿ ಸ್ವಾಹಾಕಾರವಾಗಿದೆ.


ಉದಯವಾಹಿನಿ ಚಿತ್ರ

**ಗ್ರಾಮ ಪಂಚಾಯತಿ ವಿಫಲ**

## ಪರೀಕ್ಷಾ ಭಯ ನಿವಾರಣೆಗೆ ವಿಶೇಷ ಕ್ರಮ

• ಉದಯವಾಹಿನಿ ರಾಯಬಾಗ


ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶಿಕ್ಷಣ ಇಲಾಖೆ ವಿಶೇಷ ಒತ್ತು ನೀಡಿದ್ದು, ಶಿಕ್ಷಕರಿಂದ ಮನೆಭೇಟಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜಪ್ಪ ಹೇಳಿದರು. ತಾಲ್ಲೂಕಿನ ವಿವಿಧ ವಿದ್ಯಾರ್ಥಿಗಳ ಮನೆಗೆ ಭೇಟಿ ನೀಡಿ ಅವರು ಈ ಸಂದರ್ಭದಲ್ಲಿ ಮಾತನಾಡಿದರು. ವಿದ್ಯಾರ್ಥಿಗಳ ಮನೆಗಳಿಗೆ ನೇರವಾಗಿ ಭೇಟಿ ನೀಡುವುದರಿಂದ ಅವರ ಕಲಿಕಾ ಸ್ಥಿತಿ, ಕುಟುಂಬದ ಸಹಕಾರ ಹಾಗೂ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಅರಿತುಕೊಳ್ಳಲು ಸಾಧ್ಯವಾಗುತ್ತದೆ. ಮನೆಭೇಟಿಯ ಮೂಲಕ ಮಕ್ಕಳಲ್ಲಿ ಇರುವ ಪರೀಕ್ಷಾ ಭಯವನ್ನು ದೂರ ಮಾಡಿ, ಆತ್ಮವಿಶ್ವಾಸ ತುಂಬುವ ಕೆಲಸ ಮಾಡಲಾಗುತ್ತಿದೆ. ಶಿಕ್ಷಕರು ನೀಡುತ್ತಿರುವ ಮಾರ್ಗದರ್ಶನದಿಂದ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಗಳಿಸುವಂತಾಗಬೇಕು ಎಂಬುದೇ ನಮ್ಮ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು. ಪರೀಕ್ಷಾ ದೃಷ್ಟಿಯಿಂದ ಮೊಬೈಲ್-ಟಿವಿಗೆ ಸಮಯ ಮಿತಿ ವಿಧಿಸುವಂತೆ ಪಾಲಕರಿಗೆ ಬಿಇಒ ಬಸವರಾಜಪ್ಪ ಮನವಿ ಮಕ್ಕಳ ಶೈಕ್ಷಣಿಕ ಭವಿಷ್ಯ , ಮುಂಬರುವ ಪರೀಕ್ಷೆಗಳನ್ನು ಗಮನದಲ್ಲಿಟ್ಟುಕೊಂಡು, ರಾಯಬಾಗ ತಾಲ್ಲೂಕಿನಾದ್ಯಂತ ಪ್ರತಿದಿನ ಸಂಜೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಮಕ್ಕಳಿಗಾಗಿ ಮೊಬೈಲ್ ಹಾಗೂ ಟಿವಿ ಬಳಕೆಯನ್ನು ನಿಯಂತ್ರಿಸುವಂತೆ ಪಾಲಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜಪ್ಪ ಮನವಿ ಮಾಡಿದರು.

## ಗ್ರಾ ಪಂ ಮಟ್ಟದಲ್ಲಿ ನೀರಿನ ಗುಣಮಟ್ಟ ಪರೀಕ್ಷೆ ವಿಶೇಷ ಅಭಿಯಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬೀದರ್

ಜಿಲ್ಲಾ ಪಂಚಾಯಿತಿ ಬೀದರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ವತಿಯಿಂದ ಜಲ್ ಜೀವನ ಮಿಷನ್ (ಜೆಜೆಎಂ) ಹಾಗೂ ಸ್ವಚ್ಛ ಭಾರತ ಮಿಷನ್ (ಗ್ರಾ) ಸಹಯೋಗದಲ್ಲಿ,ಲಾಲ್ ಬಹದ್ದೂರ್ ಶಿಕ್ಷಣ ಸಂಸ್ಥೆ ಬೀದರ್ (ಅನುಷ್ಠಾನ ಬೆಂಬಲ ಸಂಸ್ಥೆ) ಅವರ ಸಂಯುಕ್ತ ಆಶ್ರಯದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೀರಿನ ಗುಣಮಟ್ಟ ಪರೀಕ್ಷೆ ವಿಶೇಷ ಅಭಿಯಾನ ಆರಂಭಿಸಲಾಗಿದೆ.

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಈ ಅಭಿಯಾನ ನಡೆಯುತ್ತಿದ್ದು, ಕುಡಿಯುವ ನೀರಿನ ಸುರಕ್ಷತೆ ಮತ್ತು ಆರೋಗ್ಯದ ದೃಷ್ಟಿಯಿಂದ ನೀರಿನ ಗುಣಮಟ್ಟವನ್ನು ಪರಿಶೀಲಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

ರಾಜ್ಯಾದ್ಯಂತ ಹಮ್ಮಿಕೊಳ್ಳಲಾದ ಈ ಅಭಿಯಾನವು ಫೆಬ್ರವರಿ 02-02-2026 ರಿಂದ 13-02-2026ರವರೆಗೆ ನಡೆಯಲಿದ್ದು, ಗ್ರಾಮೀಣ ನೀರು ಸರಬರಾಜು ವ್ಯವಸ್ಥೆಯಲ್ಲಿ ಬರುವ ಎಲ್ಲಾ ನೀರಿನ ಮಾದರಿಗಳನ್ನು ಪರೀಕ್ಷಿಸಲಾಗುತ್ತಿದೆ.

ನೀರಿನಲ್ಲಿ ಬ್ಯಾಕ್ಟೀರಿಯಾ ಸೇರಿದಂತೆ ವಿವಿಧ ಮಾಲಿನ್ಯಗಳ ಅಂಶಗಳಿರುವುದನ್ನು ಪತ್ತೆಹಚ್ಚುವ ಉದ್ದೇಶದಿಂದ ಈ ಪರೀಕ್ಷೆಗಳನ್ನು ಕೈಗೊಳ್ಳಲಾಗುತ್ತಿದ್ದು, ಸುರಕ್ಷಿತ ಕುಡಿಯುವ ನೀರು ಪೂರೈಕೆಗೆ ಈ ಕ್ರಮವು ಸಹಕಾರಿಯಾಗಲಿದೆ. ಅಧಿಕಾರಿಗಳು, ಪಂಚಾಯಿತಿ ಸಿಬ್ಬಂದಿ ಮತ್ತು ಗ್ರಾಮಸ್ಥರ ಸಹಭಾಗಿತ್ವದಲ್ಲಿ ಅಭಿಯಾನ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿಶ್ವನಾಥ ಸ್ವಾಮಿ ಕೊಳ್ಳೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಸಂಘಟಿತ ಕಾರ್ಮಿಕರನ್ನು ನೋಂದಣಿ ಮಾಡಿ: ಡಿಸಿ

• ಉದಯವಾಹಿನಿ ಕಾರವಾರ

ಜಿಲ್ಲೆಯಲ್ಲಿನ ಅಸಂಘಟಿತ ವಲಯದ ಕಾರ್ಮಿಕರನ್ನು ಪ್ರಧಾನ ಮಂತ್ರಿ ಮಾನ್ ಧನ್ ವಂತಿಗೆ ಆಧಾರಿತ ಪಿಂಚಣಿ ಯೋಜನೆಗೆ ನೋಂದಣಿ ಮಾಡಬೇಕು ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಹೇಳಿದರು. ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್ ಧನ್ (ಪಿಎಂ ಎಸ್‌ವೈಎಂ) ಯೋಜನೆಯ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿ ಸಭೆ ನಡೆಸಿ ಅವರು ಸೂಚನೆ ನೀಡಿದರು.

ಯೋಜನೆಯ ಕುರಿತು ಕಾರ್ಮಿಕರಲ್ಲಿ ಅರಿವು ಮೂಡಿಸಬೇಕು. ಮಾರ್ಚ್ 15ರ ವರೆಗೆ ನಡೆಯುವ ವಿಶೇಷ ನೋಂದಣಿ ಅಭಿಯಾನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸಬೇಕು' ಎಂದರು. 'ಕೃಷಿ ಕಾರ್ಮಿಕರು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕರು, ಅಕ್ಷರ ದಾಸೋಹ ಅಡುಗೆ ಸಹಾಯಕರು, ಬೀದಿ ಬದಿ ವ್ಯಾಪಾರಸ್ಥರು, ಮನರೇಗಾ ಕೂಲಿ ಕಾರ್ಮಿಕರು, ಮನೆ ಕೆಲಸದವರು, ಅಗಸರು, ಕೈಮಗ್ಗ ಕಾರ್ಮಿಕರು ಸೇರಿದಂತೆ ಅಸಂಘಟಿತ ಅರ್ಹ ಕಾರ್ಮಿಕರನ್ನು ಗುರುತಿಸುವ ಕೆಲಸ ಆಗಬೇಕು ಎಂದರು. ಜಿಲ್ಲಾ ಕಾರ್ಮಿಕ ಅಧಿಕಾರಿ ಲಲಿತಾ ಸಾತೇನಹಳ್ಳಿ ಮಾತನಾಡಿ, 18ರಿಂದ 40 ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಎ.ಎಸ್.ಸಿ ಕೇಂದ್ರಗಳಲ್ಲಿ ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪ್ರತಿ ಸಲ್ಲಿಸಿ ಯೋಜನೆಗೆ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದರು. ಕಾರ್ಮಿಕ ಅಧಿಕಾರಿ ವೀಣಾ ಮಾಸ್ತಿ, ಪೌರಾಯುಕ್ತ ಜಗದೀಶ ಹುಲಿಗಜ್ಜಿ, ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕ ಪ್ರತೀಕ ಶೆಟ್ಟಿ, ವಿವಿಧ ಕಾರ್ಮಿಕ ಸಂಘಟನೆಯ ಮುಖಂಡರು ಪಾಲ್ಗೊಂಡಿದ್ದರು.

## ವೈದ್ಯರು ರೋಗಿಗಳೊಂದಿಗೆ ಕನ್ನಡದಲ್ಲೇ ಸಂವಹನ ನಡೆಸಲಿ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

ವೈದ್ಯರು ಸ್ಥಳೀಯ ಭಾಷೆಯ ಮಹತ್ವವನ್ನು ಅರಿತು ರೋಗಿಗಳೊಂದಿಗೆ ಕನ್ನಡದಲ್ಲೇ ಸಂವಹನ ನಡೆಸಿದಾಗ ಚಿಕಿತ್ಸೆ ಹೆಚ್ಚು ಪರಿಣಾಮಕಾರಿಯಾಗುತ್ತದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ ಅಭಿಪ್ರಾಯಪಟ್ಟರು.

ನಗರದ ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಈಚೆಗೆ ಆಯೋಜಿಸಲಾಗಿದ್ದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವೈದ್ಯಕೀಯ ಸೇವೆ ಕೇವಲ ಆರ್ಥಿಕ ಲಾಭಕ್ಕಾಗಿರದೆ ಸಾರ್ವಜನಿಕ ಸೇವೆಯಾಗಬೇಕು. ಸ್ಥಳೀಯ ಭಾಷೆಯ ಅರಿವಿನೊಂದಿಗೆ ಜಾಗತಿಕ ವೈದ್ಯಕೀಯ ಜ್ಞಾನವನ್ನು ಬಳಸಿಕೊಂಡಾಗ ರೋಗ ಗುಣಪಡಿಸುವುದು ಸುಲಭವಾಗುತ್ತದೆ ಎಂದರು.

**ಕನ್ನಡ ಲಾಂಛನಕ್ಕೆ ಸೂಚನೆ:** ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ ಹಾನಗಲ್ಲ ಮಾತನಾಡಿ, ಕಾಲೇಜಿನ ನಾಮಫಲಕಗಳಲ್ಲಿ ಕನ್ನಡಕ್ಕೆ ಪ್ರಥಮ ಆದ್ಯತೆ ನೀಡಬೇಕು. ಸಂಸ್ಥೆಯ ಲಾಂಛನವು ಇಂಗ್ಲಿಷ್ ಬದಲಿಗೆ ಕನ್ನಡ ಲಿಪಿಯಲ್ಲಿರುವಂತೆ ಕ್ರಮ ಕೈಗೊಳ್ಳಬೇಕು ಡಾ. ಪುರುಷೋತ್ತಮ ಬಿಳಿಮಲೆ ಎಂದು ಸೂಚಿಸಿದರು.

**ಶೈಕ್ಷಣಿಕ ಸಾಧನೆಯಲ್ಲಿ 7ನೇ ಸ್ಥಾನ:** ಸಂಸ್ಥೆಯ ಪ್ರಗತಿ ವರದಿ ಮಂಡಿಸಿದ ನಿರ್ದೇಶಕ ಡಾ. ಬಿ.ವೈ. ಯುವರಾಜ್, ಕಾಲೇಜಿನ ಆಡಳಿತಾತ್ಮಕ ಪತ್ರ ವ್ಯವಹಾರಗಳು ಸಂಪೂರ್ಣವಾಗಿ ಕನ್ನಡದಲ್ಲೇ ನಡೆಯುತ್ತಿವೆ. ನಮ್ಮ ವಿದ್ಯಾರ್ಥಿಗಳು ರಾಜ್ಯದ ಎಲ್ಲಾ ವೈದ್ಯಕೀಯ ಕಾಲೇಜುಗಳ ಪೈಕಿ ದ್ವಿತೀಯ ಅತಿ ಹೆಚ್ಚು ಅಂಕ ಗಳಿಸಿದ್ದು, ಒಟ್ಟಾರೆ ಸಾಧನೆಯಲ್ಲಿ ಕಾಲೇಜು ರಾಜ್ಯಕ್ಕೆ 7ನೇ ಸ್ಥಾನದಲ್ಲಿದೆ, ಎಂದು ಹೆಮ್ಮೆಯಿಂದ ತಿಳಿಸಿದರು. 2026-27ನೇ ಸಾಲಿನಿಂದ ಸ್ನಾತಕೋತ್ತರ ಕೋರ್ಸ್‌ಗಳನ್ನು ಆರಂಭಿಸುವ ಯೋಜನೆಯಿದೆ ಎಂದೂ ಅವರು ಮಾಹಿತಿ ನೀಡಿದರು. ವೈದ್ಯಕೀಯ ವಿದ್ಯಾರ್ಥಿಗಳು ಮತ್ತು ಬೋಧಕರು ಕನ್ನಡದಲ್ಲಿ ವೈದ್ಯಕೀಯ ಲೇಖನ ಹಾಗೂ ಸಂಶೋಧನಾ ಬರಹಗಳನ್ನು ಬರೆಯಲು ಉತ್ತೇಜಿಸಲಾಗುವುದು. ಕಾಲೇಜಿನಲ್ಲಿ ಕನ್ನಡ ಸಂಘವನ್ನು ರಚಿಸಲಾಗಿದ್ದು, ಕನ್ನಡ ರಾಜ್ಯೋತ್ಸವ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಪ್ರಾಧಿಕಾರದ ಸದಸ್ಯ ಡಾ. ಎ.ಬಿ. ರಾಮಚಂದ್ರಪ್ಪ ಮಾತನಾಡಿ, ತಾಯಿ ಭಾಷೆಯಲ್ಲಿ ಸಂವಹನ ನಡೆಸುವುದರಿಂದ ಮಾನವೀಯ ಬಾಂಧವ್ಯ ಗಟ್ಟಿಯಾಗುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ಸಾಹಿತಿ ಪ್ರೊ. ಸಿ. ಶಿವಲಿಂಗಪ್ಪ, ಅಕಾಡೆಮಿಕ್ ರಿಜಿಸ್ಟ್ರಾರ್ ಡಾ. ಚಂದ್ರಿಕಾ ಎನ್., ಡಾ. ಮೇಘ ಜಿ.ಹೆಚ್. ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ಎಂ.ಗುರುನಾಥ್ ಸೇರಿದಂತೆ ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ದೇವಸ್ಥಾನದ ಹುಂಡಿಯನ್ನೇ ಕದ್ದ ಕಳ್ಳರು

• ಉದಯವಾಹಿನಿ ಮುನಿರಾಬಾದ್

ಸಮೀಪದ ಹೊಸಲಿಂಗಾಪುರ ಗ್ರಾಮದ ಕರುಮಾರಿಯಮ್ಮದೇವಿ ದೇವಸ್ಥಾನ ಹಾಗೂ ಕಾಳಿಕಾದೇವಿ ದೇವಸ್ಥಾನದಲ್ಲಿ ಕಳವು ನಡೆದಿದೆ. ರಾತ್ರಿ ಗ್ರಾಮದ ಕಾಳಿಕಾದೇವಿ ದೇವಸ್ಥಾನದಲ್ಲಿ ಎದುರಿನ ಗ್ರಿಲ್ಸ್ ಬೀಗ ಮುರಿದು ಒಳ ನುಗ್ಗಿದ ಕಳ್ಳರು ಹುಂಡಿಯನ್ನೇ ಕದ್ದಿದ್ದಾರೆ. ದೇವಸ್ಥಾನದ ಎದುರು ಬಲ್ಬ್ ಬಿಚ್ಚಿಟ್ಟು ದಾರಿ ಹೋಕರಿಗೆ ತಿಳಿಯದಂತೆ ಮಾಡಿದ್ದಾರೆ.

**ಕರುಮಾರಿಯಮ್ಮ ದೇವಸ್ಥಾನ:** ಗ್ರಾಮದ 3ನೇ ವಾರ್ಡ್ ತುಂಗಭದ್ರಾ ಎಡದಂಡೆ ಮುಖ್ಯಕಾಲುವೆ ಬಳಿಯಿರುವ ದೇವಸ್ಥಾನದಲ್ಲಿ ಕಳ್ಳರು ದೇವಿಯ ಕೊರಳಲ್ಲಿದ್ದ 6 ಗ್ರಾಂ ಚಿನ್ನದ ತಾಳಿ ಸರ ಹಾಗೂ ಹುಂಡಿಯಲ್ಲಿನ ನಗದು ಹಾಗೂ ಪೂಜಾ ಸಾಮಗ್ರಿಗಳನ್ನು ಕಳವು ಮಾಡಿದ್ದಾರೆ.

## ಬೆಳಗಾವಿ ಎಪಿಎಂಸಿ ಮಳಿಗೆ ಹಂಚಿಕೆ ವಿಚಾರ ಸಚಿವರ ಎದುರಲ್ಲೇ ವ್ಯಾಪಾರಿಗಳ ಜಟಾಪಟಿ

• ಉದಯವಾಹಿನಿ ಬೆಳಗಾವಿ


ಉದಯವಾಹಿನಿ ಚಿತ್ರ

ಇಲ್ಲಿನ ಎಪಿಎಂಸಿ ಪ್ರಾಂಗಣದಲ್ಲಿ ಮಳಿಗೆಗಳನ್ನು ಹಂಚಿಕೆಗೆ ಸಂಬಂಧಿಸಿ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಎದುರಲ್ಲೇ ಎಪಿಎಂಸಿ ಮತ್ತು ಜೈ ಕಿಸಾನ್ ಖಾಸಗಿ ಸಗಟು ತರಕಾರಿ ಮಾರುಕಟ್ಟೆ ವ್ಯಾಪಾರಸ್ಥರ ಮಧ್ಯೆ ಜಟಾಪಟಿ ನಡೆಯಿತು. ಸಚಿವ ಶಿವಾನಂದ ಪಾಟೀಲ ಭಾನುವಾರ ಎಪಿಎಂಸಿಗೆ ಆಗಮಿಸಿ, ವ್ಯವಸ್ಥೆ ಪರಿಶೀಲಿಸಿದರು.

ಆಗ ಸಚಿವರನ್ನು ಭೇಟಿಯಾದ ಜೈ ಕಿಸಾನ್ ಖಾಸಗಿ ತರಕಾರಿ ಮಾರುಕಟ್ಟೆ ವ್ಯಾಪಾರಿಗಳು, ನಾವು ಖಾಸಗಿ ತರಕಾರಿ ಮಾರುಕಟ್ಟೆಯಿಂದ ಎಪಿಎಂಸಿ ಪ್ರಾಂಗಣಕ್ಕೆ ಸ್ಥಳಾಂತರಗೊಂಡಿದ್ದೇವೆ. ಆದರೆ, ಇಲ್ಲಿ ನಮಗೆ ಸರಿಯಾಗಿ ಮಳಿಗೆಗಳನ್ನು ಹಂಚುತ್ತಿಲ್ಲ. ಮಾರುಕಟ್ಟೆಯಲ್ಲೂ ವ್ಯಾಪಾರಕ್ಕೆ ಅವಕಾಶ ಕೊಡುತ್ತಿಲ್ಲ ಎಂದು ದೂರಿದರು. ಪಕ್ಕದಲ್ಲೇ ನಿಂತಿದ್ದ ಎಪಿಎಂಸಿ ವ್ಯಾಪಾರಿಗಳು ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿ, ಖಾಸಗಿ ಸಗಟು ತರಕಾರಿ ಮಾರುಕಟ್ಟೆಯಿಂದ ಬಂದವರಿಗೆ ಎಲ್ಲ ರೀತಿಯ ಅನುಕೂಲ ಕಲ್ಪಿಸಲಾಗಿದೆ. ಆದರೆ, ಅವರು ಮುಖ್ಯ ಮಾರುಕಟ್ಟೆಗೆ ಬರುತ್ತಿಲ್ಲ. ರೈತರು ವ್ಯಾಪಾರ ಮಾಡುವ ಭಾನುವಾರ ಮಾರುಕಟ್ಟೆಯಲ್ಲೇ ಉಳಿದಿದ್ದಾರೆ. ಇದರಿಂದ ರೈತರಿಗೆ ಸಮಸ್ಯೆಯಾಗುತ್ತಿದೆ ಎಂದು ತಿಳಿಸಿದರು.

ಆಗ ಪರಸ್ಪರರ ಮಧ್ಯೆ ವಾಗ್ವಾದ ತಾರಕಕ್ಕೇರಿತು. ಕೆಲವರು ಕೈಕೈ ಮಿಲಾಯಿಸುವ ಹಂತಕ್ಕೆ ಹೋದರು. ಪೊಲೀಸರು ಉಭಯ ವ್ಯಾಪಾರಿಗಳನ್ನು ಸಮಾಧಾನಪಡಿಸಿ, ಪರಿಸ್ಥಿತಿ ತಿಳಿಗೊಳಿಸಿದರು.

# ವಿಕಲಚೇತನರ ಕುಂದುಕೊರತೆಗಳ ನಿವಾರಣಾ ಸಭೆ

### ಸರ್ಕಾರಿ ಕಚೇರಿಗಳಲ್ಲಿ ಹಿರಿಯ ನಾಗರಿಕರು, ವಿಕಲಚೇತನರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಿ: ವೆಂಕಟೇಶ್ ನಾಯ್ಕ್

• ಉದಯವಾಹಿನಿ ಚಿತ್ರದುರ್ಗ

ಸರ್ಕಾರಿ ಕಚೇರಿಗಳಿಗೆ ಆಗಮಿಸುವ ಹಿರಿಯ ನಾಗರಿಕರು ಹಾಗೂ ವಿಕಲಚೇತನರಿಗೆ ಅಧಿಕಾರಿಗಳು ಕುಳಿತುಕೊಳ್ಳಲು ಪ್ರತ್ಯೇಕ ಆಸನ ವ್ಯವಸ್ಥೆ ಕಲ್ಪಿಸಿ, ಸೌಜನ್ಯದಿಂದ ವರ್ತಿಸಬೇಕು. ಈ ಕುರಿತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಗೆ ಸುತ್ತೋಲೆ ಹೊರಡಿಸುವಂತೆ ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಸೂಚನೆ ನೀಡಿದರು.

ನಗರದ ಉಪ ವಿಭಾಗಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪಾಲಕರ ಮತ್ತು ಪೋಷಕರ ಸಂರಕ್ಷಣಾ ಕಾಯ್ದೆಯ ಅನುಷ್ಠಾನ, ವಿಕಲಚೇತನರ ಪುನರ್ವಸತಿ ಕೇಂದ್ರದ ಯೋಜನೆಯ ಜಿಲ್ಲಾ ಸಮನ್ವಯ ಸಮಿತಿ ಸಭೆ ಹಾಗೂ ವಿಕಲಚೇತನರ ಕುಂದುಕೊರತೆಗಳ ನಿವಾರಣಾ ಸಭೆಗಳ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರಿ ಬಸ್‌ಗಳಲ್ಲಿ ನಿಗದಿ ಪಡಿಸಿದ ಆಸನಗಳಲ್ಲಿ ಹಿರಿಯ ನಾಗರಿಕರು ಹಾಗೂ ವಿಕಲಚೇತನರಿಗಾಗಿ ಕುಳಿತು ಪ್ರಯಾಣಿಸಲು ನಿರ್ವಾಹಕರು ಅವಕಾಶ ಕಲ್ಪಿಸಿ ಕೊಡಬೇಕು. ಈ ಕುರಿತು ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳು ಬಸ್ ನಿರ್ವಾಹಕರಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಹೇಳಿದರು.

**ಲೋಕಾದಾಲತ್ ಮೂಲಕ ಹಿರಿಯ ನಾಗರಿಕರ ಪ್ರಕರಣಗಳ ವಿಲೇವಾರಿ:** ಫೆ.28 ರಂದು ಜಿಲ್ಲೆಯಲ್ಲಿ ರಾಷ್ಟ್ರೀಯ ಲೋಕಾದಾಲತ್ ಜರುಗಲಿದೆ. ಈ ವೇಳೆ ಉಪವಿಭಾಗಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಬಾಕಿರುವ ಹಿರಿಯ ನಾಗರಿಕರ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ ಪಡಿಸಲು ಪಕ್ಷಗಾರರ ಮನ ಒಲಿಸಬೇಕು. ಪೋಷಕರ ನಿರ್ವಹಣೆಗೆ ಹಣ ನೀಡುವಂತೆ ಆದೇಶ ಮಾಡಿದರು, ಕೆಲ ಮಕ್ಕಳು ಆದೇಶ ಪಾಲನೆ ಮಾಡುತ್ತಿಲ್ಲ. ಈ ಕುರಿತು ಹಿರಿಯ ನಾಗರಿಕರು ಪುನಃ ಕಚೇರಿಗೆ ಅಲೆಯುವಂತಾಗಿದೆ.

ಹಿರಿಯ ನಾಗರಿಕರ ಕಲ್ಯಾಣಧಿಕಾರಿಗಳು ನಿರ್ವಹಣೆ ನೀಡಿದ ಆದೇಶಗಳು ಜಾರಿಯಾಗುವಂತೆ ಕ್ರಮ ವಹಿಸಬೇಕು. ನಗರದಲ್ಲಿ ಕಾಯ್ದೆಯಡಿ ನೊಂದಣಿಯಾಗದೆ ಕಾರ್ಯಚರಣೆ ನಡೆಸುತ್ತಿರುವ ವೃದ್ಧಾಶ್ರಮಗಳ ನೊಂದಣಿ ಕ್ರಮ ವಹಿಸಬೇಕು. ಸಂಧ್ಯಾ ಸುರಕ್ಷಾ ಯೋಜನೆಯಡಿ ರೂ.800 ಪಿಂಚಣಿ ಪಡೆಯುತ್ತಿರುವ 60 ವರ್ಷ ಮೇಲ್ಪಟ್ಟವರಿಗೆ 65 ವರ್ಷ ದಾಟಿದ ನಂತರ ರೂ.1,200 ನೀಡಲು ಸರ್ಕಾರ ಆದೇಶ ನೀಡಿದೆ. ಈ ಕುರಿತು ಪಿಂಚಣಿ ಅದಾಲತ್‌ಗಳ ಮೂಲಕ ಹಿರಿಯ ನಾಗರಿಕರಿಗೆ ಮಾಹಿತಿ ನೀಡಬೇಕು ಎಂದು ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಸೂಚಿಸಿದರು.

**ವಿಕಲಚೇತನರ ಅನುದಾನ ಬಳಕೆಗೆ ನಿರ್ದೇಶನ :** ಗ್ರಾಮ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಶೇ.5 ರಷ್ಟು ಅನುದಾನವನ್ನು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗೆ ಬಳಸಲು ಸ್ಪಷ್ಟ ನಿರ್ದೇಶನವಿದೆ. ಆದರೆ ಗ್ರಾಮ ಪಂಚಾಯಿತಿಗಳು ಅನುದಾನ ಬಳಕೆ ಮಾಡುತ್ತಿಲ್ಲ. ವಿಕಲಚೇತನರಿಗೆ ಯಾವುದೇ ಕಾರ್ಯಕ್ರಮಗಳನ್ನು ರೂಪಿಸುತ್ತಿಲ್ಲ. ಕೂಡಲೇ ಅಧಿಕಾರಿಗಳು ಅನುದಾನ ಬಳಕೆಗೆ ಕ್ರಮ ಕೈಗೊಳ್ಳಬೇಕು ಎಂದು ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಉಪವಿಭಾಗಾಧಿಕಾರಿ ಕಚೇರಿ ತಹಶೀಲ್ದಾರ್ ನರಸಿಂಹಮೂರ್ತಿ, ಜಿಲ್ಲಾಸ್ಪತ್ರೆ ನಿವಾಸಿ ವೈದ್ಯಾಧಿಕಾ ಡಾ.ಆನಂದ್ ಪ್ರಕಾಶ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಸರ್ಕಾರಿ ಕಚೇರಿಗಳಗೆ ಸುತ್ತೊಲೆ**


> ಚಿತ್ರದುರ್ಗ ಜಿಲ್ಲೆಯಲ್ಲಿ ಎರಡು ಅನುದಾನಿತ ವೃದ್ಧಾಶ್ರಮಗಳು ಕಾರ್ಯನಿರ್ವಹಿಸುತ್ತಿವೆ. ಸಂಧ್ಯಾ ಸುರಕ್ಷಾ ಯೋಜನೆಯಡಿ 60 ವರ್ಷ ಮೇಲ್ಪಟ್ಟ 42,198 ಫಲಾನುಭವಿಗಳು ರೂ.800 ಹಾಗೂ 65 ವರ್ಷ ಮೇಲ್ಪಟ್ಟ 1,10,475 ಫಲಾನುಭವಿಗಳು ರೂ.1200 ಪಿಂಚಣಿ ಪಡೆಯುತ್ತಿದ್ದಾರೆ. ಹಿರಿಯ ನಾಗರಿಕರಿಗೆ ಸಂಬಂಧಿಸಿದಂತೆ ಜನವರಿ ಅಂತ್ಯಕ್ಕೆ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ 35 ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ 19 ಪ್ರಕರಣಗಳು ದಾಖಲಾಗಿವೆ. 2011 ಜನಗಣತಿ ಅನುಸಾರ ಜಿಲ್ಲೆಯಲ್ಲಿ 35,971 ವಿಕಲಚೇತನರು ಇದ್ದು, 35,074 ವಿಕಲಚೇತನರಿಗೆ ಯುಡಿಐಡಿ ಕಾರ್ಡ್ ನೀಡಲಾಗಿದೆ. –ವೈಶಾಲಿ.ಜೆ
>
> ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ

# ಭಾರತ- ಅಮೆರಿಕ ವ್ಯಾಪಾರ ಒಪ್ಪಂದದಿಂದ ರೈತರಿಗೆ ಭಾರಿ ಹೊಡೆತ: ಕೃಷಿ ಸಚಿವ ನಿರಾಕರಣೆ

**ಭೋಪಾಲ್:** ಭಾರತ- ಅಮೆರಿಕ ನಡುವಿನ ಹೊಸ ವ್ಯಾಪಾರ ಒಪ್ಪಂದಿಂದ ದೇಶ ಶರಣಾಗಿದ್ದು, ದೇಶದ ರೈತರಿಗೆ ಭಾರಿ ಹೊಡೆತ ಬೀಳಲಿದೆ ಪ್ರತಿಪಕ್ಷ ಕಾಂಗ್ರೆಸ್ ಸೇರಿದಂತೆ ಹಲವು ನಾಯಕರು ಆರೋಪಿಸುತ್ತಿದ್ದಾರೆ. ಈ ಆರೋಪಗಳನ್ನು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನಿರಾಕರಿಸಿದ್ದಾರೆ.

ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶಿವರಾಜ್ ಸಿಂಗ್ ಚೌಹಾಣ್ ಪ್ರತಿಪಕ್ಷ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ರಚನಾತ್ಮಕ ಮಾತುಕತೆಯ ಮೂಲಕ ಒಪ್ಪಂದ ಮಾಡಿಕೊಳ್ಳಲಾಗಿದೆಯೇ ಹೊರತು ಸೌದೆಬಾಜಿ (ಚೌಕಾಶಿ) ಯಿಂದಲ್ಲ ಎಂದು ಕಿಡಿಕಾರಿದ್ದಾರೆ.

ಒಪ್ಪಂದವು ಕೃಷಿ ಕ್ಷೇತ್ರಕ್ಕೆ ಸಂಪೂರ್ಣ ರಕ್ಷಣೆ ನೀಡುತ್ತದೆ ಮತ್ತು ರೈತರ ಮತ್ತು ರಾಷ್ಟ್ರೀಯ ಹಿತಾಸಕ್ತಿಗಳನ್ನು ಕಾಪಾಡಲಿದೆ. ಕೃಷಿಕರಿಗೆ ಪ್ರಮುಖವಾದ ಕೃಷಿ ಉತ್ಪನ್ನಗಳನ್ನು ಒಪ್ಪಂದದಿಂದ ಹೊರಗಿಡಲಾಗಿದೆ ಎಂದು ತಿಳಿಸಿದ್ದಾರೆ.



ಭಾರತೀಯ ರೈತರಿಗೆ ಸಣ್ಣದೊಂದು ಹಾನಿಯನ್ನುಂಟುಮಾಡುವ ಯಾವುದೇ ಉತ್ಪನ್ನವನ್ನು ಈ ಒಪ್ಪಂದದಲ್ಲಿ ಸೇರಿಸಲಾಗಿಲ್ಲ. ಕಾಂಗ್ರೆಸ್ ವರ್ಷಗಳ ಕಾಲ ಆಡಳಿತ ನಡೆಸಿದರೂ, ರೈತರನ್ನು ಜಾಗತಿಕ ಮಾರುಕಟ್ಟೆಗೆ ಸಂಪರ್ಕಿಸಲು ಅಥವಾ ಭಾರತೀಯ ಆರ್ಥಿಕತೆಗೆ ಸ್ಥಿರತೆಯನ್ನು ತರುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

ಭಾರತದ ನೀತಿಯು ಬದ್ಧತೆಯಾಗಿದೆ, ರಾಜಿ ಅಲ್ಲ ಎಂಬ ಸಂದೇಶವನ್ನು ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ಜಗತ್ತಿಗೆ ರವಾನಿಸಿದೆ. ನಾವು ದೇಶದ ಹಿತಾಸಕ್ತಿಯಲ್ಲಿ ಆತ್ಮ ವಿಶ್ವಾಸದಿಂದ ನಿರ್ಧಾರಗಳನ್ನು ತೆಗೆದುಕೊಳ್ಳುತ್ತೇವೆ ಎಂದು ಕೇಂದ್ರ ಸಚಿವರು ಹೇಳಿದರು. ವ್ಯಾಪಾರ ಒಪ್ಪಂದದಿಂದ ಭಾರತಕ್ಕೆ ಯಾವುದೇ ಪ್ರಯೋಜನವಾಗಿಲ್ಲ ಮತ್ತು ಇದು ದೇಶದ ಸ್ವಾಭಿಮಾನ ಮತ್ತು ಹಿತಾಸಕ್ತಿಗಳ ಒಪ್ಪಂದವಲ್ಲ ಬದಲಾಗಿ ಶರಣಾಗತಿ' ಎಂದು ಕಾಂಗ್ರೆಸ್ ಹೇಳಿತ್ತು.

ವಿರೋಧ ಪಕ್ಷದ ಹೇಳಿಕೆಯನ್ನು ತಳ್ಳಿಹಾಕಿದ ಚೌಹಾಣ್, ''ನಾವು ಸೌದೆಬಾಜಿ (ಚೌಕಾಶಿ) ಮಾಡಿಲ್ಲ. ಆದರೆ ರಚನಾತ್ಮಕ ಮಾತುಕತೆಯೊಂದಿಗೆ ಸಮತೋಲಿತ ವಿಧಾನದಿಂದ ಮಾಡಿದ್ದೇವೆ. ಒಪ್ಪಂದವು ಭಾರತದ ರಾಜತಾಂತ್ರಿಕತೆ, ಅಭಿವೃದ್ಧಿ ಮತ್ತು ಘನತೆಗೆ ಒಂದು ಅನನ್ಯ ಉದಾಹರಣೆಯಾಗಿದೆ ಎಂದು ಅವರು ಪ್ರತಿಪಾದಿಸಿದರು.

ರಾಜತಾಂತ್ರಿಕತೆ ಎಂದರೆ ರಾಷ್ಟ್ರ ಮೊದಲು, ಅಭಿವೃದ್ಧಿಯು ದೇಶದ ಅಡಿಪಾಯ, ಘನತೆ ಎಂದರೆ ರೈತರ ಘನತೆಗೆ ಸಂಪೂರ್ಣವಾಗಿ ಕಾಳಜಿ ವಹಿಸಲಾಗಿದೆ ಎಂದು ಅವರು ಹೇಳಿದರು. ಕಾಂಗ್ರೆಸ್ ದಶಕಗಳ ಕಾಲ ದೇಶವನ್ನು ಆಳಿದ್ದರೂ ರೈತರಿಗಾಗಿ ಏನು ಮಾಡಿಲ್ಲ. ದೇಶದ ಆರ್ಥಿಕತೆ ವಿಶ್ವದಲ್ಲಿಯೇ ಮೂರನೇ ಆರ್ಥಿಕತೆಯನ್ನಾಗಿಸುವ ಮೂಲಕ ವೇಗವಾಗಿ ಪ್ರಗತಿ ಸಾಧಿಸುತ್ತಿದ್ದೇವೆ. ಕೃಷಿ ಉತ್ಪನ್ನಗಳನ್ನು ಈ ಒಪ್ಪಂದದಿಂದ ಹೊರಗಿಟ್ಟಿದ್ದೇವೆ. ರಾಷ್ಟ್ರ ಹಾಗೂ ರೈತರ ಹಿತಾಸಕ್ತಿ ಪ್ರಮುಖವಾಗಿದೆ ಎಂದು ಹೇಳಿದರು.




## ಸಂಘವು ಯಾರ ವಿರುದ್ಧವೂ ಅಲ್ಲ

## ಭಾರತವನ್ನು ಇನ್ನು ಮುಂದೆ ದುರ್ಬಲಗೊಳಿಸಲು ಸಾಧ್ಯವಿಲ್ಲ

# ಬಾಂಗ್ಲಾದಲ್ಲಿ 1.25 ಕೋಟಿ ಹಿಂದುಗಳು ಹೋರಾಡಲು ನಿಂತರೆ ಕ್ರಾಂತಿ

**ಹೊಸದಿಲ್ಲಿ :** ಬಾಂಗ್ಲಾದೇಶ ದೊಡ್ಡ ಬಿಕ್ಕಟ್ಟಿನಿಂದ ಬಳಲುತ್ತಿದೆ. ಅಲ್ಲಿನ ಹಿಂದೂಗಳ ಪರಿಸ್ಥಿತಿಯ ಬಗ್ಗೆ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ತೀಕ್ಷ್ಣವಾದ ಸಂದೇಶ ನೀಡಿದ್ದಾರೆ. ಬಾಂಗ್ಲಾದೇಶದ ಹಿಂದೂ ಜನಸಂಖ್ಯೆಯು ತನ್ನ ಹಕ್ಕುಗಳಿಗಾಗಿ ನಿಂತು ಹೋರಾಡಲು ನಿರ್ಧರಿಸಿದರೆ, ತಿರುಗಿ ನಿಂತರೆ ಅವರಿಗೆ ಪ್ರಪಂಚದಾದ್ಯಂತ ಹಿಂದುಗಳ ಬೆಂಬಲ ಸಿಗುತ್ತದೆ ಎಂದು ಹೇಳಿದರು.

ಬಾಂಗ್ಲಾದೇಶದಲ್ಲಿ ಸುಮಾರು 1.25 ಕೋಟಿ ಹಿಂದೂಗಳಿದ್ದಾರೆ. ಅವರು ಅಲ್ಲಿಯೇ ಇದ್ದು ಹೋರಾಡಲು ನಿರ್ಧರಿಸಿದರೆ, ಪ್ರಪಂಚದಾದ್ಯಂತದ ಎಲ್ಲಾ ಹಿಂದೂಗಳು ಅವರಿಗೆ ಖಂಡಿತ ಸಹಾಯ ಮಾಡುತ್ತಾರೆ ಎಂದು ಮುಂಬೈನಲ್ಲಿ ನಡೆದ ಆರ್‌ಎಸ್‌ಎಸ್ ಉಪನ್ಯಾಸ ಸರಣಿಯ ಎರಡನೇ ದಿನವನ್ನುದ್ದೇಶಿಸಿ ಮೋಹನ್ ಭಾಗವತ್ ಹೇಳಿದರು.

**ವರ್ಲಿಯ ನೆಹರು ಕೇಂದ್ರದಲ್ಲಿ 100 ವರ್ಷಗಳ ಸಂಘ ಪಯಣ:** ಹೊಸ ದಿಗಂತಗಳು ಎಂಬ ವಿಶೇಷ ಕಾರ್ಯಕ್ರಮವನ್ನು ಆರ್‌ಎಸ್‌ಎಸ್ ಶತಮಾನೋತ್ಸವದ ಅಂಗವಾಗಿ ಆಯೋಜಿಸಲಾಗಿತ್ತು. ಬಾಂಗ್ಲಾದೇಶದ ಪ್ರಕ್ಷುಬ್ಧತೆಯ ನಡುವೆ, ದೇಶಾದ್ಯಂತ ಹಿಂದು ನಾಗರಿಕರನ್ನು ಗುರಿಯಾಗಿಸಿಕೊಂಡು ಹಿಂಸಾತ್ಮಕ ಗುಂಪುಗಳು ದಾಳಿ ನಡೆಸಿವೆ. ಉದ್ಯಮಿಗಳು, ಕಾರ್ಮಿಕರು ಮತ್ತು ವಿದ್ಯಾರ್ಥಿಗಳು ಸೇರಿದಂತೆ ಹಲವಾರು ಜನರು ಸಾವನ್ನಪ್ಪಿದ್ದಾರೆ. ಬೀದಿ ಪ್ರತಿಭಟನೆಗಳ ಸಂದರ್ಭದಲ್ಲಿ ಈ ದಾಳಿಗಳು ನಡೆದಿದ್ದು, ಇದು ಅಲ್ಪಸಂಖ್ಯಾತರ ಮೇಲೆ ಸಂಘಟಿತ ದಾಳಿಗಳಾಗಿ ಪರಿಣಮಿಸಿದೆ.

- ಬಾಂಗ್ಲಾದೇಶ ದೊಡ್ಡ ಬಿಕ್ಕಟ್ಟಿನಿಂದ ಬಳಲುತ್ತಿದೆ.
- ಅಲ್ಲಿನ ಹಿಂದುಗಳು ತಮ್ಮ ಹಕ್ಕಿಗಾಗಿ ಹೋರಾಟಕ್ಕೆ ನಿಂತರೆ ಅವರಿಗೆ ಪ್ರಪಂಚದಾದ್ಯಂತ ಹಿಂದುಗಳ ಬೆಂಬಲ ಸಿಗುತ್ತದೆ.
- ಮುಂಬೈನಲ್ಲಿ ನಡೆದ ಆರ್‌ಎಸ್‌ಎಸ್ ಉಪನ್ಯಾಸ ಸರಣಿಯಲ್ಲಿ ಮೋಹನ್ ಭಾಗವತ್ ಮಾತು.

**ಸಂಘವು ಯಾರ ವಿರುದ್ಧವೂ ಅಲ್ಲ:** ನಾಯಕತ್ವ ಮತ್ತು ಜಾತಿಯ ಬಗ್ಗೆ ಮಾತನಾಡುತ್ತಾ ಭಾಗವತ್, ಆರ್‌ಎಸ್‌ಎಸ್ ತಾರತಮ್ಯ ಮಾಡುವುದಿಲ್ಲ. ಯಾವುದೇ ಜಾತಿಯ ಯಾರಾದರೂ ಆರ್‌ಎಸ್‌ಎಸ್ ಮುಖ್ಯಸ್ಥರಾಗಬಹುದು. ಎಸ್‌ಸಿ-ಎಸ್‌ಟಿ ಅನರ್ಹತೆ ಅಲ್ಲ ಮತ್ತು ಬ್ರಾಹ್ಮಣ ಅರ್ಹತೆಯೂ ಅಲ್ಲ. ಆರ್‌ಎಸ್‌ಎಸ್ ಆರಂಭದಲ್ಲಿ ಬ್ರಾಹ್ಮಣರೊಂದಿಗೆ ಪ್ರಾರಂಭವಾದರೂ, ನಾವು ಎಲ್ಲಾ ಜಾತಿಗಳಿಗಾಗಿ ಕೆಲಸ ಮಾಡುತ್ತೇವೆ ಎಂದು ಸಮರ್ಥನೆ ನೀಡಿದರು.

ಮೋಹನ್ ಭಾಗವತ್ ಅವರು ಮುಸ್ಲಿಂ ಪ್ರಾಬಲ್ಯದ ಪ್ರದೇಶಗಳಲ್ಲಿನ ಕೆಲಸವನ್ನು ಉಲ್ಲೇಖಿಸುತ್ತಾ, ಸಂಘವು ಘರ್ಷಣೆಯನ್ನು ತಪ್ಪಿಸುತ್ತದೆ. ಮುಸ್ಲಿಂ ಪ್ರದೇಶಗಳಲ್ಲಿನ ಸವಾಲುಗಳನ್ನು ಪ್ರತಿಕ್ರಿಯಿಸದೆ ನಿಭಾಯಿಸಲಾಗುತ್ತದೆ. ಅವರು ಅಶ್ಲೀಲ ಪದಗಳನ್ನು ಬಳಸಬಹುದು. ಆದರೆ ನಾವು ಪ್ರತಿಕ್ರಿಯಿಸುವುದಿಲ್ಲ. ಆ ರೀತಿಯಲ್ಲಿ ಸಂಘರ್ಷ ಹೆಚ್ಚಾಗುವುದಿಲ್ಲ ಎಂದು ಅವರು ಹೇಳಿದರು.

ಸಂಘವು ಯಾರ ವಿರುದ್ಧವೂ ಅಲ್ಲ. ಅದು ಅಧಿಕಾರವನ್ನು ಬಯಸುವುದಿಲ್ಲ. ಅದರ ಉದ್ದೇಶ ಸಮಾಜವನ್ನು ಒಗ್ಗೂಡಿಸುವುದು ಮಾತ್ರ ಎಂದು ಭಾಗವತ್ ಹೇಳಿದರು, ಸಮಾಜದಲ್ಲಿ ಏಕತೆಯ ಕೊರತೆಯನ್ನು ಗುರುತಿಸಿದ ನಂತರ ಆರ್‌ಎಸ್‌ಎಸ್ ಸಂಸ್ಥಾಪಕ ಡಾ. ಕೇಶವ್ ಬಲಿರಾಮ್ ಹೆಡ್ಗೆವಾರ್ 1925 ರಲ್ಲಿ ಸಂಘಟನೆಯನ್ನು ಪ್ರಾರಂಭಿಸಿದರು ಎಂದು ಭಾಗವತ್ ನೆನಪಿಸಿಕೊಂಡರು.

ಇಸ್ಲಾಂ ಅನ್ನು ಶಾಂತಿಯ ಧರ್ಮ ಎಂದು ಕರೆಯುತ್ತಾರೆ, ಆದರೆ ಶಾಂತಿ ಕಾಣುತ್ತಿಲ್ಲ. ಧರ್ಮದಲ್ಲಿ ಆಧ್ಯಾತ್ಮಿಕತೆ ಇಲ್ಲದಿದ್ದರೆ, ಅದು ಪ್ರಬಲ ಮತ್ತು ಆಕ್ರಮಣಕಾರಿಯಾಗುತ್ತದೆ. ಇಂದು ಇಸ್ಲಾಂ ಮತ್ತು ಕ್ರಿಶ್ಚಿಯನ್ ಧರ್ಮದಲ್ಲಿ ಕಾಣುತ್ತಿರುವುದು ಯೇಸುಕ್ರಿಸ್ತ ಮತ್ತು ಪ್ರವಾದಿ ಮುಹಮ್ಮದ್ ಅವರ ಬೋಧನೆಗಳಲ್ಲ, ನಮಗೆ ನಿಜವಾದ ಇಸ್ಲಾಂ ಮತ್ತು ಕ್ರಿಶ್ಚಿಯನ್ ಧರ್ಮದ ಆಚರಣೆ ಅಗತ್ಯವಿದೆ. **-ಮೋಹನ್ ಭಾಗವತ್**

### ನಾವು ಯಾರನ್ನೂ ಅವಲಂಬಿಸಿಲ್ಲ

**ಮೋಹನ್ ಭಾಗವತ್ ಅವರು ಸಂಘಟನೆಯ ನಿಧಿಯ ಕುರಿತಾದ ಪ್ರಶ್ನೆಗಳನ್ನು ಸಹ ಎತ್ತಿದರು. ಆರ್‌ಎಸ್‌ಎಸ್ ಕಾರ್ಪೊರೇಟ್ ಅಥವಾ ಸಾಂಸ್ಥಿಕ ಹಣವನ್ನು ಅವಲಂಬಿಸಿಲ್ಲ. ಜನರು ಆರ್‌ಎಸ್‌ಎಸ್ ನಿಧಿಗಳ ಬಗ್ಗೆ ಕುತೂಹಲ ಹೊಂದಿದ್ದಾರೆ. ನಾವು ನಮ್ಮ ಕಾರ್ಯಕರ್ತರಿಂದ ಹಣವನ್ನು ಸಂಗ್ರಹಿಸುತ್ತೇವೆ. ನಾವು ಪ್ರಯಾಣಿಸುವಾಗ, ಆಹಾರವನ್ನು ಖರೀದಿಸುವ ಬದಲು ಟಿಫಿನ್ ಕೇಳುತ್ತೇವೆ. ನಾವು ಕಾರ್ಮಿಕರ ಮನೆಗಳಲ್ಲಿಯೇ ಇರುತ್ತೇವೆ. ಹೋಟೆಲ್‌ಗಳಲ್ಲಿ ಅಲ್ಲ ಎಂದು ಹೇಳಿದರು.**

### ಅಕ್ರಮ ವಲಸೆಯೇ ಕಾರಣ

**ದೇಶೀಯ ಸಮಸ್ಯೆಗಳ ಕುರಿತು, ಮೋಹನ್ ಭಾಗವತ್ ಪ್ರಸ್ತಾಪಿಸುತ್ತಾ, ಹಿಂದಿನ ಸರ್ಕಾರಗಳು ಭಾರತದಲ್ಲಿ ಬದಲಾಗುತ್ತಿರುವ ಜನಸಂಖ್ಯಾ ಚಲನಶೀಲತೆಯನ್ನು ಪರಿಹರಿಸಲು ಸಾಕಷ್ಟು ಪ್ರಯತ್ನಗಳನ್ನು ಮಾಡಿಲ್ಲ. ಜನನ ದರಗಳು ಮತ್ತು ಅಕ್ರಮ ವಲಸೆಯೇ ಈ ಬದಲಾವಣೆಯ ಹಿಂದಿನ ಪ್ರಮುಖ ಕಾರಣಗಳಾಗಿವೆ ಎಂದು ಉಲ್ಲೇಖಿಸಿದ್ದಾರೆ. ಭಾರತವನ್ನು ಇನ್ನು ಮುಂದೆ ದುರ್ಬಲಗೊಳಿಸಲು ಸಾಧ್ಯವಿಲ್ಲ . ಭಾರತವನ್ನು ಮುರಿಯಲು ಪ್ರಯತ್ನಿಸುವವರು ಮುರಿಯಲ್ಪಡುತ್ತಾರೆ ಎಂದು ಹೇಳಿದರು.**

# ಇಬ್ಬರು ಐಎಎಸ್ ಅಧಿಕಾರಿಗಳ ಅಮಾನತು

**ಚಂಡೀಗಢ:** ಅಂಗನವಾಡಿ ಕಾರ್ಯಕರ್ತೆಯರಿಗೆ ಸಾರ್ಟ್ ಫೋನ್‌ಗಳನ್ನು ಒದಗಿಸಲು ಹಣ ಬಿಡುಗಡೆಗೆ ವಿಳಂಬ ಮಾಡಿದ ಆರೋಪದ ಮೇಲೆ ಪಂಜಾಬ್ ಸರ್ಕಾರವು ಇಬ್ಬರು ಹಿರಿಯ ಐಎಎಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದೆ. ಅಧಿಕೃತ ಆದೇಶಗಳ ಪ್ರಕಾರ, ಅಧಿಕಾರಿಗಳಾದ ಕಮಲ್ ಕಿಶೋರ್ ಯಾದವ್ ಮತ್ತು ಜಸ್ಪ್ರೀತ್ ಸಿಂಗ್ ಅವರನ್ನು ಅಮಾನತುಗೊಳಿಸಲಾಗಿದೆ. ಅವರ ಅಮಾನತುಗೆ ಕಾರಣಗಳನ್ನು ಆದೇಶಗಳಲ್ಲಿ ನಿರ್ದಿಷ್ಟಪಡಿಸಲಾಗಿಲ್ಲವಾದರೂ, ಕೇಂದ್ರ ಸರ್ಕಾರದ ಮಿಷನ್ ಸಕ್ಷಮ್‌ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಯರಿಗೆ ಸಾರ್ಟ್‌ಫೋನ್‌ಗಳನ್ನು ಖರೀದಿಸಲು ಸುಮಾರು ಆರು ವರ್ಷಗಳಿಂದ ಹಣ ಬಿಡುಗಡೆ ಮಾಡದೆ ವಿಳಂಬ ಮಾಡಿದ್ದರು ಎಂದು ಮೂಲಗಳು ತಿಳಿಸಿವೆ.

ಸ್ಮಾರ್ಟ್ ಫೋನ್‌ಗಳನ್ನು ಒದಗಿಸಲು ಸರ್ಕಾರ ಟೆಂಡರ್ ನೀಡಿದ್ದ ಮಾರಾಟಗಾರ ವಿಳಂಬಕ್ಕಾಗಿ ನ್ಯಾಯಾಲಯವನ್ನು ಸಂಪರ್ಕಿಸಿದ್ದರು ಎಂದು ಅವರು ಹೇಳಿದರು.ಸಾಮಾಜಿಕ ಭದ್ರತೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದ ವಿಕಾಸ್ ಪ್ರತಾಪ್ ಸೇರಿದಂತೆ ಇಬ್ಬರು ಹೆಚ್ಚುವರಿ ಐಎಎಸ್ ಅಧಿಕಾರಿಗಳನ್ನು ಮೊದಲು ವರ್ಗಾಯಿಸಲಾಗಿತ್ತು.



ಈಗ ಅಮಾನತು ಮಾಡಲಾಗಿದೆ.

2003 ರ ಬ್ಯಾಚ್‌ನ ಐಎಎಸ್ ಅಧಿಕಾರಿ ಯಾದವ್, ಕೈಗಾರಿಕೆಗಳು ಮತ್ತು ವಾಣಿಜ್ಯ, ಹೂಡಿಕೆ ಪ್ರಚಾರ ಮತ್ತು ಮಾಹಿತಿ ತಂತ್ರಜ್ಞಾನ ಪ್ರಚಾರ ಇಲಾಖೆಯ ಆಡಳಿತ ಕಾರ್ಯದರ್ಶಿಯಾಗಿದ್ದರು. 2014 ರ ಬ್ಯಾಚ್‌ನ ಐಎಎಸ್ ಅಧಿಕಾರಿ ಜಸ್ಪ್ರೀತ್ ಸಿಂಗ್, ಪಂಜಾಬ್ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ ನಿಗಮ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾಗಿದ್ದಾರೆ. ಏತನ್ಮಧ್ಯೆ, ಐಎಎಸ್ ಅಧಿಕಾರಿ ಗುರುಕಿರತ್ ಕಿರ್ಪಾಲ್ ಸಿಂಗ್ ಅವರಿಗೆ ಕೈಗಾರಿಕೆಗಳು, ಹೂಡಿಕೆ ಪ್ರಚಾರ ಮತ್ತು ಸಾಮಾಜಿಕ ಭದ್ರತೆಯ ಜವಾಬ್ದಾರಿಗಳನ್ನು ವಹಿಸಲಾಗಿದೆ. ಸಿಂಗ್ ಕಳೆದ 11 ತಿಂಗಳುಗಳಿಂದ ಯಾವುದೇ ಹುದ್ದೆಯಿಲ್ಲದೆ ಇದ್ದರು.

# ಉನ್ನಾವೋ ಅತ್ಯಾಚಾರ ಆರೋಪಿ ಜಾಮೀನು ಅರ್ಜಿ ವಿಚಾರಣೆ

**ನವದೆಹಲಿ:** ಉನ್ನಾವೋ ಅತ್ಯಾಚಾರ ಸಂತ್ರಸ್ತೆಯ ತಂದೆಯ ಕಸ್ಟಡಿ ಸಾವಿನ ಪ್ರಕರಣದಲ್ಲಿ ಜಾಮೀನು ಕೋರಿ ಉಚ್ಚಾಟಿತ ಬಿಜೆಪಿ ನಾಯಕ ಕುಲದೀಪ್ ಸಿಂಗ್ ಸೆಂಗಾರ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುವ ಸಾಧ್ಯತೆಯಿದೆ.

ಜನವರಿ 19 ರಂದು, ದೆಹಲಿ ಹೈಕೋರ್ಟ್, ವಿಚಾರಣೆಯಲ್ಲಿ ವಿಳಂಬದ ಆಧಾರದ ಮೇಲೆ ಸೆಂಗಾರ್ ಅವರ 10 ವರ್ಷಗಳ ಜೈಲು ಶಿಕ್ಷೆಯನ್ನು ಅಮಾನತುಗೊಳಿಸಲು ನಿರಾಕರಿಸಿತ್ತು, ಈ ವಿಷಯದಲ್ಲಿ ಅವರು ಸಲ್ಲಿಸಿದ ಬಹು ಅರ್ಜಿಗಳಿಂದಾಗಿ ಇದು ಭಾಗಶಃ ಸಂಭವಿಸಿದೆ ಎಂದು ಹೇಳಿತ್ತು.

ಮಾರ್ಚ್ 13, 2020 ರಂದು, ಈ ಪ್ರಕರಣದಲ್ಲಿ ಸೆಂಗಾರ್‌ಗೆ ವಿಚಾರಣಾ ನ್ಯಾಯಾಲಯವು 10 ವರ್ಷಗಳ ಕಠಿಣ ಜೈಲು ಶಿಕ್ಷೆ ಮತ್ತು 10 ಲಕ್ಷ ರೂ. ದಂಡ ವಿಧಿಸಿತು. ಕುಟುಂಬದ ಏಕೈಕ ಜೀವನೋಪಾಯಕ್ಕಾಗಿ ಕೆಲಸ



ಮಾಡುವವರನ್ನು ಕೊಂದಿದ್ದಕ್ಕಾಗಿ ಯಾವುದೇ ವಿನಮ್ರತೆ ತೋರಿಸಲಾಗುವುದಿಲ್ಲ ಎಂದು ವಿಚಾರಣಾ ನ್ಯಾಯಾಲಯ ಹೇಳಿತ್ತು.

ತಂದೆಯ ಪ್ರಕರಣದಲ್ಲಿ ಕೊಲೆಯ ಆರೋಪಿಯನ್ನು ತಪ್ಪಿತಸ್ಥನೆಂದು ಪರಿಗಣಿಸದ ವಿಚಾರಣಾ ನ್ಯಾಯಾಲಯವು, ಕೊಲ್ಲುವ ಉದ್ದೇಶವಿಲ್ಲ ಎಂದು ತೀರ್ಪು ನೀಡಿದ ನಂತರ, ಕೊಲೆಗೆ ಸಮನಾಗದ ಅಪರಾಧಿ ನರಹತ್ಯೆಯ ಅಪರಾಧಕ್ಕಾಗಿ ಅವನಿಗೆ ಗರಿಷ್ಠ ಶಿಕ್ಷೆಯನ್ನು ನೀಡಿತು. ಡಿಸೆಂಬರ್ 2019 ರಲ್ಲಿ ಸೆಂಗಾರ್ ಅವರನ್ನು ಅಪರಾಧಿ ಎಂದು ಘೋಷಿಸಿ, ಅವರ ಜೀವನದುದ್ದಕ್ಕೂ ಜೈಲು ಶಿಕ್ಷೆ ವಿಧಿಸಿದ ತೀರ್ಪಿನ ವಿರುದ್ಧದ ಮುಖ್ಯ ಅತ್ಯಾಚಾರ ಪ್ರಕರಣದಲ್ಲಿ ಅವರ ಮೇಲ್ಮನವಿಗಳು ಹಾಗೂ ಅವರ ತಂದೆಯ ಪ್ರಕರಣವು ಹೈಕೋರ್ಟ್ ನಲ್ಲಿ ಬಾಕಿ ಉಳಿದಿವೆ.

### ಶಿಕ್ಷೆಯನ್ನು ಪ್ರಶ್ನಿಸಿ ಮೇಲ್ಮನವಿ

**ಅತ್ಯಾಚಾರ ಪ್ರಕರಣದಲ್ಲಿ ಅವರ ಅಪರಾಧ ಸಾಬೀತು ಮತ್ತು ಶಿಕ್ಷೆಯನ್ನು ಪ್ರಶ್ನಿಸಿ ಅವರು ಸಲ್ಲಿಸಿದ ಮೇಲ್ಮನವಿ ವಿಚಾರಣೆ ಮುಗಿಯುವವರೆಗೆ, ಡಿಸೆಂಬರ್ 23, 2025 ರಂದು ಹೈಕೋರ್ಟ್ ಅವರ ಶಿಕ್ಷೆಯನ್ನು ಅಮಾನತುಗೊಳಿಸಿತು. ಸರ್ವೋಚ್ಚ ನ್ಯಾಯಾಲಯವು ಡಿಸೆಂಬರ್ 29, 2025 ರಂದು ಅಮಾನತುಗೊಳಿಸುವಿಕೆಯನ್ನು ತಡೆಹಿಡಿದಿತ್ತು.**

# ರಷ್ಯಾದ ಮೆಡಿಕಲ್ ಕಾಲೇಜಿನಲ್ಲಿ ಚಾಕು ಇರಿತ ದಾಳಿ

## 4 ಭಾರತೀಯರಿಗೆ ಗಾಯ: ಗಾಯದ ರಕ್ತದಿಂದ ಗೋಡೆ ಮೇಲೆ ನಾಜಿ ಚಿಹ್ನೆ ಚಿತ್ರಿಸಿ ವಿಕೃತಿ ಮೆರೆದ 15ರ ಬಾಲಕ

**ಮಾಸ್ಕೊ:** ರಷ್ಯಾದ ಬಾಷ್ಕೋರ್ಟೊಸ್ತಾನ್ ಗಣರಾಜ್ಯದ ವಿಶ್ವವಿದ್ಯಾಲಯವೊಂದರ ವಿದೇಶಿ ವಿದ್ಯಾರ್ಥಿಗಳ ಹಾಸ್ಟೆಲ್‌ನಲ್ಲಿ ಚಾಕುವಿನಿಂದ ಶಸ್ತ್ರಸಜ್ಜಿತವಾದ ಹದಿಹರೆಯದ ವ್ಯಕ್ತಿಯೊಬ್ಬ ಇರಿತದ ಚೂರಿಯಿಂದ ನಡೆಸಿದ್ದಾನೆ. ಈ ದುರ್ಘಟನೆಯಲ್ಲಿ 4 ಭಾರತೀಯ ಮೂಲದ ವಿದ್ಯಾರ್ಥಿಗಳು ಹಾಗೂ 2 ಪೊಲೀಸರು ಸೇರಿದಂತೆ ಹಲವರಿಗೆ ಗಾಯಗಳಾಗಿರುವ ಘಟನೆ ನಡೆದಿದೆ.

ದಾಳಿ ತೀವ್ರತೆಯಿಂದಾಗಿ ಹಲವರಿಗೆ ಗಾಯಗಳಾಗಿದ್ದು, ಹಾಸ್ಟೆಲ್ ಸಂಕೀರ್ಣದ ತುಂಬೆಲ್ಲಾ ರಕ್ತ ಹರಡಿತ್ತು. ದಾಳಿಯ ಬಳಿಕ ತಕ್ಷಣವೇ ಗಾಯಾಳುಗಳನ್ನು ಆಂಬ್ಯುಲೆನ್ಸ್‌ಗಳಲ್ಲಿ ಆಸ್ಪತ್ರೆಗಳಿಗೆ ಕರೆದೊಯ್ಯಲಾಗಿದೆ ಎಂದು ಅಲ್ಲಿನ ಪ್ರತ್ಯಕ್ಷ ದರ್ಶಿಗಳನ್ನು ಉಲ್ಲೇಖಿಸಿ ರೆನ್ ಟಿವಿ ವರದಿ ಮಾಡಿದೆ.

### ಗಾಯಗೊಂಡ ವಿದ್ಯಾರ್ಥಿಗಳಿಗೆ ಸಹಾಯ

**ದಾಳಿ ಬಳಿಕ ತನ್ನನ್ನು ತಾನೂ ದೈಹಿಕವಾಗಿ ಹಲ್ಲೆಗೊಳಿಸಿಕೊಂಡ ಬಂಧಿತ:** ಈ ಚಾಕು ಇರಿತ ದಾಳಿ ನಡೆಸಿರುವ 15 ವರ್ಷದ ಅಪ್ರಾಪ್ತನನ್ನು ಬಂಧನಕ್ಕೊಳಪಡಿಸಲಾಗಿದೆ. ಈ ಕುರಿತು ಮಾಹಿತಿ ನೀಡಿರುವ ರಷ್ಯಾದ ಆಂತರಿಕ ಸಚಿವಾಲಯದ ಪ್ರಕಾರ, ರಷ್ಯಾದ ಬಾಷ್ಕೋರ್ಟೊಸ್ತಾನ್ ಗಣರಾಜ್ಯದ ಉಫಾ ನಗರದಲ್ಲಿರುವ ವೈದ್ಯಕೀಯ ವಿಶ್ವವಿದ್ಯಾಲಯದ ವಿದೇಶಿ ವಸತಿ ನಿಲಯಕ್ಕೆ ಚಾಕುವಿನಿಂದ ಶಸ್ತ್ರಸಜ್ಜಿತವಾದ ಅಪ್ರಾಪ್ತ ಪ್ರವೇಶಿಸಿ ಅಲ್ಲಿ ಹಲವಾರು ವಿದ್ಯಾರ್ಥಿಗಳನ್ನು ಇರಿದಿದ್ದಾನೆ.

ಅಲ್ಲದೆ, ಈ ದಾಳಿಕೋರನು ಬಂಧನವನ್ನು ವಿರೋಧಿಸಿದ್ದು, ತಪ್ಪಿಸಿಕೊಳ್ಳಲು ತನ್ನನ್ನು ತಾನೂ ದೈಹಿಕವಾಗಿ ಹಾನಿಮಾಡಿಕೊಂಡಿದ್ದು, ಸದ್ಯ ಈತನ ಪರಿಸ್ಥಿತಿ ಗಂಭೀರವಾಗಿದೆ ಎಂದು ಪ್ರಾಥಮಿಕ ವರದಿಗಳು ಸೂಚಿಸಿವೆ ಎಂದು ತಿಳಿಸಿದೆ.

**ಭಾರತೀಯ ರಾಯಭಾರ ಕಚೇರಿ ಹೇಳಿದ್ದೇನು?:** ಈ ದಾಳಿಯ ಕುರಿತು ದೃಢಪಡಿಸಿರುವ ರಷ್ಯಾದಲ್ಲಿನ ಭಾರತೀಯ ರಾಯಭಾರ ಕಚೇರಿ ತಮ್ಮ ಅಧಿಕೃತ ಎಕ್ಸ್ ಖಾತೆಯ ಮೂಲಕ ಹೇಳಿಕೆಯನ್ನು ಬಿಡುಗಡೆ ಮಾಡಿದೆ. ಇದರಲ್ಲಿ, ಉಫಾದಲ್ಲಿ ದುರದೃಷ್ಟಕರ ದಾಳಿಯ ಘಟನೆ ನಡೆದಿದ್ದು, 4 ಭಾರತೀಯ ವಿದ್ಯಾರ್ಥಿಗಳು ಸೇರಿದಂತೆ ಹಲವಾರು ಜನರು ಗಾಯಗೊಂಡಿದ್ದಾರೆ.ಈ ವಿಚಾರಕ್ಕೆ ಸಂಬಂಧಿಸಿದಂತೆ ರಾಯಭಾರ ಕಚೇರಿಯು ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ ಮತ್ತು ಗಾಯಗೊಂಡ ವಿದ್ಯಾರ್ಥಿಗಳಿಗೆ ಸಹಾಯ



ಮಾಡಲು ಕಜಾನ್‌ನಲ್ಲಿರುವ ದೂತಾವಾಸದ ಅಧಿಕಾರಿಗಳು ಉಫಾಗೆ ತೆರಳುತ್ತಿದ್ದಾರೆ ಎಂದು ತಿಳಿಸಿದೆ.

**ನಿಷೇಧಿತ ನವ-ನಾಜಿ ಉಗ್ರ ಸಂಘಟನೆಯ ನಂಟು:** ಇನ್ನು, ಬಂಧಿತ ದಾಳಿಕೋರ ನಿಷೇಧಿತ ನವ-ನಾಜಿ ಸಂಘಟನೆಯೊಂದಿಗೆ ಸಂಪರ್ಕ ಹೊಂದಿದ್ದಾನೆ ಎಂದು ಹೇಳಲಾಗುತ್ತಿದೆ. ಈ ದಾಳಿಕೋರ ನಿಷೇಧಿತ NS/WP ನಿಯೋನಾಜಿ ಸಂಘಟನೆಗೆ ಸೇರಿದ್ದು, ಉನ್ಮಾದದ ಸಮಯದಲ್ಲಿ, (ದಿ) ಹತ್ಯಾಕಾಂಡದ ಬಗ್ಗೆ ರಾಷ್ಟ್ರೀಯತಾವಾದಿ ಘೋಷಣೆಗಳನ್ನು ಕೂಗುತ್ತಿದ್ದನು. ಅಲ್ಲದೆ, ಗಾಯಗೊಂಡವರ ರಕ್ತದಿಂದ ಗೋಡೆಯ ಮೇಲೆ ನಾಜಿ ಚಿಹ್ನೆಯನ್ನು ಚಿತ್ರಿಸಿದ್ದಾನೆ ಎಂದು ಫೋಟೋವನ್ನು ಹಂಚಿಕೊಂಡು ಬಾಜಾ ಟೆಲಿಗ್ರಾಮ್ ಚಾನೆಲ್ ವರದಿ ಮಾಡಿದೆ.

- ರಷ್ಯಾದಲ್ಲಿ ವಿಶ್ವವಿದ್ಯಾಲಯದ ವಸತಿ ನಿಲಯದ ಮೇಲೆ ಅಪ್ರಾಪ್ತ ನಡೆಸಿದ ಚಾಕು ಇರಿತ ದಾಳಿ
- ಚಾಕು ಇರಿತದಿಂದಾಗಿ 4 ಭಾರತೀಯ ವಿದ್ಯಾರ್ಥಿಗಳು ಸೇರಿದಂತೆ ಹಲವರಿಗೆ ಗಂಭೀರ ಗಾಯ
- ಗಾಯಗೊಂಡವರ ರಕ್ತದಿಂದ ನಾಜಿ ಚಿಹ್ನೆಗಳನ್ನು ಗೋಡೆಗಳ ಮೇಲೆ ಚಿತ್ರಿಸಿ ವಿಕೃತಿ ಮೆರೆದ ಬಾಲಕನಿಗೆ ನಿಷೇಧಿತ ನವ-ನಾಜಿ ಉಗ್ರ ಸಂಘಟನೆಯ ನಂಟು

## ಮಿನಿ ನ್ಯೂಸ್

### ಚೆನ್ನೈ ವಿಮಾನ ನಿಲ್ದಾಣದಲ್ಲಿ ಭಾರಿ ಮಂಜು, ವಿಮಾನ ಸಂಚಾರಕ್ಕೆ ಅಡ್ಡಿ

**ಚೆನ್ನೈ:** ಮಂಜಿನ ವಾತಾವರಣ ಮತ್ತು ಕಡಿಮೆ ಗೋಚರತೆಯಿಂದಾಗಿ ಅಂತರರಾಷ್ಟ್ರೀಯ ಸೇವೆ ಸೇರಿದಂತೆ ಕನಿಷ್ಠ ಮೂರು ವಿಮಾನಗಳನ್ನು ಬೇರೆಡೆಗೆ ತಿರುಗಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಮುಂಜಾನೆ ನಗರದ ವಿಮಾನ ನಿಲ್ದಾಣದಲ್ಲಿ ಮಧ್ಯಮದಿಂದ ದಟ್ಟವಾದ ಮಂಜು ಕಂಡುಬಂದಿದೆ ಎಂದು ವರದಿಯಾಗಿದೆ, ಅವರು ಹೇಳಿದರು.

ಕೆಲವು ನಿರ್ಗಮಿಸುವ ವಿಮಾನಗಳ ಸೇವೆಯೂ ವಿಳಂಬವಾಗಿದೆ. ಮುಂಜಾನೆ ಚೆನ್ನೈ ಮೀನಂಬಕ್ಕಂ ವಿಮಾನ ನಿಲ್ದಾಣದ ಮೇಲೆ ದಟ್ಟವಾದ ಮಂಜು ವರದಿಯಾಗಿದೆ.05:30 ಕ್ಕೆ ಗೋಚರತೆ ಸುಮಾರು 1500 ಮೀಟರ್‌ಗಳಷ್ಟಿತ್ತು, ಇದು 06:30 ಯ ಹೊತ್ತಿಗೆ 350 ಮೀಟರ್‌ಗೆ ಕಡಿಮೆಯಾಯಿತು ಮತ್ತು 07:30 ಯ ಹೊತ್ತಿಗೆ ಮಂಜಿನಿಂದಾಗಿ 150 ಮೀಟರ್‌ಗೆ ಇಳಿಯಿತು. ಹೆಚ್ಚಿನ ಆರ್ದ್ರತೆ, ಬೆಳಕು,ಶಾಂತ ಗಾಳಿ ಮತ್ತು ಕಡಿಮೆ ರಾತ್ರಿಯ ತಾಪಮಾನದ ಸಂಯೋಜನೆಯಿಂದಾಗಿ ಮಂಜು ರಚನೆಯಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಬೆಳಿಗ್ಗೆ 9 ರ ನಡುವೆ ಗೋಚರತೆ ಸುಧಾರಿಸುವ ವಿಮಾನಗಳ ಹಾರಾಟ ಶುರುವಾಯಿತು. ಕೌಲಾಲಂಪುರ್ ಮತ್ತು ಹೈದರಾಬಾದ್‌ನಿಂದ ಬಂದ ಎರಡು ವಿಮಾನಗಳನ್ನು ತಿರುಚಿರಾಪಳ್ಳಿಗೆ ಮತ್ತು ಒಂದು ಖಾಸಗಿ ವಿಮಾನವನ್ನು ಬೆಂಗಳೂರಿಗೆ ಹಿಂತಿರುಗಿಸಲಾಯಿತು ಎಂದು ಮಾಹಿತಿ ನೀಡಿದ್ದಾರೆ.

### ಮುಸ್ಲಿಮರ ವಲಸೆ ಅಮೆರಿಕವನ್ನು ಕೊಲ್ಲುತ್ತಿದೆ : ಸಂಸದನ ಕಳವಳ

**ನ್ಯೂಯಾರ್ಕ್:** ಅಮೆರಿಕದ ಟೆಕ್ಸಾಸ್ ರಾಜ್ಯದ ಕೆಲವು ಕ್ಷೇತ್ರಗಳ ಪ್ರದೇಶಗಳ ಇಸ್ಲಾಮೀಕರಣದ ಬಗ್ಗೆ ಅಮೆರಿಕದ ಸಂಸದರೊಬ್ಬರು ಕಳವಳ ವ್ಯಕ್ತಪಡಿಸಿದ್ದಾರೆ, ಅಲ್ಲಿನ ಸ್ಥಳೀಯ ಮಾಲ್‌ಗಳಿಗೆ ಭೇಟಿ ನೀಡುವುದರಿಂದ ನೀವು ಡಲ್ಲಾಸ್‌ನಲ್ಲಿ ಅಲ್ಲ, ಪಾಕಿಸ್ತಾನದಲ್ಲಿ ಇದ್ದೀರಿ ಎಂದು ಭಾಸವಾಗುತ್ತದೆ ಎಂದು ಹೇಳಿದ್ದಾರೆ. ಡಲ್ಲಾಸ್ ಪ್ರದೇಶದ ಇಸ್ಲಾಮೀಕರಣದ ಬಗ್ಗೆ ಆಳವಾಗಿ ಮತ್ತು ತೀವ್ರವಾಗಿ ಕಾಳಜಿ ವಹಿಸುವ ಮತದಾರರಿಂದ ನಾನು ಯಾವಾಗಲೂ ಕೇಳುತ್ತೇನೆ ಎಂದು ಕಾಂಗ್ರೆಸಿಗ ಬ್ರಾಂಡನ್ ಗಿಲ್ ಅವರು ರಿಯಲ್ ಅಮೆರಿಕದ ವಾಯ್ಸ್‌ಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ. ನಮ್ಮಲ್ಲಿ ರೂಪಾಂತರಗೊಳ್ಳುತ್ತಿರುವ ಸಂಪೂರ್ಣ ಸಮುದಾಯಗಳಿವೆ. ಮತ್ತು ಮತದಾರರು ತಮ್ಮ ಸ್ಥಳೀಯ ಮಾಲ್‌ಗಳಿಗೆ ಹೋಗುವ ಬಗ್ಗೆ ಮಾತನಾಡುವ ಬಗ್ಗೆ ನೀವು ಕೇಳುತ್ತೀರಿ, ಮತ್ತು ನೀವು ಸುತ್ತಲೂ ನೋಡಿದರೆ, ನೀವು ಟೆಕ್ಸಾಸ್‌ನ ಡಲ್ಲಾಸ್‌ನಲ್ಲಿ ಅಲ್ಲ, ಪಾಕಿಸ್ತಾನದಲ್ಲಿದ್ದೀರಿ ಎಂದು ಭಾಸವಾಗುತ್ತದೆ ಅದು ಒಂದು ಸಮಸ್ಯೆ ಎಂದು ಅವರು ತಿಳಿಸಿದ್ದಾರೆ.

### ಮಸೀದಿಯಲ್ಲಿ 36 ಅಲ್ಲ 200 ಸಾವು ಹೊಣೆ ಹೊತ್ತುಕೊಂಡ ಇಸ್ಲಾಮಿಕ್ ಸ್ಟೇಟ್

**ಇಸ್ಲಾಮಾಬಾದ್:** ಶಿಯಾ ಮಸೀದಿಯಲ್ಲಿ ನಡೆದ ಭೀಕರ ಬಾಂಬ್ ಸ್ಫೋಟದ ಹೊಣೆಯನ್ನು ಜಾಗತಿಕ ಭಯೋತ್ಪಾದಕ ಸಂಘಟನೆ ಇಸ್ಲಾಮಿಕ್ ಸ್ಟೇಟ್ ಹೊತ್ತುಕೊಂಡಿದೆ. ಈ ಸ್ಫೋಟದ ಬಗ್ಗೆ ಇಸ್ಲಾಮಿಕ್ ಸ್ಟೇಟ್ ಮುಖವಾಣಿ ಅಮಾಕ್ ಮೂಲಕ ಹೇಳಿಕೆ ನೀಡಲಾಗಿದ್ದು, ಈ ದಾಳಿಯು ಪಾಕಿಸ್ತಾನ ಪ್ರಾಂತ್ಯದಲ್ಲಿ ಇಸ್ಲಾಮಿಕ್ ಸ್ಟೇಟ್ ಸೈನಿಕ ನಡೆಸಿದ ಫಿದಾಯೀನ್ ಕಾರ್ಯಾಚರಣೆಯಾಗಿದೆ ಎಂದು ಉಲ್ಲೇಖಿಸಿದೆ.

ಇಸ್ಲಾಮಿಕ್ ಸ್ಟೇಟ್ ತನ್ನ ಇತ್ತೀಚಿನ ಅಲ್-ನಬಾ ಸಂಚಿಕೆಯಲ್ಲಿ ಲಷ್ಕರ್-ಎ-ತೈಬಾ (ಎಲ್‌ಇಟಿ) ಸದಸ್ಯರು ಖೊರಾಸನ್ ಪ್ರಾಂತ್ಯದಲ್ಲಿ ಇಸ್ಲಾಮಿಕ್ ಸ್ಟೇಟ್ ಸೇರಲು ಕರೆ ನೀಡಿದೆ. ಮಧ್ಯಾಹ್ನ ಪ್ರಾರ್ಥನೆ ನಡೆಯುತ್ತಿದ್ದಾಗ ಇಸ್ಲಾಮಾಬಾದ್ ಮಸೀದಿಯಲ್ಲಿ ನಡೆದ ಸ್ಫೋಟದಲ್ಲಿ 36 ಮಂದಿ ಸಾವನ್ನಪ್ಪಿದ್ದಾರೆ ಎಂದು ಪಾಕ್ ಸರ್ಕಾರ ಹೇಳಿದರೂ ಅಮಾಕ್ 200 ಮಂದಿ ಮೃತಪಟ್ಟಿದ್ದಾರೆ ಎಂದು ಹೇಳಿದೆ. ಸೈಫುಲ್ಲಾ ಅನ್ಸಾರಿ ಆತ್ಮಾಹುತಿ ಬಾಂಬರ್ ಆಗಿದ್ದು ಆತನ ಫೋಟೋವನ್ನು ಅಮಾಕ್ ಪ್ರಕಟಿಸಿದೆ. ತನ್ನ ಹೇಳಿಕೆಯಲ್ಲಿ ನೂರಾರು ಪಾಕಿಸ್ತಾನಿ ಶಿಯಾಗಳು ಸಿರಿಯಾದಲ್ಲಿ ಇರಾನ್ ಪರ 'ಜೈನಬಿಯೂನ್ ಬ್ರಿಗೇಡ್' ಸೇರಿದ್ದಾರೆ ಎಂದು ಉಲ್ಲೇಖಿಸಿದೆ.

### ಗಲ್ವಾನ್ ಘರ್ಷಣೆ ನಡೆದ 7 ದಿನದ ಬಳಿಕ ಚೀನಾದಿಂದ ರಹಸ್ಯ ಅಣು ಪರೀಕ್ಷೆ

**ವಾಷಿಂಗ್ಟನ್:** ಗಲ್ವಾನ್ ಘರ್ಷಣೆಯ ಒಂದು ವಾರದ ಬಳಿಕ ಚೀನಾ ರಹಸ್ಯವಾಗಿ ಅಣ್ವಸ್ತ್ರ ಪ್ರಯೋಗ ನಡೆಸಿದ್ದ ಸ್ಫೋಟಕ ವಿಚಾರ ಈಗ ಬೆಳಕಿಗೆ ಬಂದಿದೆ. ಜಿನೀವಾದಲ್ಲಿ ನಡೆದ ವಿಶ್ವಸಂಸ್ಥೆಯ ನಿಶ್ಶಸ್ತ್ರೀಕರಣ ಸಮ್ಮೇಳನದಲ್ಲಿ ಅಮೆರಿಕದ ವಿದೇಶಾಂಗ ಇಲಾಖೆಯ ಅಧಿಕಾರಿ ಥಾಮಸ್ ಡಿನನ್ನೊ ಜಾಗತಿಕ ಏಜೆನ್ಸಿಗಳ ಪತ್ತೆಯನ್ನು ತಪ್ಪಿಸಲು ಚೀನಾ ರಹಸ್ಯ ಪರಮಾಣು ಪರೀಕ್ಷೆಗಳನ್ನು ನಡೆಸಿದೆ ಎಂದು ಆರೋಪಿಸುವ ಮೂಲಕ ಸಂಚಲನ ಮೂಡಿಸಿದ್ದಾರೆ. ಸಾಮಾನ್ಯವಾಗಿ ಭೂಮಿಯ ಅಡಿಯಲ್ಲಿ ಅಣು ಪರೀಕ್ಷೆ ನಡೆಸುವಾಗ ಕಂಪನ ಸಂಭವಿಸುತ್ತದೆ. ಆದರೆ ಚೀನಾ ಭೂಮಿಯಾಳದಲ್ಲಿ ಕಂಪನದ ಅನುಭವವನ್ನು ತಗ್ಗಿಸಲು ಮತ್ತು ಜಗತ್ತಿನಿಂದ ಪರೀಕ್ಷೆ ಮರೆಮಾಚಲು ಚೀನಾ ಡಿಕೌಪ್ಲಿಂಗ್ ತಂತ್ರಜ್ಞಾನವನ್ನು ಬಳಸಿ ಪರೀಕ್ಷೆ ನಡೆಸಿದೆ.

2020 ರ ಜೂನ್ 15-16 ರ ರಾತ್ರಿ ಭಾರತ ಮತ್ತು ಚೀನಿ ಸೈನಿಕರ ಮಧ್ಯೆ ಗಲ್ವಾನ್‌ನಲ್ಲಿ ಸಂಘರ್ಷ ನಡೆದಿತ್ತು. ಈ ಸಂಘರ್ಷದಲ್ಲಿ 20 ಭಾರತೀಯ ಸೈನಿಕರು ಮೃತಪಟ್ಟರೆ 30ಕ್ಕೂ ಹೆಚ್ಚು ಚೀನಿ ಸೈನಿಕರು ಮೃತಪಟ್ಟಿರುವ ಬಗ್ಗೆ ವರದಿಯಾಗಿತ್ತು. ಈ ಸಂಘರ್ಷ ನಡೆದ ಒಂದು ವಾರದ ಬಳಿಕ ಅಂದರೆ ಜೂನ್ 22 ರಂದು ಚೀನಾ ಪರಮಾಣು ಸ್ಫೋಟ ಪರೀಕ್ಷೆ ನಡೆಸಿತ್ತು.

### 6 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ಹತ್ಯೆ

**ಪಾಟ್ನಾ:** ಬಿಹಾರದ ದರ್ಭಾಂಗಾ ಜಿಲ್ಲೆಯಲ್ಲಿ ಆರು ವರ್ಷದ ಬಾಲಕಿಯ ಮೇಲೆ ದುಷ್ಕರ್ಮಿಗಳು ಲೈಂಗಿಕ ದೌರ್ಜನ್ಯ ಎಸಗಿ ಹತ್ಯೆ ಮಾಡಿರುವ ಘಟನೆ ನಡೆದಿದೆ. ಬಿಹಾರದ ದರ್ಭಾಂಗಾ ಜಿಲ್ಲೆಯಲ್ಲಿ ಆರು ವರ್ಷದ ಬಾಲಕಿಯ ಮೃತದೇಹ ಪತ್ತೆಯಾಗಿದೆ.

ಆಕೆಯ ಕುಟುಂಬವು ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ಕೊಲೆ ಮಾಡಲಾಗಿದೆ. ವಿಶ್ವವಿದ್ಯಾಲಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಾಲಕಿ ಇತರ ಇಬ್ಬರು ಮಕ್ಕಳೊಂದಿಗೆ ಕೊಳದ ಬಳಿ ಆಟವಾಡುತ್ತಿದ್ದಾಗ ನಾಪತ್ತೆಯಾಗಿದ್ದಳು. ನಂತರ ಆಕೆಯ ಕುಟುಂಬವು ರಕ್ತದ ಮಡುವಿನಲ್ಲಿ ಬಿದ್ದಿದ್ದ ಆಕೆಯ ದೇಹವನ್ನು ಗುರುತಿಸಿ ಕಣ್ಣೀರಿಟ್ಟಿದೆ.

ಇದನ್ನೂ ಆಕೆಯ ನೆರೆಹೊರೆಯವರು ಆಕೆಯನ್ನು ನಿರ್ಜನ ಸ್ಥಳಕ್ಕೆ ಕರೆದೊಯ್ದು ಕೊಲೆ ಮಾಡುವ ಮೊದಲು ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆಕೆಯ ಕುಟುಂಬದವರು ಆರೋಪಿಸಿದ್ದಾರೆ. ಪೊಲೀಸರು ನೆರೆಹೊರೆಯವರನ್ನು ಬಂಧಿಸಿದ್ದಾರೆ ಎಂದು ತಿಳಿಸಿದ್ದಾರೆ. ಘಟನಾ ಸ್ಥಳವನ್ನು ವಿಧಿವಿಜ್ಞಾನ ತಂಡ ಪರಿಶೀಲಿಸಿದೆ. ಮರಣೋತ್ತರ ಪರೀಕ್ಷೆಯ ವರದಿ ಬಂದ ನಂತರವೇ ಸಾವಿಗೆ ನಿಖರವಾದ ಕಾರಣವನ್ನು ಕಂಡುಹಿಡಿಯಲು ಸಾಧ್ಯ ಎಂದು ಎಸ್‌ಎಸ್‌ಪಿ ಜಗುನಾಥ್ ರೆಡ್ಡಿ ತಿಳಿಸಿದ್ದಾರೆ.

# ಕನ್ನಡ ಚಿತ್ರರಂಗಕ್ಕೆ ಮರಳಿ ಬಂದ ಹೀರೋಯಿನ್ ಸಂಗೀತಾ

‘ಯಾರೇ ನೀನು ಚೆಲುವೆ’ ಖ್ಯಾತಿಯ ನಟಿ ಸಂಗೀತಾ ಅವರು ಕನ್ನಡ ಚಿತ್ರರಂಗಕ್ಕೆ ರೀ-ಎಂಟ್ರಿ ಕೊಟ್ಟಿದ್ದಾರೆ. ಕನ್ನಡದ ಹೊಸ ಸಿನಿಮಾದಲ್ಲಿ ಅವರು ನಾಯಕನ ತಾಯಿ ಪಾತ್ರವನ್ನು ಮಾಡಲು ಒಪ್ಪಿಕೊಂಡಿದ್ದಾರೆ. ಈ ಚಿತ್ರದಲ್ಲಿ ಸಂಗೀತಾ ಅವರು ಭಾಗ್ಯ ಎಂಬ ಪಾತ್ರ ಮಾಡುತ್ತಿದ್ದಾರೆ. ನಟಿ ಸಂಗೀತಾ ಮಾಧವನ್ ಅವರು ಕನ್ನಡ ಚಿತ್ರರಂಗದಿಂದ ದೂರ ಉಳಿದುಕೊಂಡಿದ್ದರು. ಅವರು ಕನ್ನಡ ಸಿನಿಮಾಗಳಲ್ಲಿ ನಟಿಸದೇ ಎರಡೂವರೆ ದಶಕಕ್ಕೂ ಹೆಚ್ಚು ಕಾಲ ಆಗಿದೆ. 1998ರಲ್ಲಿ ಬಿಡುಗಡೆ ಆಗಿದ್ದ ‘ಯಾರೆ ನೀನು ಚೆಲುವೆ’ ಸಿನಿಮಾದಲ್ಲಿ ಸಂಗೀತಾ ಮಾಧವನ್ ಅವರು ಹೀರೋಯಿನ್ ಆಗಿ ನಟಿಸಿದ್ದರು. 2000ನೇ ಇಸವಿಯಲ್ಲಿ ರಿಲೀಸ್ ಆದ ‘ಯಾರೇ ನೀ ಅಭಿಮಾನಿ’ ಸಿನಿಮಾದಲ್ಲಿ ಕೂಡ ಅವರು ಅಭಿನಯಿಸಿದ್ದರು. ಆ ಬಳಿಕ ದೊಡ್ಡ ಗ್ಯಾಪ್ ತೆಗೆದುಕೊಂಡಿದ್ದರು.



ಈಗ ಸಂಗೀತಾ ಮಾಧವನ್ ಅವರು ಮತ್ತೆ ಕನ್ನಡ ಚಿತ್ರರಂಗದ ಕಡೆಗೆ ಮುಖ ಮಾಡಿದ್ದಾರೆ. ಆ ಬಗ್ಗೆ ಮಾಹಿತಿ ಸಿಕ್ಕಿದೆ. ಹೊಸ ತಂಡವೊಂದು ಸಂಗೀತಾ ಅವರನ್ನು ಕನ್ನಡ ಚಿತ್ರರಂಗಕ್ಕೆ ಮರಳಿ ಕರೆತಂದಿದೆ. ಇದು ಅವರ ಅಭಿಮಾನಿಗಳಿಗೆ ಖುಷಿ ನೀಡಿದೆ. ಕಿಚ್ಚ ಸುದೀಪ್ ಅವರ ಆಪ್ತ ಬಳಗದಲ್ಲಿ ಗುರುತಿಸಿಕೊಂಡ ಕಿರಣ್ ವಿಶ್ವನಾಥ್ ಅವರ ನಿರ್ದೇಶನದ ಸಿನಿಮಾದಲ್ಲಿ ಸಂಗೀತಾ ನಟಿಸಲಿದ್ದಾರೆ.

ಕಿರಣ್ ವಿಶ್ವನಾಥ್ ಅವರು ಈ ಮೊದಲು ‘ರನ್ನ’, ‘ವಿಕ್ಟರಿ’ ಸಿನಿಮಾಗಳಿಗೆ ಸಹ-ನಿರ್ದೇಶಕನಾಗಿ ಕೆಲಸ ಮಾಡಿದ್ದರು. ಅವರು ಇದೇ ಮೊದಲ ಬಾರಿಗೆ ಸ್ವತಂತ್ರ ನಿರ್ದೇಶಕರಾಗಿ ಹೊಸ ಸಿನಿಮಾಗೆ ಆಯಕ್ಷನ್-ಕಟ್ ಹೇಳುತ್ತಿದ್ದಾರೆ. ಇದು ಅವರ ಚೊಚ್ಚಲ ಸಿನಿಮಾ. ಈ ಚಿತ್ರದಲ್ಲಿ ಸಂಗೀತಾ ಮಾಧವನ್ ಅವರು ಒಂದು ಪ್ರಮುಖ ಪಾತ್ರವನ್ನು ಮಾಡುತ್ತಿದ್ದಾರೆ. ಈ ಸಿನಿಮಾದಲ್ಲಿ ಸಂಗೀತಾ ಅವರಿಗೆ ಭಾಗ್ಯ ಎಂಬ ಪಾತ್ರವನ್ನು ನೀಡಲಾಗಿದೆ. ನಾಯಕನ ತಾಯಿಯಾಗಿ ಅವರು ಅಭಿನಯಿಸಲಿದ್ದಾರೆ. ಇತ್ತೀಚೆಗಷ್ಟೇ ಚಿತ್ರತಂಡ ‘ಮಹಾನಟಿ’ ಖ್ಯಾತಿಯ ಪ್ರಿಯಾಂಕಾ ಆಚಾರ್ ಅವರನ್ನು ಹೀರೋಯಿನ್ ಆಗಿ ಪರಿಚಯಿಸಿತ್ತು. ಇದೀಗ ಸಂಗೀತಾ ಮಾಧವನ್ ಅವರು ಕೂಡ ಪಾತ್ರವರ್ಗದಲ್ಲಿ ಇದ್ದಾರೆ ಎಂಬುದನ್ನು ತಿಳಿಸಲಾಗಿದೆ.



# ಟಾಕ್ಸಿಕ್ ಚೆಲುವೆ ಬಗ್ಗೆ ಗಾಸಿಪ್

ತಮ್ಮ ವೃತ್ತಿಜೀವನ ಮತ್ತು ಸಾರ್ವಜನಿಕ ಜೀವನದ ಬಗ್ಗೆ ಮಾತನಾಡಿದ ತಾರಾ ಸುತಾರಿಯಾ, ‘ವರ್ಷಗಳು ಉರುಳಿದಂತೆ ಮನಸ್ಸಿನ ಶಾಂತಿಯನ್ನು ಕಾಪಾಡಿಕೊಳ್ಳುವುದು ಹೇಗೆ ಎಂಬುದನ್ನು ನಾನು ಕಲಿತಿದ್ದೇನೆ. ಯಶಸ್ಸು ಎಂಬುದು ನಮ್ಮ ಒಳಗಿನಿಂದ ಬರಬೇಕೇ ಹೊರತು ಹೊರಗಿನಿಂದಲ್ಲ ಎಂದು ನಾನು ನಂಬುತ್ತೇನೆ. ಕೆಲಸಕ್ಕಿಂತಲೂ ನನ್ನ ಮೌಲ್ಯಗಳು ನನಗೆ ಮುಖ್ಯ. ಸಿನಿಮಾವನ್ನು ಕಳೆದುಕೊಂಡರೂ ಪರವಾಗಿಲ್ಲ, ಆದರೆ ನನ್ನ ವ್ಯಕ್ತಿತ್ವವನ್ನು ನಾನು ಎಂದಿಗೂ ಕಳೆದುಕೊಳ್ಳಲಾರೆ’ ಎಂದು ಮಾರ್ಮಿಕವಾಗಿ ಹೇಳಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಸುದ್ದಿಗಳ ಬಗ್ಗೆ ಪ್ರತಿಕ್ರಿಯೆ ನೀಡಿರುವ ನಟಿ, ‘ತಮ್ಮ ಬಗ್ಗೆ ಹರಿದಾಡುವ ಅದೆಷ್ಟೋ ಗಾಸಿಪ್‌ಗಳಿಗೆ ಸ್ಪಷ್ಟನೆ ನೀಡುವ ಅವಶ್ಯಕತೆ ತಮಗೆ ಅನಿಸಿಲ್ಲ. ಸತ್ಯ ಏನೆಂಬುದು ನನಗೆ ಮತ್ತು ನನ್ನ ಆಪ್ತರಿಗೆ ತಿಳಿದಿದ್ದರೆ ಅಷ್ಟೇ ಸಾಕು ಎಂದಿದ್ದಾರೆ ತಾರಾ. 2025ರ ಆರಂಭದಿಂದಲೂ ತಾರಾ ಮತ್ತು ವೀರ್ ಪಹಾರಿಯಾ ಅವರ ಡೇಟಿಂಗ್ ಬಗ್ಗೆ ಸುದ್ದಿಗಳು ಹರಿದಾಡುತ್ತಿವೆ. ಇತ್ತೀಚೆಗೆ ಗಾಯಕ ಎಪಿ ಧಿಲ್ಲೋನ್ ಅವರ ಸಂಗೀತ ಕಾರ್ಯಕ್ರಮವೊಂದರಲ್ಲಿ ತಾರಾ ವೇದಿಕೆಯ ಮೇಲೆ ನೃತ್ಯ ಮಾಡಿದ್ದರು. ಈ ವಿಡಿಯೋವನ್ನು ಇಟ್ಟುಕೊಂಡು ಹಲವರು ನಟಿಯನ್ನು ಕೆಟ್ಟದಾಗಿ ಟ್ರೋಲ್ ಮಾಡಿದ್ದರು. ಟ್ರೋಲ್‌ಗಳು ಹೆಚ್ಚಾದಂತೆ ಇನ್‌ಸ್ಟಾಗ್ರಾಮ್ ಮೂಲಕ ತಾರಾ ಖಡಕ್ ಪ್ರತಿಕ್ರಿಯೆ ನೀಡಿದ್ದಾರೆ.

# ‘ಪ್ಯಾಟೆ ಮಂದಿ ಕಾಡಿಗ್ ಬಂದ್ರು’ ಖ್ಯಾತಿಯ ಶರತ್ ಈಗ ‘ಸ್ಟಾರ್’



ವಿಜಯ ಸೂರ್ಯ ಅವರು ‘ಸ್ಟಾರ್’ ಸಿನಿಮಾಗೆ ಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಶರತ್ ಪ್ರಕಾಶ್ ಅವರು ಹೀರೋ ಆಗಿ ನಟಿಸಿ ನಿರ್ಮಾಣ ಕೂಡ ಮಾಡಿದ್ದಾರೆ. ರಂಗಭೂಮಿಯ ಕಲಾವಿದರಿಗೆ ಈ ಸಿನಿಮಾದಲ್ಲಿ ಅವಕಾಶ ನೀಡಲಾಗಿದೆ. ಇತ್ತೀಚೆಗೆ ಸುದ್ದಿಗೋಷ್ಠಿ ನಡೆಸಿದ ಚಿತ್ರತಂಡದವರು ಒಂದಷ್ಟು ಮಾಹಿತಿ ಹಂಚಿಕೊಂಡರು. ಕಿರುತೆರೆಯಲ್ಲಿ ಫೇಮಸ್ ಆಗಿದ್ದ ‘ಪ್ಯಾಟೆ ಮಂದಿ ಕಾಡಿಗ್ ಬಂದ್ರು’ ರಿಯಾಲಿಟಿ ಶೋನ 2ನೇ ಸೀಸನ್‌ನಲ್ಲಿ ಶರತ್ ಪ್ರಕಾಶ್ ಅವರು ಸ್ಪರ್ಧಿಸಿದ್ದರು. ಈಗ ದೊಡ್ಡ ಗ್ಯಾಪ್ ಬಳಿಕ ಅವರು ಹೊಸ ಸಿನಿಮಾ ಮಾಡಿದ್ದಾರೆ. ಈ ಸಿನಿಮಾಗೆ ‘ಸ್ಟಾರ್’ ಎಂದು ಹೆಸರು ಇಡಲಾಗಿದೆ. ಈ ಸಿನಿಮಾದಲ್ಲಿ ಬಹುತೇಕ ಹೊಸಬರೇ ಇದ್ದಾರೆ. ಇತ್ತೀಚೆಗೆ ‘ಸ್ಟಾರ್’ ಸಿನಿಮಾದ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು. ರೇಣುಕಾಂಬಾ ಪ್ರಿವ್ಯೂ ಥಿಯೇಟರ್‌ನಲ್ಲಿ ಸೆಕ್ಯುರಿಟಿ ಗಾರ್ಡ್ ರಮೇಶ್ ಅವರಿಂದ ಈ ಚಿತ್ರದ ಟ್ರೇಲರ್ ಅನಾವರಣ ಮಾಡಿಸಲಾಯಿತು.

‘ಲಯನ್ ಕ್ರಿಯೇಶನ್ಸ್’ ಬ್ಯಾನರ್ ಮೂಲಕ ಶರತ್ ಪ್ರಕಾಶ್ ಅವರೇ ಈ ಸಿನಿಮಾಗೆ ಬಂಡವಾಳ ಹೂಡಿದ್ದಾರೆ. ನಾಯಕನಾಗಿ ನಟಿಸಿ, ನಿರ್ಮಾಣ ಮಾಡುವ ಡಬಲ್ ಜವಾಬ್ದಾರಿಯನ್ನು ಅವರು ನಿಭಾಯಿಸಿದ್ದಾರೆ. ಈ ಸಿನಿಮಾಗೆ ವಿಜಯ ಸೂರ್ಯ ಅವರು ಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ‘ಸ್ಟಾರ್’ ಸಿನಿಮಾದ ಶೀರ್ಷಿಕೆಗೆ ‘ಭೂಮಿಗೆ ಹತ್ರ’ ಎಂಬ ಟ್ಯಾಗ್ ಲೈನ್ ಕೂಡ ಇದೆ.

ಈ ಸಿನಿಮಾದ ಪಾತ್ರವರ್ಗದಲ್ಲಿ ಶರತ್ ಪ್ರಕಾಶ್, ರಜತರಕ್ಷ ಮತ್ತು ರಂಗಭೂಮಿ ಕಲಾವಿದರು ನಟಿಸಿದ್ದಾರೆ. ಚಿತ್ರದಲ್ಲಿ ಮೂರು ಹಾಡುಗಳಿದ್ದು, ವಿಕಾಸ್ ವಸಿಷ್ಠ ಅವರು ಸಂಗೀತ ಸಂಯೋಜನೆ ಮಾಡಿದ್ದಾರೆ. ಎಪಿಎಸ್‌ಕೆ ಅವರ ಛಾಯಾಗ್ರಹಣ, ವಿನು ಮನಸು ಅವರ ಹಿನ್ನೆಲೆ ಸಂಗೀತ, ಶಶಿಧರ್ ಪಿ. ಅವರ ಸಂಕಲನ ಈ ಚಿತ್ರಕ್ಕಿದೆ. ಟ್ರೇಲರ್ ಬಿಡುಗಡೆ ವೇಳೆ ಶರತ್ ಪ್ರಕಾಶ್ ಮಾತನಾಡಿದರು. ‘ಅಣ್ಣಾವ್ರ ಕಾಲದಿಂದಲೂ ಅಪ್ಪ ಪ್ರಕಾಶ್ ಅವರು ಸಿನಿಮಾಗಳಲ್ಲಿ ಫೈಟರ್ ಆಗಿ ಕಾಣಿಸಿಕೊಂಡಿದ್ದರು. ನನಗೆ ಪ್ಯಾಟೆ ಮಂದಿ ಕಾಡಿಗ್ ಬಂದ್ರು ಶೋ ಬಳಿಕ ಹಲವು ಅವಕಾಶಗಳು ಬಂದವು. ಇಲ್ಲಿಯವರೆಗೂ 25 ಸಿನಿಮಾಗಳಲ್ಲಿ ಸಣ್ಣ ಪುಟ್ಟ ಪಾತ್ರಗಳನ್ನು ಮಾಡಿದರೂ ಬ್ರೇಕ್ ಸಿಕ್ಕಿಲ್ಲ. ನಿರ್ದೇಶಕರು ಹೇಳಿದ ಒನ್ ಲೈನ್ ಇಷ್ಟವಾಯಿತು. ರೌಡಿಸಂ, ತಂದೆ ಮಗಳ ಬಾಂಧವ್ಯ, ತಾಯಿ ಸೆಂಟಿಮೆಂಟ್, ಪ್ರೀತಿ ಮುಂತಾದ ಅಂಶಗಳು ನಮ್ಮ ಸಿನಿಮಾದಲ್ಲಿವೆ’ ಎಂದು ಶರತ್ ಹೇಳಿದ್ದಾರೆ.

# ಟಾಪ್‌ಲೆಸ್ ಆಗಿ ಕಾಣಿಸಿಕೊಂಡ ಶಾಲಿನಿ ಪಾಂಡೆ



ಖ್ಯಾತ ನಟಿ ಶಾಲಿನಿ ಪಾಂಡೆ ಅವರು ಈ ಪರಿ ಬೋಲ್ಡ್ ಆಗಿ ಕಾಣಿಸಿಕೊಂಡು ಅಚ್ಚರಿ ಮೂಡಿಸಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಶಾಲಿನಿ ಅವರ ಟಾಪ್-ಲೆಸ್ ಫೋಟೋಗಳು ಸಿಕ್ಕಾಪಟ್ಟೆ ವೈರಲ್ ಆಗಿವೆ. ಅವರ ಅಭಿಮಾನಿಗಳು ಬಗೆಬಗೆಯಲ್ಲಿ ಕಮೆಂಟ್ ಮಾಡುತ್ತಿದ್ದಾರೆ. ಆ ಬಗ್ಗೆ ಇಲ್ಲಿದೆ ಇನ್ನಷ್ಟು ವಿವರ.. ಟಾಪ್‌ಲೆಸ್ ಸೂಪರ್ ಹಿಟ್ ‘ಅರ್ಜುನ್ ರೆಡ್ಡಿ’ ಸಿನಿಮಾದಲ್ಲಿ ನಟಿ ಶಾಲಿನಿ ಪಾಂಡೆ ಅವರು ಮುಗ್ಧ ಹುಡುಗಿಯಾಗಿ ಕಾಣಿಸಿಕೊಂಡಿದ್ದರು. ಆ ಪಾತ್ರದಲ್ಲಿ ಅವರನ್ನು ಪ್ರೇಕ್ಷಕರು ಬಹಳ ಇಷ್ಟಪಟ್ಟಿದ್ದರು. ಆದರೆ ಶಾಲಿನಿ ಪಾಂಡೆ ಅವರು ರಿಯಲ್ ಲೈಫ್‌ನಲ್ಲಿ ಸಖತ್ ಬೋಲ್ಡ್. ಈಗ ತಮ್ಮ ಗ್ಲಾಮರಸ್ ಅವತಾರದ ಮೂಲಕ ಇಂಟರ್ನೆಟ್‌ನಲ್ಲಿ ಸಂಚಲನ ಮೂಡಿಸುತ್ತಿದ್ದಾರೆ. ಸಾಮಾನ್ಯವಾಗಿ ತೆರೆಯ ಮೇಲೆ ಸಂಪ್ರದಾಯಬದ್ಧ ಪಾತ್ರಗಳಲ್ಲಿ ನಟಿಸುವ ಶಾಲಿನಿ ಅವರು, ತಮ್ಮ ಇಮೇಜ್ ಬದಿಗಿಟ್ಟು ಬೋಲ್ಡ್ ಆಗಿ ಕಾಣಿಸಿಕೊಳ್ಳುವ ಮೂಲಕ ಅಭಿಮಾನಿಗಳ ಗಮನ ಸೆಳೆದಿದ್ದಾರೆ. ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಶಾಲಿನಿ ಪಾಂಡೆ ಇತ್ತೀಚೆಗೆ ಹಂಚಿಕೊಂಡಿರುವ ಫೋಟೋಗಳು ಸಖತ್ ವೈರಲ್ ಆಗುತ್ತಿವೆ. ಈ ಫೋಟೋದಲ್ಲಿ ಶಾಲಿನಿ ಕೇವಲ ಟವಲ್ ಸುತ್ತಿಕೊಂಡು, ಬೆನ್ನು ತೋರಿಸಿ ಪೋಸ್ ನೀಡಿದ್ದಾರೆ. ಯಾವುದೇ ಅಬ್ಬರವಿಲ್ಲದೇ ಸರಳ ಮೇಕಪ್, ಬಿಟ್ಟ ಕೂದಲು ಹಾಗೂ ಮಂದ ಬೆಳಕಿನಲ್ಲಿ ಮೂಡಿಬಂದಿರುವ ಈ ಫೋಟೋಗಳು ಶಾಲಿನಿ ಅವರ ಆತ್ಮವಿಶ್ವಾಸವನ್ನು ಎತ್ತಿ ತೋರಿಸುತ್ತಿವೆ. ಶಾಲಿನಿ ಪಾಂಡೆ ಅವರ ಸಹಜವಾದ ಸೌಂದರ್ಯ ಮತ್ತು ಫಿಟ್‌ನೆಸ್‌ನಿಂದಾಗಿ ಈ ಫೋಟೋ ಅತ್ಯಂತ ಆಕರ್ಷಕವಾಗಿ ಕಾಣಿಸುತ್ತಿವೆ.

# ‘ವಿನಾಶ ಕಾಲೆ’ ಸಿನಿಮಾಗೆ ಸಾಥ್

ಬಿಗ್ ಬಾಸ್ ಖ್ಯಾತಿಯ ಮಲ್ಲಮ್ಮ ‘ವಿನಾಶ ಕಾಲೆ’ ಸಿನಿಮಾದಲ್ಲಿ ನಟಿಸುತ್ತಿದ್ದಾರೆ.

ಈ ಸಿನಿಮಾಗೆ ಎಸ್. ಕಿರಣ್‌ಕುಮಾರ್ ನಿರ್ದೇಶನ ಮಾಡುತ್ತಿದ್ದಾರೆ. ಇತ್ತೀಚೆಗೆ ಮುಹೂರ್ತ ನಡೆದಿದೆ. ಮುಹೂರ್ತ ಸಮಾರಂಭಕ್ಕೆ ಡಾಗ್ ಸತೀಶ್, ಕರಿಬಸಪ್ಪ ಮುಂತಾದವರು ಆಗಮಿಸಿದ್ದರು. ‘ಶಕ್ತಿ ಫಿಲ್ಮ್ಸ್’ ಮೂಲಕ ಈ ಸಿನಿಮಾ ನಿರ್ಮಾಣ ಆಗುತ್ತಿದೆ.

‘ವಿನಾಶ ಕಾಲೆ ವಿಪರೀತ ಬುದ್ಧಿ’ ಎಂಬ ಮಾತಿದೆ. ವೇದ ಸುಳ್ಳಾದರೂ ಗಾದೆ ಸುಳ್ಳಾಗಲ್ಲ ಎನ್ನುತ್ತಾರೆ. ‘ವಿನಾಶ ಕಾಲೆ’ ಎಂಬುದನ್ನೇ ಶೀರ್ಷಿಕೆಯಾಗಿ ಇಟ್ಟುಕೊಂಡು ಹೊಸ ಸಿನಿಮಾ ಮೂಡಿಬರುತ್ತಿದೆ. ಇತ್ತೀಚೆಗೆ ಈ ಸಿನಿಮಾಗೆ ಮುಹೂರ್ತ ಮಾಡಲಾಯಿತು.



ರಾಜಾಜಿನಗರದ ಕೈಗಾರಿಕಾ ಕೇಂದ್ರದಲ್ಲಿರುವ ಮದ್ದುರಮ್ಮ ದೇವಿ ಹಾಗೂ ಯಲ್ಲಮ್ಮ ದೇವಿ ಸನ್ನಿಧಿಯಲ್ಲಿ ಮುಹೂರ್ತ ಸಮಾರಂಭ ನಡೆಯಿತು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಮಾಜಿ ಅಧ್ಯಕ್ಷ ಭಾ.ಮ. ಹರೀಶ್ ಅವರು ಈ ಚಿತ್ರದ ಮೊದಲ ದೃಶ್ಯಕ್ಕೆ ಕ್ಲ್ಯಾಪ್ ಮಾಡಿ ಚಿತ್ರತಂಡಕ್ಕೆ ಶುಭಕೋರಿದರು. ಈ ವೇಳೆ ‘ಬಿಗ್ ಬಾಸ್ ಕನ್ನಡ ಸೀಸನ್ 12’ ಸ್ಪರ್ಧಿಗಳಾದ ಕರಿಬಸಪ್ಪ, ಡಾಗ್ ಸತೀಶ್, ಮಲ್ಲಮ್ಮ ಅವರು ಸಾಥ್ ನೀಡಿದರು. ‘ಶಕ್ತಿ ಫಿಲ್ಮ್ಸ್’ ಮೂಲಕ ‘ವಿನಾಶ ಕಾಲೆ’ ಸಿನಿಮಾ ನಿರ್ಮಾಣ ಆಗುತ್ತಿದೆ. ತುಮಕೂರು ಮೂಲದ ಎಸ್. ಕಿರಣ್‌ಕುಮಾರ್ ಅವರು ಕಳೆದ ಐದು ವರ್ಷಗಳಿಂದ ಹಲವು ನಿರ್ದೇಶಕರ ಬಳಿ ಅನುಭವ ಪಡೆದುಕೊಂಡು ಈಗ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಪಾವನಿ ಸಿರಿ, ರಿಷಿಕಾ ಗೌಡ, ವೈಷ್ಣವಿ, ರಚನಾ, ಶ್ರೀನಿಧಿ ಮುಂತಾದವರು ಈ ಸಿನಿಮಾದ ಪಾತ್ರವರ್ಗದಲ್ಲಿ ಇದ್ದಾರೆ. ಶೋಭ ಅವರು ಮಾಂತ್ರಿಕಳಾಗಿ ಕಾಣಿಸಿಕೊಳ್ಳಲಿದ್ದಾರೆ. ಮಂಡ್ಯ ಸಿದ್ದು ಅವರು ಅಘೋರಿ ಪಾತ್ರ ಮಾಡುತ್ತಿದ್ದಾರೆ. ಬಿಗ್ ಬಾಸ್ ಮಲ್ಲಮ್ಮ, ಪ್ರವಲಿಕಾ, ದಿಶಾ ಮುಂತಾದವರು ನಟಿಸುತ್ತಿದ್ದಾರೆ. ಪಾತ್ರವರ್ಗಕ್ಕೆ ಐದು ಹುಡುಗಿಯರು ಆಯ್ಕೆಯಾಗಿದ್ದಾರೆ. ಹುಡುಗರ ಆಯ್ಕೆ ಪ್ರಕ್ರಿಯೆ ನಡೆಯುತ್ತಿದೆ. ಮಾರ್ಚ್ ತಿಂಗಳಿಂದ ಮೂವತ್ತು ದಿನಗಳ ಕಾಲ ಬೆಂಗಳೂರು, ಚಿಕ್ಕಮಗಳೂರು ಮುಂತಾದೆಡೆ ಶೂಟಿಂಗ್ ನಡೆಯುತ್ತದೆ. ಮಂಜುಕವಿ ಅವರು ‘ವಿನಾಶ ಕಾಲೆ’ ಸಿನಿಮಾದ ಮೂರು ಹಾಡುಗಳಿಗೆ ಸಂಗೀತ ನೀಡಿ ಸಾಹಿತ್ಯ ಬರೆದಿದ್ದಾರೆ.

# 610 ದಿನಗಳ ನಂತರ ಸೇಡು ತೀರಿಸಿಕೊಂಡ ಕಿವೀಸ್

2026ರ ಟಿ20 ವಿಶ್ವಕಪ್‌ನ ಎರಡನೇ ದಿನದ ಮೊದಲ ಪಂದ್ಯದಲ್ಲಿ ನ್ಯೂಜಿಲೆಂಡ್ ಅಫ್ಘಾನಿಸ್ತಾನವನ್ನು ಸೋಲಿಸಿ, 2024ರ ಸೋಲಿಗೆ ಸೇಡು ತೀರಿಸಿಕೊಂಡಿತು. ಅಫ್ಘಾನ್ ನೀಡಿದ 182 ರನ್‌ಗಳ ಗುರಿಯನ್ನು ಟಿಮ್ ಸೀಫರ್ಟ್ ಅವರ ಸ್ಫೋಟಕ 65 ರನ್‌ಗಳ ನೆರವಿನಿಂದ ನ್ಯೂಜಿಲೆಂಡ್ 17.5 ಓವರ್‌ಗಳಲ್ಲಿ ಸಾಧಿಸಿತು. ಗುಲ್ಬದಿನ್ ನೈಬ್ 63 ರನ್ ಗಳಿಸಿದರೂ ಅಫ್ಘಾನ್ ಸೋಲು ತಪ್ಪಿಸಲಾಗಲಿಲ್ಲ. ಕಿವೀಸ್ ತಂಡದ ಈ ಗೆಲುವು ಟೂರ್ನಿಯಲ್ಲಿ ಉತ್ತಮ ಆರಂಭ ನೀಡಿದೆ. 2026 ರ ಟಿ20 ವಿಶ್ವಕಪ್‌ನ ಎರಡನೇ ದಿನದ ಮೊದಲ ಪಂದ್ಯದಂದು ಅಫ್ಘಾನಿಸ್ತಾನ ಹಾಗೂ ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿದ್ದವು. ಕಳೆದ ಕೆಲವು ವರ್ಷಗಳಿಂದ ಅಫ್ಘನ್ ತಂಡ ಕೂಡ ಬಲಿಷ್ಠ ತಂಡಗಳನ್ನು ಮಣಿಸುವ ಸಾಮರ್ಥ್ಯವನ್ನು ತೋರಿಸಿರುವುದರಿಂದ ಈ ಪಂದ್ಯ ಸಾಕಷ್ಟು ಕುತೂಹಲ ಕೆರಳಿಸಿತ್ತು. ಇದರ ಜೊತೆಗೆ ಕಳೆದ ವಿಶ್ವಕಪ್‌ನಲ್ಲಿ ಇದೇ ನ್ಯೂಜಿಲೆಂಡ್ ತಂಡವನ್ನು ಭಾರಿ ಅಂತರದಿಂದ ಅಫ್ಘಾನಿಸ್ತಾನ ಮಣಿಸಿತ್ತು. ಅಂತಿಮವಾಗಿ ಈ ಸೇಡಿನ ಸಮರದಲ್ಲಿ ಗೆದ್ದು ಬೀಗುವುದರಲ್ಲಿ ನ್ಯೂಜಿಲೆಂಡ್ ಯಶಸ್ವಿಯಾಯಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ 182 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ನ್ಯೂಜಿಲೆಂಡ್ ಇನ್ನು 13 ಎಸೆತಗಳು ಬಾಕಿ ಇರುವಂತೆಯೇ 5 ವಿಕೆಟ್ ಕಳೆದುಕೊಂಡು ಜಯದ ನಗೆ ಬೀರಿತು. ಇದರೊಂದಿಗೆ, ನ್ಯೂಜಿಲೆಂಡ್ 2024 ರ ವಿಶ್ವಕಪ್‌ನಲ್ಲಿ ತನ್ನ ಸೋಲಿಗೆ ಸೇಡು ಕೂಡ ತೀರಿಸಿಕೊಂಡಿತು. ಸರಿಯಾಗಿ 610 ದಿನಗಳ ಹಿಂದೆ ಅಂದರೆ ಜೂನ್ 8, 2024 ರಂದು ನಡೆದಿದ್ದ ಟಿ20 ವಿಶ್ವಕಪ್ ಪಂದ್ಯದಲ್ಲಿ ಅಫ್ಘಾನಿಸ್ತಾನ ತಂಡವು ನ್ಯೂಜಿಲೆಂಡ್ ತಂಡವನ್ನು ಕೇವಲ 75 ರನ್‌ಗಳಿಗೆ ಆಲೌಟ್ ಮಾಡಿ 84 ರನ್‌ಗಳ ಬೃಹತ್ ಗೆಲುವು ಸಾಧಿಸಿತ್ತು. ಪರಿಣಾಮವಾಗಿ, ಚೆನ್ನೈ ಪಿಚ್‌ನಲ್ಲೂ ಇದೇ ರೀತಿಯ ಪ್ರದರ್ಶನ ನಿರೀಕ್ಷಿಸಲಾಗಿತ್ತು. ವಿಶೇಷವಾಗಿ ಭಾರತ ವಿರುದ್ಧದ ಇತ್ತೀಚಿನ ಟಿ20 ಸರಣಿಯಲ್ಲಿ ಸ್ಪಿನ್ನರ್‌ಗಳ ವಿರುದ್ಧ ಕಿವೀಸ್ ಬ್ಯಾಟ್ಸ್‌ಮನ್‌ಗಳ ಹೋರಾಟ ಪರಿಗಣಿಸಿದರೆ, ಅಫ್ಘಾನಿಸ್ತಾನವು ಅಸಾಧಾರಣ ಸವಾಲಾಗಿ ಪರಿಣಮಿಸಿತ್ತು. ಇದಕ್ಕೆ ಪೂರಕವಾಗಿ 182 ರನ್‌ಗಳ ಗುರಿ ಬೆನ್ನಟ್ಟಿದ ನ್ಯೂಜಿಲೆಂಡ್ ಎರಡನೇ ಓವರ್‌ನಲ್ಲಿ ಎರಡು ವಿಕೆಟ್‌ಗಳನ್ನು ಕಳೆದುಕೊಂಡಿತು. ಸ್ಪಿನ್ನರ್ ಮುಜೀಬ್ ಉರ್ ರೆಹಮಾನ್ ಆರಂಭಿಕರಾದ ಫಿನ್ ಅಲೆನ್ ಮತ್ತು ರಚಿನ್ ರವೀಂದ್ರ ಅವರನ್ನು ಸತತ ಎಸೆತಗಳಲ್ಲಿ ಔಟ್ ಮಾಡಿದರು. ಆದಾಗ್ಯೂ, ಆ ಬಳಿಕ ಜೊತೆಯಾದ ಟಿಮ್ ಸೀಫರ್ಟ್ ಮತ್ತು ಗ್ಲೆನ್ ಫಿಲಿಪ್ಸ್ 74 ರನ್‌ಗಳ ಜೊತೆಯಾಟ ನಡೆಸಿ ತಂಡದ ಇನ್ನಿಂಗ್ಸ್ ನಿಭಾಯಿಸಿದರು. ಸೀಫರ್ಟ್ 65 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಕೂಡ ಆಡಿದರು ಅವರಿಗೆ ಮಾರ್ಕ್ ಚಾಪ್ಮನ್ ಕೂಡ ಸಾಥ್ ನೀಡಿ 28 ರನ್‌ಗಳ ಕಾಣಿಕೆ ನೀಡಿದರು. ಇಬ್ಬರೂ ಔಟಾದಾಗ, ನ್ಯೂಜಿಲೆಂಡ್ 26 ಎಸೆತಗಳಲ್ಲಿ ಕೇವಲ 28 ರನ್ ಗಳಿಸಬೇಕಾಗಿತ್ತು. ಕೊನೆಯಲ್ಲಿ ಗ್ಲೆನ್ ಫಿಲಿಪ್ಸ್ ಮತ್ತು ನಾಯಕ ಮಿಚೆಲ್ ಸ್ಯಾಂಟ್ನರ್ ಮುಂದಿನ 13 ಎಸೆತಗಳಲ್ಲಿ 28 ರನ್ ಗಳಿಸಿ ಕೇವಲ 17.5 ಓವರ್‌ಗಳಲ್ಲಿ ತಂಡಕ್ಕೆ ಗೆಲುವು ತಂದುಕೊಟ್ಟರು.



## ಅವಮಾನಕರ ಸೋಲಿಗೆ ಸೇಡು ತೀರಿಸಿಕೊಂಡ ನ್ಯೂಜಿಲೆಂಡ್


# ಮುಂದಿನ ಪಂದ್ಯಕ್ಕೂ ಮುನ್ನ ಮತ್ತೋರ್ವ ಆಟಗಾರ ಎಂಟ್ರಿ

ಟೀಮ್ ಇಂಡಿಯಾ ತನ್ನ ಮುಂದಿನ ಪಂದ್ಯದಲ್ಲಿ ನಮೀಬಿಯ ತಂಡವನ್ನು ಎದುರಿಸಲಿದೆ. ಈ ಮ್ಯಾಚ್ ಬಳಿಕ ಭಾರತ ತಂಡವು ಪಾಕಿಸ್ತಾನ್ ಹಾಗೂ ನೆದರ್‌ಲೆಂಡ್ಸ್ ವಿರುದ್ಧ ಕಣಕ್ಕಿಳಿಯಲಿದೆ. ನಮೀಬಿಯ ವಿರುದ್ಧದ ಪಂದ್ಯಕ್ಕೂ ಮುನ್ನ ಟೀಮ್ ಇಂಡಿಯಾಗೆ ಆಲ್ ರೌಂಡರ್ ಎಂಟ್ರಿ ಕೊಡಲಿರುವುದು ಖಚಿತವಾಗಿದೆ.

ಭಾರತ ತಂಡವು ಟಿ20 ವಿಶ್ವಕಪ್‌ನಲ್ಲಿ ಶುಭಾರಂಭ ಮಾಡಿದೆ. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಯುಎಸ್‌ಎ ತಂಡವನ್ನು 29 ರನ್‌ಗಳಿಂದ ಮಣಿಸಿ ಟೀಮ್ ಇಂಡಿಯಾ ಗೆಲುವಿನ ಖಾತೆ ತೆರೆದಿದೆ. ಈ ಗೆಲುವಿನ ಬೆನ್ನಲ್ಲೇ ಭಾರತ ತಂಡಕ್ಕೆ ಮತ್ತೊಂದು ಗುಡ್ ನ್ಯೂಸ್ ಸಿಕ್ಕಿದೆ. ಅಂದರೆ ಟೀಮ್ ಇಂಡಿಯಾದಿಂದ ಹೊರಗುಳಿದಿದ್ದ ಪ್ರಮುಖ ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್ ಸಂಪೂರ್ಣ ಫಿಟ್ ಆಗಿದ್ದಾರೆ. ನ್ಯೂಝಿಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಕಣಕ್ಕಿಳಿದಿದ್ದ ವಾಷಿಂಗ್ಟನ್ ಸುಂದರ್ ಪೆಕ್ಕೆಲುಬಿನ ನೋವಿನ ಸಮಸ್ಯೆಗೀಡಾಗಿದ್ದರು. ಹೀಗಾಗಿ ಅವರು ಕಿವೀಸ್ ವಿರುದ್ಧದ ಟಿ20 ಸರಣಿಯಿಂದ ಹೊರಗುಳಿದಿದ್ದರು. ಅಷ್ಟೇ ಅಲ್ಲದೆ ಟಿ20 ವಿಶ್ವಕಪ್‌ನ ಮೊದಲ ಪಂದ್ಯದ ವೇಳೆಯೂ ಭಾರತ ತಂಡದೊಡನೆ ಕಾಣಿಸಿಕೊಂಡಿರಲಿಲ್ಲ. ಇದೀಗ ಸಂಪೂರ್ಣ ಫಿಟ್‌ನೆಸ್ ಸಾಧಿಸಿರುವ ವಾಷಿಂಗ್ಟನ್ ಸುಂದರ್ ಅಭ್ಯಾಸವನ್ನು ಆರಂಭಿಸಿದ್ದಾರೆ. ಅಷ್ಟೇ ಅಲ್ಲದೆ ಫೆಬ್ರವರಿ 12 ಕ್ಕೂ ಮುನ್ನ ಅವರು ದೆಹಲಿಯಲ್ಲಿ ಭಾರತ ತಂಡವನ್ನು ಕೂಡಿಕೊಳ್ಳಲಿದ್ದಾರೆ. ಅಂದರೆ ಭಾರತ ಮತ್ತು ನಮೀಬಿಯ ನಡುವಣ ಪಂದ್ಯವು ಫೆಬ್ರವರಿ 12 ರಂದು ದೆಹಲಿಯಲ್ಲಿ ನಡೆಯಲಿದೆ. ಈ ಪಂದ್ಯಕ್ಕೂ ಮುನ್ನ ವಾಷಿಂಗ್ಟನ್ ಸುಂದರ್ ಟೀಮ್ ಇಂಡಿಯಾವನ್ನು ಕೂಡಿಕೊಳ್ಳುವುದು ಖಚಿತವಾಗಿದೆ.



# ನಾನು ಎಷ್ಟು ಒತ್ತಡ ಅನುಭವಿಸಿದ್ದೆ ಎಂಬುದು ನಂಗೆ ಗೊತ್ತು!



ಟೀಮ್ ಇಂಡಿಯಾ ನಾಯಕ ಸೂರ್ಯಕುಮಾರ್ ಯಾದವ್, ತಾನು ಅನುಭವಿಸಿದ ಒತ್ತಡವನ್ನು ವಿವರಿಸಿದ್ದಾರೆ. ಬೃಹತ್ ಮೊತ್ತದ ಗುರಿಯೊಂದಿಗೆ ಇನಿಂಗ್ಸ್ ಆರಂಭಿಸಿ ನಾವು ಕೇವಲ 77 ರನ್‌ಗಳಿಗೆ 6 ವಿಕೆಟ್ ಕಳೆದುಕೊಂಡಿದ್ದವು. ಈ ವೇಳೆ ನಾನು ಎಷ್ಟು ಒತ್ತಡವನ್ನು ಅನುಭವಿಸುತ್ತಿದ್ದೆ ಎಂದು ನನಗೆ ಮಾತ್ರ ಗೊತ್ತಿದೆ. ಆದರೆ ಇಂತಹ ಒತ್ತಡಗಳ ಸಂದರ್ಭಗಳಲ್ಲೂ ಉತ್ತಮವಾಗಿ ಬ್ಯಾಟಿಂಗ್ ಮಾಡಬಲ್ಲೆ ಎನ್ನುವ ನಂಬಿಕೆ ನನಗಿತ್ತು. ಏಕೆಂದರೆ ನಾನು ಇಲ್ಲೇ ಆಡಿದವನು. ಮುಂಬೈ ಕ್ರಿಕೆಟ್ ಮೈದಾನ, ಆಝಾದ್ ಮೈದಾನ, ಕ್ರಾಸ್ ಮೈದಾನದಲ್ಲಿ ನಾನು ಕ್ರಿಕೆಟ್ ಕೆರಿಯರ್ ರೂಪಿಸಿದ್ದೇನೆ.

ಹೀಗಾಗಿ ಕೊನೆಯವರೆಗೂ ಬ್ಯಾಟಿಂಗ್ ಮಾಡಿದರೆ, ಪಂದ್ಯದಲ್ಲಿ ವ್ಯತ್ಯಾಸವನ್ನುಂಟು ಮಾಡಬಹುದು ಎಂಬುದು ನನಗೆ ತಿಳಿದಿತ್ತು. ಹೀಗಾಗಿ ಕ್ರೀಸ್ ಕಚ್ಚಿ ಆಡಲು ನಿರ್ಧರಿಸಿದೆ ಎಂದು ಸೂರ್ಯಕುಮಾರ್ ಯಾದವ್ ಹೇಳಿದ್ದಾರೆ. ಯಾವಾಗಲೂ ವಾಂಖೆಡೆಯಲ್ಲಿ ಇರುವುದಕ್ಕಿಂತ ಸ್ವಲ್ಪ ಭಿನ್ನವಾದ ಪಿಚ್ ಇದಾಗಿತ್ತು. ಬೆಳಿಗ್ಗೆ ಹೊರಗೆ ಹೆಚ್ಚು ಬಿಸಿಲು ಇರಲಿಲ್ಲ. ಕ್ಯುರೇಟರ್ ಮತ್ತು ಮೈದಾನದ ಸಿಬ್ಬಂದಿ ಅತ್ಯುತ್ತಮ ಪಿಚ್ ಅನ್ನು ಸಿದ್ಧಪಡಿಸಲು ತಮ್ಮ ಕೈಲಾದಷ್ಟು ಪ್ರಯತ್ನಿಸಿದ್ದಾರೆ ಎಂದು ನಾನು ಭಾವಿಸುತ್ತೇನೆ. ಆದರೆ ಕೆಲವು ವಿಷಯಗಳು ಅವರ ನಿಯಂತ್ರಣದಲ್ಲಿಲ್ಲ. ಇದರಿಂದ ಪಿಚ್‌ನ ಮೇಲ್ಮೈನಲ್ಲಿ ಬದಲಾವಣೆಯಾಗಿರಬಹುದು. ಇದಾಗ್ಯೂ, ನಮ್ಮ ತಪ್ಪುಗಳನ್ನು ಒಪ್ಪಲು ಸಾಧ್ಯವಿಲ್ಲ ಎಂದರು.

# ಅತ್ಯಂತ ಹೀನಾಯ ದಾಖಲೆ ಬರೆದ ಸೌರಭ್

ಟಿ20 ವಿಶ್ವಕಪ್ ಇತಿಹಾಸದಲ್ಲೇ ಅತ್ಯಂತ ದುಬಾರಿ ಓವರ್‌ಗಳನ್ನು ಎಸೆದ ಬೌಲರ್ ಯಾರು ಈ ಪ್ರಶ್ನೆಗೆ ಉತ್ತರ ಸೌರಭ್ ನೇತ್ರವಲ್ಕರ್. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಟೀಮ್ ಇಂಡಿಯಾ ವಿರುದ್ಧದ ಪಂದ್ಯದಲ್ಲಿ ಸೌರಭ್ ನೇತ್ರವಲ್ಕರ್ 4 ಓವರ್‌ಗಳಲ್ಲಿ ಚಚ್ಚಿಸಿಕೊಂಡಿದ್ದು ಬರೋಬ್ಬರಿ 65 ರನ್‌ಗಳು. ಈ ಮೂಲಕ ಟಿ20 ವಿಶ್ವಕಪ್ ಇತಿಹಾಸದಲ್ಲೇ ಅತ್ಯಂತ ದುಬಾರಿ ಸ್ಪೆಲ್ ಎಸೆದ ಬೌಲರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಈ ದಾಖಲೆ ಶ್ರೀಲಂಕಾದ ಸನತ್ ಜಯಸೂರ್ಯ ಹೆಸರಿನಲ್ಲಿತ್ತು.

2007ರ ಟಿ20 ವಿಶ್ವಕಪ್‌ನಲ್ಲಿ ಪಾಕಿಸ್ತಾನ್ ವಿರುದ್ಧ ಸನತ್ ಜಯಸೂರ್ಯ 4 ಓವರ್‌ಗಳಲ್ಲಿ ಬರೋಬ್ಬರಿ 64 ರನ್ ನೀಡಿದ್ದರು. ಇದಾದ ಬಳಿಕ ಯಾವುದೇ ಬೌಲರ್ ಇಷ್ಟೊಂದು ದುಬಾರಿಯಾಗಿರಲಿಲ್ಲ.

ಆದರೆ ಸೌರಭ್ ನೇತ್ರವಲ್ಕರ್ ಓವರ್‌ನಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ ಸೂರ್ಯಕುಮಾರ್ ಯಾದವ್ ಸಿಕ್ಸ್-ಫೋರ್‌ಗಳ ಸುರಿಮಳೆಗೈದಿದ್ದಾರೆ. ಪರಿಣಾಮ ಸೌರಭ್ ಕಡೆಯಿಂದ 4 ಓವರ್‌ಗಳಲ್ಲಿ ಬರೋಬ್ಬರಿ 65 ರನ್‌ಗಳು ಮೂಡಿಬಂದಿವೆ. ಈ ಮೂಲಕ ಟಿ20 ವಿಶ್ವಕಪ್‌ನಲ್ಲಿ ಅತ್ಯಂತ ಹೀನಾಯ ಪ್ರದರ್ಶನ ನೀಡಿದ ಬೌಲರ್ ಎನಿಸಿಕೊಂಡಿದ್ದಾರೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ ಬ್ಯಾಟರ್‌ಗಳು 20 ಓವರ್‌ಗಳಲ್ಲಿ 161 ರನ್ ಕಲೆಹಾಕಿದ್ದರು. ಈ ಗುರಿಯನ್ನು ಬೆನ್ನತ್ತಿದ ಯುಎಸ್‌ಎ ತಂಡವು 20 ಓವರ್‌ಗಳಲ್ಲಿ 132 ರನ್‌ಗಳಿಸಿ 29 ರನ್‌ಗಳಿಂದ ಸೋಲೊಪ್ಪಿಕೊಂಡಿದೆ.



# ಇಬ್ಬರಿಗೆ ಅನಾರೋಗ್ಯ ಟೀಮ್ ಇಂಡಿಯಾಗೆ ಚಿಂತೆ ಶುರು

ಟಿ20 ವಿಶ್ವಕಪ್‌ನ ಮೊದಲ ಸುತ್ತಿನಲ್ಲಿ ಟೀಮ್ ಇಂಡಿಯಾ ಒಟ್ಟು ನಾಲ್ಕು ಪಂದ್ಯಗಳನ್ನಾಡಲಿದೆ. ಅದರಂತೆ ಈಗಾಗಲೇ ಯುಎಸ್‌ಎ ವಿರುದ್ಧ ಭಾರತ ತಂಡ ಜಯ ಸಾಧಿಸಿದೆ. ಇನ್ನು ನಮೀಬಿಯಾ, ಪಾಕಿಸ್ತಾನ್ ಹಾಗೂ ನೆದರ್‌ಲೆಂಡ್ಸ್ ತಂಡಗಳನ್ನು ಎದುರಿಸಲಿದೆ. ಈ ಪಂದ್ಯಕ್ಕೂ ಮುನ್ನ ಟೀಮ್ ಇಂಡಿಯಾಗೆ ಹೊಸ ಚಿಂತೆ ಶುರುವಾಗಿದೆ. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಯುಎಸ್‌ಎ ವಿರುದ್ಧದ ಪಂದ್ಯದಲ್ಲಿ ಗೆಲ್ಲುವ ಮೂಲಕ ಟೀಮ್ ಇಂಡಿಯಾ ವಿಶ್ವಕಪ್ ಅಭಿಯಾನ ಆರಂಭಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ ಕಲೆಹಾಕಿದ್ದು 161 ರನ್‌ಗಳು. ಈ ಗುರಿಯನ್ನು ಬೆನ್ನತ್ತಿದ ಯುಎಸ್‌ಎ 132 ರನ್‌ಗಳಿಸಲಷ್ಟೇ ಶಕ್ತರಾಗಿದ್ದಾರೆ. ಈ ಮೂಲಕ ಭಾರತ ತಂಡವು ಮೊದಲ ಪಂದ್ಯವನ್ನು 29 ರನ್‌ಗಳಿಂದ ಗೆದ್ದುಕೊಂಡಿದೆ.





ಈ ಗೆಲುವಿನ ಹೊರತಾಗಿಯೂ ಈ ಪಂದ್ಯದ ಬೆನ್ನಲ್ಲೇ ಟೀಮ್ ಇಂಡಿಯಾಗೆ ಹೊಸ ಚಿಂತೆ ಶುರುವಾಗಿದೆ. ಏಕೆಂದರೆ ಈ ಪಂದ್ಯದಲ್ಲಿ ಭಾರತ ತಂಡದ ಪ್ರಮುಖ ವೇಗಿ ಜಸ್‌ಪ್ರೀತ್ ಬುಮ್ರಾ ಕಣಕ್ಕಿಳಿದಿರಲಿಲ್ಲ. ಜ್ವರದಿಂದ ಬಳಲುತ್ತಿರುವ ಕಾರಣ ಬುಮ್ರಾ ಅವರು ಯುಎಸ್‌ಎ ವಿರುದ್ಧದ ಪಂದ್ಯದಿಂದ ಹೊರಗುಳಿದಿದ್ದರು. ಅತ್ತ ಕಣಕ್ಕಿಳಿದಿದ್ದ ಅಭಿಷೇಕ್ ಶರ್ಮಾ ಕೂಡ ಅನಾರೋಗ್ಯದ ಸಮಸ್ಯೆಗೀಡಾಗಿದ್ದಾರೆ. ಯುಎಸ್‌ಎ ವಿರುದ್ಧದ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಅಭಿಷೇಕ್ ಶರ್ಮಾ ಇನಿಂಗ್ಸ್ ಆರಂಭಿಸಿದ್ದರು. ಆದರೆ ಅವರು ಫೀಲ್ಡಿಂಗ್‌ಗೆ ಆಗಮಿಸಿರಲಿಲ್ಲ. ಇದಕ್ಕೆ ಮುಖ್ಯ ಕಾರಣ ಅವರು ಅನಾರೋಗ್ಯಕೀಡಾಗಿರುವುದು. ಅಂದರೆ ಮೊದಲ ಪಂದ್ಯದ ವೇಳೆಯೇ ಜಸ್‌ಪ್ರೀತ್ ಬುಮ್ರಾ ಹಾಗೂ ಅಭಿಷೇಕ್ ಶರ್ಮಾ ಅನಾರೋಗ್ಯಕ್ಕೀಡಾಗಿದ್ದಾರೆ. ಹೀಗಾಗಿ ಈ ಇಬ್ಬರು ಆಟಗಾರರಿಗೆ ಹೆಚ್ಚಿನ ವಿಶ್ರಾಂತಿ ನೀಡಲು ಟೀಮ್ ಮ್ಯಾನೇಜ್ಮೆಂಟ್ ನಿರ್ಧರಿಸಿದೆ. ಅಂದರೆ ಫೆಬ್ರವರಿ 12 ರೊಳಗೆ ಇಬ್ಬರು ಸಂಪೂರ್ಣ ಗುಣಮುಖರಾದರೆ ಮಾತ್ರ ನಮೀಬಿಯಾ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿಯಲಿದ್ದಾರೆ.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news


ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966